ಸಂಪುಟ: 04 ಸಂಚಿಕೆ: 224 ಪುಟಗಳು: 08 ಭಾನುವಾರ 27 ಅಕ್ಟೋಬರ್ 2024

www.udayavahini.in epaper.udayavahini.in Udaya vahini news Udaya vahini news Udayavahini news youtube udayavahininews@gmail.com

ಸಂಪಾದಕರು: ಟಿ. ಹೊಂಬೇಗೌಡ

RNI No. KARKAN/2021/80833

9448225696 +91 8035841833 ₹5

# ಉದಯ ವಾಹಿನಿ

ಸರ್ವ ಸಮಾನತೆಯ ಕನ್ನಡ ದಿನಪತ್ರಿಕೆ

**ಮುಂಜಾನೆ ಮಾತು**

ದೊಡ್ಡ ಗುರಿ, ಜ್ಞಾನದ ಸಂಪಾದನೆ, ಕಠಿಣ ಪರಿಶ್ರಮ ಮತ್ತು ದೃಢ ಹಾಗೂ ಸತತ ಪ್ರಯತ್ನ ಎಂಬ ನಾಲ್ಕು ವಿಷಯಗಳನ್ನು ಅನುಸರಿಸಿದರೆ ಏನು ಬೇಕಾದರೂ ಸಾಧಿಸಬಹುದು.



ನಿರಂತರವಾಗಿ ಸುರಿಯುತ್ತಿರುವ ಮಳೆಯಿಂದ ಉಂಟಾಗಿರುವ ಪರಿಸ್ಥಿತಿ ಎದುರಿಸಲು ಕಟ್ಟೆಚ್ಚರ ವಹಿಸುವಂತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಅಧಿಕಾರಿಗಳಿಗೆ ವಿಡಿಯೋ ಸಂವಾದ ನಡೆಸಿ ಸೂಚನೆ ನೀಡಿದರು.

# ಅತಿವೃಷ್ಟಿ ಪರಿಸ್ಥಿತಿಗೆ ಕಟ್ಟೆಚ್ಚರ ತಕ್ಷಣ ಒದಗಿಸಿ ಪರಿಹಾರ

- ಸಿಎಂ ವಿಡಿಯೋ ಸಂವಾದ
- ಮಳೆಯಿಂದ ಉಂಟಾದ ಹಾನಿ ಕುರಿತು ಮಹತ್ವದ ಸಭೆ
- ಸಿದ್ದರಾಮಯ್ಯ ಕೊಟ್ಟ ಸೂಚನೆ
- ಡಿಸಿ, ಸಿಇಓಗಳ ಜೊತೆ ಸಭೆ: ಮಳೆಹಾನಿ ಕುರಿತು ಮಾಹಿತಿ
- ಖಡಕ್ ಸೂಚನೆಗಳನ್ನ ಕೊಟ್ಟ ಸಿಎಂ

• ಉದಯವಾಹಿನಿ, ಬೆಂಗಳೂರು

ರಾಜ್ಯದಲ್ಲಿ ಸುರಿದ ಸತತ ಮಳೆಯಿಂದ ಜಿಲ್ಲೆಗಳಲ್ಲಿ ಆಗಿರುವ ಮಳೆಹಾನಿ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪಂಚಾಯತ್ ಮುಖ್ಯ ಕಾರ್ಯನಿರ್ವಾಹಕಾಧಿಕಾರಿಗಳ ಜೊತೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ವಿಡಿಯೋ ಸಂವಾದ ನಡೆಸಿ ಮಾಹಿತಿ ಪಡೆದರು.

ಹಿಂಗಾರು ಅವಧಿಯಲ್ಲಿ ಅಧಿಕ ಮಳೆಯಿಂದ ಉಂಟಾದ ಹಾನಿ ಕುರಿತು ಜಿಲ್ಲಾಧಿಕಾರಿಗಳು ಹಾಗೂ ಮುಖ್ಯ ಕಾರ್ಯ ನಿರ್ವಹಣಾಧಿಕಾರಿಗಳೊಂದಿಗೆ ನಡೆಸಿದ ಪರಿಶೀಲನಾ ಸಭೆಯಲ್ಲಿ ಅಧಿಕಾರಿಗಳಿಗೆ ಮುಖ್ಯಮಂತ್ರಿ ಸಿದ್ದರಾಮಯ್ಯ ಅವರು ಸೂಚನೆ ನೀಡಿದರು. ಅತಿವೃಷ್ಟಿ, ಪ್ರವಾಹ, ನೆರೆ ಪೀಡಿತ ಪ್ರದೇಶಗಳಿಗೆ ಜಿಲ್ಲಾಧಿಕಾರಿಗಳು ಸ್ವತಃ ಭೇಟಿ ನೀಡಿ ಯಾವುದೇ ಅನಾಹುತಗಳು ಸಂಭವಿಸದಂತೆ ಮುನ್ನೆಚ್ಚರಿಕೆ ವಹಿಸಬೇಕು. ಹಾನಿಗೀಡಾದ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ನಿಯಮಾವಳಿ ಪ್ರಕಾರ ತಕ್ಷಣ ಪರಿಹಾರ ಒದಗಿಸಿ ಜನರಿಗೆ ಸಾಂತ್ವಾನ ನೀಡುವ ಕಾರ್ಯ ಮಾಡಬೇಕು. ಹಿಂಗಾರು ಅವಧಿಯಲ್ಲಿ ಅಂದರೆ ಅಕ್ಟೋಬರ್‌ನಿಂದ ಡಿಸೆಂಬರ್ ತಿಂಗಳಲ್ಲಿ ರಾಜ್ಯದ ಹಲವು ಭಾಗಗಳಲ್ಲಿ ವಾಡಿಕೆಗಿಂತ ಹೆಚ್ಚು ಮಳೆಯಾಗಲಿದೆ ಎಂದು ಈಗಾಗಲೇ ಮುನ್ಸೂಚನೆ ನೀಡಲಾಗಿದೆ. ರಾಜ್ಯದ ಪ್ರಮುಖ ಜಲಾಶಯಗಳ ಒಟ್ಟು ಸಂಗ್ರಹಣಾ ಸಾಮರ್ಥ್ಯ 895.62 ಟಿಎಂಸಿ ಆಗಿದ್ದು, ಪ್ರಸ್ತುತ 871.26 ಟಿಎಂಸಿ ನೀರು ಸಂಗ್ರಹವಿದೆ. ಕಳೆದ ವರ್ಷ ಇದೇ ಅವಧಿಯಲ್ಲಿ ಇದು 505.81 ಟಿಎಂಸಿ ಇತ್ತು. ಈ ಬಾರಿ ಜಲವಿದ್ಯುತ್ ಉತ್ಪಾದನೆಗೆ ಉತ್ತಮ ಪ್ರಮಾಣದ ನೀರು ಲಭ್ಯವಿದೆ. ಕಾವೇರಿ ಕಣಿವೆ ಹಾಗೂ ಕೃಷ್ಣಾ ಕಣಿವೆಯಲ್ಲೂ ಉತ್ತಮ ನೀರು ಸಂಗ್ರಹವಿದೆ. ಕುಡಿಯುವ ನೀರಿಗೆ

**ವಿಡಿಯೋ ಸಂವಾದ ನಡೆಸಿ ಸೂಚನೆ**



ಸಾಕಷ್ಟು ನೀರನ್ನು ಇಟ್ಟುಕೊಂಡು ನೀರಾವರಿಗೆ ಸಮರ್ಪಕವಾಗಿ ನೀರು ಒದಗಿಸಲು ಕ್ರಮ ಕೈಗೊಳ್ಳಬೇಕು. ಹಿಂಗಾರು ಅವಧಿಯಲ್ಲಿ ಅತಿವೃಷ್ಟಿಯಿಂದಾಗಿ ಒಟ್ಟು 25ಸಾವು ಸಂಭವಿಸಿದ್ದು, ತುರ್ತು ಪರಿಹಾರ ಪಾವತಿಸಲಾಗಿದೆ. ಅತಿವೃಷ್ಟಿಯಿಂದಾಗಿ 19 ದೊಡ್ಡ ಜಾನುವಾರುಗಳು, 66 ಸಣ್ಣ ಜಾನುವಾರುಗಳು ಸಾವಿಗೀಡಾಗಿವೆ. ಎಸ್‌ಡಿಆರ್ ಎಫ್ ನಿಯಮಾನುಸಾರ ದೊಡ್ಡ ಜಾನುವಾರುಗಳಿಗೆ ಒಟ್ಟು ರೂ. 6.84 ಲಕ್ಷ, ಸಣ್ಣ ಜಾನುವಾರುಗಳಿಗೆ ಒಟ್ಟು ರೂ. 2.8 ಲಕ್ಷ ಸೇರಿದಂತೆ ಒಟ್ಟು ರೂ. 9.6 ಲಕ್ಷ ಪರಿಹಾರ ಪಾವತಿಸಲಾಗಿದೆ. ಈ ಅವಧಿಯಲ್ಲಿ ಅಧಿಕ ಮಳೆಯಿಂದಾಗಿ 84ಮನೆಗಳು ಸಂಪೂರ್ಣ ಹಾನಿಗೀಡಾಗಿದ್ದು, 2077ಮನೆಗಳು ಭಾಗಶಃ ಹಾನಿಗೀಡಾಗಿವೆ. ಪೂರ್ತಿ ಮನೆಗೆ 1.20ಲಕ್ಷ ರೂ ಪರಿಹಾರ ಹಾಗೂ ಮನೆ ನಿರ್ಮಿಸಿ ಕೊಡಲು ಈಗಾಗಲೇ ಆದೇಶಿಸಲಾಗಿದೆ. ಭಾಗಶಃ ಹಾನಿಗೀಡಾದ ಮನೆಗಳಿಗೆ ಮುಂಗಾರು ಹಂಗಾಮಿನಲ್ಲಿ ಸೂಚಿಸಿರುವಂತೆ ರೂ.50 ಸಾವಿರದವರೆಗೆ ಪರಿಹಾರ ಒದಗಿಸಲು ಆದೇಶಿಸಲಾಗಿದೆ. ಬೆಳೆ ಹಾನಿಯ ಕುರಿತು ಜಂಟಿ ಸಮೀಕ್ಷೆ ನಡೆಯುತ್ತಿದ್ದು, 3-4ದಿನಗಳಲ್ಲಿ ಸಮೀಕ್ಷೆ ಕಾರ್ಯ ಪೂರ್ಣಗೊಳ್ಳಲಿದೆ. ಜಂಟಿ ಸಮೀಕ್ಷೆ ಕಾರ್ಯವನ್ನು ಒಂದು ವಾರದ ಒಳಗಾಗಿ ಪೂರ್ಣಗೊಳಿಸಿ ವರದಿಯನ್ನು ಸಲ್ಲಿಸಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಿದರು. ಮನೆ ಹಾನಿ ಮತ್ತು ಪ್ರಾಣ ಹಾನಿ ಪ್ರಕರಣಗಳಲ್ಲಿ 48 ಗಂಟೆಗಳ ಒಳಗಾಗಿ ಪರಿಹಾರವನ್ನು ಒದಗಿಸುವಂತೆ ಸೂಚಿಸಿದರು.



1. ಹಾನಿಗೀಡಾದ ಸ್ಥಳಗಳಿಗೆ ಭೇಟಿ ನೀಡಿ ಪರಿಶೀಲನೆ ನಡೆಸಿ ನಿಯಮಾವಳಿ ಪ್ರಕಾರ ತಕ್ಷಣ ಪರಿಹಾರ ಒದಗಿಸಿ
2. ಕಾವೇರಿ ಕಣಿವೆ , ಕೃಷ್ಣಾ ಕಣಿವೆಯಲ್ಲೂ ಉತ್ತಮ ನೀರು ಸಂಗ್ರಹ
3. ಬೆಳೆ ಹಾನಿಯ ಕುರಿತು ಜಂಟಿ ಸಮೀಕ್ಷೆ ನಡೆಯುತ್ತಿದ್ದು , 3-4ದಿನಗಳಲ್ಲಿ ಸಮೀಕ್ಷೆ ಕಾರ್ಯ ಪೂರ್ಣಗೊಳ್ಳಲಿದೆ.

### ಕೆರೆಗಳ ಹೂಳೆತ್ತುವುದು ಸೇರಿದಂತೆ ಅಭಿವೃದ್ಧಿ ಕಾರ್ಯಗಳಿಗೆ ಆದ್ಯತೆ



ಅತಿವೃಷ್ಟಿ ಪರಿಹಾರ ಕಾರ್ಯಗಳಿಗೆ ಸಾಕಷ್ಟು ಪ್ರಮಾಣದಲ್ಲಿ ಅನುದಾನ ಲಭ್ಯವಿದ್ದು, ಅನುದಾನ ಕೊರತೆ ಇರುವುದಿಲ್ಲ. ಜಿಲ್ಲಾಧಿಕಾರಿಗಳ ಖಾತೆಯಲ್ಲಿ ರೂ. 551.25ಕೋಟಿ ಹಾಗೂ ತಹಶೀಲ್ದಾರ್ ಅವರ ಖಾತೆಯಲ್ಲಿ ರೂ. 115.71 ಕೋಟಿ ಸೇರಿದಂತೆ ಒಟ್ಟು ರೂ. 666.96 ಕೋಟಿ ಹಣ ಲಭ್ಯವಿದ್ದು ಸಮರ್ಪಕವಾಗಿ ಬಳಸಲು ಸೂಚಿಸಿದರು. ಕೆರೆಗಳ ಒತ್ತುವರಿ ತೆರವುಗೊಳಿಸಲು ಈಗಾಗಲೇ ಎಲ್ಲಾ ಜಿಲ್ಲಾಧಿಕಾರಿಗಳಿಗೆ ಗಡುವು ವಿಧಿಸಲಾಗಿತ್ತು. ಬೆಂಗಳೂರು ಸುತ್ತಮುತ್ತ ಬಹುತೇಕ ಕೆರೆಗಳು ಕೇವಲ ಶೇ.30ರಷ್ಟು ಮಾತ್ರ ತುಂಬಿದ್ದು, ಇದನ್ನು ಗಂಭೀರವಾಗಿ ಪರಿಗಣಿಸಿ ಕ್ರಮ ಕೈಗೊಳ್ಳಲು ಸೂಚಿಸಿದರು. ಕೆರೆಗಳ ಒತ್ತುವರಿ ತೆರವುಗೊಳಿಸುವುದು, ಬಳಿಕ ಕೆರೆಗಳ ಹೂಳೆತ್ತುವುದು ಸೇರಿದಂತೆ ಅಭಿವೃದ್ಧಿ ಕಾರ್ಯಗಳನ್ನು ಆದ್ಯತೆ ಮೇರೆಗೆ ಕೈಗೊಳ್ಳಬೇಕು.

### ಬೆಳೆಸಲು ಬಿತ್ತನೆ ಬೀಜ ಲಭ್ಯ

ಉದ್ಯೋಗ ಖಾತ್ರಿ ಯೋಜನೆಯನ್ನು ಸಹ ಇದಕ್ಕೆ ಸಮರ್ಪಕವಾಗಿ ಬಳಸಿಕೊಳ್ಳಬೇಕು. ಹೆಚ್ಚುವರಿ ಬಿತ್ತನೆಗೆ ರೈತರಿಂದ ಬಿತ್ತನೆ ಬೀಜಕ್ಕೆ ಬೇಡಿಕೆ ಬಂದರೆ ಅದನ್ನು ಒದಗಿಸಲು ಕ್ರಮ ಕೈಗೊಳ್ಳಲು ಸೂಚನೆ ನೀಡಿದರು. ರೈತರಿಗೆ ಪರ್ಯಾಯ ಬೆಳೆ ಬೆಳೆಸಲು ಬಿತ್ತನೆ ಬೀಜ ಲಭ್ಯವಿದೆ. ಬಿತ್ತನೆ ಬೀಜ ಮತ್ತು ಗೊಬ್ಬರ ಸಾಕಷ್ಟು ಪ್ರಮಾಣದಲ್ಲಿರುವಂತೆ ನೋಡಿಕೊಳ್ಳಬೇಕು ಎಂದರು. ದೀಪಾವಳಿ ಸಂದರ್ಭದಲ್ಲಿ ಹಸಿರು ಪಟಾಕಿಗೆ ಮಾತ್ರ ಅವಕಾಶವಿದ್ದು, ಪರಿಸರಕ್ಕೆ ಹಾನಿಯಾಗುವ ಪಟಾಕಿಗಳಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು. ಪಟಾಕಿ ದಾಸ್ತಾನು, ಮಾರಾಟ ಪ್ರಕ್ರಿಯೆಯಲ್ಲಿ ಸುರಕ್ಷತೆ ವಿಷಯದಲ್ಲಿ ಯಾವುದೇ ಲೋಪವಾಗದಂತೆ ನೋಡಿಕೊಳ್ಳಬೇಕು. ಜಿಲ್ಲಾಧಿಕಾರಿಗಳು ಹಾಗೂ ಜಿಲ್ಲಾ ಪೊಲೀಸ್ ವರಿಷ್ಠಾಧಿಕಾರಿಗಳು ಈ ಕುರಿತು ಕಟ್ಟುನಿಟ್ಟಿನ ಕ್ರಮ ಕೈಗೊಳ್ಳಬೇಕು ಎಂದು ತಿಳಿಸಿದರು.

### ಹಸಿರು ಪಟಾಕಿಗೆ ಮಾತ್ರ ಅವಕಾಶ ನೀಡಿ

ದೀಪಾವಳಿ ಸಂದರ್ಭದಲ್ಲಿ ಹಸಿರು ಪಟಾಕಿಗೆ ಮಾತ್ರ ಅವಕಾಶ ಇದ್ದು, ಪರಿಸರಕ್ಕೆ ಹಾನಿಯಾಗುವ ಪಟಾಕಿಗಳಿಗೆ ಯಾವುದೇ ಕಾರಣಕ್ಕೂ ಅವಕಾಶ ನೀಡಬಾರದು ಎಂದು ಮುಖ್ಯಮಂತ್ರಿ ಸಿದ್ದರಾಮಯ್ಯ ಜಿಲ್ಲಾಧಿಕಾರಿಗಳಿಗೆ ಕಟ್ಟುನಿಟ್ಟಿನ ಸೂಚನೆ ನೀಡಿದರು.ಮಳೆ ಹಾನಿ ಕುರಿತಂತೆ ಜಿಲ್ಲಾಧಿಕಾರಿಗಳ ಜತೆ ವಿಡಿಯೋ ಸಂವಾದ ನಡೆಸಿದ ಸಂದರ್ಭದಲ್ಲಿ ದೀಪಾವಳಿ ಹಬ್ಬ ಬರುತ್ತಿದೆ. ಹಸಿರು ಪಟಾಕಿಗೆ ಮಾತ್ರ ಅವಕಾಶ ಕೊಡಿ. ಯಾವುದೇ ಕಾರಣಕ್ಕೂ ಪರಿಸರಕ್ಕೆ ಹಾನಿಯಾಗುವ ಪಟಾಕಿಗಳಿಗೆ ಅವಕಾಶ ಕೊಡಬೇಡಿ ಎಂದು ತಾಕೀತು ಮಾಡಿದರು.

## ನಿಖಿಲ್ ಕುಮಾರಸ್ವಾಮಿ ಪರ ರೇವಣ್ಣ ಪ್ರಚಾರ ಮಾಡುತ್ತಾರಾ?

• ಉದಯವಾಹಿನಿ, ಬೆಂಗಳೂರು

ಚನ್ನಪಟ್ಟಣ ಕ್ಷೇತ್ರದಲ್ಲಿ ನಿಖಿಲ್ ಕುಮಾರಸ್ವಾಮಿ ಅವರೇ ಅಭ್ಯರ್ಥಿ ಆಗಬೇಕು ಎನ್ನುವುದು ಕ್ಷೇತ್ರದ ಕಾರ್ಯಕರ್ತರು ಮತ್ತು ಜನರ ಅಭಿಪ್ರಾಯ. ಆದ್ದರಿಂದ ಅವರನ್ನು ಕಣಕ್ಕಿಳಿಸಲಾಗಿದೆ ಎಂದು ಜೆಡಿಎಸ್ ಶಾಸಕ ಎಚ್.ಡಿ.ರೇವಣ್ಣ ಹೇಳಿದ್ದಾರೆ. 'ನನಗೆ ಆರೋಗ್ಯ ಸರಿ ಇಲ್ಲ, ಆರೋಗ್ಯ ಸರಿಯಾದರೆ ಚನ್ನಪಟ್ಟಣದಲ್ಲಿ ಪ್ರಚಾರಕ್ಕೆ ಹೋಗುತ್ತೇನೆ' ಎಂದು ಅವರು ಸುದ್ದಿಗಾರರ ಜತೆ ಮಾತನಾಡಿ ತಿಳಿಸಿದರು. 'ನಿಖಿಲ್ ಅವರನ್ನು ಕಣಕ್ಕೆ ಇಳಿಸಲು ಕುಮಾರಸ್ವಾಮಿ ಅವರಿಗೆ ಮನಸ್ಸು ಇರಲಿಲ್ಲ. ಕಾರ್ಯಕರ್ತರನ್ನೇ ನಿಲ್ಲಿಸಬೇಕು ಎಂದುಕೊಂಡಿದ್ದರು. ಕಾರ್ಯಕರ್ತರ ಒತ್ತಡಕ್ಕೆ ಮಣಿಯಬೇಕಾಯಿತು. ಕಾಂಗ್ರೆಸ್ ಪಕ್ಷದಲ್ಲಿ ಅಭ್ಯರ್ಥಿಯೇ ಇಲ್ಲದ ಕಾರಣ ಯೋಗೇಶ್ವರ್ ಅವರನ್ನು ಎಳೆದುಕೊಂಡರು. ಕಾಂಗ್ರೆಸ್‌ಗೆ ಇಂತಹ ದಯನೀಯ ಪರಿಸ್ಥಿತಿ ಬರುತ್ತದೆ ಎಂದುಕೊಂಡಿರಲಿಲ್ಲ' ಎಂದು ರೇವಣ್ಣ ಹೇಳಿದರು. 'ಚನ್ನಪಟ್ಟಣಕ್ಕೆ ಕಾಂಗ್ರೆಸ್ ಕೊಡುಗೆ ಏನು ಹೇಳಲಿ? ರಾಮನಗರ ಆಸ್ಪತ್ರೆ, ರಸ್ತೆ ಮತ್ತಿತರ ಅಭಿವೃದ್ಧಿ ಕೆಲಸಗಳು ಕುಮಾರಸ್ವಾಮಿ ಮುಖ್ಯಮಂತ್ರಿ ಆಗಿದ್ದಾಗ ನಡೆಯಿತು. ಬಿಜೆಪಿ ಮತ್ತು ಜೆಡಿಎಸ್ ಮೈತ್ರಿ ಹಳಿ ತಪ್ಪಿಸಲು ಯಾರಿಂದಲೂ ಸಾಧ್ಯವಿಲ್ಲ. ಯಡಿಯೂರಪ್ಪ, ವಿಜಯೇಂದ್ರ ಮತ್ತು ಕುಮಾರಸ್ವಾಮಿ ಅವರು ಒಂದಾಗಿದ್ದಾರೆ' ಎಂದು ಅವರು ಪ್ರತಿಪಾದಿಸಿದರು. ಕಾಂಗ್ರೆಸ್‌ನವರು ದೇವೇಗೌಡರ ಕುಟುಂಬವನ್ನು ತುಳಿಯಲು ಹೊರಟಿದ್ದಾರೆ. ಅದು ಸಾಧ್ಯವಿಲ್ಲದ ಮಾತು. ಡಿ.ಕೆ.ಶಿವಕುಮಾರ್ ಅವರ ಆರೋಪಗಳಿಗೆ ಉತ್ತರ ಕೊಡಲು ಹೋದರೆ ಪೊಳ್ಳೆದ್ದು ಹೋಗುತ್ತೇವೆ.

## 'ಗ್ಯಾರಂಟಿ' ಫಲಾನುಭವಿಗಳಿಗೆ ತಲುಪಿಲ್ಲ: ಮುರುಗೇಶ್ ನಿರಾಣಿ

• ಉದಯವಾಹಿನಿ, ಹುಬ್ಬಳ್ಳಿ

ಕಾಂಗ್ರೆಸ್ ಸರ್ಕಾರದ ಗ್ಯಾರಂಟಿ ಯೋಜನೆಗಳು ಫಲಾನುಭವಿಗಳಿಗೆ ಸರಿಯಾಗಿ ತಲುಪುತ್ತಿಲ್ಲ. ಸರ್ಕಾರದಿಂದ ಯಾವ ಅಭಿವೃದ್ಧಿ ಕಾರ್ಯಗಳೂ ನಡೆಯುತ್ತಿಲ್ಲ. ಹೀಗಾಗಿ ಉಪಚುನಾವಣೆಯಲ್ಲಿ ಮತದಾರರು ಬಿಜೆಪಿಯತ್ತ ಒಲವು ತೋರುವರು' ಎಂದು ಬಿಜೆಪಿ ಮುಖಂಡ ಮುರಗೇಶ ನಿರಾಣಿ ತಿಳಿಸಿದರು. 'ರಾಜ್ಯದಲ್ಲಿ ಅಭಿವೃದ್ಧಿ ಕಾರ್ಯ ಕುಂಠಿತವಾಗಿದ್ದು, ಕಾಂಗ್ರೆಸ್ ಕಾರ್ಯಕರ್ತರಿಗೆ ಭ್ರಮನಿರಸನವಾಗಿದೆ. ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಮತದಾರರು ಬಿಜೆಪಿ ಪರವಾಗಿದ್ದು, ಬಸವರಾಜ ಬೊಮ್ಮಾಯಿ ಅವರ ಆಡಳಿತ ವೈಖರಿ ಒಪ್ಪಿದ್ದಾರೆ. ಅವರು ಮುಖ್ಯಮಂತ್ರಿಯಾಗಿದ್ದ ವೇಳೆ ಸಾಕಷ್ಟು ಅಭಿವೃದ್ಧಿ ಕಾರ್ಯಗಳನ್ನು ಮಾಡಿದ್ದಾರೆ' ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.

## ಕುಟುಂಬ ರಾಜಕಾರಣ ಸ್ವಾಭಾವಿಕ: ಸಚಿವ ಸತೀಶ ಜಾರಕಿಹೊಳಿ

• ಉದಯವಾಹಿನಿ, ಹುಬ್ಬಳ್ಳಿ

'ಮಾತೆತ್ತಿದ್ದರೆ ಕುಟುಂಬ ರಾಜಕಾರಣ ಎನ್ನುತ್ತಿದ್ದ ಬಿಜೆಪಿ, ಈಗ ತಾನೇ ಕುಟುಂಬ ರಾಜಕಾರಣ ನಡೆಸಿದೆ' ಎಂದು ಸಚಿವ ಸತೀಶ ಜಾರಕಿಹೊಳಿ ವ್ಯಂಗ್ಯವಾಡಿದರು. 'ಕುಟುಂಬ ರಾಜಕಾರಣವೆಂದು ಇಂದಿರಾ ಗಾಂಧಿ ಕುಟುಂಬದ ಬಗ್ಗೆ ಬಿಜೆಪಿಯವರು ಮಾತನಾಡುತ್ತಿದ್ದರು ಈಗ ಅವರಲ್ಲೇ ಐದಾರು ಕುಟುಂಬಗಳು ರಾಜಕಾರಣ ಮಾಡುತ್ತಿವೆ. ರಾಜಕೀಯದಲ್ಲಿ ಇದು ಸ್ವಾಭಾವಿಕ. ಏನು ಮಾಡಲು ಸಾಧ್ಯವಿಲ್ಲ' ಎಂದು ಅವರು ಸುದ್ದಿಗಾರರಿಗೆ ತಿಳಿಸಿದರು.ಕುಟುಂಬ ರಾಜಕಾರಣವಲ್ಲ: 'ಯಾವುದೇ ಚುನಾವಣೆಯಾದರೂ ಗೆಲ್ಲುವುದೇ ಮಾನದಂಡ. ಕ್ಷೇತ್ರ ಸಮೀಕ್ಷೆ, ಜನರ ಅಭಿಪ್ರಾಯ ಮತ್ತು ಕಾರ್ಯಕರ್ತರ ಭಾವನೆಗಳಿಗೆ ಸ್ಪಂದಿಸಿ ಟಿಕೆಟ್ ನೀಡಬೇಕು. ಶಿಗ್ಗಾಂವಿ ವಿಧಾನಸಭಾ ಕ್ಷೇತ್ರದ ಜನರ ಅಭಿಪ್ರಾಯದಂತೆ ಬಸವರಾಜ ಬೊಮ್ಮಾಯಿ ಅವರ ಪುತ್ರ ಭರತ್ ಬೊಮ್ಮಾಯಿ ಅವರಿಗೆ ಟಿಕೆಟ್ ನೀಡಲಾಗಿದೆ. ಇರಲ್ಲಿ ಕುಟುಂಬ ರಾಜಕಾರಣ ಇಲ್ಲ' ಎಂದು ಗೋವಿಂದ ಕಾರಜೋಳ ತಿಳಿಸಿದರು.

## ಧರ್ಮ ಕಾರ್ಯಗಳ ಮೂಲಕ ಶೃಂಗೇರಿ ಮಠ ಮುಂಚೂಣಿ

• ಉದಯವಾಹಿನಿ, ಬೆಂಗಳೂರು

ಕರ್ನಾಟಕದಾದ್ಯಂತ ಧರ್ಮ ಕಾರ್ಯಗಳ ಮೂಲಕ ಜನರ ಗೌರವ ಉಳಿಸಿಕೊಂಡಿರುವ ಮಠಗಳಲ್ಲಿ ಶೃಂಗೇರಿ ಮಠವು ಮುಂಚೂಣಿಯಲ್ಲಿದೆ ಎಂದು ಡಿಸಿಎಂ ಡಿ. ಕೆ. ಶಿವಕುಮಾರ್ ಅವರು ಶ್ಲಾಘಿಸಿದ್ದಾರೆ. ಶೃಂಗೇರಿ ಜಗದ್ಗುರು ಶಂಕರಾಚಾರ್ಯ ಶ್ರೀ ಭಾರತೀತೀರ್ಥ ಮಹಾಸ್ವಾಮಿಗಳು ಸನ್ಯಾಸತ್ವ ಸ್ವೀಕರಿಸಿ 50 ವರ್ಷಗಳು ತುಂಬಿರುವ ನಿಮಿತ್ತ ನಮಃ ಶಿವಾಯ ಕಾರ್ಯಕ್ರಮದಲ್ಲಿ ಡಿಸಿಎಂ ಮಾತನಾಡಿದರು. ನಮಃ ಶಿವಾಯ ಕಾರ್ಯಕ್ರಮದ ಮೂಲಕ ನಾವೆಲ್ಲರೂ ಭಕ್ತಿಯ ಸಾಗರದಲ್ಲಿ ಮುಳುಗಿದ್ದೇವೆ. ಶೃಂಗೇರಿಯ ಭಾರತೀ ತೀರ್ಥ ಮಹಾಸ್ವಾಮೀಜಿಗಳು ಸನ್ಯಾಸ ಸ್ವೀಕರಿಸಿ 50 ವರ್ಷಗಳ ಕಾಲ ಧರ್ಮವನ್ನು ಉಳಿಸುವ ಕೆಲಸ ಮಾಡಿದ್ದಾರೆ. ನಮ್ಮ ಪ್ರಯತ್ನಗಳು ವಿಫಲವಾಗಬಹುದು ಆದರೆ ಪ್ರಾರ್ಥನೆ ವಿಫಲವಾಗುವುದಿಲ್ಲ. ಶ್ರೀಗಳು ಐವತ್ತು ವರ್ಷಗಳ ಕಾಲ ನಮ್ಮೆಲ್ಲರ ಒಳಿತಿಗೆ ಪ್ರಾರ್ಥನೆ ಮಾಡಿದ್ದಾರೆ ಎಂದು ಹೇಳಿದರು. ನನಗೂ ಶೃಂಗೇರಿ ಮಠಕ್ಕೂ ಇರುವ ಸಂಬಂಧ ಭಕ್ತನಿಗೂ ಭಗವಂತನಿಗೂ ಇರುವ ಸಂಬಂಧ. ಭಕ್ತಿಯಿದ್ದರೆ ಶಿಲೆಯಲ್ಲೂ ಭಗವಂತನನ್ನು ಕಾಣಬಹುದು ಎಂದರು. ಶ್ರೀ ಶಂಕರಾಚಾರ್ಯರು ಶಾರದಾಪೀಠವನ್ನು ಸ್ಥಾಪಿಸುವ ಮೂಲಕ ಇಡೀ ದೇಶದಲ್ಲಿಯೇ ಹಿಂದೂ ಧರ್ಮದ ಏಳಿಗೆಗೆ ಕಾರಣಿಭೂತರಾದವರು. ಈ ಸುದಿನದಂದು ಶಿವನ ಧ್ಯಾನ, ಪ್ರಾರ್ಥನೆಯ ಮೂಲಕ ಸಮಸ್ತ ಜನರಿಗೆ ಒಳ್ಳೆಯದನ್ನು ಮಾಡುವಂತೆ ನಾವೆಲ್ಲರೂ ಸೇರಿ ಪ್ರಾರ್ಥನೆ ಮಾಡೋಣ ಎಂದರು.

## ವಿಜಯಪುರ ರೈತರ ಜಮೀನುಗಳ ಪಹಣಿಯಲ್ಲಿ 'ವಕ್ಫ್' ಹೆಸರು

**ಸ್ಪಷ್ಟನೆ ನೀಡಿದ ಸಚಿವ ಎಂ.ಬಿ ಪಾಟೀಲ್**

• ಉದಯವಾಹಿನಿ, ವಿಜಯಪುರ

ವಿಜಯಪುರ ಜಿಲ್ಲೆಯಲ್ಲಿ ರೈತರ ಜಮೀನುಗಳನ್ನು ವಕ್ಫ್ ಬೋರ್ಡ್ ಸೇರಿಸುವ ವಿಚಾರ ತೀವ್ರ ಚರ್ಚೆಗೆ ಕಾರಣವಾಗಿದೆ. ತಮ್ಮ ಜಮೀನುಗಳ ಪಹಣಿ ಪತ್ರಗಳಲ್ಲಿ ವಕ್ಫ್ ಬೋರ್ಡ್ ಹೆಸರನ್ನು ಸೇರಿಸಿರುವುದನ್ನು ರೈತರು ಪ್ರಶ್ನಿಸುತ್ತಿದ್ದಾರೆ ಮತ್ತು ಸರ್ಕಾರದ ವಿರುದ್ಧ ಆಕ್ರೋಶ ವ್ಯಕ್ತಪಡಿಸಿದ್ದಾರೆ.

ಈ ಕುರಿತು ಸಚಿವ ಎಂಬಿ ಪಾಟೀಲ್ ಮಾಧ್ಯಮ ಪ್ರಕಟಣೆ ಹೊರಡಿಸುವ ಮೂಲಕ ಸ್ಪಷ್ಟನೆ ನೀಡಿದ್ದಾರೆ.

ಸಾಮಾಜಿಕ ಜಾಲತಾಣ ಎಕ್ಸ್ ನಲ್ಲಿ ಪೋಸ್ಟ್ ಮಾಡಿರುವ ಅವರು, ರೈತರಿಗೆ ಸೇರಿದ ಜಮೀನಲ್ಲಿ ಒಂದಿಂಚು ಕೂಡ ಯಾರ ವಶವೂ ಆಗಲು ಬಿಡುವುದಿಲ್ಲ. ವಿಜಯಪುರ ಜಿಲ್ಲೆಯ ತಿಕೋಟಾ ತಾಲ್ಲೂಕಿನ ಹೊನವಾಡ ಗ್ರಾಮದ 10 ಸರ್ವೇ ನಂಬರುಗಳ 11 ಎಕರೆ ಆಸ್ತಿ ಮಾತ್ರ ವಕ್ಫ್ ಆಸ್ತಿ ಎಂದು ಗೆಜೆಟ್ ನೋಟಿಫಿಕೇಷನ್ ಆಗಿದ್ದು, ಅದರಲ್ಲಿ 10 ಎಕರೆ 14 ಗುಂಟೆ ಖಬರಸ್ತಾನ ಇದೆ. ಉಳಿದದ್ದು ಈದ್ಗಾ, ಮಸೀದಿ ಇತ್ಯಾದಿ ಕಟ್ಟಡಗಳಿವೆ ಹಾಗೂ ಈ ಭೂಮಿಯು ಗ್ರಾಮ ಪಂಚಾಯಿತಿಯ ವ್ಯಾಪ್ತಿಗೆ ಸೇರಿದ್ದು, ಯಾವುದೇ ರೈತರ ಖಾಸಗಿ ಜಮೀನು ಒಳಪಟ್ಟಿಲ್ಲ ಎಂಬುದನ್ನು ಗಮನಿಸಬೇಕು.



ಹಜರತ್ ಪೀರ ದಸ್ತಿಗೀರ ಸಾಬ್ ಮೊಹಮ್ಮದ ಚಿಂಗ್ ಸಿಯಾ ತಖಿಯಾ ದರ್ಗಾ ವಿಜಯಪುರ ಮಹಾಲಬಾಗಯತ ಸೇರಿದ ಆಸ್ತಿಯಾಗಿದ್ದು, ಕೆಳಗಡೆ ತಪ್ಪಾಗಿ ಹೊನವಾಡ ಎಂದು ಸೇರಿದೆ. ಇದು ಗೊಂದಲಕ್ಕೆ ಕಾರಣವಾಗಿದೆ. ಇದು ಗೊಂದಲಕ್ಕೆ ಕಾರಣವಾಗಿದೆ. ಈ ಯಾವ ರೈತರಿಗೂ ವಕ್ಫ್ ಸಮಿತಿ ಅಥವಾ ಸರ್ಕಾರದ ಇಲಾಖೆಯಿಂದ ಯಾವುದೇ ನೋಟಿಸಗಳು ಬಂದಿಲ್ಲ. ಈಗಾಗಲೇ ಜಿಲ್ಲೆಯಲ್ಲಿ ಹಲವು ರೈತರಿಗೆ ವಕ್ಫ್ ಆಸ್ತಿ ನೋಟಿಸು ಬಂದಿದೆ ಎಂಬ ದೂರುಗಳಿದ್ದು, ವಕ್ಫ್ ಸಮಿತಿ ಮತ್ತು ಜಿಲ್ಲಾಧಿಕಾರಿಗಳ ನೇತೃತ್ವದಲ್ಲಿ ಕಂದಾಯ ಇಲಾಖೆಯಲ್ಲಿ ಎಲ್ಲಾ ದಾಖಲೆಗಳನ್ನು ಕೂಲಕುಂಷವಾಗಿ ಪರಿಶೀಲಿಸುತ್ತಾರೆ. ಒಂದೇ ಒಂದು ಇಂಚು ರೈತರ ಜಾಗವು ಅನಗತ್ಯವಾಗಿ, ಆಧಾರ, ದಾಖಲೆಗಳಿಲ್ಲದೆ ವಕ್ಫ್ ಆಸ್ತಿ ಎಂದು ಸೇರಿಸಲಾಗುವುದಿಲ್ಲ. ಈ ಕುರಿತು ಶೀಘ್ರದಲ್ಲೇ ಸಭೆ ನಡೆಸಿ, ಎಲ್ಲಾ ಗೊಂದಲಗಳಿಗೆ ಉತ್ತರ ನೀಡಲಾಗುವುದು. ಈ ನಿಟ್ಟಿನಲ್ಲಿ ಸಂಸದ ಶ್ರೀ ತೇಜಸ್ವಿ ಸೂರ್ಯ ಅವರಾಗಲಿ ಮತ್ತೊಬ್ಬರಾಗಲಿ ರಾಜಕಾರಣ ಮಾಡಿ ಜನಸಾಮಾನ್ಯರಲ್ಲಿ ಇಲ್ಲದ ಗೊಂದಲ, ಆತಂಕ ಮೂಡಿಸುವುದು ಬೇಡ ಎಂದು ಅವರು ಸ್ಪಷ್ಟನೆ ನೀಡಿದ್ದಾರೆ.

## ನಿಖಿಲ್ ನಾಮಪತ್ರ ಸಲ್ಲಿಕೆ ವೇಳೆ ಜನರು ಬಂದರೂ ಅಂತ ಕೇಸ್ ಹಾಕಿದ್ದಾರೆ

- ಪಕ್ಷದ ಅಧ್ಯಕ್ಷರಿಗೆ ನೊಟೀಸ್
- ಇದಕ್ಕೆಲ್ಲಾ ನಾವು ಹೆದರುವ ಪ್ರಶ್ನೆ ಇಲ್ಲ
- ಜನರ ಬಳಿ ನಾವು ಮತ ಕೇಳುತ್ತೇವೆ, ಅವರೇ ತೀರ್ಪು ಕೊಡುತ್ತಾರೆ

• ಉದಯವಾಹಿನಿ, ಬೆಂಗಳೂರು

ಚನ್ನಪಟ್ಟಣ ವಿಧಾನಸಭೆ ಉಪ ಚುನಾವಣೆಯಲ್ಲಿ ಆಡಳಿತಾರೂಢ ಕಾಂಗ್ರೆಸ್ ಪಕ್ಷ ವಿರೋಧ ಪಕ್ಷಗಳ ಮೇಲೆ ದಬ್ಬಾಳಿಕೆ ನಡೆಸುತ್ತಿದೆ ಎಂದು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಗಂಭೀರ ಆರೋಪ ಮಾಡಿದ್ದಾರೆ. ಬೆಂಗಳೂರಿನಲ್ಲಿ ಮಾಧ್ಯಮಗಳ ಜತೆ ಮಾತನಾಡಿದ ಅವರು, ಚನ್ನಪಟ್ಟಣದಲ್ಲಿ ಎನ್ಡಿಎ ಅಭ್ಯರ್ಥಿ ನಿಖಿಲ್ ಕುಮಾರಸ್ವಾಮಿ ಅವರು ನಾಮಪತ್ರ ಸಲ್ಲಿಸಿದ್ದಾರೆ.

ಆ ಸಂದರ್ಭದಲ್ಲಿ ಕ್ಷೇತ್ರದ ಕಾರ್ಯಕರ್ತರು, ಸಾರ್ವಜನಿಕರು ಸೇರಿದ್ದರು. ಎನ್ ಡಿಎ ಮೈತ್ರಿಕೂಟದ ನಾಯಕರು ದೊಡ್ಡ ಪ್ರಮಾಣದಲ್ಲಿ ಸೇರಿದ್ದರು. ಇದು ಐತಿಹಾಸಿಕ ಸಭೆ ಆಗಿತ್ತು. ಇದು ಕಾಂಗ್ರೆಸ್ ನಾಯಕರ ಕಣ್ಣು ಕುಕ್ಕಿದೆ ಎಂದು ಅವರು ದೂರಿದರು. ಈ ಸರ್ಕಾರ ದಬ್ಬಾಳಿಕೆ ನಡೆಸುತ್ತಿದೆ. ಜನ ಕಾರ್ಯಕ್ರಮಕ್ಕೆ ಬರಬಾರದಾ? ಶುಕ್ರವಾರ ನಾಮಪತ್ರ ಸಲ್ಲಿಕೆಯ ನಂತರ ಒಂದು ನೊಟೀಸ್ ಕೊಟ್ಟಿದ್ದಾರೆ. ಬರುವವರ ಮೇಲೆಲ್ಲಾ ಕೇಸ್ ಹಾಕಿಕೊಂಡು ಚುನಾವಣೆ ನಡೆಸಲು ಹೊರಟಿದ್ದಾರೆ ಇವರು. ಶುಕ್ರವಾರ ನಮ್ಮ ಪಕ್ಷದ ಅಧ್ಯಕ್ಷರಿಗೆ ನೊಟೀಸ್ ಕೊಟ್ಟಿದ್ದಾರೆ. ಇದಕ್ಕೆಲ್ಲಾ ನಾವು ಹೆದರುವ ಪ್ರಶ್ನೆ ಇಲ್ಲ. ಜನರ ಬಳಿ ನಾವು ಮತ ಕೇಳುತ್ತೇವೆ. ಅವರೇ ತೀರ್ಪು ಕೊಡುತ್ತಾರೆ ಎಂದು ಕೇಂದ್ರ ಸಚಿವರು ಗುಡುಗಿದರು. ಸರ್ಕಾರ ಈ ಕಾರ್ಯಕ್ರಮಕ್ಕೆ ಬಂದ ವಾಹನಗಳಿಗೆ ನೊಟೀಸ್ ನೀಡಿದೆ. ಸಿಎಂ, ಡಿಸಿಎಂ ಆದಿಯಾಗಿ ಅವರ ಕಡೆಯಿಂದ ಎಲ್ಲಾರೂ ಚನ್ನಪಟ್ಟಣಕ್ಕೆ ಹೀಗಿದ್ದರಲ್ಲವೇ? ಹಾಗಿದ್ದರೆ, ಅವರ ಸಭೆಗಳಿಗೆ ಬಂದ ಜನರಿಗೆ ವಾಹನದ ವ್ಯವಸ್ಥೆ ಮಾಡೇ ಇರಲಿಲ್ಲವೇ? ಎಂದು ಕೇಂದ್ರ ಸಚಿವರು ಖಾರವಾಗಿ ಪ್ರಶ್ನಿಸಿದರು.

**ಜನ ಕಾರ್ಯಕ್ರಮಕ್ಕೆ ಬರಬಾರದಾ?**

ಶನಿವಾರ ನಮ್ಮ ಕಾರ್ಯಕ್ರಮಕ್ಕೆ ಬಂದವರ ವಿಡಿಯೋ ಮಾಡಿಕೊಂಡು, ಅಧಿಕಾರಿಗಳಿಗೆ ಹೇಳಿ ಕೇಸ್ ಹಾಕಿಸಿ ಯಾವ ಚುನಾವಣೆ ನಡೆಸಲು ಹೋಗ್ತಿದ್ದಾರೆ ಇವರು? ನಮ್ಮ ಪಕ್ಷದ ಅಧ್ಯಕ್ಷರಿಗೆ ಇದರ ಬಗ್ಗೆ ಒಂದು ನೊಟೀಸ್ ಕೊಟ್ಟಿದ್ದಾರೆ. ದಬ್ಬಾಳಿಕೆ ಮೂಲಕ ಇವರು ಚುನಾವಣೆ ನಡೆಸಲು ಹೋಗ್ತಿದ್ದಾರೆ. ಅಧಿಕಾರ ದುರುಪಯೋಗ ಮಾಡುತ್ತಿದೆ ಸರ್ಕಾರ. ಇದೆಲ್ಲವನ್ನೂ ನಾವು ಮೊದಲೇ ನಿರೀಕ್ಷೆ ಮಾಡಿದ್ದೆವು ಎಂದು ಅವರು ಕಿಡಿಕಾರಿದರು. ಕುಮಾರಸ್ವಾಮಿ ಮಂಡ್ಯಕ್ಕೆ ಮಾತ್ರ ಸೀಮಿತಾರಾಗಿದ್ದಾರೆ ಎಂಬ ಸಿಎಂ ಹೇಳಿಕೆಗೆ ಹೆಚ್ಡಿಕೆ ತಿರುಗೇಟು ಕೊಟ್ಟರಲ್ಲದೆ. ಕಳೆದ ನಾಲ್ಕು ತಿಂಗಳ ನನ್ನ ಟಿಪಿ ನೋಡಿದ್ದಾರಾ ಅವರು? ನನ್ನ ಇಲಾಖೆಗೆ ಸಂಬಂಧಿಸಿ ಹಲವು ರಾಜ್ಯಗಳಿಗೆ ಹೋಗಿದ್ದೇನೆ. ನಾಗಾಲ್ಯಾಂಡ್, ಅರುಣಾಚಲ ಪ್ರದೇಶ, ಅಸ್ಸಾಂ, ಛತ್ತೀಸಗಢ, ಆಂಧ್ರ ಪ್ರದೇಶ, ತೆಲಂಗಾಣ, ತಮಿಳುನಾಡಿಗೆ ಹೋಗಿ ಬಂದಿದ್ದೇನೆ. ನಾನು ಎಷ್ಟು ರಾಜ್ಯಗಳಿಗೆ ಹೋಗಿದ್ದೀನಿ ಗೊತ್ತಿದೆಯಾ ಅವರಿಗೆ? ದೆಹಲಿಯಲ್ಲಿ ಸಮಯ ವ್ಯರ್ಥ ಮಾಡದೇ ಕೆಲಸ ಮಾಡುತ್ತಿದ್ದೇನೆ. ಇವರಿಂದ ನಾನು ಸರ್ಟಿಫಿಕೇಟ್ ತೆಗೆದುಕೊಳ್ಳುವ ಅಗತ್ಯ ಇಲ್ಲ. ಹಾಗಾದರೆ, ಕರ್ನಾಟಕಕ್ಕೆ ಬರಲೇಬಾರದಾ ನಾನು? ನನ್ನನ್ನು ಗೆಲ್ಲಿಸಿದ ಜನರ ಕಷ್ಟ ಕೇಳಲು ಬರಲೇಬಾರದಾ? ನಾನು ಕರ್ನಾಟಕಕ್ಕೆ ಬಂದರೆ ಇವರು ನಿದ್ದೆಗೆಡುತ್ತಾರೆ ಎಂದು ಅವರು ಕಿಡಿಕಾರಿದರು.

### ಬಿಜೆಪಿಯಿಂದ ಅಭ್ಯರ್ಥಿ ಹೈಜಾಕ್ ಮಾಡಿಕೊಂಡು ಹೋಗಿದ್ದಾರೆ



ಚನ್ನಪಟ್ಟಣ, ಸಂಡೂರು, ಶಿಗ್ಗಾಂವಿ ಸೇರಿದಂತೆ ಮೂರೂ ಕ್ಷೇತ್ರಗಳಲ್ಲೂ ನಮ್ಮ ಅಭ್ಯರ್ಥಿಗಳು ದೊಡ್ಡ ಅಂತರದಲ್ಲಿ ಗೆಲುವು ಸಾಧಿಸುತ್ತಾರೆ ಎಂದು ಅವರು ವಿಶ್ವಾಸ ವ್ಯಕ್ತಪಡಿಸಿದರು. ನಾವು ಮೂರೂ ಕ್ಷೇತ್ರ ಗೆದ್ದಾಗಿದೆ ಎಂದು ಸಿಎಂ ಹೇಳುತ್ತಿದ್ದಾರೆ. ಕುಮಾರಸ್ವಾಮಿಯವರ ಭಾವನಾತ್ಮಕ ಮಾತು ಮತ್ತು ಕಣ್ಣೀರು ಜನರಿಗೆ ಬೇಸರವಾಗಿ ಹೋಗಿದೆ ಅಂದಿದ್ದಾರೆ. ಪಾಪ.. ಇವರು ಎಂದೂ ಜನರ ಮುಂದೆ ಕಣ್ಣೀರೇ ಹಾಕಿಲ್ಲವೇ? ಹೌದು, ನಾನು ಜನರ ಕಷ್ಟ ನೋಡಿ ಕಣ್ಣೀರು ಹಾಕ್ತಿದ್ದೇನೆ. ಇವರು ಅಧಿಕಾರ, ಹಣದ ದುರ್ಬಳಕೆಯಿಂದ ಗೆದ್ದಾಗಿದೆ ಎಂದು ಬೀಗುತ್ತಿದ್ದಾರೆ. ಇವರಿಗೆ ಚನ್ನಪಟ್ಟಣದಲ್ಲಿ ನಿಲ್ಲಿಸೋಕೆ ಕಾಂಗ್ರೆಸ್ ಪಕ್ಷದಿಂದ ಒಬ್ಬ ಅಭ್ಯರ್ಥಿ ಸಿಗಲಿಲ್ಲ. ಬಿಜೆಪಿಯಿಂದ ಅಭ್ಯರ್ಥಿ ಹೈಜಾಕ್ ಮಾಡಿಕೊಂಡು ಹೋಗಿದ್ದಾರೆ, ಇಷ್ಟಾದರೂ ಕುತಂತ್ರ ಬೇರೆ ಮಾಡಿದ್ದಾರೆ ಎಂದು ಕೇಂದ್ರ ಸಚಿವರು ಆಕ್ರೋಶ ವ್ಯಕ್ತಪಡಿಸಿದರು. ಎಲ್ಲಾವನ್ನೂ ಜನ ಗಮನಿಸುತ್ತಿದ್ದಾರೆ. ನಾನು ಯಾರ ಬಗ್ಗೆಯೂ ಟೀಕೆ ಮಾಡಲ್ಲ. ನನ್ನ ಕೆಲಸದ ಆಧಾರದಲ್ಲಿ ಮತ ಕೇಳುತ್ತೇನೆ ಎಂದು ಹೇಳಿದರು.

ಈ ದಿನದ ದರ | ಪೆಟ್ರೋಲ್: 103.44 ₹/L | ಡೀಸೆಲ್ : 89.97 ₹/L | ಬಂಗಾರ: ₹8,029/Gram24ct ₹7,360/Gram22ct | ಬೆಳ್ಳಿ: ₹97.00/Gram



## ಸಿದ್ಧಸೂಕ್ತಿ

**ಡಾ ಆರೂಢಭಾರತೀ ಸ್ವಾಮೀಜಿ**
**ಶ್ರೀ ಸಿದ್ಧಾರೂಢ ಮಿಷನ್ ಆಶ್ರಮ**
**ರಾಮೋಹಳ್ಳಿ**

## ಬಳಿಕಾತ್ಮನಿಗೆ ಬಂಧ ಮೋಕ್ಷಾದಿ ಎಂತು

ನಿಜಗುಣರ ಪರಮಾನುಭವ ಬೋಧೆಯ ಮಾತು. ಋಷಿ ಯಾಜ್ಞ್ಯವಲ್ಕ್ಯರ ಸತಿ ಮೈತ್ರೇಯಿ ಪತಿ ಗುರು ಯಾಜ್ಞ್ಯವಲ್ಕ್ಯರಿಗೆ ಕೇಳುವ ಪ್ರಶ್ನೆ. ಹೇ ಪತಿದೇವ ಈವರೆಗೆ ತಾವು ಹೇಳಿದಂತೆ ಪರಮಾತ್ಮ ಮಾತ್ರ ಪರಮ ಸತ್ಯ. ಉಳಿದುದೆಲ್ಲ ಮಿಥ್ಯಾ. ನಾನು ನನ್ನದು ಜಗತ್ತು ಎಲ್ಲವೂ ಭ್ರಾಂತಿ ಸುಳ್ಳು ಎಂದು ಒಪ್ಪೋಣ. ಹಾಗಾದರೆ ಏನೊಂದೂ ಇಲ್ಲದ ಏಕಮೇವ ನಿರ್ಗುಣ ನಿರಾಕಾರ ಪರಮಾತ್ಮ ಪರಬ್ರಹ್ಮದಲ್ಲಿ ಕಲ್ಪಿತ ಪುರುಷನಾಗಲಿ ಭ್ರಾಂತಿಯಾಗಲಿ ತೋರಿದ್ದು ಏಕೆ ಎಲ್ಲಿಂದ ಹೇಗೆ ಈ ಭ್ರಾಂತಿಯಿಂದ ತೋರುವ ಸುಖ ದುಃಖ ಬಂಧ ಮೋಕ್ಷಗಳಿಗೆ ಏನರ್ಥ ಏಕೆ ತೋರುತ್ತವೆ ಈ ಶರೀರವೇ ನಾನು, ಇದು ನನ್ನದು, ಈ ಶರೀರದ ಗುಣಧರ್ಮಗಳೆಲ್ಲ ನನ್ನವು ಎಂಬಿತ್ಯಾದಿ ಈ ಎಲ್ಲ ಭ್ರಾಂತಿಗಳು ಆತ್ಮನಲ್ಲಿ ಏಕೆ ತೋರುತ್ತಿವೆ ಇದೆಲ್ಲವನ್ನೂ ತಿಳಿದುಕೊಳ್ಳಬೇಕೆಂಬ ಹಂಬಲ ನನ್ನದು. ಆದ್ದರಿಂದ ಇದನ್ನೆಲ್ಲ ತಾವು ನನಗೆ ವಿಸ್ತಾರವಾಗಿ ತಿಳಿಸಿಕೊಡಬೇಕು ಎಂದಳು. ಇದಕ್ಕೆ ಉತ್ತರ ಮುಂದಿನ ಸಂಧಿಯಲ್ಲಿ. ಇಲ್ಲಿಗೆ ಶ್ರೀಮನ್ ನಿಜಗುಣ ಶಿವಯೋಗಿಗಳ ಪರಮಾನುಭವ ಬೋಧೆಯ ಎರಡನೆಯ ಸಂಧಿ ಮುಗಿಯಿತು.

## ಬೆಂಗಳೂರು ಸಹೋದರರಿಂದ ಯುಗಳ ಗಾಯನ



• **ಉದಯವಾಹಿನಿ ಬೆಂಗಳೂರು**

ಸುಸ್ವರಾಲಯ ಪ್ರೌಢ ಸಂಗೀತ ಕಲಾ ಶಾಲೆಯ 25ನೇ ವಾರ್ಷಿಕೋತ್ಸವದ ಅಂಗವಾಗಿ ಅಕ್ಟೋಬರ್ 27, ಭಾನುವಾರ ಸಂಜೆ 6-45ಕ್ಕೆ ಬೆಂಗಳೂರು ಸಹೋದರರಾದ ವಿದ್ವಾನ್ ಶ್ರೀ ಎಂ.ಬಿ.ಹರಿಹರನ್ ಮತ್ತು ವಿದ್ವಾನ್ ಶ್ರೀ ಎಸ್. ಅಶೋಕ್ ಇವರಿಂದ ಯುಗಳ ಗಾಯನ. ಪಿಟೀಲು : ವಿದ್ವಾನ್ ಶ್ರೀ ಹೆಚ್.ಕೆ. ವೆಂಕಟರಾಮ್, ಮೃದಂಗ : ವಿದ್ವಾನ್ ಶ್ರೀ ಬಿ. ಹರಿಕುಮಾರ್, ಘಟ : ವಿದ್ವಾನ್ ಶ್ರೀ ಟ್ರಿಚ್ಚಿ ಎಸ್. ಕೃಷ್ಣಸ್ವಾಮಿ. ಸ್ಥಳ : ಇಂಡಿಯನ್ ಇನ್ಸ್ಟಿಟ್ಯೂಟ್ ಆಫ್ ವರ್ಲ್ಡ್ ಕಲ್ಚರ್, ಬಿ.ಪಿ. ವಾಡಿಯಾ ರಸ್ತೆ, ಬಸವನಗುಡಿ, ಬೆಂಗಳೂರು-560004

## ರಾಜ್ಯದಲ್ಲಿ 3-4 ದಿನಗಳಲ್ಲಿ ಬೆಳೆಹಾನಿ ಸಮೀಕ್ಷೆ ಪೂರ್ಣ, 15 ದಿನಗಳಲ್ಲಿ ಪರಿಹಾರ

• **ಉದಯವಾಹಿನಿ ಬೆಂಗಳೂರು**

ರಾಜ್ಯದಲ್ಲಿ ಹಿಂಗಾರು ಹಂಗಾಮಿನ ಮಳೆಯಿಂದಾಗಿ ಭಾರೀ ಅನಾಹುತವೇ ಉಂಟಾಗಿದೆ. ಈ ಹಾನಿಯ ಕುರಿತಂತೆ 3-4 ದಿನಗಳಲ್ಲಿ ಸಮೀಕ್ಷೆ ಪೂರ್ಣಗೊಳಿಸಿ 15 ದಿನಗಳಲ್ಲೇ ಪರಿಹಾರ ವಿತರಿಸುವುದಾಗಿ ಕಂದಾಯ ಸಚಿವ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.ರಾಜ್ಯದಲ್ಲಿ ಅಕ್ಟೋಬರ್ ತಿಂಗಳಲ್ಲಿ ಸರಾಸರಿ 10.4 ಸೆಂ.ಮೀ. ವಾಡಿಕೆ ಮಳೆ ಆಗಬೇಕಿತ್ತು. ಆದರೆ 16.6 ಸೆಂ.ಮೀ. ಮಳೆ ಸುರಿದಿದೆ. ಅಂದಾಜು 56,993 ಹೆಕ್ಟೇರ್ ಪ್ರದೇಶದಲ್ಲಿನ ಬೆಳೆ ಹಾನಿಗೀಡಾಗಿದೆ. ಕಂದಾಯ, ಕೃಷಿ ಹಾಗೂ ತೋಟಗಾರಿಕೆ ಇಲಾಖೆಯ ಜಂಟಿ ಸಮೀಕ್ಷೆ ಇನ್ನು 3 - 4 ದಿನಗಳಲ್ಲಿ ಪೂರ್ಣಗೊಳ್ಳಲಿದ್ದು, 15 ದಿನಗಳಲ್ಲಿ ಪರಿಹಾರ ವಿತರಿಸುತ್ತೇವೆ ಎಂದು ಕಂದಾಯ ಸಚಿವರಾದ ಕೃಷ್ಣ ಬೈರೇಗೌಡ ತಿಳಿಸಿದ್ದಾರೆ.

## ಪೊಲೀಸ್ ವೇಷ ಧರಿಸಿ ವಿಡಿಯೋ ಕಾಲ್ ಮಾಡಿ ಹಣಕ್ಕೆ ಬೇಡಿಕೆ

• **ಉದಯವಾಹಿನಿ ಬೆಂಗಳೂರು**

ಇತ್ತೀಚಿಗೆ ಸೈಬರ್ ವಂಚನೆ ಪ್ರಕರಣಗಳು ಹೆಚ್ಚಾಗುತ್ತಿದ್ದು, ಈ ನಡುವೆ ವಂಚನೆಗೆ ಸೈಬರ್ ವಂಚಕರು ಹೊಸ ರೀತಿಯ ತಂತ್ರ ಅನುಸರಿಸುತ್ತಿದ್ದು, ಪೊಲೀಸರ ವೇಷ ಧರಿಸಿ ವಿಡಿಯೋ ಕಾಲ್ ಮಾಡಿ ಜನರಲ್ಲಿ ಹಣ ದೋಚುತ್ತಿದ್ದಾರೆ.ಹೌದು, ಧಾರವಾಡದಲ್ಲಿ ಈ ವಂಚಕ ಗ್ಯಾಂಗ್ ಸಕ್ರಿಯವಾಗಿದ್ದು, ಗ್ರಾಮೀಣ ಜನರು ಸೇರಿದಂತೆ ಹಲವರಿಗೆ ವಿಡಿಯೋ ಕಾಲ್ ಮಾಡಿ ಹೆದರಿಸಿ ಹಣ ಪಡೆಯುತ್ತಿರುವ ಪ್ರಕರಣ ಬೆಳಕಿಗೆ ಬಂದಿದೆ. ಮುಂಬೈ ಪೊಲೀಸರೆಂದು ವಿಡಿಯೋ ಕಾಲ್ ಮಾಡುವ ನಕಲಿ ಪೊಲೀಸರು, ಜನರಿಂದ ಹಣ ಪಡೆದುಕೊಂಡು ಮೋಸ ಮಾಡುತ್ತಿದ್ದಾರೆ.ಜನರಿಗೆ ಮೊದಲಿಗೆ ಕರೆ ಮಾಡುವ ಇವರು ನೀವು ಆರ್ಡರ್ ಮಾಡಿರುವ ಪಾರ್ಸೆಲ್ ನಲ್ಲಿ ಡ್ರಗ್ಸ್ ಇದೆ. ಪೊಲೀಸ್ ಠಾಣೆಗೆ ಬಂದು ಸೆಟ್ಲ್ ಮಾಡಿಕೊಳ್ಳಿ ಹಾಗೂ ನೀವು ಹೆಚ್ಚಿನ ಹಣ ವಹಿವಾಟು ಮಾಡಿದ್ದೀರಿ, ಹಣಕಾಸು ಇಲಾಖೆ ನಮಗೆ ಮಾಹಿತಿ ನೀಡಿ ಎಂದು ನಕಲಿ ಪೊಲೀಸ್ ಠಾಣೆಯಲ್ಲಿ ಕೂತು ವಿಡಿಯೋ ಕಾಲ್ ಮಾಡಿ ವಂಚಿಸುತ್ತಿದ್ದಾರೆ.

## ಕಲ್ಲಿನಿಂದ ಹೊಡೆದಿದ್ದಕ್ಕೆ ಯುವತಿ ಮೇಲೆ ಹಲ್ಲೆ : ಯುವಕನ ವಿರುದ್ಧ FIR ದಾಖಲು!

• **ಉದಯವಾಹಿನಿ ಬೆಂಗಳೂರು**

ಬೆಂಗಳೂರಿನಲ್ಲಿ ಬೈಕ್‌ನಲ್ಲಿ ಹೋಗುವಾಗ ನಾಯಿ ಅಡ್ಡ ಬಂದ ಹಿನ್ನೆಲೆಯಲ್ಲಿ ನಾಯಿಗೆ ಕಲ್ಲಿನಿಂದ ಹೊಡೆದಿದ್ದಕ್ಕೆ ಯುವಕನೊಬ್ಬ ಯುವತಿ ಮೇಲೆ ಹಲ್ಲೆ ಮಾಡಿರುವ ಆರೋಪ ಕೇಳಿಬಂದಿದೆ. ಬೆಂಗಳೂರು ನಗರದ ರಾಮಮೂರ್ತಿ ನಗರದ NRI ಲೇಔಟ್‌ನಲ್ಲಿ ಈ ಘಟನೆ ನಡೆದಿದೆ. ಬೈಕ್‌ನಲ್ಲಿ ಯುವತಿ ಹೋಗುತ್ತಿದ್ದ ವೇಳೆ ನಾಯಿ ಅಡ್ಡ ಬಂದಿದೆ. ಈ ವೇಳೆ ಯುವತಿ ಬೈಕ್ ನಿಂದ ಇಳಿದು ನಾಯಿಗೆ ಕಲ್ಲಿನಿಂದ ಹೊಡೆದಿದ್ದಾಳೆ. ಇದರಿಂದ ಕೋಪಗೊಂಡ ನಾಯಿಯ ಮಾಲೀಕ ಯುವಕ ಯುವತಿ ಮೇಲೆ ಹಲ್ಲೆ ಮಾಡಿದ್ದಾನೆ ಎಂದು ಆರೋಪಿ ಯುವತಿ ರಾಮಮೂರ್ತಿ ನಗರ ಪೊಲೀಸ್ ಠಾಣೆಗೆ ದೂರು ನೀಡಿದ್ದಾಳೆ. ಇನ್ನು ಮತ್ತೊಂದೆಡೆ ಯುವಕನೂ ಸಹ ರಾಮಮೂರ್ತಿ ನಗರ ಠಾಣೆಗೆ ದೂರು ನೀಡಿದ್ದು, ಯುವತಿ ಕಲ್ಲಿನಿಂದ ನಾಯಿಗೆ ಹೊಡೆದಿದ್ದನ್ನು ಪ್ರಶ್ನಿಸಿದ್ದಕ್ಕೆ ಯುವತಿ ನಮ್ಮ ಮೇಲೆ ಹಲ್ಲೆ ಮಾಡಿದ್ದಾರೆ ಎಂದು ಯುವಕ ದೂರಿನಲ್ಲಿ ಉಲ್ಲೇಖಿಸಿದ್ದಾರೆ.

## ಇ-ಖಾತಾ ಪಡೆಯಲು ಎನ್ಕಂಬರನ್ಸ್ ಸರ್ಟಿಫಿಕೇಟ್ ಅಗತ್ಯವಿಲ್ಲ: ಬಿಬಿಎಂಪಿ

• **ಉದಯವಾಹಿನಿ ಬೆಂಗಳೂರು**

ಇ-ಖಾತಾಗಳಿಗೆ ಅರ್ಜಿ ಸಲ್ಲಿಸುವಾಗ ನಾಗರಿಕರು ಅಡೆತಡೆಗಳನ್ನು ಎದುರಿಸುತ್ತಿರುವ ಹಿನ್ನೆಲೆಯಲ್ಲಿ, ಆನ್ ಲೈನ್ ಅರ್ಜಿ ಪ್ರಕ್ರಿಯೆಯನ್ನು ಪೂರ್ಣಗೊಳಿಸಲು ಎನ್ ಕಂಬರನ್ಸ್ ಸರ್ಟಿಫಿಕೇಟ್ (ಇಸಿ) ಅಗತ್ಯವನ್ನು ತೆಗೆದುಹಾಕಲು (ಬಿಬಿಎಂಪಿ) ನಿರ್ಧರಿಸಿದೆ. 2004 ಕ್ಕಿಂತ ಮೊದಲು ನೋಂದಾಯಿಸಲಾದ ಆಸ್ತಿಗಳ ಇಸಿ ಸಾರವನ್ನು ತ್ವರಿತವಾಗಿ ನೀಡಲು ದಲ್ಲಾಳಿಗಳು 5,000 ರೂ.ಗೆ ಬೇಡಿಕೆ ಇಡುತ್ತಿರುವುದರಿಂದ ಈ ಬದಲಾವಣೆಯು ಬೆಂಗಳೂರಿನ ಅನೇಕ ನಿವಾಸಿಗಳಿಗೆ ಸಹಾಯ ಮಾಡುವ ಸಾಧ್ಯತೆಯಿದೆ.ಮಾರಾಟ ಅಥವಾ ಖರೀದಿಗಾಗಿ ನೋಂದಾಯಿಸಲಾದ ಆಸ್ತಿಗಳಿಗೆ ಎನ್ಕಂಬರನ್ಸ್ ಪ್ರಮಾಣಪತ್ರ (ಇಸಿ) ಕಡ್ಡಾಯವಾಗಿರುತ್ತದೆ. ಮಂಗಳವಾರದಿಂದ ಮಾರ್ಪಾಡುಗಳು ಜಾರಿಗೆ ಬರಲಿವೆ ಎಂದು ಬಿಬಿಎಂಪಿ ವಿಶೇಷ ಆಯುಕ್ತ (ಕಂದಾಯ) ಮುನೀಶ್ ಮೌದ್ಗಿಲ್ ತಿಳಿಸಿದರು. ಜನರು ಆಸ್ತಿಗಳನ್ನು ಮಾರಾಟ ಮಾಡಲು ಅಥವಾ ನೋಂದಾಯಿಸಲು ಬಯಸಿದರೆ ಮಾತ್ರ ಚುನಾವಣಾ ಆಯೋಗದ ಅಗತ್ಯವಿರುತ್ತದೆ. 98% ಜನರು ವಹಿವಾಟು ನಡೆಸದ ಕಾರಣ, ನಾವು ಚುನಾವಣಾ ಆಯೋಗದ ಅಗತ್ಯವನ್ನು ಐಚ್ಛಿಕವಾಗಿರಿಸುತ್ತೇವೆ ಎಂದು ಅವರು ಹೇಳಿದರು.

# ಚನ್ನಪಟ್ಟಣ ಎಲೆಕ್ಷನ್‌ಗೆ ಹೋಗಿರೋದು ಇದೇ ದುಡ್ಡಾ?

## ರಸ್ತೆ ಗುಂಡಿ ಮುಚ್ಚಲು ಕಳೆದ ವರ್ಷ ಬಿಬಿಎಂಪಿ ವ್ಯಾಪ್ತಿಯ ಪ್ರತಿ ವಾರ್ಡ್‌ಗೆ ತಲಾ 15 ಲಕ್ಷ ರೂ. ಬಿಡುಗಡೆ

• **ಉದಯವಾಹಿನಿ ಬೆಂಗಳೂರು**

ಝಣ-ಝಣ ಕಾಂಚಾಣದಲ್ಲಿ, ಕಾಂಗ್ರೆಸ್ ಸರ್ಕಾರದಲ್ಲಿ, ರಸ್ತೆ ಗುಂಡಿ ಮುಚ್ಚುವ ಹಣವೂ ಮಾಯ, ನಾಳೆ ರಸ್ತೆಯೂ ಮಾಯ, ಎಲ್ಲಾ ಮಾಯಾ ನಾಳೆ ನಾವೂ ಮಾಯ ಎಂದು ವಿಪಕ್ಷ ನಾಯಕ ಆರ್.ಅಶೋಕ್ ಕಾಂಗ್ರೆಸ್ ಸರ್ಕಾರದ ವಿರುದ್ಧ ಲೇವಡಿ ಮಾಡಿದ್ದಾರೆ.

ಪಾರ್ಟ್ ಟೈಮ್ ಬೆಂಗಳೂರು ಅಭಿವೃದ್ಧಿ ಸಚಿವ ಡಿ.ಕೆ. ಶಿವಕುಮಾರ್ ಅವರೇ..ಬೆಂಗಳೂರಿನಲ್ಲಿ ರಸ್ತೆ ಗುಂಡಿ ಮುಚ್ಚಲು ಕಳೆದ ವರ್ಷ ಅಕ್ಟೋಬರ್ ತಿಂಗಳಿನಲ್ಲಿ ಬಿಬಿಎಂಪಿ ವ್ಯಾಪ್ತಿಯ ಪ್ರತಿ ವಾರ್ಡ್‌ಗೆ ತಲಾ 15 ಲಕ್ಷ ರೂಪಾಯಿ ಬಿಡುಗಡೆ ಮಾಡಿದ್ದರಲ್ಲ, ಆ ಹಣವೆಲ್ಲಾ ಏನಾಯ್ತು ಎಂದು ಪ್ರಶ್ನಿಸಿದ್ದಾರೆ.

ಬೆಂಗಳೂರಿನ ಉದ್ದಗಲಕ್ಕೂ ಬಾಯ್ತೆರಿದಿರುವ ಯಮಸ್ವರೂಪಿ ರಸ್ತೆ ಗುಂಡಿಗಳನ್ನು ನೋಡಿದರೆ ಬಹುಶಃ ಆ ದುಡ್ಡೆಲ್ಲವೂ ತಮ್ಮ ಕಮಿಷನ್ ಪಾಲಾದಂತಿದೆ. ಅಥವಾ ಈಗ ಚನ್ನಪಟ್ಟಣ ಚುನಾವಣೆ ಖರ್ಚಿಗೆ ಆ ಹಣ ಸಾಗಿಸಿದ್ದೀರೋ ಎಂದು ವ್ಯಂಗ್ಯ ಮಾಡಿದ್ದಾರೆ. ಬ್ರ್ಯಾಂಡ್ ಬೆಂಗಳೂರು ಕಟ್ಟುವುದು ದೂರದ



ಉದಯವಾಹಿನಿ ಚಿತ್ರ

ಮಾತು ಸ್ವಾಮಿ, ಮೊದಲು ರಸ್ತೆ ಗುಂಡಿ ಮುಚ್ಚಿಸಿ ಜನರ ಪ್ರಾಣ ಉಳಿಸಿ ಎಂದು ಸರ್ಕಾರಕ್ಕೆ ಒತ್ತಾಯಿಸಿದ್ದಾರೆ.

ಬೆಂಗಳೂರಿನಲ್ಲಿ 6,000 ರಸ್ತೆ ಗುಂಡಿಗಳನ್ನು ಮುಚ್ಚಲಾಗಿದೆ ಎಂದು ತಾವು ಸಾಮಾಜಿಕ ಜಾಲತಾಣಗಳಲ್ಲಿ, ಮಾಧ್ಯಮಗಳಲ್ಲಿ ಪುಕ್ಕಟೆ ಪ್ರಚಾರ ಪಡೆದುಕೊಂಡು ಇನ್ನೂ ಸರಿಯಾಗಿ ಒಂದು ತಿಂಗಳೂ ಕಳೆದಿಲ್ಲ ಎಂದು ತಿವಿದಿದ್ದಾರೆ.ಆದರೆ ಇವತ್ತು ಬೆಂಗಳೂರಿನ ರಸ್ತೆಗಳಲ್ಲಿ ಗುಂಡಿಗಳಿದೆಯೋ ಅಥವಾ ಗುಂಡಿಗಳಲ್ಲಿ ರಸ್ತೆ ಇದೆಯೋ ಅರ್ಥವಾಗದ ಪರಿಸ್ಥಿತಿ ಎದುರಾಗಿದೆ. ಬೆಂಗಳೂರಿನ

> **ಚನ್ನಪಟ್ಟಣಕ್ಕೆ ನಾನೇ ಅಭ್ಯರ್ಥಿ ಎಂದು ರಾಜಕಾರಣ ಮಾಡುತ್ತಲೇ ಕಾಲಹರಣ ಮಾಡುತ್ತಾರೋ ಅಥವಾ ಇನ್ನಾದರೂ ಬೆಂಗಳೂರು ಅಭಿವೃದ್ಧಿ ಮಂತ್ರಿ, ನಾನೇ ಎಂದು ನೆನಪಿಸಿಕೊಂಡು ನಗರದ ಅವಸ್ಥೆ ಕಡೆ ಗಮನ ಹರಿಸುತ್ತಾರೋ ಎಂದು ದೂರಿದ್ದಾರೆ.**

ಜನತೆ ತಮಗೆ ಕೇಳುತ್ತಿರುವ ಪ್ರಶ್ನೆಗಳಿಗೆ ಉತ್ತರ ನೀಡುವಿರಾ ಎಂದು ಅಶೋಕ್ ಪ್ರಶ್ನಿಸಿದ್ದಾರೆ.

6,000 ರಸ್ತೆಗುಂಡಿಗಳನ್ನು ಮುಚ್ಚಿದ್ದೇವೆ ಅಂತ ಹೇಳಿದ್ದು ನಿಜವಾ ಅಥವಾ ಹಸಿ ಸುಳ್ಳಾ ರಸ್ತೆ ಗುಂಡಿ ಮುಚಿದ್ದೇವೆ ಎಂದು ಒಂದೆರಡು ಫೋಟೋ, ವಿಡಿಯೋ ಕಳಿಸಿ ಅಮೆರಿಕದಲ್ಲಿದ್ದ ತಮಗೆ ಅಧಿಕಾರಿಗಳು ಟೋಪಿ ಹಾಕಿದ್ದಾರಾ ರಸ್ತೆ ಗುಂಡಿ ಮುಚ್ಚುವ ನೆಪದಲ್ಲಿ ನಕಲಿ ಬಿಲ್ ಸೃಷ್ಟಿ ಮಾಡಿ ಕಮಿಷನ್ ಹೊಡೆದು ಜನರ ಹಣ ಲಪಟಾಯಿಸಿದ್ದೀರ ಎಂದು ಕಾಲೆಳೆದಿದ್ದಾರೆ.

ರಸ್ತೆಗುಂಡಿ ಮುಚ್ಚಿದ್ದ ಕಾಮಗಾರಿ ಒಂದೇ ತಿಂಗಳಲ್ಲಿ

### ರಾಜ್ಯ ಸರ್ಕಾರದ ವಿರುದ್ಧ ಅಶೋಕ್

**ಉಲ್ಟಾ ಚೋರ್ ಕೊತ್ವಾಲ್ ಕೋ ಡಾಂಟಾ ಎಂಬಂತೆ ಬೆಂಗಳೂರಿನ ಮರ್ಯಾದೆ ತೆಗೆಯುತ್ತಿದ್ದೀರಿ ಎಂದು ಮಾಧ್ಯಮಗಳ ಮೇಲೆ ಹರಿಹಾಯುತ್ತಾರೋ, ಅಥವಾ ತಮ್ಮ ಕರ್ತವ್ಯ ನಿರ್ವಹಣೆ ಮಾಡುವ ಮೂಲಕ ಸರ್ಕಾರದ ಮರ್ಯಾದೆ ಉಳಿಸಿಕೊಳ್ಳುತ್ತಾರೋ ಎಂದು ಬೆಂಗಳೂರಿನಲ್ಲಿ ಮಳೆಯಿಂದ ಸಂಭವಿಸಿದ ಘಟನೆಗಳನ್ನು ಮುಂದಿಟ್ಟಿದ್ದಾರೆ. ರಾಜ್ಯ ಸರ್ಕಾರದ ವಿರುದ್ಧ ಅಶೋಕ್ ಹರಿಹಾಯ್ದಿದ್ದಾರೆ.**


ಕಿತ್ತು ಹೋಗುವಷ್ಟು ಕಳಪೆ ಕಾಮಗಾರಿ ಆಗಿತ್ತಾ ಉತ್ತರ ಕೊಡಿ ಉಪಮುಖ್ಯಮಂತ್ರಿಗಳೇ, ಬ್ರ್ಯಾಂಡ್ ಬೆಂಗಳೂರು ಹೆಸರಿನಲ್ಲಿ ಇನ್ನೆಷ್ಟು ಬಂಡಲ್ ಬಿಡುತ್ತೀರಿ ಎಂದು ಡಿ.ಕೆ.ಶಿವಕುಮಾರ್ ಅವರಿಗೆ ಟಾಂಗ್ ನೀಡಿದ್ದಾರೆ.

## 48 ಗಂಟೆಯಲ್ಲೇ ಪರಿಹಾರ ವಿತರಣೆಗೆ ಸಿಎಂ ಆದೇಶ

• **ಉದಯವಾಹಿನಿ ಬೆಂಗಳೂರು**

ರಾಜ್ಯದ ಮಳೆಹಾನಿಯಿಂದಾಗಿ ರೈತರ ಬೆಳೆ ನಷ್ಟವಾಗಿದೆ. ಹಲವೆಡೆ ಮನೆಗಳು ಕುಸಿದು ಹೋಗಿದ್ದಾವೆ. ಇಂತಹ ಮಳೆಹಾನಿ ಸಂತ್ರಸ್ತರಿಗೆ ಗುಡ್ ನ್ಯೂಸ್ ಎನ್ನುವಂತೆ ಸಿಎಂ ಸಿದ್ಧರಾಮಯ್ಯ ಅವರು 48 ಗಂಟೆಗಳಲ್ಲಿ ಪರಿಹಾರವನ್ನು ನೀಡುವಂತೆ ಖಡಕ್ ಆದೇಶವನ್ನು ಮಾಡಿದ್ದಾರೆ.

ರಾಜ್ಯದಲ್ಲಿನ ಮಳೆಹಾನಿಗೆ ಸಂಬಂಧಿಸಿದಂತೆ ಜಿಲ್ಲಾಧಿಕಾರಿಗಳು, ಜಿಲ್ಲಾ ಉಸ್ತುವಾರಿ ಸಚಿವರೊಂದಿಗೆ ಮಹತ್ವದ ಸಭೆಯನ್ನು ನಡೆಸಿದರು. ಈ ಬಾರಿ ಹಿಂಗಾರು ಹಂಗಾಮಿನಲ್ಲಿ ಅಕ್ಟೋಬರ್ 1ರಿಂದ 25ರ ವರೆಗೆ ರಾಜ್ಯದಲ್ಲಿ ಸರಾಸರಿ 181 ಮಿ.ಮೀ ಮಳೆಯಾಗಿದೆ. ಈ ಅವಧಿಯ ವಾಸ್ತವಿಕ ಸರಾಸರಿ ಮಳೆ ಪ್ರಮಾಣ 114 ಮಿ.ಮೀ ಆಗಿದ್ದು, ಶೇ.58 ರಷ್ಟು ಹೆಚ್ಚುವರಿ ಮಳೆ ದಾಖಲಾಗಿದೆ ಎಂದರು.ಹಿಂಗಾರು ಅವಧಿಯಲ್ಲಿ ಅತಿವೃಷ್ಟಿಯಿಂದಾಗಿ ಒಟ್ಟು 25 ಸಾವು ಸಂಭವಿಸಿದ್ದು, ತುರ್ತು ಪರಿಹಾರ ಪಾವತಿಸಲಾಗಿದೆ ಎಂದು ಹೇಳಿದರು.



ಉದಯವಾಹಿನಿ ಚಿತ್ರ

ಈ ಅವಧಿಯಲ್ಲಿ ಅಧಿಕ ಮಳೆಯಿಂದಾಗಿ 84ಮನೆಗಳು ಸಂಪೂರ್ಣ ಹಾನಿಗೀಡಾಗಿದ್ದು, 2077ಮನೆಗಳು ಭಾಗಶಃ ಹಾನಿಗೀಡಾಗಿವೆ. ಪೂರ್ತಿ ಮನೆಗೆ 1.20ಲಕ್ಷ ರೂ ಪರಿಹಾರ ಹಾಗೂ ಮನೆ ನಿರ್ಮಿಸಿ ಕೊಡಲು ಈಗಾಗಲೇ ಆದೇಶಿಸಲಾಗಿದೆ. ಭಾಗಶಃ ಹಾನಿಗೀಡಾದ ಮನೆಗಳಿಗೆ ಮುಂಗಾರು ಹಂಗಾಮಿನಲ್ಲಿ ಸೂಚಿಸಿರುವಂತೆ ರೂ.50 ಸಾವಿರದವರೆಗೆ ಪರಿಹಾರ ಒದಗಿಸಲು ಆದೇಶಿಸಲಾಗಿದೆ ಎಂದರು.

ಬೆಳೆ ಹಾನಿ ಕುರಿತು ಸ್ಥಳ ಪರಿಶೀಲನೆ ನಡೆಸಿದ ಆಧಾರದಲ್ಲಿ ಪ್ರಾಥಮಿಕ ವರದಿಯನ್ನು ಪಡೆಯಲಾಗಿದೆ. ಅತಿವೃಷ್ಟಿಯಿಂದಾಗಿ ಒಟ್ಟು

> **ಬೆಳೆ ಹಾನಿಯ ಕುರಿತು ಜಂಟಿ ಸಮೀಕ್ಷೆ ನಡೆಯುತ್ತಿದ್ದು, 3-4ದಿನಗಳಲ್ಲಿ ಸಮೀಕ್ಷೆ ಕಾರ್ಯ ಪೂರ್ಣಗೊಳ್ಳಲಿದೆ. ಜಂಟಿ ಸಮೀಕ್ಷೆ ಕಾರ್ಯವನ್ನು ಒಂದು ವಾರದ ಒಳಗಾಗಿ ಪೂರ್ಣಗೊಳಿಸಿ ವರದಿಯನ್ನು ಸಲ್ಲಿಸಲು ಜಿಲ್ಲಾಧಿಕಾರಿಗಳಿಗೆ ಸೂಚನೆ ನೀಡಲಾಗಿದೆ. ಮನೆ ಹಾನಿ ಮತ್ತು ಪ್ರಾಣ ಹಾನಿ ಪ್ರಕರಣಗಳಲ್ಲಿ 48 ಗಂಟೆಗಳ ಒಳಗಾಗಿ ಪರಿಹಾರವನ್ನು ಒದಗಿಸಬೇಕು ಎಂಬುದಾಗಿ ಖಡಕ್ ಆದೇಶ ಮಾಡಿದರು.**

74,993 ಹೆಕ್ಟೇರ್ ಪ್ರದೇಶದಲ್ಲಿ ಅಂದಾಜು ಕೃಷಿ ಬೆಳೆ ಹಾನಿ, 30,941ಹೆಕ್ಟೇರ್ ಪ್ರದೇಶದಲ್ಲಿ ತೋಟಗಾರಿಕಾ ಬೆಳೆ ಹಾನಿ ಅಂದಾಜಿಸಲಾಗಿದೆ. ಒಟ್ಟು 1,05,937ಹೆಕ್ಟೇರ್ ಪ್ರದೇಶದಲ್ಲಿ ಬೆಳೆ ಹಾನಿ ಅಂದಾಜಿಸಲಾಗಿದೆ ಎಂದರು.

## ರಾಜಕಾರಣಿಗಳದ್ದು ಹಿಂದೂ ಸಮಾಜವನ್ನು ಛಿದ್ರಗೊಳಿಸುವ ಹುನ್ನಾರ: ಮುತಾಲಿಕ್

• **ಉದಯವಾಹಿನಿ ಬೆಂಗಳೂರು**

ಹಿಂದೂ ಪರ ಸಂಘಟನೆಗಳು ಹಿಂದೂ ಸಮಾಜವನ್ನು ಒಗ್ಗೂಡಿಸಲು ಪ್ರಯತ್ನಿಸುತ್ತಿದ್ದೇವೆ.ಆದರೆ,ರಾಜಕಾರಣಿಗಳು ಜಾತಿ ಗಣತಿ ಹೆಸರಿನಲ್ಲಿ ರಾಜಕೀಯ ಲಾಭಕ್ಕಾಗಿ ಸಮಾಜವನ್ನು ಒಡೆಯುವ ಹುನ್ನಾರ ನಡೆಸಿದ್ದಾರೆ ಎಂದು ಶ್ರೀರಾಮ ಸೇನೆ ಮುಖಂಡ ಪ್ರಮೋದ್ ಮುತಾಲಿಕ್ ಕಿಡಿಕಾರಿದ್ದಾರೆ.

ದಾಸರಹಳ್ಳಿ ವಿಧಾನಸಭಾ ಕ್ಷೇತ್ರದ ಎಂಇಐ ಬಡಾವಣೆಯಲ್ಲಿ ನೂತನವಾಗಿ ಆರಂಭಗೊಂಡಿರುವ ಸಿಲ್ವರ್ ಲೈನ್ ಸೂಪರ್ ಸ್ಪೆಷಾಲಿಟಿ ಆಸ್ಪತ್ರೆ ಪ್ರಾರಂಭೋತ್ಸವ ಕಾರ್ಯಕ್ರಮದಲ್ಲಿ ಭಾಗವಹಿಸಿ ಮಾತನಾಡಿದ ಮುತಾಲಿಕ್,ಸಂವಿಧಾನದಲ್ಲಿ ಈಗಾಗಲೇ ಮೀಸಲಾತಿ ವ್ಯವಸ್ಥೆ ಇದೆ.ಆದರೆ ರಾಜಕಾರಣಿಗಳು ತಮ್ಮ ರಾಜಕೀಯ ಸ್ವಾರ್ಥಕ್ಕಾಗಿ ಜಾತಿ ಜಾತಿಗಳ ನಡುವೆ ಒಡಕು ಉಂಟು ಮಾಡಿ ಹಿಂದೂ ಸಮಾಜವನ್ನು ಛಿದ್ರ ಛಿದ್ರಗೊಳಿಸಲು ಹೊರಟಿದ್ದಾರೆ ಎಂದು ಹೇಳಿದರು.

ಜಾತಿ ಗಣತಿ ಅವಶ್ಯಕತೆಯೇ ಇಲ್ಲ,ಜಾತಿ ಮೇಲಾಟ



ಉದಯವಾಹಿನಿ ಚಿತ್ರ

ಸಮಾಜವನ್ನು ಒಡೆಯುವ ಪ್ರಕ್ರಿಯೆ,ಪರಸ್ಪರ ದ್ವೇಷ ನಿರ್ಮಾಣ ಮಾಡುತ್ತಿದ್ದಾರೆ.ಜಾತಿಗಳನ್ನು ಕಡಿಮೆ ಮಾಡುವುದನ್ನು ಬಿಟ್ಟು ಜಾತಿಯ ಭಾವನೆಗಳನ್ನು ಜಾತಿಯ ದ್ವೇಷಗಳನ್ನು ಬೆಳೆಸುವ ಪ್ರಕ್ರಿಯೆ ನಡೆಯುತ್ತಿದೆ ಎಂದ ಪ್ರಮೋದ್ ಮುತಾಲಿಕ್,ಜಾತಿ ಗಣತಿಯನ್ನು ವಿರೋಧಿಸುತ್ತೇವೆ ಎಂದರು.

ಶಾಸಕ ಎಸ್ ಮುನಿರಾಜು,ಸಿಲ್ವರ್ ಲೈನ್ ಆಸ್ಪತ್ರೆ ಮುಖ್ಯಸ್ಥರಾದ ಯೋಗೀಶ್,ಡಾ.ಆನಂದ್ ಹಾಗೂ ಸಿಬ್ಬಂದಿ ಉಪಸ್ಥಿತರಿದ್ದರು.100 ಹಾಸಿಗೆ ಸಾಮರ್ಥ್ಯದ ಸಿಲ್ವರ್ ಲೈನ್ ಆಸ್ಪತ್ರೆಯನ್ನು ಆರೋಗ್ಯ ಸಚಿವ ದಿನೇಶ್ ಗುಂಡೂರಾವ್ ಲೋಕಾರ್ಪಣೆಗೊಳಿಸಿದರು.

## ಹೆಚ್.ಡಿ.ದೇವೇಗೌಡರ ನಿವಾಸಕ್ಕೆ ಉಪ ರಾಷ್ಟ್ರಪತಿ ಜಗದೀಪ್ ಧನಕರ್ ಭೇಟಿ

• **ಉದಯವಾಹಿನಿ ಬೆಂಗಳೂರು**

ಉಪ ರಾಷ್ಟ್ರಪತಿಗಳಾದ ಜಗದೀಪ್ ಧನಕರ್ ಅವರು ಹಾಗೂ ಅವರ ಧರ್ಮಪತ್ನಿ ಶ್ರೀಮತಿ ಸುದೇಶ್ ಧನಕರ್ ಅವರೊಂದಿಗೆ ಶನಿವಾರ ಮಾಜಿ ಪ್ರಧಾನಮಂತ್ರಿಗಳಾದ ಹೆಚ್.ಡಿ.ದೇವೇಗೌಡ ಅವರ ನಿವಾಸಕ್ಕೆ ಭೇಟಿ ನೀಡಿದರು. ಮಾಜಿ ಪ್ರಧಾನಿಗಳ ನಿವಾಸಕ್ಕೆ ಆಗಮಿಸಿದ ಉಪ ರಾಷ್ಟ್ರಪತಿಗಳನ್ನು ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರು ಬರಮಾಡಿಕೊಂಡರು. ಒಂದು ಗಂಟೆಗೂ ಹೆಚ್ಚು ಕಾಲ ದೇವೇಗೌಡ ನಿವಾಸದಲ್ಲಿದ್ದು, ಶ್ರೀಮತಿ ಚನ್ನಮ್ಮ ಅವರ ಆರೋಗ್ಯದ ಬಗ್ಗೆ ದೇವೇಗೌಡರಲ್ಲಿ ವಿಚಾರಿಸಿದರು. ಚನ್ನಮ್ಮ ಅವರು ಆದಷ್ಟು ಬೇಗ ಗುಣಮುಖರಾಗಲಿ, ಆ ನಂತರ ಅವರನ್ನು ತಾವು ದೆಹಲಿಗೆ ಕರೆದುಕೊಂಡು ಬನ್ನಿ ಎಂದು ಉಪ ರಾಷ್ಟ್ರಪತಿಗಳು, ಮಾಜಿ ಪ್ರಧಾನಿ ಹೆಚ್ ಡಿ ದೇವೇಗೌಡರಿಗೆ ತಿಳಿಸಿದರು.

ಇದಕ್ಕೆ ಮಾಜಿ ಪ್ರಧಾನಿ ದೇವೇ ಗೌಡ್ರು ಸಮ್ಮತಿಸಿ, ತಮ್ಮ ಮೇಲೆ ತಾವು ಇರಿಸಿರುವ ಪ್ರೀತಿ ವಿಶ್ವಾಸ, ಅಭಿಮಾನಕ್ಕೆ ನನ್ನ ಹೃದಯ ತುಂಬಿ ಬಂದಿದೆ. ತಮ್ಮ ಆಗಮನ ನಮ್ಮ ಇಡೀ ಕುಟುಂಬಕ್ಕೆ ಬಹಳ ಸಂತೋಷ ಉಂಟು ಮಾಡಿದೆ ಎಂದು ಉಪ ರಾಷ್ಟ್ರಪತಿಗಳಿಗೆ ಕೃತಜ್ಞತೆ ಸಲ್ಲಿಸಿದರು. ಉಪ ರಾಷ್ಟ್ರಪತಿ ಜಗದೀಪ್ ಧನಕರ್, ಶ್ರೀಮತಿ ಸುದೇಶ್ ಧನಕರ್ ಅವರುಗಳು ಮಾಜಿ ಪ್ರಧಾನಿಗಳು, ಕೇಂದ್ರ ಸಚಿವ ಹೆಚ್.ಡಿ.ಕುಮಾರಸ್ವಾಮಿ ಅವರ ಜತೆಯಲ್ಲಿಯೇ ಉಪಹಾರ ಸೇವಿಸಿದರು. ಅವರೆಲ್ಲರೂ ರಾಷ್ಟ್ರದ ಅಭಿವೃದ್ಧಿಯ ಬಗ್ಗೆ ಚರ್ಚೆ ನಡೆಸಿದರು. ಬಳಿಕ ಕುಟುಂಬದ ಎಲ್ಲಾ ಸದಸ್ಯರ ಕುಶಲೋಪರಿ ವಿಚಾರಿಸಿದರು. ವಿಶೇಷವಾಗಿ ಪುಟ್ಟ ಮಕ್ಕಳ ಜತೆ ಉಪ ರಾಷ್ಟ್ರಪತಿಗಳು ಕೆಲ ಕಾಲ ಕಳೆದರು. ಉಪ ರಾಷ್ಟ್ರಪತಿಗಳನ್ನು ಬೀಳ್ಕೊಟ್ಟ ನಂತರ ಮಾಧ್ಯಮಗಳ ಜತೆ ಮಾತನಾಡಿದ ಕೇಂದ್ರ ಸಚಿವ ಹೆಚ್ ಡಿ ಕುಮಾರಸ್ವಾಮಿ ಅವರು, ಉಪ ರಾಷ್ಟ್ರಪತಿಗಳು ಹಾಗೂ ಮಾಜಿ ಪ್ರಧಾನಿಗಳ ನಡುವೆ ಸ್ನೇಹಪೂರ್ವಕ ಬಾಂಧವ್ಯ ಇದೆ. ಇಬ್ಬರೂ ಪರಸ್ಪರ



ಉದಯವಾಹಿನಿ ಚಿತ್ರ

ಗೌರವಭಾವ ಇರಿಸಿಕೊಂಡಿದ್ದು, ಅದರಲ್ಲಿಯೂ ಉಪ ರಾಷ್ಟ್ರಪತಿಗಳು ಮಾಜಿ ಅತ್ಯಂತ ಗೌರವ ಇರಿಸಿಕೊಂಡಿದ್ದೇನೆ. ಇದನ್ನು ಅನೇಕ ಸಲ ಕಣ್ಣಾರೆ ಕಂಡಿದ್ದೇನೆ ಎಂದರು. ಇಬ್ಬರೂ ನಾಯಕರು ರೈತ ಕುಟುಂಬದ ಹಿನ್ನೆಲೆಯಿಂದ ಬಂದವರು. ಹೀಗಾಗಿ ಅವರಿಬ್ಬರ ಚರ್ಚೆ ಬಹುತೇಕ ಕೃಷಿ ಕೇಂದ್ರಿತವಾಗಿತ್ತು. ರೈತರ ಅಭಿವೃದ್ಧಿಯ ಬಗ್ಗೆ ಅವರು ಅನೇಕ ಮಹತ್ವದ ವಿಚಾರಗಳ ಬಗ್ಗೆ ಚರ್ಚೆ ನಡೆಸಿದರು ಎಂದು ಕೇಂದ್ರ ಸಚಿವರು

> **ಅಲ್ಲದೆ, ಉಪ ರಾಷ್ಟ್ರಪತಿಗಳು ಅನೇಕ ಸಲ ಬೆಂಗಳೂರಿಗೆ ಬಂದಾಗ ದೇವೇಗೌಡರ ನಿವಾಸಕ್ಕೆ ಭೇಟಿ ನೀಡುವ ಇಂಗಿತ ವ್ಯಕ್ತಪಡಿಸಿದ್ದರು. ಅದರಂತೆ ಇವತ್ತು ಭೇಟಿ ನೀಡಿದ್ದಾರೆ. ಇನ್ನೂ ನಮ್ಮ ತಾಯಿ ಅವರು ಆಸ್ಪತ್ರೆಯಲ್ಲೇ ಇದ್ದಾರೆ. ವಿಶೇಷವಾಗಿ ಉಪ ರಾಷ್ಟ್ರಪತಿಗಳು ನಮ್ಮ ತಾಯಿಯವರ ಆರೋಗ್ಯ ವಿಚಾರಿಸಿ, ಆದಷ್ಟು ಬೇಗ ಗುಣಮುಖರಾಗಬೇಕು ಎಂದು ಹಾರೈಸಿದರು. ಅವರು ತೋರಿದ ಪ್ರೀತಿ ವಿಶ್ವಾಸ ಅಭಿಮಾನಕ್ಕೆ ನಮ್ಮ ಕುಟುಂಬ ಚಿರಋಣಿ ಆಗಿರುತ್ತದೆ ಎಂದು ಕುಮಾರಸ್ವಾಮಿ ಅವರು ಹೇಳಿದರು.**

ಮಾಹಿತಿ ಹಂಚಿಕೊಂಡರು.

## ಮೂಕ ಜೀವ ಚಿತ್ರಕ್ಕೆ ರಾಷ್ಟ್ರಪ್ರಶಸ್ತಿ ನೀಡಿ

• **ಉದಯವಾಹಿನಿ ಮಹದೇವಪುರ**

ಸಾಮಾಜಿಕ ಜವಾಬ್ದಾರಿ, ಕಳಕಳಿ, ಕಾಳಜಿ, ಜಾಗೃತಿ ಇರುವಂತಹ 'ಮೂಕ ಜೀವ ' ಚಿತ್ರಕ್ಕೆ ರಾಷ್ಟ್ರಪ್ರಶಸ್ತಿ ನೀಡಬೇಕೆಂದು ಕೋಲಾರ ಮಾಜಿ ಸಂಸದ ಎಸ್. ಮುನಿಸ್ವಾಮಿ ತಿಳಿಸಿದರು.

ಕ್ಷೇತ್ರದ ಕಾಡುಗುಡಿ ಶ್ರೀನಿವಾಸ ಚಿತ್ರಮಂದಿರದಲ್ಲಿ ತೆರೆಕಂಡ ಜೆ.ಎಂ. ಪ್ರಹ್ಲಾದ್ ಅವರ ಕಾದಂಬರಿ ಆಧಾರಿತ ಮೂಕ ಜೀವ ಚಲನಚಿತ್ರವನ್ನು ವೀಕ್ಷಿಸಿ ಮಾತನಾಡಿದ ಅವರು. ಅಂಗವಿಕಲತೆಯೇ ನ್ಯೂನತೆ ಎಂದು ಭಾವಿಸದೆ, ಸಮಾಜದಲ್ಲಿ ತಾವು ಎಲ್ಲರಂತೆ ಬದುಕಬಹುದು ಎಂಬ ಆತ್ಮಸ್ಥೈರ್ಯವನ್ನು ತುಂಬುವ ಚಿತ್ರಕ್ಕೆ ರಾಷ್ಟ್ರಪ್ರಶಸ್ತಿ ನೀಡಬೇಕು ಇಂತಹ ಚಿತ್ರಗಳು ಇಂದಿನ ಸಮಾಜಕ್ಕೆ ಅವಶ್ಯಕ ಎಂದರು. ನಿರ್ದೇಶಕ ಶ್ರೀನಾಥ್ ವಿಶಿಷ್ಠ ಮಾತನಾಡಿ, ಶ್ರೀಹರ್ಷ ಉತ್ತಮ ನಟನೆ ಮಾಡಿದ್ದಾರೆ, ಬಿಗ್ ಬಾಸ್ ಖ್ಯಾತಿಯ ಕಾರ್ತಿಕ್ ಮಹೇಶ್ ಅವರಿಗೆ ಇದು ಮೊದಲ ಚಿತ್ರ, ಅದ್ರೆ



ಉದಯವಾಹಿನಿ ಚಿತ್ರ

ಅವರು ಸಿನಿಮಾದ ಪ್ರಚಾರಕ್ಕೆ ಬಂದಿಲ್ಲ ಅವರ ವಿರುದ್ಧ ಚಲನಚಿತ್ರ ಮಂಡಳಿಯಲ್ಲಿ ದೂರು ದಾಖಲಿಸುತ್ತೇವೆ ಎಂದರು.

ನಿರ್ಮಾಪಕ ಎಂ. ವೆಂಕಟೇಶ ಮತ್ತು ಶ್ರೀಮತಿ ಮಂಜುಳಾ, ಚಿತ್ರನಟ ಮನೋಜ್, ಸ್ಥಳೀಯ ಮುಖಂಡರಾದ ಗುಡ್ಡಮಾರಪ್ಪ, ಚನ್ನಸಂದ್ರ ಚಂದ್ರಶೇಖರ್, ಎಂ.ಜಿ ರೆಡ್ಡಿ, ಪ್ರದೀಪ್, ಪ್ರಕಾಶ್ ಸೇರಿದಂತೆ ಮುಂತಾದವರು ಈ ಚಿತ್ರದ ವೀಕ್ಷಣೆ ಮಾಡಿದ್ದರು.

## ಅ.28ರಂದು ಈ ಏರಿಯಾಗಳಲ್ಲಿ ಕರೆಂಟ್ ಇರಲ್ಲ

• **ಉದಯವಾಹಿನಿ ಬೆಂಗಳೂರು**

ಮಹಾಲಕ್ಷ್ಮಿ ಲೇಔಟ್ ಸಬ್‌ಸ್ಟೇಷನ್ ಕೆಪಿಟಿಸಿಎಲ್ ವತಿಯಿಂದ ತುರ್ತು ನಿರ್ವಹಣಾ ಕಾಮಗಾರಿ ಹಿನ್ನೆಲೆಯಲ್ಲಿ ಪೀಣ್ಯ ವಿಭಾಗದ ಎನ್-7ಉಪ ವಿಭಾಗದಲ್ಲಿ ಈ ಕೆಳಕಂಡ ಪ್ರದೇಶಗಳಲ್ಲಿ ದಿನಾಂಕ 28.10.2024 ರಂದು ಬೆಳಗ್ಗೆ 10:00 ಯಿಂದ ಮಧ್ಯಾಹ್ನ 05:00 ಗಂಟೆವರೆಗೆ ವಿದ್ಯುತ್ ಪೂರೈಕೆಯಲ್ಲಿ ವ್ಯತ್ಯಯ ಉಂಟಾಗಲಿದೆ.

ಮಂಜುನಾಥ್ ನಗರ, ತಿಮ್ಮಯ್ಯ ರಸ್ತೆ, ಭೋವಿ ಕಾಲೋನಿ, ಮಹಾಗಣಪತಿ ನಗರ, ಪುಷ್ಪಾಂಜಲಿ ಅಪಾರ್ಟ್‌ಮೆಂಟ್, ಶಿವನಹಳ್ಳಿ ಪಾರ್ಕ್, ಆದರ್ಶ ನಗರ, ಆದರ್ಶ ಲೇಔಟ್, ಯುನಿಕ್ಸ್ ಕಾಲೋನಿ, ಇಂದಿರಾ ನಗರ, ಮಂಜುನಾಥ್ ನಗರ, 3ನೇ ಹಂತ 1ನೇ ಬ್ಲಾಕ್0, ಬಿ-ನಗರ, ಲಕ್ಷ್ಮೀ ನಗರ, ಹೆಚ್.ವಿ.ಕೆ.ಲೌಟ್. , ಕರ್ನಾಟಕ ಲೇಔಟ್,



ಉದಯವಾಹಿನಿ ಚಿತ್ರ

ಕಮಲಾ ನಗರ, ವಿ.ಜೆ.ಎಸ್.ಎಸ್.ಲೇಔಟ್, ವಾರ್ಡ್ ಕಛೇರಿ ಸುತ್ತಮುತ್ತ ಪವರ್ ಕಟ್ ಆಗಲಿದೆ. ನಾಗಾಪುರ, ಮಹಾಲಕ್ಷ್ಮಿ ಪುರಂ, ಮೋಡಿ ಆಸ್ಪತ್ರೆ ರಸ್ತೆ, ಪಂಜಾಬ್ ನ್ಯಾಷನಲ್ ಬ್ಯಾಂಕ್, ಹಂಸಲೇಕಾ ಹೋಮ್ ಸುತ್ತಮುತ್ತ, ಶಂಕರಮಾತಾ, ಫೈವ್ ಲೈನ್ ರಸ್ತೆ, ಜೆ.ಸಿ.ನಗರ, ಕುರುಬರಳ್ಳಿ, ರಾಜಾಜಿ ನಗರ 2ನೇ ಬ್ಲಾಕ್, ಇ.ಎಸ್.ಐ.ಹೋಸ್ಪಿಟ್. ಕಮಲಾ ನಗರ ಮುಖ್ಯರಸ್ತೆ, ಗೃಹಲಕ್ಷ್ಮಿ ಲೇಔಟ್ 2ನೇ ಹಂತ, ಬೋವಿ ಪಾಳ್ಯ, ಗೆಲಯರ ಬಳಗ, ಮೈಕೋ ಲೇಔಟ್, ಜಿ.ಡಿ.ನಾಯ್ಡು ಹಾಲ್ ನಲ್ಲಿ ಕರೆಂಟ್ ಇರೋದಿಲ್ಲ.

ವೆಸ್ಟ್ ಆಫ್ ಕಾರ್ಡ್ ರಸ್ತೆ, ಮಹಾಲಕ್ಷ್ಮಿ ಲೇಔಟ್, ಎಸ್ಕಾನ್-ಎಫ್.ಎಸ್.ಐ.ಟಿ.ರಸ್ತೆ, ಬಿ.ಎನ್.ಇ.ಎಸ್.ಕಾಲೇಜು, ಬಿ.ಇ.ಎಲ್. ಎಸ್.ಕಾಲೇಜು, ಬೆಲ್ ಸೋಪ್‌ವನ್ ಅಪಾರ್ಟ್‌ಮೆಂಟ್, ಯೆಸ್ವಂತ ಅಪಾರ್ಟ್‌ಮೆಂಟ್. ಇಂಡಲ್ ಏರಿಯಾ, ಟೊಯೊಟೊ ಶೋ ರೂಂ, ಎಸ್ಟೀಮ್ ಕ್ಲಾಸಿಕ್ ಅಪಾರ್ಟ್‌ಮೆಂಟ್, ಲುಮೋಸ್ ಅಪಾರ್ಟ್‌ಮೆಂಟ್ ಮತ್ತು ಸುತ್ತಮುತ್ತಲಿನ ಪ್ರದೇಶಗಳಲ್ಲಿ ವಿದ್ಯುತ್ ವ್ಯತ್ಯಯ ಉಂಟಾಗಲಿದ್ದು, ಸಾರ್ವಜನಿಕರು ಸಹಕರಿಸುವಂತೆ ಬೆಸ್ಕಾಂ ಮನವಿ ಮಾಡಿದೆ.

# ಸತೀಶ್ ಸೈಲ್‌ಗೆ ಒಟ್ಟು 15 ವರ್ಷ ಶಿಕ್ಷೆ ಪ್ರಕಟಿಸಿದ ಕೋರ್ಟ್!

## ವಂಚನೆ ಪ್ರಕರಣದಲ್ಲಿ 7 ವರ್ಷ ಹಾಗೂ ಒಳಸಂಚು ಆರೋಪದಲ್ಲಿ 5 ವರ್ಷ ಶಿಕ್ಷೆ

• **ಉದಯವಾಹಿನಿ ಬೆಂಗಳೂರು**

ಬೆಲೆಕೇರಿ ಅದಿರು ನಾಪತ್ತೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಈಗಾಗಲೇ ಬೆಂಗಳೂರಿನ ಜನ ಪ್ರತಿನಿಧಿಗಳ ನ್ಯಾಯಾಲಯವು ಕಾಂಗ್ರೆಸ್ ಶಾಸಕ ಸತೀಶ್ ಸೈಲ್ ದೋಷಿ ಎಂದು ತೀರ್ಪು ನೀಡಿದೆ. ಈ ಹಿನ್ನೆಲೆಯಲ್ಲಿ ಇಂದು ತೀರ್ಪು ಪ್ರಕಟವಾಗಲಿದ್ದು ಬೆಂಗಳೂರಿನ ಜನ ಪ್ರತಿನಿಧಿಗಳ ನ್ಯಾಯಾಲಯದ ಜಡ್ಜ್ ಸಂತೋಷ ಗಜಾನನ ಭಟ್ ಅವರು, ಮೂರು ಪ್ರಕರಣಗಳಲ್ಲಿ ಶಾಸಕ ಸತೀಶ್ ಸೈಲ್‌ಗೆ ಒಟ್ಟು 15 ವರ್ಷ ಶಿಕ್ಷೆ ನೀಡಿ ತೀರ್ಪು ಪ್ರಕಟಿಸಿದ್ದಾರೆ.ಅಲ್ಲದೆ ಒಟ್ಟು 9 ಕೋಟಿ 60 ಲಕ್ಷ ದಂಡ ವಿಧಿಸಬೇಕು ಎಂದು ಕೋರ್ಟ್ ಆದೇಶಿಸಿದೆ.

ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯದಲ್ಲಿ ಈ ಕುರಿತು ತೀರು ಪ್ರಕಟಿಸಿರುವ ನ್ಯಾಯಾಧೀಶರಾದ ಸಂತೋಷ ಗಜಾನನ ಭಟ್ ಅವರು ಕಳ್ಳತನ ಪ್ರಕರಣದಲ್ಲಿ ಅಪರಾಧೀಗಳಿಗೆ 5 ವರ್ಷ ಅಲ್ಲದೆ ವಂಚನೆ ಪ್ರಕರಣದಲ್ಲಿ 7 ವರ್ಷ ಹಾಗೂ ಒಳಸಂಚು ಆರೋಪದಲ್ಲಿ 5 ವರ್ಷ ಶಿಕ್ಷೆ ಪ್ರಕಟಿಸಲಾಗಿದೆ.ಹಾಗಾಗಿ ಸತೀಶ್ ಸೈಲ್ ಅವರಿಗೆ ಜೈಲೇ ಗತಿ ಎನ್ನುವಂತಾಗಿದೆ. ಕಳೆದ 2010 ರ ಜೂನ್ 2ರಲ್ಲಿ, ಅಂದರೆ




ಉದಯವಾಹಿನಿ ಚಿತ್ರ

ಕೇವಲ 80 ದಿನಗಳಲ್ಲಿ 6 ಲಕ್ಷ ಮೆಟ್ರಿಕ್ ಟನ್ ಕಬ್ಬಿಣದ ಅದಿರು ನಾಪತ್ತೆಯಾಗಿತ್ತು. ಸುಪ್ರೀಂಕೋರ್ಟ್ ಸೂಚನೆ ಮೇರೆಗೆ ಈ ಬಗ್ಗೆ ಪ್ರಕರಣ ದಾಖಲಿಸಿಕೊಂಡಿದ್ದ ಸಿಬಿಐ ತನಿಖೆ ಆರಂಭಿಸಿತ್ತು. ಶಾಸಕ ಸತೀಶ್ ಸೈಲ್, ಮಹೇಶ್ ಬಿಳಿಯೆ, ಕಾರಾಪುಡಿ ಮಹೇಶ್, ಸ್ವಸ್ತಿಕ್ ನಾಗರಾಜು ಸೇರಿದಂತೆ ಹಲವರ ವಿರುದ್ಧ ಆರೋಪಪಟ್ಟಿ ದಾಖಲಿಸಿತ್ತು. ಇದೀಗ ಜನಪ್ರತಿನಿಧಿಗಳ ವಿಶೇಷ ಕೋರ್ಟ್ ಶಿಕ್ಷೆ ಪ್ರಕಟಿಸಲಾಗಿದೆ ಬೇಲೆಕೇರಿ ಎಂಬುದು ಉತ್ತರ ಕನ್ನಡ ಜಿಲ್ಲೆ ಅಂಕೋಲಾ ತಾಲ್ಲೂಕಿನಲ್ಲಿರುವ ಬಂದರು. ಇಲ್ಲಿಂದ ನಿಯಮ ಬಾಹಿರವಾಗಿ ವಿದೇಶಕ್ಕೆ ಅದಿರು ರಫ್ತು ಮಾಡಲಾಗಿತ್ತು. 2009ರ ಜನವರಿ 1ರಿಂದ 2010ರ ಮೇ 31ರವರೆಗೆ, ಅಂದರೆ 17 ತಿಂಗಳ ಅವಧಿಯಲ್ಲಿ ಬರೋಬ್ಬರಿ 88 ಲಕ್ಷದ 6 ಸಾವಿರ ಮೆಟ್ರಿಕ್ ಟನ್ ಅದಿರು ರಫ್ತಾಗಿತ್ತು. ಇಲ್ಲಿ ಗಮನಿಸಬೇಕಾದ ವಿಷಯವೆಂದರೆ, 38 ಲಕ್ಷ ಮೆಟ್ರಿಕ್ ಟನ್ ಅದಿರು ರಫ್ತು ಮಾಡುವುದಕ್ಕಷ್ಟೇ ಅನುಮತಿ ನೀಡಲಾಗಿತ್ತು. ಗಣಿ ಇಲಾಖೆಯ ನಿಯಮಗಳನ್ನು ಗಾಳಿಗೆ ತೂರಿದ್ದ ಆರೋಪಿಗಳು ಅದಿರು ರಫ್ತು ಮಾಡಿದ್ದರು. ಬರೋಬ್ಬರಿ 50 ಲಕ್ಷ ಮೆಟ್ರಿಕ್ ಟನ್ ಅದಿರು ಹೆಚ್ಚುವರಿಯಾಗಿ ವಿದೇಶಕ್ಕೆ ರಫ್ತಾಗಿತ್ತು. 73 ರಫ್ತುದಾರರು ಈ ರಫ್ತು ಪ್ರಕ್ರಿಯೆಯಲ್ಲಿ ಭಾಗಿಯಾಗಿದ್ದರು. ಈ ಪೈಕಿ ನಾಲ್ಕು ಕಂಪನಿಗಳ ಮೂಲಕ 33 ಲಕ್ಷ ಮೆಟ್ರಿಕ್ ಟನ್ ಅದಿರು ಕಳುಹಿಸಲಾಗಿತ್ತು. ಹೀಗೆ ರಫ್ತು ಮಾಡಿದ್ದ 4 ಕಂಪನಿಗಳಲ್ಲಿ ಶಾಸಕ ಸತೀಶ್ ಸೈಲ್ ಒಡೆತನದ ಕಂಪನಿ ಕೂಡ ಇದೆ. ಸೈಲ್ ಒಡೆತನದ ಶ್ರೀಮಲ್ಲಿಕಾರ್ಜುನ ಶಿಪ್ಪಿಂಗ್ ಕಂಪನಿ 7 ಲಕ್ಷದ 23ಸಾವಿರ ಮೆಟ್ರಿಕ್ ಟನ್ ಅದಿರು ಸಾಗಿಸಿತ್ತು. ಇನ್ನುಳಿದ ಕಂಪನಿಗಳ ಅದಿರು ರಫ್ತುವಿನಲ್ಲಿ ಸೈಲ್ ಪರೋಕ್ಷ ಭಾಗಿಯಾಗಿದ್ದರು.ಗಣಿ ಇಲಾಖೆ 38 ಲಕ್ಷ ಮೆಟ್ರಿಕ್ ಟನ್ ಅದಿರು ರಫ್ತಿಗೆ ಮಾತ್ರ ಅನುಮತಿ ಕೊಟ್ಟಿತ್ತು. ಆದರೆ ವಿದೇಶಕ್ಕೆ ಹೋಗಿದ್ದು ಮಾತ್ರ 88 ಲಕ್ಷ ಮೆಟ್ರಿಕ್ ಟನ್ ಎಂದು

> **ಬೇಲೆಕೇರಿ ಅದಿರು ಅಕ್ರಮ ನಾಪತ್ತೆ ಪ್ರಕರಣ ಸಂಬಂಧ ಕಾರವಾರ ಶಾಸಕರಾಗಿದ್ದಂತ ಸತೀಶ್ ಸೈಲ್ ಅವರಿಗೆ 7 ವರ್ಷ ಜೈಲು ಶಿಕ್ಷೆಯನ್ನು ಕೋರ್ಟ್ ವಿಧಿಸಿತ್ತು. ಈ ಬೆನ್ನಲ್ಲೇ ಅವರ ಶಾಸಕತ್ವವನ್ನು ರದ್ದುಗೊಳಿಸಿ ಮಹತ್ವದ ತೀರ್ಪು ನೀಡಿದೆ.ಬೇಲೆಕೇರಿ ಬಂದರಿನಲ್ಲಿದ್ದಂ 11,312 ಮೆಟ್ರಿಕ್ ಟನ್ ಅದಿರು ಅಕ್ರಮ ನಾಪತ್ತೆ ಪ್ರಕರಣ ಸಂಬಂಧ ಶಾಸಕ ಸತೀಶ್ ಸೈಲ್ ಅವರಿಗೆ ಮೊದಲ ಕೇಸಲ್ಲಿ 5 ವರ್ಷ, 2ನೇ ಕೇಸಲ್ಲಿ 7 ವರ್ಷ ಕಠಿಣ ಶಿಕ್ಷೆ ಹಾಗೂ 9.6 ಕೋಟಿ ದಂಡವನ್ನು ವಿಧಿಸಿ ಆದೇಶಿಸಿದೆ.**

ಹೇಳಲಾಗುತ್ತಿದೆ.

ಇದಲ್ಲದೇ ಉತ್ತರ ಕನ್ನಡ ಜಿಲ್ಲೆಯ ಕಾರವಾರದ ಶಾಸಕ ಸತೀಶ್ ಸೈಲ್ ಅವರ ಶಾಸಕ ಸ್ಥಾನವನ್ನು ಶಿಕ್ಷೆಯ ತೀರ್ಪು ಪ್ರಕಟಗೊಂಡ ಬೆನ್ನಲ್ಲೇ ರ್ದದುಗೊಳಿಸಿ ಆದೇಶಿಸಿದೆ. ಈ ಮೂಲಕ ಸತೀಸ್ ಸೈಲ್ ಜೈಲುಪಾಲಾಗುವ ಮೂಲಕ, ಶಾಸಕ ಸ್ಥಾನದಿಂದಲೂ ಅನರ್ಹಗೊಂಡಂತೆ ಆಗಿದೆ.

# ಕರ್ನಾಟಕದಲ್ಲಿ ಹೋಂ ಸ್ಟೇಗಳಿಗೆ ಬರಲಿದೆ ನೂತನ ನೀತಿ

## ಮಡಿಕೇರಿ ನಗರದ ಹೊರವಲಯದ ಖಾಸಗಿ ರೆಸಾರ್ಟ್‌ನಲ್ಲಿ ನಡೆದ ಕನೆಕ್ಟ್ ಕರ್ನಾಟಕ-2024ಕುರಿತ ಕಾರ್ಯಕ್ರಮ

• **ಉದಯವಾಹಿನಿ, ಮಡಿಕೇರಿ**

ಹೋಂಸ್ಟೇಗಳಿಗೆ ಸಂಬಂಧಿಸಿದಂತೆ ಒಂದು ನೀತಿ ಬೇಕಿದೆ ಎಂದು ಹಲವು ದಶಕಗಳಿಂದ ಬೇಡಿಕೆ ಕೇಳಿ ಬರುತ್ತಿದೆ. ಈ ಹಿನ್ನೆಲೆ ಸರ್ಕಾರದ ಮಟ್ಟದಲ್ಲಿ ಚರ್ಚೆ ನಡೆದಿದ್ದು, ಮುಂದಿನ ಕ್ಯಾಲೆಂಡರ್ ವರ್ಷದ ಆರಂಭದಲ್ಲಿಯೇ ಹೋಂಸ್ಟೇಗಳಿಗೆ ಹೊಸ ನೀತಿಯನ್ನು ಸರ್ಕಾರ ಘೋಷಿಸಲಿದೆ ಎಂದು ಪ್ರವಾಸೋದ್ಯಮ ಇಲಾಖೆ ನಿರ್ದೇಶಕರಾದ ಡಾ.ಕೆ. ವಿ. ರಾಜೇಂದ್ರ ಹೇಳಿದ್ದಾರೆ. ಹೋಂಸ್ಟೇಗಳಿಗೆ ಸಹಕಾರ, ಪ್ರೋತ್ಸಾಹ ನೀಡಲಾಗುವುದು. ಆ ಮೂಲಕ ಪ್ರವಾಸೋದ್ಯಮದ ಬೆಳವಣಿಗೆಗೂ ಸರ್ಕಾರ ಉತ್ತೇಜನ ನೀಡಲಿದೆ.

ಮಡಿಕೇರಿ ನಗರದ ಹೊರವಲಯದ ಖಾಸಗಿ ರೆಸಾರ್ಟ್‌ನಲ್ಲಿ ನಡೆದ 'ಕನೆಕ್ಟ್ ಕರ್ನಾಟಕ-2024'ಕುರಿತ ಕಾರ್ಯಕ್ರಮದಲ್ಲಿ ಪಾಲ್ಗೊಂಡು ಡಾ. ಕೆ. ವಿ. ರಾಜೇಂದ್ರ ಮಾತನಾಡಿದರು. ರಾಜ್ಯದಲ್ಲಿ ಹೋಂ ಸ್ಟೇ ನಿರ್ವಹಣೆ ಸಂಬಂಧ ನೂತನ ನೀತಿಯನ್ನು ಮುಂದಿನ ಜನವರಿ-ಫೆಬ್ರವರಿಯಲ್ಲಿ ಪ್ರಕಟಿಸಲಾಗುತ್ತದೆ. ಮಾಲೀಕರು ವಾಸಿಸುವ ಸ್ಥಳದಲ್ಲಿಯೇ ಹೋಂಸ್ಟೇಗಳು ಇರುವುದರಿಂದ ಅವುಗಳ ನಿರ್ವಹಣೆ, ನೋಂದಣಿ ಪ್ರಕ್ರಿಯೆ, ಎನ್‌ಒಸಿ ಪಡೆಯುವುದು ಮತ್ತಿತರ ಮಾರ್ಗಸೂಚಿಯನ್ನು ಹೊಸ ಹೋಸ್ಟೇ ನೀತಿಯಲ್ಲಿ ಪ್ರಕಟಿಸಲಾಗುವುದು ಎಂದು ಹೇಳಿದರು. ಈಗಾಗಲೇ ಪ್ರವಾಸೋದ್ಯಮ ಇಲಾಖೆಯ ಕಾರ್ಯಚಟುವಟಿಕೆಗಳು, ಪ್ರವಾಸೋದ್ಯಮ ನೀತಿ, ಮೂಲಭೂತ ಸೌಕರ್ಯ ಅಭಿವೃದ್ಧಿ, ಪ್ರವಾಸೋದ್ಯಮ ಕ್ಷೇತ್ರದ ಬೆಳವಣಿಗೆಗೆ ಪೂರಕವಾಗಿ ಪ್ರಚಾರಾಂದೋಲನ, ಪ್ರವಾಸಿಗರನ್ನು ಆಕರ್ಷಿಸುವುದು ಹಾಗೂ ಪ್ರವಾಸಿ ಕ್ಷೇತ್ರದಲ್ಲಿ ತೊಡಗಿರುವ ಪಾಲುಗಾರರಿಗೆ ಉತ್ತೇಜನ ನೀಡುವ ಸಲುವಾಗಿ ಪ್ರಸ್ತುತ ರಾಜ್ಯದಲ್ಲಿನ ಪ್ರಮುಖ ಜಿಲ್ಲಾ ಕೇಂದ್ರಗಳನ್ನು ಸಂಪರ್ಕಿಸಿ ರಾಜ್ಯದ ಎಲ್ಲಾ ಪ್ರವಾಸಿ ಸಹಭಾಗಿದಾರರನ್ನು ಒಗ್ಗೂಡಿಸುವ ಸಂಬಂಧ ಕನೆಕ್ಟ್ ಕರ್ನಾಟಕ-2024' ನಡೆಸಲಾಗುತ್ತಿದೆ ಎಂದು ಹೇಳಿದರು.


ಉದಯವಾಹಿನಿ ಚಿತ್ರ

> **ಸ್ಥಳೀಯವಾಗಿ ಯುವಜನರಿಗೆ ಉದ್ಯೋಗ ಕಲ್ಪಿಸುವಲ್ಲಿ ಪ್ರವಾಸೋದ್ಯಮ ಸಾಕಷ್ಟು ಸಹಕಾರಿಯಾಗಿದ್ದು, ಆ ನಿಟ್ಟಿನಲ್ಲಿ ಕೌಶಲ್ಯ ತರಬೇತಿ ಕಾರ್ಯಕ್ರಮಗಳನ್ನು ಪ್ರತಿ ಜಿಲ್ಲೆಯಲ್ಲೂ ಆಯೋಜಿಸಲಾಗುವುದು. ಪ್ರವಾಸೋದ್ಯಮ ಅಭಿವೃದ್ಧಿಯಿಂದ ಸರ್ಕಾರಕ್ಕೂ ಆದಾಯ ಬರಲಿದ್ದು, ತೆರಿಗೆ ಸಂಗ್ರಹವಾಗಲಿದೆ. ಜೊತೆಗೆ ಉದ್ಯೋಗ ಸೃಷ್ಟಿಯಾಗಲಿದೆ. ಆ ನಿಟ್ಟಿನಲ್ಲಿ ಯುವಜನರಿಗೆ ಅವಕಾಶಗಳು ಸಿಗಲಿವೆ ಎಂದರು.**
> -ಡಾ. ಕೆ. ವಿ. ರಾಜೇಂದ್ರ

### ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಮತ್ತಷ್ಟು ಅಭಿವೃದ್ಧಿ

**ಹೋಂಸ್ಟೇಗಳನ್ನು ನೋಂದಣಿ ಮಾಡಿಕೊಂಡು ಪ್ರವಾಸಿಗರಿಗೆ ಉತ್ತಮ ಮೂಲ ಸೌಲಭ್ಯ ಕಲ್ಪಿಸಬೇಕು. ಅಂತಹ ಹೋಂಸ್ಟೇಗಳಿಗೆ ಆದಷ್ಟು ಸಹಕಾರ, ಪ್ರೋತ್ಸಾಹ ನೀಡಲಾಗುವುದು. ಆ ನಿಟ್ಟಿನಲ್ಲಿ ಮೂಲ ಸೌಕರ್ಯಕ್ಕೆ ಹೆಚ್ಚಿನ ಒತ್ತು ನೀಡಬೇಕು. ರಾಜ್ಯದಲ್ಲಿ ಪ್ರವಾಸೋದ್ಯಮವನ್ನು ಮತ್ತಷ್ಟು ಅಭಿವೃದ್ಧಿ ಪಡಿಸುವಲ್ಲಿ ವೃತ್ತಿ ಕೌಶಲ್ಯ ತರಬೇತಿ ಕಾರ್ಯಕ್ರಮವನ್ನು ಹಮ್ಮಿಕೊಂಡು, ಯುವಜನರಿಗೆ ಉದ್ಯೋಗ ಕಲ್ಪಿಸಲು ಸಹ ಒತ್ತು ನೀಡಲಾಗುತ್ತದೆ ಎಂದು ತಿಳಿಸಿದರು.**

ಸಂವಾದದಲ್ಲಿ ಕರ್ನಾಟಕ ಪ್ರವಾಸೋದ್ಯಮ ಸಂಸ್ಥೆಯ ಪ್ರತಿನಿಧಿಯೊಬ್ಬರು ಮಾತನಾಡಿ, ಕರ್ನಾಟಕ ಪ್ರವಾಸೋದ್ಯಮ ಸಂಸ್ಥೆಯಿಂದ ಪ್ರವಾಸೋದ್ಯಮ ಅಭಿವೃದ್ಧಿ ಪಡಿಸುವಲ್ಲಿ ಹಲವು ಉತ್ತೇಜನ ಕಾರ್ಯಕ್ರಮ ಹಮ್ಮಿಕೊಂಡಿದ್ದು, ಹೆಸರು ನೋಂದಾಯಿಸಲು ಮುಂದಾಗಬೇಕಿದೆ. ಕೊಡಗು ಜಿಲ್ಲೆಯಲ್ಲಿ 2003ರಲ್ಲಿ ಹೋಂಸ್ಟೇಗಳ ಪರಿಕಲ್ಪನೆ ಆರಂಭವಾಯಿತು. ಜಿಲ್ಲೆಯಲ್ಲಿ 2200ಕ್ಕೂ ಹೆಚ್ಚು ಹೋಂಸ್ಟೇಗಳು ನೋಂದಣಿಯಾಗಿದ್ದು, ಹೋಂಸ್ಟೇಗಳಿಗೆ ಒಂದು ನೀತಿ ಜಾರಿಗೊಳಿಸಬೇಕು ಎಂದು ಸಲಹೆ ನೀಡಿದರು. ಅನಧಿಕೃತ ಹೋಂಸ್ಟೇಗಳು ಹೆಸರು ನೋಂದಣಿಗೆ ಮುಂದಾಗಲು ಹೆಚ್ಚಿನ ಉತ್ತೇಜನ ನೀಡಬೇಕು. ಕೊಡಗು ಜಿಲ್ಲಾ ಕೇಂದ್ರ ಮಡಿಕೇರಿಯಲ್ಲಿ ನೆಹರು ಮಂಟಪ, ಗದ್ದಿಗೆಯನ್ನು ಮತ್ತಷ್ಟು ಅಭಿವೃದ್ಧಿ ಪಡಿಸಬೇಕಿದೆ. ಜೊತೆಗೆ ವ್ಯೂ ಪಾಯಿಂಟ್‌ಗಳನ್ನು ಮತ್ತಷ್ಟು ಆಕರ್ಷಣೀಯಗೊಳಿಸಬೇಕು. ರಸ್ತೆ ಬದಿ ಕಸ ಬಿಸಾಡುವುದನ್ನು ತಡೆಯಬೇಕಿದೆ. ಮಾಂದಲ್ ಪಟ್ಟಿಯಲ್ಲಿ ಸಿಮೆಂಟ್ ರಸ್ತೆ ನಿರ್ಮಿಸಬೇಕಿದೆ. ಮಲ್ಲಳ್ಳಿ, ಇರ್ಪು ಜಲಪಾತವನ್ನು ಮತ್ತಷ್ಟು ಅಭಿವೃದ್ಧಿಪಡಿಸಬೇಕಿದೆ ಎಂದು ತಿಳಿಸಿದರು. ಕೊಡಗು ಜಿಲ್ಲಾಧಿಕಾರಿ ವೆಂಕಟ್ ರಾಜಾ ಮಾತನಾಡಿ, ಕೊಡಗು ಜಿಲ್ಲೆಯಲ್ಲಿ ಪ್ರವಾಸೋದ್ಯಮ ಕ್ಷೇತ್ರವನ್ನು ಮತ್ತಷ್ಟು ಹೇಗೆ ಅಭಿವೃದ್ಧಿ ಮಾಡಬಹುದು ಎಂದು ಪ್ರತಿಯೊಬ್ಬರೂ ಯೋಚಿಸಬೇಕು. ಆ ನಿಟ್ಟಿನಲ್ಲಿ ಪ್ರವಾಸೋದ್ಯಮ ಅಭಿವೃದ್ಧಿಪಡಿಸುವಲ್ಲಿ ಕಾಫಿ ಟೇಬಲ್ ಬುಕ್ ಅನ್ನು ಜನವರಿ ತಿಂಗಳಲ್ಲಿ ಬಿಡುಗಡೆ ಮಾಡಲಾಗುವುದು. ಜಿಲ್ಲೆ ಪ್ರವಾಸೋದ್ಯಮ ಕ್ಷೇತ್ರದಲ್ಲಿ ತನ್ನದೇ ಆದ ಹೆಸರುವಾಸಿಯಾಗಿದೆ. ಇಲ್ಲಿನ ರಾಜಾಸೀಟು, ಮಾಂದಲ್ ಪಟ್ಟಿ ಪ್ರವಾಸಿ ಸ್ಥಳಗಳು ಹೆಚ್ಚು ಆಕರ್ಷಣೀಯವಾಗಿದೆ. ವಿವಿಧ ಜಲಪಾತಗಳು, ಕಾಫಿ, ಆನೆ ಶಿಬಿರ, ನಗರದ ಕೋಟೆ ಸಹ ಪ್ರಸಿದ್ಧ ತಾಣವಾಗಿದೆ ಎಂದರು.

## ಮಿನಿ ನ್ಯೂಸ್

### ಐ.ಎನ್‌.ಟಿ.ಯು.ಸಿ ಸಮಾವೇಶದಲ್ಲಿ ಹೊನ್ನೇನಹಳ್ಳಿ ಯಲ್ಲಪ್ಪಗೆ ಸನ್ಮಾನ

• **ಉದಯವಾಹಿನಿ, ಕೋಲಾರ**



ಭಾರತೀಯ ರಾಷ್ಟ್ರೀಯ ಮಜ್ದೂರ್ ಕಾಂಗ್ರೆಸ್ ವತಿಯಿಂದ ಬೆಂಗಳೂರಿನಲ್ಲಿ ಶನಿವಾರ ನಡೆದ ರಾಜ್ಯ ಮಟ್ಟದ ಸಮಾವೇಶದಲ್ಲಿ ಕೋಲಾರದ ಹೊನ್ನೇನಹಳ್ಳಿ ಯಲ್ಲಪ್ಪ ಅವರನ್ನು ಕೆಪಿಸಿಸಿ ಕಾರ್ಯಾಧ್ಯಕ್ಷ ಹಾಗೂ ಸಂಸದ ಜಿ.ಸಿ ಚಂದ್ರಶೇಖರ್ ಐ.ಎನ್‌.ಟಿ.ಯು.ಸಿ ರಾಜ್ಯ ಅಧ್ಯಕ್ಷ ಲಕ್ಷ್ಮೀವೆಂಕಟೇಶ್, ಕಾರ್ಯಾಧ್ಯಕ್ಷ ಶ್ಯಾಮಣ್ಣರೆಡ್ಡಿ, ಎಂಎಲ್ಸಿ ವಸಂತ ಕುಮಾರ್ ಸೇರಿದಂತೆ ಗಣ್ಯರು ಸನ್ಮಾನಿಸಿದರು

### ಕೇವಲ 200 ರೂ.ಗೆ ಸಹೋದರರ ಮಧ್ಯ ಗಲಾಟೆ

• **ಉದಯವಾಹಿನಿ, ಮೈಸೂರು**

ಕೇವಲ 300 ರೂಪಾಯಿ ಸಲುವಾಗಿ ಸಹೋದರರ ಮಧ್ಯ ಗಲಾಟೆ ನಡೆದಿದೆ. ಗಲಾಟೆ ವಿಕೋಪಕ್ಕೆ ತಿರುಗಿ ಈ ವೇಳೆ ಮನನೊಂದ ತಮ್ಮ ನೇಣು ಬಿಗಿದುಕೊಂಡು ಆತ್ಮಹತ್ಯೆಗೆ ಶರಣಾಗಿರುವ ಘಟನೆ ಮೈಸೂರು ಜಿಲ್ಲೆಯ ನಂಜನಗೂಡು ತಾಲ್ಲೂಕಿನ ಅಹಲ್ಯ ಗ್ರಾಮದಲ್ಲಿ ಈ ಒಂದು ದುರಂತ ಸಂಭವಿಸಿದೆ. ಹೌದು ಆತ್ಮಹತ್ಯೆ ಮಾಡಿಕೊಂಡ ವ್ಯಕ್ತಿಯನ್ನು ಸಿದ್ದರಾಜು ಎಂದು ಹೇಳಲಾಗುತ್ತಿದೆ. ಕರೆಂಟ್ ಬಿಲ್ ಕಟ್ಟಿ ಮನೆಗೆ ಬಂದ ಸಿದ್ದರಾಜು ಅಣ್ಣ ನಿಂಗಣ್ಣನ ಬಳಿ 200 ರೂಪಾಯಿ ಕರೆಂಟ್ ಬಿಲ್ ಕಟ್ಟಿದ್ದೇನೆ 200 ರೂ ಕೊಡು ಎಂದು ಕೇಳಿದ್ದಾನೆ. ಈ ವೇಳೆ ನನ್ನ ಬಳಿ ಹಣ ಕೇಳುತ್ತೀಯಾ ನಿಂಗಣ್ಣ ತಮ್ಮ ಸಿದ್ದರಾಜು ಮೇಲೆ ಹಲ್ಲೆ ಮಾಡಿದ್ದಾನೆ. ಕರೆಂಟ್ ಬಿಲ್ ಕಟ್ಟಿ ತನ್ನ 200 ರೂಪಾಯಿ ಕೇಳಿದ್ದಕ್ಕೆ ಅಣ್ಣ ನನ್ನ ಮೇಲೆ ಹಲ್ಲೆ ಮಾಡಿದ್ದಾನೆ ಎಂದು ಮನನೊಂದು ಸಿದ್ದರಾಜು ಮನೆಯಲ್ಲಿಯೇ ನೇಣು ಬಿಗಿದುಕೊಂಡು ಆತ್ಮಹತ್ಯೆ ಮಾಡಿಕೊಂಡಿದ್ದಾನೆ ಎಂಬ ಆರೋಪಗಳು ಕೇಳಿಬಂದಿವೆ. ಈ ಒಂದು ಆತ್ಮಹತ್ಯೆಗೆ ಸಂಬಂಧಿಸಿದಂತೆ ಜಯಪುರ ಪೊಲೀಸ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ.

### 2,14,610 ರೂಪಾಯಿ ಮೌಲ್ಯದ ಕೇರಳ ಲಾಟರಿ ಟಿಕೆಟ್‌ಗಳ ವಶ

• **ಉದಯವಾಹಿನಿ, ಚಾಮರಾಜನಗರ,**

ಅಕ್ರಮವಾಗಿ ಕೇರಳ ಲಾಟರಿ ಸಾಗಾಟ ಮಾಡುತ್ತಿದ್ದ ಇಬ್ಬರನ್ನು ಬಂಧಿಸಿರುವ ಘಟನೆ ಗುಂಡ್ಲುಪೇಟೆ ತಾಲ್ಲೂಕಿನ ಮದ್ದೂರು ಚೆಕ್ ಪೋಸ್ಟ್‌ನಲ್ಲಿ ನಡೆದಿದೆ. ಹಾಗಾದರೆ ಎಷ್ಟು ಲಾಟರಿಗಳು ಹಾಗೂ ಇದರ ಮೌಲ್ಯ ಎಷ್ಟು ಎನ್ನುವ ಸಂಪೂರ್ಣ ಮಾಹಿತಿಯನ್ನು ಇಲ್ಲಿ ನೀಡಲಾಗಿದೆ ತಿಳಿಯಿರಿ ಗುಂಡ್ಲುಪೇಟೆ ತಾಲ್ಲೂಕಿನ ತೆರಕಣಾಂಬಿ ನಿವಾಸಿ ವೆಂಕಟೇಶ್ ಹಾಗೂ ಹಂಗಳದ ನಾಗರಾಜು ಬಂಧಿತ ಆರೋಪಿಗಳು. ಕೇರಳದಿಂದ ಅಕ್ರಮವಾಗಿ ಲಾಟರಿ ತರುತ್ತಿದ್ದ ಬಗ್ಗೆ ಖಚಿತ ಮಾಹಿತಿ ಮೇರೆಗೆ ದಾಳಿ ನಡೆಸಿ ಗುಂಡ್ಲುಪೇಟೆ ಪೊಲೀಸರು 2,14,610 ಮೌಲ್ಯದ 5,319 ಲಾಟರಿ ಟಿಕೆಟ್‌ಗಳು ಹಾಗೂ ಬಂಧಿತರ ಬಳಿಯಿದ್ದ 1,500 ರೂಪಾಯಿ ಹಣವನ್ನು ವಶಕ್ಕೆ ಪಡೆಯಲಾಗಿದೆ.ಇನ್ನೂ ಈ ಬಗ್ಗೆ ಇಬ್ಬರ ವಿರುದ್ಧ ಗುಂಡ್ಲುಪೇಟೆ ಠಾಣೆಯಲ್ಲಿ ಪ್ರಕರಣ ದಾಖಲಾಗಿದ್ದು, ಪೊಲೀಸರು ಮುಂದಿನ ಕ್ರಮ ಕೈಗೊಂಡಿದ್ದಾರೆ ಎನ್ನುವ ಮಾಹಿತಿ ತಿಳಿದುಬಂದಿದೆ.

### ಕೋಡಿ ಬಿದ್ದ ಕೆರೆ: ಕೊಚ್ಚಿ ಹೋದ ಮೀನುಗಳು

• **ಉದಯವಾಹಿನಿ, ಮಾಗಡಿ**

ತಾಲ್ಲೂಕಿನಲ್ಲಿ ಕಳೆದ ಒಂದು ವಾರದಿಂದ ಸುರಿದ ಸತತ ಮಳೆಯಿಂದ ಕೆರೆಗಳಿಗೆ ಅಪಾರ ಪ್ರಮಾಣದಲ್ಲಿ ನೀರು ಬಂದಿದ್ದು, ಕೆರೆಯಲ್ಲಿ ಬಿಟ್ಟಿದ್ದ ಮೀನು ಕೆರೆ ಕೋಡಿಯಾದ ಹಿನ್ನೆಲೆಯಲ್ಲಿ ಮೀನುಗಳು ಕೊಚ್ಚಿ ಹೋಗಿ ಅಪಾರ ನಷ್ಟ ಉಂಟಾದ ಘಟನೆ ನಡೆದಿದೆ.ಕಳೆದ ಎರಡು ವರ್ಷಗಳ ಹಿಂದೆ ಮೀನುಗಾರಿಕೆ ಇಲಾಖೆ ಹರಾಜಿನಲ್ಲಿ ಕೆರೆಗಳನ್ನು ಮೀನು ಸಾಕಲು ಕೆಲವರು ಟೆಂಡರ್ ಪಡೆದಿದ್ದರು. ಅದರಂತೆ ಎರಡು ವರ್ಷಗಳಿಂದಲೂ ಮೀನು ಸಾಕಣಿಕೆ ಮಾಡುತ್ತಿದ್ದರು. ಈಗ ಕೆರೆಗಳಿಗೆ ಅಪಾರ ಪ್ರಮಾಣದಲ್ಲಿ ನೀರು ಬಂದಿದ್ದು, ಕೋಡಿ ಮೂಲಕ ಲಕ್ಷಾಂತರ ಮೀನಿನ ಮರಿಗಳು ನೀರಿನಲ್ಲಿ ಕೊಚ್ಚಿ ಹೋಗಿದ್ದು, ಇದರಿಂದ ಲಕ್ಷಾಂತರ ರೂಪಾಯಿ ನಷ್ಟವಾಗಿದೆ ಎಂದು ಮೀನು ಸಾಕಣೆದಾರರು ಅಳಲು ತೋಡಿಕೊಂಡಿದ್ದಾರೆ. ತಾಲ್ಲೂಕಿನ ಬೆಳಗುಂಬ ಕೆರೆ ಹಾಗೂ ಕೆಂಪಸಾಗರ ಕೆರೆಗಳಿಗೆ ಈಚೆಗೆ ಲಕ್ಷಗಟ್ಟಲೆ ಮೀನಿನ ಮರಿಗಳನ್ನು ಬಿಡಲಾಗಿತ್ತು. ಈಗ ಬೆಳಗುಂಬ ಕೆರೆ ಮತ್ತು ಕೆಂಪಸಾಗರ ಕೆರೆ ಕೋಡಿ ಬಿದ್ದು ನೀರು ಹರಿದುಹೋಗಿದೆ. ಮೀನುಗಾರಿಕೆ ಇಲಾಖೆ ಹಾಗೂ ಸಣ್ಣ ನೀರಾವರಿ ಇಲಾಖೆಯ ಅಧಿಕಾರಿಗಳು ಮೀನು ಹಿಡಿಯಲು ಕೆರೆಯ ಕೊಡಿಗೆ ಯಾವುದೇ ರೀತಿ ತಂತಿ ಬಲೆ ಹಾಗೂ ಮೆಸ್ ಹಾಕಬಾರದು ಎಂದು ಸಲಹೆ ನೀಡಿದ್ದಾರೆ.

### ಶಿಕ್ಷಕನ ಖಾತೆ ಹ್ಯಾಕ್: ರೂ.13 ಲಕ್ಷ ವಂಚನೆ

• **ಉದಯವಾಹಿನಿ, ತುಮಕೂರು**

ಸೈಬರ್ ವಂಚಕರು ಬ್ಯಾಂಕ್ ಖಾತೆ ಹ್ಯಾಕ್ ಮಾಡಿ 13.40 ಲಕ್ಷ ವರ್ಗಾವಣೆ ಮಾಡಿಕೊಂಡಿದ್ದಾರೆ' ಎಂದು ರಾಜೀವ್‌ಗಾಂಧಿ ನಗರದ ಸರ್ಕಾರಿ ಕಿರಿಯ ಪ್ರಾಥಮಿಕ ಶಾಲೆಯ ಸಹಾಯಕ ಶಿಕ್ಷಕ ನಸೀರ್ ಅಹ್ಮದ್ ದೂರು ನೀಡಿದ್ದು, ಸೈಬರ್ ಠಾಣೆಯಲ್ಲಿ ಪ್ರಕರಣ ದಾಖಲಾಗಿದೆ. ಮಕ್ಕಳಿಗೆ ಬಿಸಿಯೂಟದ ಜತೆಗೆ ಮೊಟ್ಟೆ ನೀಡಬೇಕಾಗಿತ್ತು, ಮೊಟ್ಟೆ ಖರೀದಿಸುವ ಉದ್ದೇಶದಿಂದ ಸದಾಶಿವನಗರದ ಬಳಿಯ ಎಟಿಎಂನಲ್ಲಿ 5 ಸಾವಿರ ಹಣ ವಿಥ್ ಡ್ರಾ ಮಾಡಿದ್ದೆ. ನಂತರ ನನ್ನ ಖಾತೆಯಿಂದ ನಿರಂತರವಾಗಿ ಹಣ ಕಡಿತ ಆದ ಬಗ್ಗೆ ಮೊಬೈಲ್‌ಗೆ ಮೆಸೇಜ್ ಬಂದಿದೆ. ಬ್ಯಾಂಕ್‌ನಲ್ಲಿ ವಿಚಾರಿಸಿದಾಗ ಯಾರೋ ಕಳ್ಳರು ಬ್ಯಾಂಕ್ ಖಾತೆ ಹ್ಯಾಕ್ ಮಾಡಿ, 13,40,656 ಹಣ ಬಿಡಿಸಿಕೊಂಡಿರುವುದು ಗೊತ್ತಾಗಿದೆ' ಎಂದು ನಸೀರ್ ದೂರಿನಲ್ಲಿ ಉಲ್ಲೇಖಿಸಿದ್ದಾರೆ. 6.34 ಲಕ್ಷ ವಂಚನೆ: ಷೇರು ಮಾರುಕಟ್ಟೆಯಲ್ಲಿ ಹಣ ಹೂಡಿಕೆ ಮಾಡಿ ದುಪ್ಪಟ್ಟು ಲಾಭ ಗಳಿಸಬಹುದು ಎಂಬ ಆಮಿಷಕ್ಕೆ ಒಳಗಾಗಿ ನಗರದ ಶಿರಾ ಗೇಟ್‌ನ ಟಿ.ಸಿ.ರಂಜಿತ್ ಕುಮಾರ್ 6.34 ಲಕ್ಷ ಕಳೆದುಕೊಂಡಿದ್ದಾರೆ. ಸೆ. 20ರಂದು ಫೇಸ್ ಬುಕ್ ವೀಕ್ಷಿಸುತ್ತಿರುವಾಗ ಷೇರು ಮಾರುಕಟ್ಟೆಯ ಜಾಹೀರಾತು ನೋಡಿದ್ದಾರೆ. ಅದರಲ್ಲಿನ ಮೊಬೈಲ್ ಸಂಖ್ಯೆ ಸಂಪರ್ಕಿಸಿ ಮಾಹಿತಿ ಪಡೆದಿದ್ದಾರೆ. ನಂತರ ಸೈಬರ್ ವಂಚಕರು ತಿಳಿಸಿದ ಆ್ಯಪ್ ಡೌನ್‌ಲೋಡ್ ಮಾಡಿಕೊಂಡಿದ್ದಾರೆ. 'ಇದರಲ್ಲಿ ಹಣ ಹೂಡಿಕೆ ಮಾಡಿ ಒಳ್ಳೆಯ ಲಾಭ ಪಡೆಯಬಹುದು' ಎಂದು ತಿಳಿಸಿದ್ದಾರೆ.

## ಬಸ್, ಕಾರು ಚಾಲಕರ ಜಗಳ; ದೂರು ಪ್ರತಿ ದೂರು ದಾಖಲು

• **ಉದಯವಾಹಿನಿ, ಕನಕಪುರ**

ಓವರ್ ಟೇಕ್ ಮಾಡುವ ವಿಚಾರಕ್ಕೆ ಅಶ್ವಮೇಧ ಸಾರಿಗೆ ಚಾಲಕ ಕಾರು ಚಾಲಕನ ನಡುವೆ ಗಲಾಟೆ ನಡೆದು ನಗರ ಠಾಣೆಯಲ್ಲಿ ದೂರು ಮತ್ತು ಪ್ರತಿ ದೂರು ದಾಖಲಾಗಿದೆ.ರಾಷ್ಟ್ರೀಯ ಹೆದ್ದಾರಿಯಲ್ಲಿ ಸಾರಿಗೆ ಬಸ್, ಮುಂದೆ ಹೋಗಲು ಅವಕಾಶ ಕೊಡದಿದ್ದಕ್ಕೆ ಸಾರಿಗೆ ಬಸ್ ಚಾಲಕ ರೈಸ್ ಮಿಲ್ ಬಳಿ ಕಾರು ಚಾಲಕನನ್ನು ಅಡ್ಡಗಟ್ಟಿ ಗಲಾಟೆ ಮಾಡಿದ್ದಾರೆ.

ಈ ವೇಳೆ ಕಾರು ಚಾಲಕನ ಮೇಲೆ, ಸಾರಿಗೆ ಬಸ್ ಚಾಲಕ ಹಾಗೂ ಪ್ರಯಾಣಿಕರು ಹಲ್ಲೇ ಮಾಡಿದ್ದಾರೆ ಎಂಬ ಆರೋಪ ಕೇಳಿ ಬಂದಿದೆ.ಕಾರು ಚಾಲಕ ಮತ್ತು ಸಾರಿಗೆ ಬಸ್ ಚಾಲಕನ ನಡುವೆ ದಯಾನಂದ ಸಾಗರ್ ಆಸ್ಪತ್ರೆ ಬಳಿಯಿಂದ ಓವರ್ ಟೆಕ್ ಮಾಡುವ ವಿಚಾರಕ್ಕೆ ಜಟಾಪಟಿ ಆರಂಭವಾಗಿದೆ. ಬೆಂಗಳೂರು ಕಡೆಯಿಂದ ಕನಕಪುರದ ಕಡೆಗೆ ಬೆಳಿಗ್ಗೆ 10 ಗಂಟೆ ಸಮಯದಲ್ಲಿ ಬರುತ್ತಿದ್ದ ಅಶ್ವಮೇಧ ಎಸ್ಕ್‌ಪ್ರೆಸ್‌ಗೆ ದಯಾನಂದ ಸಾಗರ ಆಸ್ಪತ್ರೆ ಬಳಿ, ಹಿಂಬದಿಯಲ್ಲಿ ಬರುತ್ತಿದ್ದ ಕಾರು ಚಾಲಕ ಸಾರಿಗೆ ಬಸ್ ಹಿಂದಿಕ್ಕಿ ಮುಂದೆ ಹೋಗಲು ಪದೇಪದೇ ಹಾರ್ನ್ ಮಾಡಿದ್ದಾನೆ. ತಕ್ಷಣಕ್ಕೆ ಸಾರಿಗೆ ಬಸ್ ಚಾಲಕ ಕಾರು ಚಾಲಕನಿಗೆ ಮುಂದೆ ಹೋಗಲು ಅವಕಾಶ ಕೊಟ್ಟಿರಲಿಲ್ಲ. ಆನಂತರ ಸಾರಿಗೆ ಬಸ್ ಹಿಂದಿಕ್ಕಿ ಬಸ್ ಮುಂದೆ ಬಂದ ಕಾರು ಚಾಲಕ ಜಕ್ಕಸಂದ್ರ ಗ್ರಾಮದಿಂದಲೂ ನಿಧಾನವಾಗಿ ಕಾರು ಚಲಾಯಿಸಿಕೊಂಡು ಸಾರಿಗೆ ಬಸ್ ಮುಂದೆ ಹೋಗಲು ಬಿಟ್ಟಿರಲಿಲ್ಲ ಎಂದು ತಿಳಿದು ಬಂದಿದೆ.


ಉದಯವಾಹಿನಿ ಚಿತ್ರ

ಎಕ್ಸ್ಪ್ರೆಸ್ ಅಶ್ವಮೇಧ ಮುಂದೆ ಹೋಗಲು ಬಿಡದಿದ್ದಕ್ಕೆ ಬಸ್ ಚಾಲಕ ಹಾಗೂ ಬಸ್ಸಿನಲ್ಲಿದ್ದ ಪ್ರಯಾಣಿಕರು ತಾಳ್ಮೆ ಕಳೆದುಕೊಂಡು ನಗರದ ರೈಸ್ ಮಿಲ್ ಬಳಿ ಕಾರನ್ನು ಹಿಂದಕ್ಕಿ ಕಾರನ್ನು ಅಡ್ಡಗಟ್ಟಿದ್ದಾರೆ. ಈ ವೇಳೆ ಬಸ್ ಚಾಲಕ ಮತ್ತು ಕಾರು ಚಾಲಕನ ನಡುವೆ ಮಾತಿನ ವಾಗ್ವಾದ ನಡೆದಿದೆ. ಈ ಸಂದರ್ಭದಲ್ಲಿ ಬಸ್ಸಿನಲ್ಲಿದ್ದ ಮೂರ್ನಾಲ್ಕು ಪ್ರಯಾಣಿಕರು ಮತ್ತು ಬಸ್ ಚಾಲಕ ಸೇರಿ, ಕಾರು ಚಾಲಕನ ಮೇಲೆ ಹಲ್ಲೆ ನಡೆಸಿದ್ದಾರೆ ಎಂದು ತಿಳಿದು ಬಂದಿದೆ. ಅಶ್ವಮೇಧ ಬಸ್ ಮತ್ತು ಕಾರನ್ನು ಪೊಲೀಸ್ ಠಾಣೆಗೆ ತಂದಿದ್ದು, ಇಬ್ಬರು ಕಡೆಯಿಂದಲೂ ಪೊಲೀಸರು ದೂರು ದಾಖಲಿಸಿಕೊಂಡಿದ್ದಾರೆ.

## ಕೊಳಚೆ ನೀರು ಸಂಸ್ಕರಣೆಗೆ ರೂ.135 ಕೋಟಿ

• **ಉದಯವಾಹಿನಿ, ತುಮಕೂರು**

ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಜಲಶುದ್ಧಿ ಅಭಿಯಾನದಡಿ ಕೊಳಚೆ ನೀರಿನ ಸಂಸ್ಕರಣೆ, ಸ್ವಚ್ಛ ಭಾರತ್ ಮಿಷನ್, ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ ಯೋಜನೆಯಲ್ಲಿ 135.23 ಕೋಟಿ ಅನುದಾನ ಮಂಜೂರು ಮಾಡಲಾಗಿದೆ ಎಂದು ರಾಜ್ಯ ನಗರ ಮೂಲ ಸೌಕರ್ಯ ಅಭಿವೃದ್ಧಿ ಹಣಕಾಸು ನಿಗಮದ (ಕೆಯುಐಡಿಎಫ್‌ಸಿ) ವ್ಯವಸ್ಥಾಪಕ ನಿರ್ದೇಶಕ ಶರತ್ ತಿಳಿಸಿದರು.

ನಗರದಲ್ಲಿ ಸ್ಥಳೀಯ ಸಂಸ್ಥೆಗಳ ಮುಖ್ಯಸ್ಥರೊಂದಿಗೆ ನಡೆಸಿದ ಸಭೆಯಲ್ಲಿ ಈ ಮಾಹಿತಿ ನೀಡಿದರು. ತುಮಕೂರು ಮಹಾನಗರ ಪಾಲಿಕೆಗೆ 50 ಕೋಟಿ ಮಂಜೂರು ಮಾಡಲಾಗಿದೆ ಎಂದರು.

ಹುಳಿಯಾರು, ಕೊರಟಗೆರೆ ಪಟ್ಟಣ ಪಂಚಾಯತಿಯಲ್ಲಿ ಕೊಳಚೆ ನೀರಿನ ಸಂಸ್ಕರಣೆಗಾಗಿ ತಲಾ 3.50 ಕೋಟಿ, ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ತುಮಕೂರು ಮಹಾನಗರ ಪಾಲಿಕೆ, ಶಿರಾ ನಗರಸಭೆ ಹೊರತುಪಡಿಸಿ ಜಿಲ್ಲೆಯ ಉಳಿದ ನಗರ ಸ್ಥಳೀಯ ಸಂಸ್ಥೆಗಳಿಗೆ 33.23 ಕೋಟಿ ಹಾಗೂ ರಾಷ್ಟ್ರೀಯ ಹಸಿರು ನ್ಯಾಯಾಧಿಕರಣ ಕಾರ್ಯಕ್ರಮದ ಅನುಷ್ಠಾನಕ್ಕಾಗಿ ಕುಣಿಗಲ್ ಪುರಸಭೆಗೆ 35 ಕೋಟಿ, ತಿಪಟೂರು ನಗರಸಭೆಗೆ 10 ಕೋಟಿ ಮಂಜೂರಾಗಿದೆ ಎಂದು ವಿವರಿಸಿದರು.ನಗರ ಸ್ಥಳೀಯ ಸಂಸ್ಥೆಗಳ ವ್ಯಾಪ್ತಿಯಲ್ಲಿ ಉತ್ಪತ್ತಿಯಾಗುವ ತ್ಯಾಜ್ಯ ನೀರನ್ನು ಸಂಸ್ಕರಿಸಿ ಜಲಮೂಲ ಸೇರುವುದನ್ನು ತಡೆಗಟ್ಟುವುದು, ಜಲ ಮಾಲಿನ್ಯ ನಿಯಂತ್ರಿಸುವುದು ನಗರ ಸ್ಥಳೀಯ ಸಂಸ್ಥೆಗಳ ಕರ್ತವ್ಯವಾಗಿದೆ. ಯಾವುದೇ ರೀತಿಯಲ್ಲೂ ಸಂಸ್ಕರಿಸದ, ಮಲದ ಕೆಸರು, ಬಳಸಿದ ನೀರನ್ನು ಪರಿಸರಕ್ಕೆ ಬಿಡುವಂತಿಲ್ಲ. ಬಳಸಿದ ಎಲ್ಲಾ ನೀರನ್ನು ಸುರಕ್ಷಿತವಾಗಿ ಸಂಗ್ರಹಿಸಿ, ಸಂಸ್ಕರಿಸಿ, ಸಾಗಿಸುವ ಮೂಲಕ ಬಳಸಿದ ನೀರಿನ ನಿರ್ವಹಣೆ ಮಾಡಬೇಕು. ಸಂಸ್ಕರಿಸಿದ ನೀರಿನ ಮರುಬಳಕೆ ಮಾಡಬೇಕು. ಸಂಸ್ಕರಿಸದ ತ್ಯಾಜ್ಯ ನೀರು ಜಲಮೂಲ ಸೇರದಂತೆ ನಿಯಂತ್ರಿಸಬೇಕು ಎಂದು ಸೂಚಿಸಿದರು.ಕೊಳಚೆ ನೀರು ಉತ್ಪಾದನೆ ಹಾಗೂ ಸಂಸ್ಕರಣೆ ನಡುವಿನ ಅಂತರ ಕಡಿಮೆ ಮಾಡಲು ಸರ್ಕಾರವು ನಗರ ಮೂಲ ಸೌಕರ್ಯ ಅಭಿವೃದ್ಧಿ ಮತ್ತು ಹಣಕಾಸು ನಿಗಮವನ್ನು ಅನುಷ್ಠಾನ ಇಲಾಖೆಯನ್ನಾಗಿ ಗುರುತಿಸಿದೆ. ಪ್ರಾಥಮಿಕ ಹಂತವಾಗಿ ಶಿರಾ ನಗರಸಭೆ ಹೊರತುಪಡಿಸಿ ಉಳಿದ 10 ನಗರ ಸ್ಥಳೀಯ ಸಂಸ್ಥೆಗಳಲ್ಲಿ ಸ್ವಚ್ಛ ಭಾರತ್ ಮಿಷನ್ ಯೋಜನೆಯಡಿ ಕೊಳಚೆ ನೀರು ಸಂಸ್ಕರಣಾ ಘಟಕ ನಿರ್ಮಿಸಲು ಸ್ಥಳ ಗುರುತಿಸುವಂತೆ ನಿರ್ದೇಶಿಸಿದರು. ಹುಳಿಯಾರು, ಕೊರಟಗೆರೆಯಲ್ಲಿ ಮಲತ್ಯಾಜ್ಯ ನಿರ್ವಹಣಾ ಘಟಕ ಸ್ಥಾಪಿಸಲು ತಲಾ 3.5 ಕೋಟಿ ಮಂಜೂರು ಮಾಡಿ ಕಾರ್ಯಾದೇಶ ನೀಡಲಾಗಿದೆ. ಘಟಕ ನಿರ್ಮಾಣಕ್ಕೆ ಸ್ಥಳ ಗುರುತಿಸಿ ತ್ವರಿತವಾಗಿ ಕಾಮಗಾರಿ ಆರಂಭಿಸುವಂತೆ ತಿಳಿಸಿದರು.


ಉದಯವಾಹಿನಿ ಚಿತ್ರ

## ತಲಕಾಯಲಬೆಟ್ಟದಲ್ಲಿ ಅನ್ನದಾಸೋಹ ಕಾರ್ಯಕ್ರಮ

• **ಉದಯವಾಹಿನಿ,ಶಿಡ್ಲಘಟ್ಟ**

ಪುರಾಣ ಪ್ರಸಿದ್ಧಿ ಶ್ರೀ ಭೂನೀಳಾ ವೆಂಕಟರಮಣಸ್ವಾಮಿ ತಲಕಾಯಲಬೆಟ್ಟದಲ್ಲಿ ಇನ್ನೂ ಮುಂದೆ ಪ್ರತಿ ಶನಿವಾರ ಅನ್ನದಾಸೋಹ ಕಾರ್ಯಕ್ರಮ ಶಾಶ್ವತವಾಗಿ ನಡೆಯುತ್ತದೆ ಎಂದು ಕೆಪಿಸಿಸಿ ಕೋ-ಆರ್ಡಿನೇಟರ್ ರಾಜೀವ್ ಗೌಡ ಹೇಳಿದರು.

ತಾಲ್ಲೂಕಿನ ತಲಕಾಯಲಬೆಟ್ಟದ ಶ್ರೀ ಭೂ ನೀಳಾ ಲಕ್ಷ್ಮೀ ವೆಂಕಟರಮಣಸ್ವಾಮಿ ದೇವಾಲಯದ ಆವರಣದಲ್ಲಿ ಹಮ್ಮಿಕೊಂಡಿದ್ದ ಉಚಿತ ಅನ್ನ ಸಂತರ್ಪಣೆ ಕಾರ್ಯಕ್ರಮವನ್ನು ಉದ್ಘಾಟಿಸಿ ಮಾತನಾಡಿದರು.

ದೇವಾಲಯದ ಜಾತ್ರಾ ಮಹೋತ್ಸವದಂದು ಹಾಗೂ ಇನ್ನಿತರೆ ಹಬ್ಬ ಹರಿದಿನಗಳಲ್ಲಿ ಸಾವಿರಾರು ಭಕ್ತಾಧಿಗಳ ದೇವರ ದರ್ಶನ ಪಡೆಯಲು ಬಂದಾಗ ಎಷ್ಟೋ ಭಕ್ತಾಧಿಗಳು ಹಸಿವಿಂದ ಬಂದಿರುತ್ತಾರೆ, ಮತ್ತೆ ಹಿಂದುರಿಗಿ ಹೋಗುವಾಗ ಉಪವಾಸದಿಂದ ಹೋಗಬಾರದು. ಇಲ್ಲಿ ಅನ್ನದಾನ ನಡೆಯುತ್ತದೆ ಆದರೆ ಅದು ಸಾಕಾಗುವುದಿಲ್ಲ. ದೇವಸ್ಥಾನಕ್ಕೆ ಎಷ್ಟೇ ಭಕ್ತಾಧಿಗಳು ಬಂದರೂ ಹಸಿವಿನಿಂದ ಬಳಲಬಾರದು ಎಂಬ ಉದ್ದೇಶದಿಂದ ದೇವಾಲಯದ ಸಮಿತಿ ಪ್ರತಿ ಶನಿವಾರ ಅನ್ನದಾಸೋಹವನ್ನು ನೀಡಬೇಕು ಎಂದು ತೀರ್ಮಾನಿಸಿದೆ. ಅದರಂತೆ ಅನ್ನದಾಸೋಹ ಕಾರ್ಯಕ್ರಮಕ್ಕೆ ಸಮಿತಿಯವರು ಏನು ಬೇಡಿಕೆ ಕೊಡ್ತೀರೋ ಅದನ್ನ ಪೂರೈಸಿಕೊಡುತ್ತೇನೆ. ಹಾಗೆಯೇ ಬೆಟ್ಟದ ಮೇಲೆ ಹೋಗಲು ರಸ್ತೆ ನಿರ್ಮಾಣ,ದೊಡ್ಡದಾದ ಲೈಟ್ ಹಾಕಿಸಿಕೊಡುತ್ತೇನೆ ಎಂದು ಭರವಸೆ ನೀಡಿದರು. ಯಾರು ಭಕ್ತಾದಿಗಳು ಒಂದು ವಾರದ ಅನ್ನ ಸಂತರ್ಪಣೆಯ ಆಯವ್ಯಯಕ್ಕೆ ಸಹಕರಿಸುತ್ತಾರೊ ಅವರ ಕುಟುಂಬವನ್ನು ಸನ್ಮಾನಿಸಿ ಅವರ ಹೆಸರು ಪ್ರಚಾರಮಾಡುತ್ತೇವೆ ಎಂದು ದೇವಾಲಯದ ಸಮಿತಿಯ ಅಧ್ಯಕ್ಷ ಡಿಪಿ ನಾಗರಾಜ್ ಹೇಳಿದರು. ಅಶ್ವಥ್ ನಾರಾಯಣರೆಡ್ಡಿ ಮಾತನಾಡಿ,ಅನ್ನದಾನ ಮಹಾದಾನ ಪ್ರತಿ ಶನಿವಾರ ಬರುವ ಭಕ್ತಾಧಿಗಳಿಗೆ ಒಂದು ತಿಂಗಳ ಕಾಲ ಅನ್ನವನ್ನ ನೀಡುತ್ತಿರುವ ರಾಜೀವ್ ಗೌಡ ಅವರಿಗೆ ಅಭಿನಂದನೆಗಳನ್ನ ತಿಳಿಸಿ ಮಾತನಾಡಿದರು.


ಉದಯವಾಹಿನಿ ಚಿತ್ರ

ಸದಸ್ಯ ಶಿವಣ್ಣ ಮಾತನಾಡಿ ದೇವಸ್ಥಾನಕ್ಕೆ ರಾಜಗೋಪುರ ನಿರ್ಮಿಸಲು ಭಕ್ತಾಧಿಗಳು ಹಾಗೂ ದಾನಿಗಳು ಸಹಾಯದಿಂದ ಮಾತ್ರ ಸಾಧ್ಯ ಎಂದು ಮನವಿ ಮಾಡಿದರು. ಕೆ ಗುಡಿಯಪ್ಪ,ಮಾದೇನಹಳ್ಳಿ ರವಿ,ಮೌಲಾ,ಕೆ. ಆನಂದ,ಗೋವಿಂದಪ್ಪ,ಡಿ ವಿ ವೆಂಕಟೇಶ್, ಬಿ ಚಿಕ್ಕಪ್ಪಯ್ಯ,ಆಂಜನೇಯರೆಡ್ಡಿ ,ಅಶ್ವಥ್ ರೆಡ್ಡಿ,ಟಿಕೆ ನಟರಾಜ್, ಶಿವಾರೆಡ್ಡಿ, ಶ್ರೀನಿವಾಸ್ ರೆಡ್ಡಿ,ವೆಂಕಟರೆಡ್ಡಿ,ಕೃಷ್ಣಪ್ಪ,ದ್ಯಾವಪ್ಪ, ಹರೀಶ್,ಭಕ್ತಾಧಿಗಳು ಪಾಲ್ಗೊಂಡಿದ್ದರು.

> **ವೆಂಕಟರಮಣಸ್ವಾಮಿ ದೇವಾಲಯದ ಬೆಟ್ಟದ ಮೇಲೆ ಪ್ರಯಾಣಿಸುವ ಭಕ್ತರಿಗೆ ರಸ್ತೆ ನಿರ್ಮಾಣ ಮಾಡಬೇಕು ಆದ್ದರಿಂದ ಭಕ್ತಾಧಿಗಳು ಹಾಗೂ ದಾನಿಗಳು ಸಹಾಯದಿಂದ ಅಂದಾಜು 50 ಲಕ್ಷವೆಚ್ಚದಲ್ಲಿ ರಸ್ತೆ ನಿರ್ಮಾಣ ಮಾಡುವುದಕ್ಕೆ ಯಾವುದೇ ರಾಜಕೀಯ ಬೆರಸದೇ ಅಭಿವೃದ್ಧಿ ಮಾಡೋಣ ಎಂದು ತೋಪಡ ನಾಗರಾಜ್ ತಿಳಿಸಿದರು. ಮೊದಲ ಶನಿವಾರ ದೇವಾಲಯದ ದರ್ಶನಕ್ಕೆ ಬಂದಿರುವ ಎಲ್ಲಾ ಭಕ್ತಾಧಿಗಳಿಗೂ ಹೋಳಿಗೆ ಊಟವನ್ನು ರಾಜೀವ್ ಗೌಡ ಅವರು ಬಡಿಸಿ ಕಾರ್ಯಕ್ರಮಕ್ಕೆ ಚಾಲನೆ ನೀಡಿದರು.**

## ಉಪಚುನಾವಣೆ ನೀತಿ ಸಂಹಿತೆ: ಸರಳ ಕನ್ನಡ ರಾಜ್ಯೋತ್ಸವ

• **ಉದಯವಾಹಿನಿ, ಮಾಗಡಿ**

ಚನ್ನಪಟ್ಟಣ ಉಪಚುನಾವಣೆ ಕಾರಣ ನೀತಿ ಸಂಹಿತೆ ಜಾರಿಯಲ್ಲಿರುವ ಕಾರಣ ನ.1 ರಂದು ಕನ್ನಡ ರಾಜ್ಯೋತ್ಸವವನ್ನು ಸರಳವಾಗಿ ಆಚರಿಸಲಾಗುವುದು ಎಂದು ತಹಶೀಲ್ದಾರ್ ಶರತ್ ಕುಮಾರ್ ಹೇಳಿದರು.

ತಾಲ್ಲೂಕು ಕಚೇರಿ ಆವರಣದಲ್ಲಿ ನಡೆದ ರಾಜ್ಯೋತ್ಸವ ಪೂರ್ವಭಾವಿ ಸಭೆಯಲ್ಲಿ ಮಾತನಾಡಿ, ನ.1ರಂದು ತಾಲ್ಲೂಕು ಕಚೇರಿ ಆವರಣದಲ್ಲಿ ಸರಳ ಮತ್ತು ಸಾಂಕೇತಿಕವಾಗಿ ಕನ್ನಡ ರಾಜ್ಯೋತ್ಸವ ಆಚರಿಸಲಾಗುವುದು. ಕನ್ನಡಪರ ಸಂಘಟನೆಗಳು ಸೇರಿ ಬೇರೆ ದಿನ ತಾಲ್ಲೂಕಿನಲ್ಲಿ ಅದ್ದೂರಿಯಾಗಿ ರಾಜೋತ್ಸವ ಆಚರಿಸಲು ತೀರ್ಮಾನಿಸಿವೆ. ಹೀಗಾಗಿ ಮುಂದೊಂದು ದಿನ ಪೂರ್ವಭಾವಿ ಸಭೆ ಕರೆದು ಅದ್ದೂರಿ ಆಚರಣೆಗೆ ಬೇಕಾದ ಸಿದ್ಧತೆ ಬಗ್ಗೆ ಚರ್ಚಿಸಲಾಗುವುದು ಎಂದು ತಿಳಿಸಿದರು.

ಎಲ್ಲಾ ಇಲಾಖೆ ಅಧಿಕಾರಿಗಳು ಸಭೆಗೆ ಬರುವಂತೆ ಮಾಹಿತಿ ನೀಡಿದ್ದರೂ, ಯಾರು ಬಂದಿಲ್ಲ. ಅವರಿಗೆಲ್ಲ ಕಾರಣ ಕೇಳಿ ನೋಟಿಸ್ ನೀಡಲಾಗುವುದು ಎಂದರು. ತಾಲ್ಲೂಕು ಕನ್ನಡ ಸಾಹಿತ್ಯ ಪರಿಷತ್ ಅಧ್ಯಕ್ಷ ತಿ.ನಾ. ಪದ್ಮನಾಭ, ಎರಡು ದಿನದ ಹಿಂದೆ ಕರೆಯಲಾಗಿದ್ದ ಪೂರ್ವಭಾವಿ ಸಭೆಗೆ ಅಧಿಕಾರಿಗಳು ಬಾರದ ಕಾರಣ ಇಂದು ಸಭೆ ಕರೆಯಲಾಗಿತ್ತು. ಆದರೆ ಈ ಸಭೆಗೂ ಕೆಲ ಅಧಿಕಾರಿಗಳು ಗೈರು ಆಗಿದ್ದಾರೆ. ಇಂಥವರ ವಿರುದ್ಧ ತಾಲ್ಲೂಕು ಆಡಳಿತ ಕ್ರಮ ಕೈಗೊಳ್ಳಬೇಕೆಂದು ಒತ್ತಾಯಿಸಿದರು.ವಿವಿಧ ಕನ್ನಡಪರ ಸಂಘಟನೆಗಳು ಮತ್ತು ಕನ್ನಡ ಸಾಹಿತ್ಯ ಪರಿಷತ್‌ಗೆ ಸರಿಯಾಗಿ ಮಾಹಿತಿ ನೀಡದೆ ಹಿನ್ನೆಲೆ ಸಭೆಗೆ ಮಹತ್ವ ಸಿಗುತ್ತಿಲ್ಲ. ಮುಂದಿನ ದಿನಗಳಲ್ಲಿ ಎಲ್ಲರನ್ನೂ ಒಗ್ಗೂಡಿಸುವ ಕೆಲಸವನ್ನು ತಾಲ್ಲೂಕು ಆಡಳಿತ ಮಾಡಬೇಕು ಎಂದರು.

ಕ್ಷೇತ್ರ ಶಿಕ್ಷಣಾಧಿಕಾರಿ ಚಂದ್ರಶೇಖರ್, ಬಗರ್ ಹುಕಂ ಸಮಿತಿ ಸದಸ್ಯ ಆಗ್ರೋ ಪುರುಷೋತ್ತಮ್, ಮುಖಂಡರಾದ ಬಾಚೇನಟ್ಟಿ ಮಹಾಂತೇಶ್, ವನಜ, ಬಿಇಒ ಕಚೇರಿಯ ನಾರಾಯಣ್ ಇದ್ದರು.


ಉದಯವಾಹಿನಿ ಚಿತ್ರ

> **ಕನ್ನಡಪರ ಸಂಘಟನೆಗಳು ನ. 29ರಂದು ಪಟ್ಟಣದ ಕೆಂಪೇಗೌಡ ವೃತ್ತದ ಬಳಿ ಅದ್ದೂರಿಯಾಗಿ ಕನ್ನಡ ರಾಜ್ಯೋತ್ಸವ ಆಚರಿಸಲಾಗುವುದು. ಆಗ ತಹಶೀಲ್ದಾರ್ ಸೇರಿದಂತೆ ಎಲ್ಲಾ ಅಧಿಕಾರಿಗಳಿಗೂ ಆಹ್ವಾನ ನೀಡಲಾಗುತ್ತದೆ. ಕಾರ್ಯಕ್ರಮದಲ್ಲಿ ಅಧಿಕಾರಿಗಳು ಭಾಗವಹಿಸಿ ನಮ್ಮ ಕಾರ್ಯಕ್ರಮ ಯಶಸ್ವಿ ಮಾಡಬೇಕು ಎಂದು ಕರ್ನಾಟಕ ನವ ನಿರ್ಮಾಣ ವೇದಿಕೆ ರಾಜ್ಯಾಧ್ಯಕ್ಷ ಶ್ರೀಪತಿಯಲ್ಲಿ ರಾಜಣ್ಣ ಹೇಳಿದರು.**

# ಮೈದುಂಬಿ ಧುಮ್ಮಿಕ್ಕುತ್ತಿದೆ ಸುವರ್ಣಾವತಿ

## ಸುವರ್ಣಾವತಿ, ಚಿಕ್ಕಹೊಳೆ ಜಲಾಶಯಗಳ ಪಾತ್ರದಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳ ಅಭಿವೃದ್ಧಿ

• **ಉದಯವಾಹಿನಿ, ಚಾಮರಾಜನಗರ**

9,800 ಎಕರೆಗೂ ಹೆಚ್ಚು ಕೃಷಿ ಭೂಮಿಗೆ ನೀರುಣಿಸುವ, ರೈತರ ಜೀವನಾಡಿಯಾಗಿರುವ, ಕೆರೆ-ಕಟ್ಟೆಗಳಿಗೆ ಜಲಾಧಾರವಾಗಿರುವ ಸುವರ್ಣಾವತಿ ಜಲಾಶಯವು ಮೈದುಂಬಿ ಕಣ್ಮನ ಸೆಳೆಯುತ್ತಿದೆ. ಜಲಾಶಯ ಗರಿಷ್ಠ ಮಟ್ಟ ತಲುಪಿದ್ದು ಎರಡು ಕ್ರಸ್ಟ್‌ಗೇಟ್‌ಗಳ ಮೂಲಕ ಹೆಚ್ಚುವರಿ ನೀರನ್ನು ಹೊರಗೆ ಬಿಡಲಾಗಿದ್ದು ಸುವರ್ಣಾವತಿ ಹಾಲ್ನೊರೆಯಾಗಿ ಧುಮ್ಮಿಕ್ಕುತ್ತಿದ್ದಾಳೆ. ಸುವರ್ಣಾವತಿ ಅಣೆಕಟ್ಟೆಯನ್ನು 1984ರಲ್ಲಿ ನಿರ್ಮಾಣ ಮಾಡಲಾಗಿದ್ದು 1.20 ಟಿಎಂಸಿ ಅಡಿ ಗರಿಷ್ಠ ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿದೆ. ಸದ್ಯ ಅಣೆಕಟ್ಟೆಯಲ್ಲಿ 1.18 ಟಿಎಂಸಿ ಅಡಿ ನೀರು ಸಂಗ್ರಹವಾಗಿದ್ದು ಕಣ್ಣು ಹಾಯಿಸಿದಷ್ಟು ದೂರ ಜಲರಾಶಿ ಕಂಗೊಳಿಸುತ್ತಿದೆ. ಹಸಿರ ಕಾನನ, ಬೆಟ್ಟಗುಡ್ಡಗಳ ಸಾಲು ಜಲಾಶಯದ ಅಂದವನ್ನು ಮತ್ತಷ್ಟು ಹೆಚ್ಚಿಸಿವೆ.

ಸುವರ್ಣಾವತಿ ಜಲಾಶಯದಿಂದ ಬಲದಂಡೆ ನಾಲೆ ಮೂಲಕ 150 ಕ್ಯುಸೆಕ್ ನೀರು ಹೊರಬಿಡಲಾಗಿದ್ದು ಚಾಮರಾಜನಗರ ತಾಲ್ಲೂಕಿನ ದೊಡ್ಡಕೆರೆ, ಚಿಕ್ಕಕೆರೆ, ಸಿಂಡಿಗೆರೆ, ಆಲೂರು ಕೆರೆ, ಕನ್ನೆಗಾಲ ಕೆರೆ, ಮಲ್ಲೇದೇವನಹಳ್ಳಿ ಕೆರೆ, ಪುಟ್ಟನಪುರ ಕೆರೆ, ಕಾಗಲವಾಡಿ ಕೆರೆ, ನಾಗವಳ್ಳಿ ಕೆರೆಗಳು ಶೀಘ್ರ ಭರ್ತಿಯಾಗಲಿವೆ.

ಕೆರೆಗಳು ಭರ್ತಿಯಾದರೆ ಜನ, ಜಾನುವಾರುಗಳಿಗೆ ಸಮೃದ್ಧ ನೀರು ದೊರೆಯುವುದರ ಜೊತೆಗೆ ಅಂತರ್ಜಲ ಮಟ್ಟವೂ ಹೆಚ್ಚಾಗಲಿದೆ. ನಾಲೆ ಹರಿಯುವ ಗ್ರಾಮಗಳ ವ್ಯಾಪ್ತಿಯಲ್ಲಿರುವ ತೋಟಗಾರಿಕಾ ಬೆಳೆಗಳಾದ ತೆಂಗು, ಅಡಿಕೆ, ಬಾಳೆ, ಅರಿಶಿನ ಸೇರಿದಂತೆ ಇತರೆ ವಾಣಿಜ್ಯ ಬೆಳೆಗಳಿಗೆ ಸಮೃದ್ಧವಾದ ನೀರು ದೊರೆಯಲಿದೆ.


ಉದಯವಾಹಿನಿ ಚಿತ್ರ

**ಡ್ಯಾಂ ಗರಿಷ್ಠ 74 ಅಡಿ ನೀರು ಸಂಗ್ರಹ**

**ಪ್ರವಾಸಿಗರ ಆಕರ್ಷಿಸಲು ಅನುಕೂಲ ಸುವರ್ಣಾವತಿ ಹಾಗೂ ಚಿಕ್ಕಹೊಳೆ ಜಲಾಶಯಗಳ ಪಾತ್ರದಲ್ಲಿ ಪ್ರವಾಸೋದ್ಯಮ ಚಟುವಟಿಕೆಗಳ ಅಭಿವೃದ್ಧಿಗೆ ಪೂರಕ ವಾತಾವರಣ ಇದೆ. ಕರಾವಳಿ ಮಾದರಿಯಲ್ಲಿ ನದಿಪಾತ್ರದಲ್ಲಿ ಕಯಾಕಿಂಗ್ ದೋಣಿ ವಿಹಾರ ಸೇರಿದಂತೆ ವಾಟರ್ ಸ್ಪೋರ್ಟ್ಸ್‌ಗಳನ್ನು ಆಯೋಜಿಸುವ ಮೂಲಕ ಜಿಲ್ಲೆಗೆ ಬರುವ ಪ್ರವಾಸಿಗರನ್ನು ಸೆಳೆಯುವ ಪ್ರಯತ್ನ ಮಾಡಬಹುದಾಗಿದೆ ಎನ್ನುತ್ತಾರೆ ಸ್ಥಳೀಯರು.**

ಸುವರ್ಣಾವತಿ ನದಿ ಹರಿಯುವ ಗ್ರಾಮಗಳಾದ ಹೊಂಗಲವಾಡಿ, ದಡದಳ್ಳಿ, ಅಯ್ಯನಪುರ, ನಾಗವಳ್ಳಿ, ಪುಟ್ಟನಪುರ, ಮಲ್ಲೇದೇವನಹಳ್ಳಿ, ಆಲೂರು, ಸರಗೂರು, ಹೊಮ್ಮ, ಕರಿಯನಕಟ್ಟೆ, ಅಟ್ಟಗೂಳಿಪುರದಲ್ಲಿ ಮಲೆನಾಡಿನ ಪರಿಸರವನ್ನು ಕಾಣಬಹುದಾಗಿದ್ದು ಸುವರ್ಣಾವತಿ ಜಲಾಶಯದ ಛಾಯೆ ಎದ್ದು ಕಾಣುತ್ತದೆ. ಸುವರ್ಣಾವತಿ ಜಲಾಶಯ ತುಂಬಬೇಕಾದರೆ ಕರ್ನಾಟಕ ಹಾಗೂ ತಮಿಳುನಾಡಿನ ಗಡಿ ಭಾಗವಾಗಿರುವ ದಿಂಬಂ, ಬೇಡಗುಳಿ, ಕೋಳಿ ಪಾಳ್ಯದಲ್ಲಿ ಸಮೃದ್ಧ ಮಳೆ ಸುರಿಯಬೇಕು. ಈ ವರ್ಷ ಪೂರ್ವ ಮುಂಗಾರು ಕೈಕೊಟ್ಟರೂ ನಂತರದ ಅವಧಿಯಲ್ಲಿ ಉತ್ತಮ ಮಳೆಯಾಗುತ್ತಿದ್ದು, ಸುವರ್ಣಾವತಿ ಜಲಾಶಯಕ್ಕೆ ಹೆಚ್ಚಿನ ಪ್ರಮಾಣದ ನೀರು ಹರಿದು ಬಂದಿದೆ. ಜಲಾಶಯದ ಗರಿಷ್ಠ ಮಟ್ಟ ಮುಟ್ಟುವ ಹಂತದಲ್ಲಿದ್ದು ಪೂರ್ತಿ ಭರ್ತಿಯಾಗಲು 0.2 ಟಿಎಂಸಿ ಅಡಿ ಮಾತ್ರ ಬಾಕಿ ಇದೆ ಎನ್ನುತ್ತಾರೆ ಸುವರ್ಣಾವತಿ ಜಲಾಶಯದ ಸಹಾಯಕ ಎಂಜಿನಿಯರ್ ಮಹೇಶ್.

ಚಾಮರಾಜನಗರ ತಾಲ್ಲೂಕಿನ ಅವಳಿ ಜಲಾಶಯಗಳಾದ ಚಿಕ್ಕಹೊಳೆ ಹಾಗೂ ಸುವರ್ಣಾವತಿ ಈ ಭಾಗದ ರೈತರ ಜೀವನಾಡಿಯಾಗಿದೆ. ಕಳೆದ ವರ್ಷ ಮಳೆಯ ಕೊರತೆಯಿಂದ ಸುವರ್ಣಾವತಿ ತುಂಬಿರಲಿಲ್ಲ. 2022ರಲ್ಲಿ ಗರಿಷ್ಠ ಮಟ್ಟ ತಲುಪಿತ್ತು. ಎರಡು ವರ್ಷಗಳ ಬಳಿಕ ಜಲಾಶಯ ಮತ್ತೊಮ್ಮೆ ತುಂಬಿದ್ದು ನೀರು ಹೊರಬಿಡಲಾಗಿದೆ ಎಂದು ಮಹೇಶ್ ಮಾಹಿತಿ ನೀಡಿದರು.

> **ಮೈದುಂಬುತ್ತಿದೆ ಚಿಕ್ಕಹೊಳೆ ಸುವರ್ಣಾವತಿ ಹಾಗೂ ಚಿಕ್ಕಹೊಳೆ ಚಾಮರಾಜನಗರ ತಾಲ್ಲೂಕಿನ ಅವಳಿ ಜಲಾಶಯಗಳು. ಚಿಕ್ಕಹೊಳೆ ಡ್ಯಾಂ ಗರಿಷ್ಠ 74 ಅಡಿ ನೀರು ಸಂಗ್ರಹಣಾ ಸಾಮರ್ಥ್ಯ ಹೊಂದಿದ್ದು ಸದ್ಯ 66 ಅಡಿ ನೀರು ಸಂಗ್ರಹ ಇದೆ. ರಾಜ್ಯದ ಗಡಿ ಭಾಗವಾಗಿರುವ ತಾಳವಾಡಿಯಲ್ಲಿ ಮಳೆಯಾದರೆ ಚಿಕ್ಕಹೊಳೆ ಜಲಾಶಯ ಭರ್ತಿಯಾಗುತ್ತದೆ. ಸಿದ್ದಯ್ಯನ ಪುರ ಬಂಡಿಗೆರೆ ಹರದನಹಳ್ಳಿ ಗ್ರಾಮಗಳ ಸಾವಿರಾರು ಎಕರೆ ಕೃಷಿ ಭೂಮಿಗೆ ಚಿಕ್ಕಹೊಳೆ ಜಲಾಶಯ ನೀರುಣಿಸುತ್ತಿದೆ.**

## ಮೈಸೂರಿಗೆ ಬಂದ ಜರ್ಮನಿ ಹಿರಿಯ ಪೊಲೀಸ್ ಅಧಿಕಾರಿಗಳು

• **ಉದಯವಾಹಿನಿ, ಮೈಸೂರು**

ಪೊಲೀಸ್ ಅಕಾಡೆಮಿಯಲ್ಲಿ, ತರಬೇತಿ ವಿಭಾಗದ ಎಡಿಜಿಪಿಗಳಾದ ಅಲೋಕ್ ಕುಮಾರ್ ಅವರ ಅಧ್ಯಕ್ಷತೆಯಲ್ಲಿ ಜರ್ಮನಿ ದೇಶದ ಬವೇರಿಯಾ ರಾಜ್ಯದ ಹಿರಿಯ ಪೊಲೀಸ್ ಅಧಿಕಾರಿಗಳೊಂದಿಗೆ 2 ದಿನಗಳ ವಿಚಾರ ಸಂಕಿರಣವನ್ನು ಏರ್ಪಡಿಸಲಾಗಿತ್ತು. ವಿಚಾರ ಸಂಕಿರಣದಲ್ಲಿ ಕರ್ನಾಟಕ ಸರ್ಕಾರ ಜರ್ಮನಿ ದೇಶಗಳ ಬಾಂದವ್ಯ ವೃದ್ಧಿ ಹಿನ್ನಲೆಯಲ್ಲಿ ಕರ್ನಾಟಕ ರಾಜ್ಯ ಪೊಲೀಸ್ ಮತ್ತು ಜರ್ಮನಿ ದೇಶದ ಬವೇರಿಯಾ ರಾಜ್ಯದ ಪೊಲೀಸ್ ಇಲಾಖೆಯೊಂದಿಗೆ 2016 ರಿಂದ ತರಬೇತಿ ವಿಭಾಗದಲ್ಲಿ ಪರಸ್ಪರ ಮಾಹಿತಿ, ಕೌಶಲ್ಯ ಅಭಿವೃದ್ಧಿ ಮತ್ತು ವೃತ್ತಿಪರತೆ, ಕುರಿತು ಸಹಕಾರ ವೃದ್ಧಿಸಲು ಒಪ್ಪಂದ ಮಾಡಿಕೊಂಡಿದೆ. ಅದರ ಅನ್ವಯ ಎರಡು ರಾಜ್ಯಗಳ ಅಧಿಕಾರಿಗಳು ತರಬೇತಿ ಕುರಿತು ಭೇಟಿ ಹಾಗೂ ಸನ್ನಿವೇಶ ಆಧಾರಿತ ತರಬೇತಿ ಅಭಿವೃದ್ಧಿಪಡಿಸಲು ಹಲವಾರು ಕ್ರಮಗಳನ್ನು ಕೈಗೊಳ್ಳಲಾಯಿತು. ಬವೇರಿಯಾ ಜನಸಂಖ್ಯೆ ಅಂದಾಜು 7 ಕೋಟಿಯಷ್ಟಿದ್ದು ಯುರೋಪಿನಲ್ಲಿಯೇ ಉತ್ತಮ ಪೊಲೀಸ್ ವ್ಯವಸ್ಥೆಯನ್ನು ಹೊಂದಿದೆ. ಎರಡೂ ರಾಜ್ಯಗಳ ಪೊಲೀಸ್ ಅಧಿಕಾರಿಗಳಿಗೆ ಕಾನೂನು ಮತ್ತು ಸುವ್ಯವಸ್ಥೆ, ಅಪರಾಧಗಳ ಪತ್ತೆ ಮತ್ತು ನಿಯಂತ್ರಣ, ಮಹಿಳೆಯರ, ಮಕ್ಕಳ ವಿರುದ್ಧದ ಅಪರಾಧಗಳು, ಸಂಚಾರ ನಿರ್ವಹಣೆ ಹಾಗೂ ಸೈಬರ್ ಅಪರಾಧಗಳ ಪತ್ತೆ ಮತ್ತು ತಡೆಗಟ್ಟುವಿಕೆ ಕುರಿತು ಪರಿಣಾಮಕಾರಿಯಾಗಿ ಅಧಿಕಾರಿಗಳಿಗೆ ಸನ್ನಿವೇಶ ಆಧಾರಿತ ತರಬೇತಿ ನೀಡುವ ಕುರಿತು ಕೌಶಲ್ಯ ಅಭಿವೃದ್ಧಿಪಡಿಸುವ ಬಗ್ಗೆ ಮಹತ್ವದ ನಿರ್ಧಾರಗಳನ್ನು ಕೈಗೊಳ್ಳಲಾಯಿತು. ಬವೇರಿಯಾ ರಾಜ್ಯದ ತರಬೇತಿ ಮುಖ್ಯಸ್ಥರಾದ ಶ್ರೀ ಆಂಡ್ರಿಯನ್ ಡೈಟೆಲ್‌ರವರು ಕರ್ನಾಟಕ ಪೊಲೀಸ್‌ನ ಎಲ್ಲಾ ತರಬೇತಿ ಶಾಲೆಗಳ ಮುಖ್ಯಸ್ಥರೊಂದಿಗೆ ವಿಚಾರ ವಿನಿಮಯ ಮಾಡಿದರು. ವಿಚಾರ ಸಂಕಿರಣದಲ್ಲಿ ಜರ್ಮನಿಯ ಬವೇರಿಯಾ ಮತ್ತು ಕರ್ನಾಟಕ ಮಧ್ಯ ಸಮನ್ವಯ ಸಾಧಿಸುವ ಸಂಸ್ಥೆಯಾದ ಹ್ಯಾನ್ ಸೀಡಲ್ ಫೌಂಡೇಶನ್‌ನ ಅಧಿಕಾರಿಗಳಾದ ಜುಡಿತ್ ವೇನ್‌ಭರ್ಗರ್ ಡಾ. ಅರುಲ್, ತರಬೇತಿ ವಿಭಾಗದ ಡಿಐಜಿಪಿ ಬೋರಲಿಂಗಯ್ಯ, ಕೆಪಿಎ ನಿರ್ದೇಶಕರಾದ ಚೆನ್ನಬಸವಣ್ಣ ಎಸ್.ಎಲ್., ಉಪ ನಿರ್ದೇಶಕರು ಸೇರಿದಂತೆ ರಾಜ್ಯದ 11 ಪೊಲೀಸ್ ತರಬೇತಿ ಶಾಲೆಯ ಪ್ರಾಂಶುಪಾಲರುಗಳು ಹಾಗೂ ಕೆಪಿಎನ ಸಹಾಯಕ ನಿರ್ದೇಶಕರುಗಳು ಉಪಸ್ಥಿತರಿದ್ದರು.

ಅಂತರಾಳದಿಂದ..
EDITORIAL

# ಊಟ ಕೌರವರಲ್ಲಿ, ಪಕ್ಷ ಪಾಂಡವರಲ್ಲಿ


ಅಧಿಕಾರದ ದುರಾಸೆಗಾಗಿ ಅಪರೇಷನ್ ಕಮಲಕ್ಕೆ ಬಲಿಯಾಗಿ ಬಿಜೆಪಿಗೆ ಸೇರ್ಪಡೆಗೊಂಡಿದ್ದ ಸಿ. ಪಿ. ಯೋಗೇಶ್ವರ್ ಇದೀಗ ದಿಢೀರ್ ಕಾಂಗ್ರೆಸ್‌ಗೆ ಪಕ್ಷಾಂತರಗೊಂಡಿರುವುದು ಚರ್ಚೆಗೆ ಕಾರಣವಾಗಿದೆ. ಈವರೆಗೆ ಬಿಜೆಪಿಯ ಸಿದ್ಧಾಂತವನ್ನು ಒಪ್ಪಿಕೊಂಡಿದ್ದ ಯೋಗೇಶ್ವರ್ ಅವರನ್ನು ಕಾಂಗ್ರೆಸ್ ಪಕ್ಷ ಸ್ವೀಕರಿಸಿರುವುದು ಎಷ್ಟು ಸರಿ ಎಂದು ಕೆಲವರು ಪ್ರಶ್ನಿಸುತ್ತಿದ್ದಾರೆ. ಆದರೆ ಯೋಗೇಶ್ವರ್ ಅವರ ರಾಜಕೀಯ ಹೆಜ್ಜೆಗುರುತುಗಳನ್ನು ಗಮನಿಸಿದರೆ, ಅವರು ಅಧಿಕಾರದ ಬೆನ್ನು ಹತ್ತಿ ರಾಜಕೀಯ ನಡೆಸಿದವರೇ ಹೊರತು, ಯಾವುದೇ ಸಿದ್ಧಾಂತಕ್ಕೆ ಬದ್ದರಾಗಿ ರಾಜಕೀಯಕ್ಕೆ ನಡೆಸಿದವರಲ್ಲ. ಅಧಿಕಾರದಲ್ಲಿ ಪಾಲು ಪಡೆಯಲು ಅವರು ಬಿಜೆಪಿಗೆ ಪಕ್ಷಾಂತರವಾಗಿದ್ದರೇ ಹೊರತು, ಬಿಜೆಪಿ ಸಿದ್ಧಾಂತವನ್ನು ಅವರು ಎಂದಿಗೂ ಮೈಗೆ ಹಚ್ಚಿಕೊಂಡವರಲ್ಲ ಮತ್ತು ಇದೀಗ ಕಾಂಗ್ರೆಸ್ ಸೇರಿರುವುದು ಕಾಂಗ್ರೆಸ್‌ನ ಜಾತ್ಯತೀತ ಸಿದ್ಧಾಂತದ ಮೇಲಿನ ಪ್ರೀತಿಯಿಂದಲೂ ಅಲ್ಲ ಕಾಂಗ್ರೆಸ್‌ಗೆ ಪಕ್ಷಾಂತರ ಮಾಡುವುದರಿಂದ ಸದ್ಯಕ್ಕೆ ಹೆಚ್ಚು ಲಾಭವಿದೆ ಎನ್ನುವುದನ್ನು ಕಂಡುಕೊಂಡು ಅವರು ದಿಢೀರ್ ನಿರ್ಧಾರಕ್ಕೆ ಬಂದಿದ್ದಾರೆ. ಭವಿಷ್ಯದಲ್ಲಿ ಮತ್ತೆ ಬಿಜೆಪಿಗೆ ಪಕ್ಷಾಂತರ ಮಾಡಿದರೂ ಅದರಲ್ಲಿ ಅಚ್ಚರಿಯೇನೂ ಇಲ್ಲ. ಅವರದೇನಿದ್ದರೂ ಅಧಿಕಾರ ಕೇಂದ್ರಿತ ರಾಜಕೀಯವಾಗಿದೆ. ಇದನ್ನು ಸಮಯ ಸಾಧಕ ರಾಜಕೀಯ ಎಂದೂ ಧಾರಾಳವಾಗಿ ಕರೆಯಬಹುದಾಗಿದೆ. ಅದರ ಬಗ್ಗೆಯೂ ಯೋಗೇಶ್ವರ್ ಯಾವತ್ತೂ ತಲೆಕೆಡಿಸಿಕೊಂಡವರಲ್ಲ.

ಆದರೆ ಕಾಂಗ್ರೆಸ್‌ನಲ್ಲಿದ್ದುಕೊಂಡೇ ಸಂಘಪರಿವಾರ ಮತ್ತು ಆರೆಸ್ಸೆಸ್ ಜೊತೆಗೆ ಯಾವ ಲಜ್ಜೆಯೂ ಇಲ್ಲದೆ ಕೈಜೋಡಿಸಿಕೊಂಡಿರುವ ಕಾಂಗ್ರೆಸ್‌ನ ನಾಯಕರ ಬಗ್ಗೆ ಕಾಂಗ್ರೆಸ್ ವರಿಷ್ಠರು ಯಾಕೆ ತಲೆಕೆಡಿಸಿಕೊಂಡಿಲ್ಲ ಎನ್ನುವುದು ಮಾತ್ರ ಚೋದ್ಯವಾಗಿಯೇ ಉಳಿದಿದೆ. ಹೀಗೆ ಮುಂದುವರಿದರೆ, ರಾಜ್ಯ ಕಾಂಗ್ರೆಸ್ ಆರೆಸ್ಸೆಸ್ ಇನ್ನೊಂದು ಅಧಿಕೃತ ರಾಜಕೀಯ ಘಟಕವಾಗಿ ರೂಪಾಂತರ ಹೊಂದುವ ದಿನ ದೂರವಿಲ್ಲ. ಬಿಜೆಪಿಯಲ್ಲಿ ಅಧಿಕಾರ ಸಿಕ್ಕಿಲ್ಲ ಎನ್ನುವ ಒಂದೇ ಕಾರಣಕ್ಕಾಗಿ ಕಾಂಗ್ರೆಸ್ ಪಕ್ಷಾಂತರವಾಗಿ, ಕಾಂಗ್ರೆಸ್‌ನೊಳಗಿದ್ದು ಅಲ್ಲಿನ ಸಕಲ ಅಧಿಕಾರವನ್ನು ಅನುಭವಿಸುತ್ತಾ ಆರೆಸ್ಸೆಸ್ ಮತ್ತು ಸಂಘಪರಿವಾರಕ್ಕಾಗಿ ದುಡಿಯುವ ನಾಯಕರನ್ನು ಕಾಂಗ್ರೆಸ್ ವರಿಷ್ಠರೇ ತಮ್ಮ ಮಡಿಲಲ್ಲಿಟ್ಟು ಪೊರೆಯುತ್ತಿದ್ದಾರೆ. ಪರಿಣಾಮವಾಗಿ, ಕಾಂಗ್ರೆಸ್ ಸರಕಾರ ಅಧಿಕಾರದಲ್ಲಿದ್ದರೂ, ರಾಜ್ಯದಲ್ಲಿ ಸಂಘಪರಿವಾರದ ಅಟ್ಟಹಾಸಕ್ಕೆ ಕಡಿವಾಣ ತೊಡಿಸುವಲ್ಲಿ ಸರಕಾರ ವಿಫಲವಾಗುತ್ತಿದೆ. ಕರಾವಳಿಯಲ್ಲಿ ಸಂಘಪರಿವಾರ ಯಾವ ಭಯವೂ ಇಲ್ಲದೆ ಕೋಮು ಉದ್ವಿಗ್ನಕಾರಿ ಕೃತ್ಯಗಳಲ್ಲಿ ತೊಡಗಿವೆ. ಯಾಕೆಂದರೆ, ಕಾಂಗ್ರೆಸ್‌ನೊಳಗಿರುವ ಆರೆಸ್ಸೆಸ್ ಚಿಂತನೆಗಳ ಹಾಲುಂಡು ಬೆಳೆದ ವಿಷದ ಹಾವುಗಳ ಇವರಿಗೆ ಬಹಿರಂಗವಾಗಿ ಧೈರ್ಯ ತುಂಬುತ್ತಿವೆ.

ಪುತ್ತೂರು ಒಂದು ಕಾಲದಲ್ಲಿ ಶಿವರಾಮಕಾರಂತ ಮೊಳಹಳ್ಳಿ ಶಿವರಾಯರಂತಹ ಸಾಹಿತಿಗಳು, ಸಹಕಾರಿಗಳಿಗಾಗಿ ರಾಜ್ಯಮಟ್ಟದಲ್ಲಿ ಗುರುತಿಸಲ್ಪಡುತ್ತಿತ್ತು. ಆದರೆ ಇಂದು ಸಂಘಪರಿವಾರದ ಕೃತ್ಯಗಳ ಕಾರಣದಿಂದ ಪುತ್ತೂರು ಗುರುತಿಸಲ್ಪಡುತ್ತಿರುವುದು ಕೋಮು ಉದ್ವಿಗ್ನಕಾರಿ ಘಟನೆಗಳಿಗಾಗಿ, ಪುತ್ತೂರು ಮಾತ್ರವಲ್ಲ, ಇಡೀ ದಕ್ಷಿಣ ಕನ್ನಡ ಜಿಲ್ಲೆಯ ಹಿರಿಮೆಯನ್ನು ತಮ್ಮ ಕೋಮು ದುಷ್ಕೃತ್ಯಗಳಿಂದ ಮಣ್ಣುಪಾಲು ಮಾಡಿದ ಹಿರಿಮೆ ಸಂಘಪರಿವಾರ ಸಂಘಟನೆಗಳಿಗೆ ಸಲ್ಲಬೇಕು. ಕಳೆದ ಬುಧವಾರ ಇದೇ ವಿಶ್ವ ಹಿಂದೂ ಪರಿಷತ್ ನೂತನ ಜಿಲ್ಲಾ ಕಾರ್ಯಾಲಯದ ಶಿಲಾನ್ಯಾಸ ಕಾರ್ಯಕ್ರಮದಲ್ಲಿ ಕಾಂಗ್ರೆಸ್‌ನ ಪುತ್ತೂರು ಶಾಸಕರಾಗಿರುವ ಅಶೋಕ್ ಕುಮಾರ್ ರೈ ಮತ್ತು ಮಾಜಿ ಶಾಸಕಿ ಶಕುಂತಳಾ ಶೆಟ್ಟಿ ಸಂಭ್ರಮದಿಂದ ಭಾಗವಹಿಸಿದರು ಮಾತ್ರವಲ್ಲ ಸಾರ್ವಜನಿಕ ಕಾರ್ಯಕ್ರಮದಲ್ಲಿ ಶಾಸಕ ಅಶೋಕ್ ಕುಮಾರ್ ರೈ ಅವರು ವಿಶ್ವ ಹಿಂದೂ ಪರಿಷತ್‌ನ ನಾಯಕ ಗೋಪಾಲ್ ಜೀ ಅವರ ಪಾದಾರವಿಂದಕ್ಕೆ ಬಿದ್ದು ಕೃತಾರ್ಥರಾದರು. ವಿಶ್ವ ಹಿಂದೂ ಪರಿಷತ್ ಸಮಗ್ರ ಹಿಂದೂ ಧರ್ಮವನ್ನು ಪ್ರತಿನಿಧಿಸುವುದಿಲ್ಲ ಎನ್ನುವುದು ಈ ಕಾಂಗ್ರೆಸ್ ನಾಯಕರಿಗೆ ತಿಳಿಯದಿರುವುದೇನೂ ಅಲ್ಲ. ಅದು ಯಾವ ರೀತಿಯಲ್ಲೂ ಧಾರ್ಮಿಕ ಸಂಘಟನೆಯಲ್ಲ ಬದಲಿಗೆ ಧಾರ್ಮಿಕ ಮುಖವಾಡವನ್ನು ಹಾಕಿರುವ ರಾಜಕೀಯ ಸಂಘಟನೆ. ಚುನಾವಣೆಯ ಸಂದರ್ಭದಲ್ಲಿ ಅದು ಯಾವ ಪಕ್ಷಕ್ಕಾಗಿ ದುಡಿಯುತ್ತದೆ ಎನ್ನುವುದು ಪುತ್ತೂರಿನ ಈ ಕಾಂಗ್ರೆಸ್ ನಾಯಕರಿಗೆ ತಿಳಿಯದ ವಿಷಯವೇನೂ ಅಲ್ಲ. ಹಿಂದೂ ಸಮಾಜೋತ್ಸವದ ಹೆಸರಿನಲ್ಲಿ ಈ ಸಂಘಟನೆಗಳು ಹಿಂದೂಧರ್ಮಕ್ಕೆ ಅಪಚಾರವೆಸಗಿದ್ದೇ ಹೆಚ್ಚು ಹಿಂದೂಧರ್ಮದ ಹಿರಿಮೆ, ಮೌಲ್ಯಗಳನ್ನು ಸಮಾಜಕ್ಕೆ ಪಸರಿಸುವ ಬದಲು, ಇತರ ಧರ್ಮಗಳ ವಿರುದ್ಧ ದ್ವೇಷಗಳನ್ನು ಬಿತ್ತುವುದು ಈ ಸಂಘಟನೆಗಳ ಅಜೆಂಡಾ ಆಗಿದೆ. ವಿಎಚ್ ಪಿಯ ಹಲವು ಕಾರ್ಯಕರ್ತರ ಮೇಲೆ ಕ್ರಿಮಿನಲ್ ಮೊಕದ್ದಮೆಗಳಿವೆ. ಇದೀಗ ಪುತ್ತೂರಿನ ಕಾಂಗ್ರೆಸ್ ಶಾಸಕರೇ ಹೋಗಿ ವಿಎಚ್ ಪಿ ನಾಯಕರ ಪಾದ ಬುಡಕ್ಕೆ ಬಿದ್ದಿರುವುದು ಪರೋಕ್ಷವಾಗಿ ಅವರ ಎಲ್ಲ ಕ್ರಿಮಿನಲ್ ಪ್ರಕರಣಗಳನ್ನು ಕಾಂಗ್ರೆಸ್ ಪಕ್ಷವೇ ಸಮರ್ಥಿಸಿದಂತಾಗಿದೆ. ಮಾನಸಿಕವಾಗಿ ನಾವು ಆರೆಸ್ಸೆಸ್ ಮತ್ತು ಸಂಘಪರಿವಾರದ ಸಿದ್ಧಾಂತವನ್ನು ಬಿಡಲು ಸಿದ್ಧವಿಲ್ಲ ಎನ್ನುವುದನ್ನು ಈ ಹಾಲಿ ಮತ್ತು ಮಾಜಿ ಶಾಸಕರು ವರಿಷ್ಠರಿಗೆ ಬಹಿರಂಗವಾಗಿ ಸ್ಪಷ್ಟಪಡಿಸಿದಂತಾಗಿದೆ. ಸಂಘಪರಿವಾರದ ಪಾದ ಬುಡಕ್ಕೆ ಬೀಳುವುದೆಂದರೆ, ಪರೋಕ್ಷವಾಗಿ ಕಾಂಗ್ರೆಸ್‌ನ ಜಾತ್ಯತೀ ಮೌಲ್ಯಗಳನ್ನು ತಿರಸ್ಕರಿಸುವುದೆಂದೇ ಅರ್ಥ ಆದರೆ ಕಾಂಗ್ರೆಸ್ ಮುಖಂಡರು ಮಾತ್ರ ಅರ್ಥವಾಗದವರಂತೆ ನಟಿಸುತ್ತಿದ್ದಾರೆ. ಬರೇ ಅಧಿಕಾರದ ಲಾಲಸೆಯಿಂದ ಕಾಂಗ್ರೆಸ್ ಸೇರ್ಪಡೆಯಾಗುವ ಬಿಜೆಪಿ ನಾಯಕರು ಒಂದೆಡೆಯಾದರೆ, 'ನಾವು ಆರೆಸ್ಸೆಸ್‌ನ ಹಾಲುಂಡು ಬೆಳೆದವರು' ಎಂದು ಬಹಿರಂಗವಾಗಿಯೇ ಘೋಷಿಸಿಕೊಂಡು ಕಾಂಗ್ರೆಸ್ ಸೇರುವ ಗುಂಪು ಇನ್ನೊಂದೆಡೆ ಇವರು ಬಿಜೆಪಿ ಬಿಟ್ಟರೂ ಆರೆಸ್ಸೆಸ್‌ನ ಸಂಘಪರಿವಾರದ ದ್ವೇಷ ಸಿದ್ಧಾಂತದ ವಿಷದ ಹಲ್ಲನ್ನು ಒಳಗೇ ಇಟ್ಟುಕೊಂಡಿರುತ್ತಾರೆ. ಇದು ಗೊತ್ತಿದ್ದೂ ಇವರನ್ನು ಕಾಂಗ್ರೆಸ್ ಪಕ್ಷ ತನ್ನ ಮಡಿಲಲ್ಲಿಟ್ಟು ಹಾಲೆರೆಯುತ್ತಿರುವುದು ವಿಪರ್ಯಾಸವಾಗಿದೆ. ಕಾಂಗ್ರೆಸ್‌ನೊಳಗಿರುವ ಇಂತಹ ಹಲವು ಮಾಜಿ ಬಿಜೆಪಿ ನಾಯಕರ ಮೂಲಕವೇ ಸಂಘಪರಿವಾರ ತನ್ನ ಬಹುತೇಕ ಕಾರ್ಯಗಳನ್ನು ಸಾಧಿಸಿಕೊಳ್ಳುತ್ತಿವೆ. ಒಂದೆಡೆ ರಾಹುಲ್ ಗಾಂಧಿಯವರು ಆರೆಸ್ಸೆಸ್ ವಿರುದ್ಧ ಬಹಿರಂಗ ಟೀಕೆಗಳ ಸುರಿಮಳೆಯನ್ನು ಹರಿಸುತ್ತಿರುವಾಗ, ಇತ್ತ ರಾಜ್ಯದಲ್ಲಿ ಆರೆಸ್ಸೆಸನ್ನು ಎದೆಯೊಳಗಿಟ್ಟುಕೊಂಡು, ಕಾಂಗ್ರೆಸ್‌ನ ಜಾತ್ಯತೀತ ಮೌಲ್ಯಗಳನ್ನು ಒಳಗಿಂದೊಳಗೆ ದ್ವೇಷಿಸುತ್ತಾ ಅಥವಾ ಆ ಬಗ್ಗೆ ಕೀಳರಿಮೆ ಪಡುತ್ತಾ ಸಂಘಪರಿವಾರದ ಜೊತೆಗೆ ಅನೈತಿಕ ಸಂಬಂಧ ಬೆಸೆದುಕೊಂಡ ನಾಯಕರ ಸಂಖ್ಯೆ ಬೆಳೆಯುತ್ತಿದೆ.

> **ಇದಕ್ಕೆ ಅತ್ಯುತ್ತಮ ಉದಾಹರಣೆಯಾಗಿ ಪುತ್ತೂರಿನಲ್ಲಿ ಕಾಂಗ್ರೆಸ್ ಮುಖಂಡರು ಬಹಿರಂಗವಾಗಿ ತಮ್ಮ ನಿಷ್ಠೆಯನ್ನು ಸಂಘಪರಿವಾರ ನಾಯಕರಿಗೆ ಅರ್ಪಿಸಿ, ಕಾಂಗ್ರೆಸ್ ವರಿಷ್ಠರಿಗೆ ಸಾರ್ವಜನಿಕವಾಗಿ ಸವಾಲು ಹಾಕಿದ್ದಾರೆ. ಘಟನೆ ನಡೆದು ಮೂರು ದಿನ ಕಳೆದರೂ ಈ ಬಗ್ಗೆ ಕಾಂಗ್ರೆಸ್ ನಾಯಕರೆಂದು ಕರೆಸಿಕೊಂಡವರು ಸಣ್ಣ ಆಕ್ಷೇಪವನ್ನೂ ವ್ಯಕ್ತಪಡಿಸಿಲ್ಲ ಇವರ ಮೌನ, ಕಾಂಗ್ರೆಸ್‌ನ ಇತರ ನಾಯಕರು ಆರೆಸ್ಸೆಸ್‌ನ ಸೋದರ ಸಂಘಟನೆಗಳ ಜೊತೆಗೆ ಅಧಿಕೃತವಾಗಿ ಗುರುತಿಸಿಕೊಳ್ಳಲು ಪರೋಕ್ಷ ಕುಮ್ಮಕ್ಕನ್ನು ನೀಡಿದೆ.**

# ರಾಮಾಯಣ



## ತಾಟಕಿಯ ವೃತಾಂತ

• ಹಿಂದಿನ ಸಂಚಿಕೆಯಿಂದ 16ನೆಯ ಅಧ್ಯಾಯ

ಬ್ರಹ್ಮ ಕ್ಷತ್ರಿಯ ವೈಶ್ಯ ಶೂದ್ರರೆಂಬ ನಾಲ್ಕು ಜಾತಿಗಳಿಗೂ ಹಿತವನ್ನು ಮಾಡುವುದಕ್ಕಾಗಿಯೂ ಪ್ರಜೆಗಳನ್ನು ರಕ್ಷಿಸುವುದಕ್ಕಾಗಿಯೂ ಜಗತ್ತಿಗೆ ಉಪದ್ರವವನ್ನು ಮಾಡುವ ಪ್ರಾಣಿಯನ್ನು ಸಂಹರಿಸಬೇಕು. ರಾಜ್ಯಭಾರವನ್ನು ವಹಿಸಿದವರು ರಾಜ್ಯರಕ್ಷಣಾರ್ಥವಾಗಿ, ಕೊಲ್ಲುವುದಕ್ಕೆ ಯೋಗ್ಯರಾದರೂ ಅಯೋಗ್ಯರಾದರೂ ಅಧರ್ಮಿಗಳಾದವರನ್ನು ಸಂಹರಿಸಬೇಕು ಎಂಬ ಶಾಸ್ತ್ರವುಂಟು ; ತಾಟಕಿಯಲ್ಲಿ ಧರ್ಮವೆಂಬುದು ಲೇಶವೂ ಇಲ್ಲ ಅಧರ್ಮವೇ ಇವಳ ಸ್ವಭಾವ ; ಇವಳನ್ನು ಕೊಂದರೆ ಸ್ತ್ರೀವಧೆಯೆಂಬ ದೋಷವು ಬರುವುದಿಲ್ಲ. ಪೂರ್ವದಲ್ಲಿ ದೇವೇಂದ್ರನು ಭೂಮಿಯನ್ನು ಸಂಹರಿಸಲಿಚ್ಚಿಸಿದ ಮಂಥರೆ ಎಂಬ ಸ್ತ್ರೀಯನ್ನು ಸ್ತ್ರೀಯೆಂದು ನೋಡದೆ ಸಂಹರಿಸಿದನು ಬೃಗುಮುನೀಶ್ವರನ ಹೆಂಡತಿಯಾದ ಶುಕ್ರಾಚಾರನ ತಾಯಿಯು ಲೋಕದಲ್ಲಿ ಇಂದ್ರನಿಲ್ಲದ ಹಾಗೆ ಮಾಡಬೇಕೆಂದು ತಪಸ್ಸು ಮಾಡುತ್ತಿರಲು, ಅವಳನ್ನು ನಾರಾಯಣನು ಸಂಹರಿಸಿದನು ಈ ಪ್ರಕಾರದಲ್ಲಿ ಅನೇಕ ಮಂದಿ ರಾಯರು ಅನೇಕ ದುಷ್ಟಸ್ತ್ರೀಯರನ್ನು ಸ್ತ್ರೀವಧೆಯೆಂದು ನೋಡದೆ ಸಂಹರಿಸಿದರು. ಆದಕಾರಣ ನೀನು ಈ ಸ್ತ್ರೀವಧೆಯನ್ನು ಮಾಡಬಹುದು. ಕೃಪಾಳುತ್ವವನ್ನು ಬಿಟ್ಟು ನನ್ನ ಮಾತನ್ನು ಕೇಳಿ ತಾಟಕಿಯನ್ನು ಸಂಹರಿಸು ಎಂದು ಹೇಳಿದನು.

### ತಾಟಕಿಯ ಸಂಹಾರ

ಅನಂತರ ರಘುನಾಥನು ವಿಶ್ವಾಮಿತ್ರಮುನಿಯ ವಾಕ್ಯವನ್ನು ಅಂಗೀಕರಿಸಿ ಕೈ ಮುಗಿದುಕೊಂಡು ಆತನನ್ನು ಕುರಿತು ಮುನೀಶ್ವರರೆ, ನನ್ನ ತಂದೆಯಾದ ದಶರಥರಾಯನು ನನ್ನನ್ನು ನಿಮ್ಮ ಸಂಗಡ ಕಳುಹಿಸುವಾಗ ಅಯೋಧ್ಯಾಪಟ್ಟಣದಲ್ಲಿ ನಮ್ಮ ಗುರುಗಳಾದ ವಾಸುದೇವಾದಿ ಮುನೀಶ್ವರರ ಸನ್ನಿಧಿಯಲ್ಲಿಯೂ ನಮ್ಮ ತಾಯಂದಿರ ಸಮೀಪದಲ್ಲಿಯೂ ನನ್ನನ್ನು ಕುರಿತು ★ ವಿಶ್ವಾಮಿತ್ರಮುನೀಶ್ವರರು ಯಾವ ಪ್ರಕಾರದಲ್ಲಿ ನಿರೂಪಂಗೊಡುವರೋ ಆ ಪ್ರಕಾರದಲ್ಲಿ ಅವರ ಆಜ್ಞೆಯನ್ನು ನಿರ್ವಹಿಸು ' ಎಂದು ಆಜ್ಞಾಪಿಸಿದ್ದರಿಂದ ನಿಮ್ಮ ವಾಕ್ಯವನ್ನು ನಾನು ಮಾರು ವುದಿಲ್ಲ.

ಮುಂದುವರಿಯುವುದು...

# ಕನ್ನಡ 2300 ವರ್ಷಗಳ ಇತಿಹಾಸವುಳ್ಳ ಅತಿ ಪ್ರಾಚೀನ ಭಾಷೆ

• ಉದಯವಾಹಿನಿ, ವಿಶೇಷ

ನನ್ನ ನುಡಿ ಕನ್ನಡ, ನನ್ನ ನಾಡು ಕರ್ನಾಟಕ ಎಂಬ ಹೆಮ್ಮೆ ಸದಾ ಜಾಗೃತವಾಗಿರಲಿ. ಕನ್ನಡ 2300 ವರ್ಷಗಳ ಇತಿಹಾಸವುಳ್ಳ ಅತಿ ಪ್ರಾಚೀನ ಭಾಷೆ ಎಂಬ ಅರಿವು ನಿಮ್ಮಲ್ಲಿ ಸದಾ ಇರಲಿ.

ನಮ್ಮ ಸಂಸ್ಕೃತಿ ಭಾರತದ ಅತ್ಯುತ್ತಮ ಸಂಸ್ಕೃತಿಗಳಲ್ಲೊಂದು ಎಂಬುದನ್ನು ನೆನಪಿಡಿ, ಒಂದು ಕಾಲಘಟ್ಟದಲ್ಲಿ ಮಧ್ಯ ಭಾರತದ ವರೆಗೆ ಕರ್ನಾಟಕ ವ್ಯಾಪಿಸಿತ್ತು.ನಾನು ಮೊದಲು ಕನ್ನಡಿಗ, ನಂತರ ಭಾರತೀಯ ಎಂಬುದೇ ನಿಜವಾದ ದೇಶಪ್ರೇಮ, ನಾಡ ಪ್ರೇಮ, ದೇಶಪ್ರೇಮ ಎರಡೂ ಪರಸ್ಪರ ವಿರೋಧಿಗಳಲ್ಲ.ಮನೆಯ ಒಳಗೆ, ಹೊರಗೆ, ಎಲ್ಲಾ ಕಡೆಯೂ, ಕನ್ನಡದಲ್ಲೇ ಮಾತನಾಡಿ. ಮಾತಿನ ಮಧ್ಯೆ ಬೇರೆ ಭಾಷೆಯ ಪದಗಳೂ ವಾಕ್ಯಗಳೂ ನುಸುಳಿ ಬಂದರೆ ಯೋಚಿಸಬೇಡಿ, ಅನ್ಯ ಭಾಷಿಕರು ಕನ್ನಡ ಮಾತನಾಡುವುದಿಲ್ಲ ಎಂದು ಗೊಣಗ ಬೇಡಿ. ನೀವು ಅವರೊಡನೆ ಕನ್ನಡದಲ್ಲೇ ಮಾತನಾಡಿ

ಅನಿವಾರ್ಯವಾಗಿ ಅವರು ಕನ್ನಡ ಕಲಿಯುವ ವಾತಾವರಣ ನಿರ್ಮಿಸಿ, ಇನ್ನೊಬ್ಬ ವ್ಯಕ್ತಿಗೆ ನಿಮ್ಮ ನುಡಿ ಅರ್ಥವಾಗುವುದಿಲ್ಲವೆಂದು ಖಚಿತವಾಗುವ ವರೆಗೆ ಕನ್ನಡ ದಲ್ಲೇ ಮಾತನಾಡಿ, ಮಾತನಾಡುವಾಗ ಅನಗತ್ಯವಾಗಿ ಇಂಗ್ಲಿಷ್ ಪದಗಳನ್ನು ಬಳಸಬೇಡಿ. ಕರ್ನಾಟಕದಲ್ಲಿ ನೆಲೆಸಿರುವ ವ್ಯಕ್ತಿ ಕನ್ನಡವನ್ನು ಕಲಿತಿರದಿದ್ದರೆ ಕನ್ನಡವನ್ನು ಕಲಿಯಬೇಕು ಎಂಬುದನ್ನು ಸೌಜನ್ಯದಿಂದ ತಿಳಿಸಿ; ಅವರಿಗೆ ಕನ್ನಡವನ್ನು ಕಲಿಸಿ. ಅವರು ತಪ್ಪು ತಪ್ಪಾಗಿ ಕನ್ನಡದಲ್ಲಿ ಸಂಭಾಷಿಸಿದರೆ, ಭಾಷಣ ಮಾಡಿದರೆ ಹಿಗ್ಗಿ ಪ್ರೋತ್ಸಾಹಿಸಿ,

ಮನೆಗೆ ಕನ್ನಡ ದಿನಪತ್ರಿಕೆ, ವಾರಪತ್ರಿಕೆ, ಮಾಸಿಕ ತರಿಸಿ ಇಂಗ್ಲಿಷ್ ಪತ್ರಿಕೆ ಅನಿವಾರವಾದರೆ ಮಾತ್ರ ತರಿಸಿ; ಕನ್ನಡ ಪತ್ರಿಕೆ ಕಡ್ಡಾಯವಾಗಿ ತರಿಸಿ. ನಿಮ್ಮ ಬಂಧುಗಳ ಗೆಳೆಯರ ಮನೆಗಳಲ್ಲೂ ತರಿಸಲು ಪ್ರೋತ್ಸಾಹಿಸಿ, ಕನ್ನಡದ ಕಿರುಪತ್ರಿಕೆಗಳಿಗೆ ಚಂದಾದಾರರಾಗಿ ಪ್ರೋತ್ಸಾಹಿಸಿ.



> ನಾಡ ಪ್ರೇಮ, ದೇಶಪ್ರೇಮ ವಿರೋಧಿಗಳಲ್ಲ.

- ಮಕ್ಕಳನ್ನು ಕನ್ನಡ ಶಾಲೆಗೆ ಕಳಿಸಿ, ಅವರಿಗೆ ಮನೆಯಲ್ಲಿ ಕನ್ನಡ ಚಿತ್ರ ಪುಸ್ತಕ, ಕಥೆ ಪುಸ್ತಕ ಓದಲು ಪ್ರೋತ್ಸಾಹಿಸಿ.
- ಮಕ್ಕಳಿಗೆ ಕರ್ನಾಟಕದ ಬಗ್ಗೆ ಪ್ರೀತಿ ಅಭಿಮಾನ ಮೂಡಿ ಬರುವಂತೆ ವಿಷಯ ತಿಳಿಸಿ; ಕತೆ ಹೇಳಿ; ನಾಡು, ನುಡಿ, ಸಾಹಿತ್ಯ, ಸಂಸ್ಕೃತಿಗಳ ಪುಸ್ತಕಗಳನ್ನು ಓದಿ ಹೇಳಿ.
- ಕನ್ನಡ ಪುಸ್ತಕಗಳನ್ನು ಕೊಂಡು ಮನೆಯಲ್ಲಿ ಒಂದು ಚಿಕ್ಕ ಗ್ರಂಥಾಲಯವನ್ನು ರೂಪಿಸಿ. ಅಲ್ಲಿ ಕನ್ನಡ ನಿಘಂಟುಗಳು, ವಿಶ್ವಕೋಶಗಳು ಇರಲಿ.

ವ್ಯಾಪಾರ-ವಹಿವಾಟು ನಡೆಸುವಾಗ, ಪದಾರ್ಥಗಳನ್ನು ಖರೀದಿಸುವಾಗ ಕನ್ನಡಿಗರ ಅಂಗಡಿಗಳಿಗೆ ಹೋಗಿ, ಕರ್ನಾಟಕದಲ್ಲಿ ತಯಾರಾದ, ಕನ್ನಡಿಗರು ತಯಾರಿಸಿದ ಪದಾರ್ಥಗಳನ್ನು ಕೊಂಡು ಪ್ರೋತ್ಸಾಹಿಸಿ. ಹಣ್ಣು-ತರಕಾರಿ ಮಾರುವವರು, ಮನೆಗೆ ಬಂದು ವ್ಯಾಪಾರ ಮಾಡುವ ಜನರೊಂದಿಗೆ ಕನ್ನಡದಲ್ಲೇ ಮಾತನಾಡಿ.

ನಿಮ್ಮ ಮಕ್ಕಳನ್ನು, ನಿಮಗೆ ಗೊತ್ತಿರುವ ಮಕ್ಕಳನ್ನು ಐ.ಎ.ಎಸ್, ಐ.ಪಿ.ಎಸ್ ಮೊದಲಾದ ಅಖಿಲ ಭಾರತ ಸ್ಪರ್ಧಾತ್ಮಕ ಪರೀಕ್ಷೆಗಳಿಗೆ ಸ್ಪರ್ಧಿಸಲು ಪ್ರೋತ್ಸಾಹಿಸಿ, ಆಕಾಶವಾಣಿ, ದೂರದರ್ಶನಗಳಲ್ಲಿ ಕನ್ನಡ ಕಾರ್‍ಯಕ್ರಮಗಳನ್ನು ಕೇಳುವುದಕ್ಕೆ ನೋಡುವುದಕ್ಕೆ ಆದ್ಯತೆ ಇರಲಿ. ಡಿ ಅಲ್ಲಿನ ಕಾರ್‍ಯಕ್ರಮಗಳು ಕಳಪೆಯಾಗಿದ್ದರೆ ಅವುಗಳ ನಿರ್ದೇಶಕರಿಗೆ ಪತ್ರ ಬರೆದು ತಿಳಿಸಿ.

ಕನ್ನಡ ಚಲನಚಿತ್ರಗಳನ್ನು ನೋಡಿ, ಕನ್ನಡ ಧ್ವನಿಮುದ್ರಿಕೆಗಳನ್ನು ಕೊಂಡುಕೊಳ್ಳಿ, ಕನ್ನಡ ವಾಹಿನಿಗಳನ್ನೇ ನೋಡಿ. ರೀಮೇಕ್ ಚಿತ್ರ, ಕನ್ನಡ ಸಂಸ್ಕೃತಿಗೆ ಹೊಂದದ, ಸಭ್ಯತೆಯ ಎಲ್ಲೆ ಮೀರಿದ ಚಿತ್ರಗಳನ್ನು ತಿರಸ್ಕರಿಸಿ. ನಿಮ್ಮ ಅರ್ಜಿಗಳೆಲ್ಲ ಕನ್ನಡದಲ್ಲಿರಲಿ, ಬ್ಯಾಂಕ್ ವಹಿವಾಟು ಕನ್ನಡದಲ್ಲಿರಲಿ, ಎಲ್ಲಾ ಕಡೆಗೂ ಕನ್ನಡದಲ್ಲೇ ರುಜುಮಾಡಿರಿ. ನಿಮ್ಮ ವ್ಯವಹಾರ ಇರುವಲ್ಲೆಲ್ಲ ಸಂಬಂಧ ಪಟ್ಟವರಿಗೆ ಅಧಿಕೃತ ಅರ್ಜಿ ಸಲ್ಲಿಸಿ ನಿಮ್ಮ ಸಹಿಯನ್ನು ಕನ್ನಡಕ್ಕೆ ಬದಲಿಸಿಕೊಳ್ಳಿರಿ ಇದಕ್ಕೆ ಕಾನೂನಿನ ಯಾವ ತೊಡಕೂ ಇಲ್ಲ

- ಮುಂದುವರೆಯುತ್ತದೆ

# ಸರ್ಕಾರಿ ಜಮೀನು ಒತ್ತುವರಿ ಪ್ರಕರಣ: ವರದಿಗೆ ಹೈಕೋರ್ಟ್ ಆದೇಶ

• ಉದಯವಾಹಿನಿ, ಬೆಂಗಳೂರು



ಉದಯವಾಹಿನಿ ಚಿತ್ರ

ಕೇಂದ್ರ ಸಚಿವ ಎಚ್.ಡಿ. ಕುಮಾರಸ್ವಾಮಿ ಹಾಗೂ ಅವರ ಸಂಬಂಧಿ ಮಾಜಿ ಶಾಸಕ ಡಿ.ಸಿ. ತಮ್ಮಣ್ಣ ಮತ್ತಿತರರು ರಾಮನಗರ ಜಿಲ್ಲೆ ಬಿಡದಿ ಹೋಬಳಿಯ ಕೇತಗಾನಹಳ್ಳಿಯಲ್ಲಿ ಸರ್ಕಾರಿ ಜಮೀನು ಒತ್ತುವರಿ ಮಾಡಿದ್ದಾರೆ ಎಂಬ ಪ್ರಕರಣಕ್ಕೆ ಸಂಬಂಧಿಸಿದಂತೆ ಸಮಗ್ರ ವರದಿ ಸಲ್ಲಿಸಲು ರಾಜ್ಯ ಸರ್ಕಾರಕ್ಕೆ ಹೈಕೋರ್ಟ್ ನಿರ್ದೇಶಿಸಿದೆ.

ಈ ಭೂಕಬಳಿಕೆ ಪ್ರಕರಣಕ್ಕೆ ಸಂಬಂಧಿಸಿದಂತೆ ವಿಸ್ತೃತ ತನಿಖೆ ನಡೆಸಿ ವರದಿ ಸಲ್ಲಿಸುವಂತೆ ಲೋಕಾಯುಕ್ತರು ಹೊರಡಿಸಿರುವ ಆದೇಶ ಜಾರಿಗೊಳಿಸುವಂತೆ ಹೈಕೋರ್ಟ್ ಈ ಹಿಂದೆ ಆದೇಶಿಸಿತ್ತು. 'ಈ ಆದೇಶ ಜಾರಿಗೊಳಿಸುವಲ್ಲಿ ರಾಜ್ಯ ಸರ್ಕಾರ ವಿಫಲವಾಗಿದೆ' ಎಂದು ಆಕ್ಷೇಪಿಸಿ ಎಸ್.ಆರ್.ಹಿರೇಮಠ ನೇತೃತ್ವದ ಸಮಾಜ ಪರಿವರ್ತನಾ ಸಮುದಾಯ ನ್ಯಾಯಾಂಗ ನಿಂದನೆ ಅರ್ಜಿ ಸಲ್ಲಿಸಿದೆ. ಈ ಅರ್ಜಿಯನ್ನು ನ್ಯಾಯಮೂರ್ತಿ ಕೆ.ಸೋಮಶೇಖರ್ ನೇತೃತ್ವದ ವಿಭಾಗೀಯ ನ್ಯಾಯಪೀಠ ಗುರುವಾರ ವಿಚಾರಣೆ ನಡೆಸಿತು. ವಿಚಾರಣೆ ವೇಳೆ ಸರ್ಕಾರಿ ವಕೀಲರು, ನ್ಯಾಯಾಲಯ ಅನುಮತಿ ನೀಡಿದರೆ ಹೊಸದಾಗಿ ತನಿಖೆ ನಡೆಸಲಾಗುವುದು. ತನಿಖೆಗಾಗಿ ನ್ಯಾಯಾಲಯ ಸೂಚಿಸಿದವರನ್ನೇ ನೇಮಕ ಮಾಡಲಾಗುವುದು. ಇದರ ಮೇಲೆ ನ್ಯಾಯಾಲಯ ನಿಗಾ ಇರಿಸಬಹುದು ಎಂದರು. ಇದಕ್ಕೆ ಸರ್ಕಾರಿ ವಕೀಲರು, ಪ್ರಕರಣ ಕುರಿತು ಇದುವರೆಗೆ ರಾಜ್ಯ ಸರ್ಕಾರದಿಂದ ನ್ಯಾಯಾಲಯಕ್ಕೆ 11 ಪ್ರಮಾಣಪತ್ರ ಸಲ್ಲಿಕೆಯಾಗಿವೆ. ಅವುಗಳನ್ನು ಅಧ್ಯಯನ ಮಾಡಿ ಹೊಸದಾಗಿ ಸಮಗ್ರವಾದ ವರದಿಯೊಂದನ್ನು ನ್ಯಾಯಾಲಯಕ್ಕೆ ಸಲ್ಲಿಸಲಾಗುವುದು. ಅದಕ್ಕಾಗಿ ಮೂರು ವಾರ ಕಾಲಾವಕಾಶ ನೀಡಬೇಕು' ಎಂದು ಕೋರಿದರು. ವಾದ- ಪ್ರತಿವಾದ ಆಲಿಸಿದ ನ್ಯಾಯಪೀಠ, ಪ್ರಕರಣದ ಕುರಿತು ಹೊಸದಾಗಿ ತನಿಖೆ ನಡೆಸಲು ಅನುಮತಿ ನಿರಾಕರಿಸಿತು. ಆದರೆ, ರಾಜ್ಯ ಸರ್ಕಾರ ಸಲ್ಲಿಸಿರುವ 11 ಪ್ರಮಾಣ ಪತ್ರಗಳನ್ನು ಅಧ್ಯಯನ ಮಾಡಿ ಸಮಗ್ರ ವರದಿ ಸಲ್ಲಿಸುವಂತೆ ಸರ್ಕಾರಿ ವಕೀಲರಿಗೆ ಸೂಚಿಸಿ ವಿಚಾರಣೆಯನ್ನು ನವೆಂಬರ್ 20ಕ್ಕೆ ಮುಂದೂಡಿತು.

> **ಇದನ್ನು ತೀವ್ರವಾಗಿ ಆಕ್ಷೇಪಿಸಿದ ಸಮಾಜ ಪರಿವರ್ತನಾ ಸಮುದಾಯ ಪರ ವಕೀಲರು, 'ರಾಮನಗರ ಜಿಲ್ಲೆಯ ಹಿಂದಿನ ಮೂವರು ಜಿಲ್ಲಾಧಿಕಾರಿಗಳು ನ್ಯಾಯಾಲಯದ ನಿರ್ದೇಶನದಂತೆ ಪ್ರಾಮಾಣಿಕವಾಗಿ ತನಿಖೆ ನಡೆಸಿದ್ದಾರೆ. ಇದನ್ನು ಅನುಷ್ಠಾನಗೊಳಿಸಲು ನಂತರ ಬಂದ ಸರ್ಕಾರಗಳು ಮನಸ್ಸು ಮಾಡಿಲ್ಲ. ಯಾವ ಕಾರಣಕ್ಕಾಗಿ ಹೊಸದಾಗಿ ತನಿಖೆ ನಡೆಸಬೇಕು ಎಂದು ಪ್ರಶ್ನಿಸಿದರು.**

# ಸಾಮಾಜಿಕ ಕಳಕಳಿ



ಹೆಚ್.ಎಸ್.ಪ್ರತಿಮಾ ಹಾಸನ್
ಸಾಹಿತಿ,ಶಿಕ್ಷಕಿ,ಸಾಮಾಜಿಕ ಚಿಂತಕಿ.ಹಾಸನ

## ದಿನಕ್ಕೊಂದು ಮುಕ್ತಕ -7



ಉದಯವಾಹಿನಿ, ವಿಶೇಷ

ಭಕ್ತಿಯಲಿ ಬೇಡುವೆನು ಬೇಡಿದನು ನೀಡೆಂದು
ಶಕ್ತಿಯನು ನೀಡುತಲಿ ನಡೆಸುತಿರಲು
ಯುಕ್ತಿಯಲಿ ನಡೆಯುತಲಿ ಹೋಗುತಿರು ದಾರಿಯಲಿ
ಮುಕ್ತಿಯನು ಬೇಡುವೆನು ಲಕ್ಷ್ಮಿ ದೇವಿ.....

**ಭಾವಾರ್ಥ:** ಈ ಮೇಲಿನ ಮುಕ್ತಕದಂತೆ ಭಕ್ತಿ ಎಂಬುದು ಒಂದು ವಿಶೇಷವಾದಂತಹ ಸನ್ಮಾರ್ಗಕ್ಕೆ ಕಾರಣ. ಭಕ್ತಿಯಿಂದ ನಾವು ಬೇಡಿದ್ದನ್ನು ದೇವರು ಕೊಡುತ್ತಾರೆ. ಎಂಬುದು ನಮ್ಮ ನಂಬಿಕೆ. ಅಂತಹ ನಂಬಿಕೆಯನ್ನು ನಾವು ಉಳಿಸಿಕೊಳ್ಳಬೇಕು. ದೈವದ ಶಕ್ತಿಯ ಮುಂದೆ ಯಾವ ಶಕ್ತಿಯು ಇಲ್ಲ. ಆ ಶಕ್ತಿಯನ್ನು ಭಕ್ತಿಯಿಂದ ಪಡೆಯಬೇಕು. ಬುದ್ಧಿಯನ್ನು ಓಡಿಸುತ ದಾರಿಯಲ್ಲಿ ನಡೆಯಬೇಕಾದರೆ ದೇವರನ್ನು ನೆನೆಯುತ್ತ ಹೋಗುವುದು ನಮ್ಮ ಹಿಂದೂ ಸಂಪ್ರದಾಯದ ಒಂದು ವಿಧಾನ. ಯಾವುದೋ ಒಂದು ಶಕ್ತಿ ಇದೆ ಆ ಶಕ್ತಿ ದೈವವೆಂದು ನಂಬಿದ್ದೇವೆ. ಯಾರು ಇಲ್ಲದಿದ್ದರೆ ದೈವ ಇರುತ್ತದೆ ಎಂದು ನಮ್ಮ ನಂಬಿಕೆ.

ಭಕ್ತಿ,ಯೋಗ ಹಿಂದೂಧರ್ಮದಲ್ಲಿ ಹೇಳಲ್ಪಟ್ಟ ನಾಲ್ಕು ಯೋಗಗಳಲ್ಲಿ ಒಂದು. ಭಕ್ತಿ ಎಂದರೆ ಪ್ರೀತಿ,ಸೇವೆ ಎಂದು ಅರ್ಥ. ದೇವರನ್ನು ಪ್ರೀತಿಸುತ್ತಾ, ಜೀವನದ ಸಕಲ ಕೆಲಸ ಕಾರ್ಯಗಳನ್ನು ದೇವರ ಸೇವೆ ಎಂದು ನಡೆಸಿ ಕೊನೆಗೆ ಪ್ರೀತಿಯ ಮೂಲಕವೇ ಭಗವಂತನನ್ನು ಸೇರಲು ಇರುವ ಸಾಧನಾ ಮಾರ್ಗವೇ ಭಕ್ತಿ ಎಂದು ತಿಳಿಯಬೇಕಿದೆ.

ಪ್ರತಿಯೊಬ್ಬರೂ ದೇವರನ್ನು ನೆನೆಯುತ್ತಾ ದೇವರ ಭಕ್ತಿಯಲ್ಲಿ ಮಗ್ನರಾಗುತ್ತಾರೆ. ದೇವರಿಲ್ಲದೆ ಏನು ಇಲ್ಲ ಎಂಬುದನ್ನು ಪ್ರತಿಯೊಬ್ಬನು ಅರಿತಿರುತ್ತಾನೆ. ಆದರೆ ಯಾವುದೇ ಕಷ್ಟ ಬಂದರೂ ಸುಖ ಬಂದರೂ ಸಹ ಆ ದೇವರಲ್ಲಿ ಹೇಳಿಕೊಳ್ಳುತ್ತಾರೆ. ಯಾವುದೋ ಕಷ್ಟ ಬಂದಾಗ ಯಾಕೆ ನನಗೆ ಇಷ್ಟೊಂದು ಕಷ್ಟ ಬಂತು ಎಂದು ಕೇಳುತ್ತಾರೆ.

# 7 ವರ್ಷ ಶಿಕ್ಷೆ ನೀಡಿದ ಕೋರ್ಟ್ ಆದೇಶ ತಿಳಿದು ಶಾಕ್ ಆಯ್ತು : ಡಿಸಿಎಂ

• ಉದಯವಾಹಿನಿ, ಬೆಂಗಳೂರು



ಬೆಲೆಕೇರಿ ಅದಿರು ನಾಪತ್ತೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕಾಂಗ್ರೆಸ್ ಶಾಸಕ ಸತೀಶ್ ಸೈಲ್‌ಗೆ ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯವು 7 ವರ್ಷಗಳ ಕಾಲ ಕಠಿಣ ಕಾರಾಗೃಹ ಶಿಕ್ಷೆ ವಿಧಿಸಿದೆ.ಈ ಒಂದು ವಿಚಾರವಾಗಿ ಡಿಸಿಎಂ ಡಿಕೆ ಶಿವಕುಮಾರ್ ಪ್ರತಿಕ್ರಿಯೆ ನೀಡಿ ಕೋರ್ಟ್ ಆದೇಶ ನಿಜಕ್ಕೂ ನನಗೆ ಶಾಕ್ ನೀಡಿದೆ ಎಂದು ತಿಳಿಸಿದ್ದಾರೆ.

ಬೆಂಗಳೂರಿನಲ್ಲಿ ಮಾಧ್ಯಮಗಳೊಂದಿಗೆ ಈ ವಿಚಾರದ ಕುರಿತಾಗಿ ಪ್ರತಿಕ್ರಿಯಿಸಿದ ಅವರು, ಕಾನೂನಿಗೆ ಯಾರೇ ಆಗಲಿ ಗೌರವ ಕೊಡಬೇಕು. ಶಾಸಕ ಸತೀಶ್ ಸೈಲ್‌ಗೆ ಮೇಲ್ಮನವಿ ಸಲ್ಲಿಸಲು ಅವಕಾಶವಿದೆ. ಅವರು ಮೇಲ್ಮನವಿ ಸಲ್ಲಿಸಬಹುದು ಎನಿಸುತ್ತೆ. ಆದರೆ ಕಾನೂನಿಗೆ ಎಲ್ಲರೂ ತಲೆ ಬಾಗಬೇಕು. ಇನ್ನು ಶಾಸಕ ಸ್ಥಾನ ವಜಾ ಬಗ್ಗೆ ಕೋರ್ಟ್ ನೀಡಿರುವ ಆದೇಶದ ಬಗ್ಗೆ ಹೆಚ್ಚಿನ ಮಾಹಿತಿ ಇಲ್ಲ. ಲೀಗಲಿ ಏನು ಆಗಬೇಕೋ ಅದು ಆಗುತ್ತದೆ ಎಂದು ತಿಳಿಸಿದರು. ಬೇಲೆಕೇರಿ ಅದಿರು ನಾಪತ್ತೆ ಕೇಸ್‌ನ 6 ಪ್ರಕರಣಗಳಲ್ಲೂ ಕಾಂಗ್ರೆಸ್ ಶಾಸಕ ಸತೀಶ್ ರೈಗೆ 7 ವರ್ಷ ಜೈಲು ಎಂದು ಕೋರ್ಟ್ ಆದೇಶ ಹೊರಡಿಸಿದೆ. ಕೋರ್ಟ್ ಆದೇಶ ಕೇಳಿ ನನಗೆ ಶಾಕ್ ಆಗಿದೆ. ಅಪೀಲು ಮಾಡಲು ಶಾಸಕರಿಗೆ ಅವಕಾಶವಿದೆ. ಅವರು ಲೀಗಲ್ ಟೀಂ ಜೊತೆ ಮಾತನಾಡುತ್ತಾರೆ. ಶಾಸಕ ಸ್ಥಾನದಿಂದ ಅನರ್ಹ ಆಗುವ ಕುರಿತು ನನಗೆ ತಿಳಿದಿಲ್ಲ. ಮುಂದೆ ಏನು ಆಗುತ್ತದೆ ನೋಡೋಣ ಎಂದರು.

# ಸಚಿವರ ಪುತ್ರನಿಗೆ ಹನಿಟ್ರ್ಯಾಪ್: ಕಾಂಗ್ರೆಸ್ ನಾಯಕಿ ಪಾಟೀಲ್ ಅರೆಸ್ಟ್!

• ಉದಯವಾಹಿನಿ, ಬೆಂಗಳೂರು

ಮಾಜಿ ಸಚಿವರ ಪುತ್ರನಿಗೆ ಹನಿಟ್ರ್ಯಾಪ್ ಮಾಡಿದ್ದ ಪ್ರಕರಣಕ್ಕೆ ಸಂಬಂಪಟ್ಟಂತೆ ಕಾಂಗ್ರೆಸ್ ನಾಯಕಿಯ ಬಂಧನವಾಗಿದೆ. ಬೆಂಗಳೂರಿನ ಸಿಸಿಬಿ ಪೊಲೀಸರಿಂದ ಕಾಂಗ್ರೆಸ್ ನಾಯಕಿಯಾಗಿ ಗುರುತಿಸಿಕೊಂಡಿದ್ದ ಮಂಜುಳಾ ಪಾಟೀಲ್ ಳನ್ನು ಇದೀಗ ಬಂಧಿಸಲಾಗಿದೆ. ಬಂಧಿತ ಮಂಜುಳಾ ಪಾಟೀಲ್‌ಳನ್ನು ನಲಪಾಡ್ ಬ್ರಿಗೇಡ್‌ನ ಕಲಬುರ್ಗಿ ಘಟಕದ ಅಧ್ಯಕ್ಷೆ ಎಂದು ಹೇಳಲಾಗುತ್ತಿದೆ.

ಮಾಜಿ ಸಚಿವರ ಪುತ್ರನಿಗೆ ವಾಟ್ಸಪ್ ಕರೆ ಮಾಡಿ ಹಣಕ್ಕೆ ಡಿಮ್ಯಾಂಡ್ ಮಾಡಿದ್ದಳು. ಕಾಂಗ್ರೆಸ್ನ ಮಾಜಿ ಮಂತ್ರಿ ಪುತ್ರನಿಗೆ ಖೆಡ್ಡ ತೋಡಿ 20 ಲಕ್ಷ ಹಣಕ್ಕೆ ಬೇಡಿಕೆ ಇಟ್ಟಿದ್ದಳು ಎನ್ನಲಾಗಿದೆ.

ಈ ವೇಳೆ ಹನಿಟ್ರ್ಯಾಪ್ ವಿಚಾರ ಕೇಳಿ ಮಂಜುಳಾಗೆ ಮಾಜಿ ಸಚಿವರ ಪುತ್ರ ಉಲ್ಟಾ ಹೊಡೆದು ಖೆಡ್ಡ ತೋಡಿದ್ದ. 20 ಲಕ್ಷ ಆಗಲ್ಲ ಕಡಿಮೆ ಮಾಡಿ ಅಂತ ಮಾಜಿ ಸಚಿವರ ಪುತ್ರ ಹೇಳಿದ್ದ. ಅದಕ್ಕೆ ಮಂಜುಳ 20 ಲಕ್ಷದಲ್ಲಿ ನಯಾ ಪೈಸೆ ಸಹ ಕಡಿಮೆ ಆಗಲ್ಲ ಎಂದು ಹೇಳಿದ್ದಳು. ಇದೀಗ 20 ಲಕ್ಷ ಹಣ ಪಡೆಯುವಾಗ ಮಂಜುಳಾ ಪಾಟೀಲ್ ಸಿಸಿಬಿ ಪೊಲೀಸರಿಗೆ ರೆಡ್ ಹ್ಯಾಂಡ್ ಆಗಿ ಸಿಗಿ ಬಿದ್ದಿದ್ದಾಳೆ. ಬೆಂಗಳೂರಿನಲ್ಲಿ ಸಿಸಿಬಿ ಪೊಲೀಸರಿಂದ ಮಂಜುಳಾ ಪಾಟೀಲ್ ಹಾಗೂ ಆಕೆಯ ಪತಿಯನ್ನು ಅರೆಸ್ಟ್ ಮಾಡಲಾಗಿದೆ. ಹನಿ ಟ್ರಾಪರ್ ಮಂಜುಳಾ ಆಕೆಯ ಪತಿಯ ಬಂಧನವಾಗಿದೆ. ಮೊದಲಿಗೆ ವಾಟ್ಸಪ್‌ನಲ್ಲಿ ಸೆಕ್ಸ್ ಚಾಟ್ ಮಾಡಿದ ಮಂಜುಳಾ ಪಾಟೀಲ್ ಖಾಸಗಿ ಕ್ಷಣದ ವಿಡಿಯೋ ಚಿತ್ರೀಕರಿಸಿ ಬ್ಲಾಕ್ ಮೇಲ್‌ಗೆ ಮುಂದಾಗಿದ್ದಳು ಎನ್ನಲಾಗಿದೆ. ಬಳಿಕ ವಿಡಿಯೋ ಹಾಗೂ ಫೋಟೋ ಕಳುಹಿಸಿ ಇಪ್ಪತ್ತು ಲಕ್ಷಕ್ಕೆ ಬೇಡಿಕೆ ಇಟ್ಟಿದ್ದಳು. ಇದೀಗ 20 ಲಕ್ಷ ಪಡೆಯುವಾಗ ಸಿಸಿಬಿ ಪೊಲೀಸರಿಗೆ ಸಿಗಿ ಬಿದ್ದಿದ್ದಾಳೆ.



ಉದಯವಾಹಿನಿ ಚಿತ್ರ

# ಸಿಎಂ ರೇವಂತ್ ರೆಡ್ಡಿ ಸಮ್ಮುಖದಲ್ಲಿ ಒಡಂಬಡಿಕೆ

## ಯಂಗ್ ಇಂಡಿಯಾ ಸ್ಕಿಲ್ಸ್ ಯೂನಿವರ್ಸಿಟಿಗೆ ಎಂಇಐಎಲ್ ಫೌಂಡೇಶನ್ ನಿಂದ 200 ಕೋಟಿ ರೂ.

• ಉದಯವಾಹಿನಿ, ವಿಶೇಷ



ಉದಯವಾಹಿನಿ ಚಿತ್ರ

ಹೈದರಾಬಾದ್, ತೆಲಂಗಾಣದ ಯುವಕರನ್ನು ಸಬಲೀಕರಣಗೊಳಿಸುವ ನಿಟ್ಟಿನಲ್ಲಿ ಮಹತ್ವದ ಹೆಜ್ಜೆ ಇರಿಸಿರುವ ದೇಶದ ಪ್ರಮುಖ ಮೂಲಸೌಕರ್ಯ ಸಂಸ್ಥೆಯಾಗಿರುವ ಮೇಘಾ ಎಂಜಿನಿಯರಿಂಗ್, ಇನ್ಫ್ರಾಸ್ಟ್ರಕ್ಚರ್ಸ್ ಲಿಮಿಟೆಡ್ ಎಂಇಐಎಲ್‌ನ ಸಾಮಾಜಿಕ ಹೊಣೆಗಾರಿಕೆಯ ಭಾಗವಾಗಿ ಎಂಇಐಎಲ್ ಫೌಂಡೇಶನ್ನಿಂದ ಹೈದರಾಬಾದ್‌ನಲ್ಲಿ ಯಂಗ್ ಇಂಡಿಯಾ ಸ್ಕಿಲ್ಸ್ ಯೂನಿವರ್ಸಿಟಿ ನಿರ್ಮಿಸಲು 200 ಕೋಟಿ ರೂ. ದೇಣಿಗೆ ನೀಡುವ ಒಡಂಬಡಿಕೆ ಹಸ್ತಾಕ್ಷರ ಮಾಡಿದೆ. ತೆಲಂಗಾಣ ಸರ್ಕಾರದ ಸಹಭಾಗಿತ್ವದಲ್ಲಿ ಅಭಿವೃದ್ಧಿ ಪಡಿಸಲಾದ ಈ ವಿಶ್ವವಿದ್ಯಾಲಯವು ಕೌಶಲ್ಯ ಮತ್ತು ಉದ್ಯಮಶೀಲತೆಯಲ್ಲಿ ಸುಧಾರಿತ ತರಬೇತಿ ಯನ್ನು ಒದಗಿಸುವ ಮೂಲಕ ಯುವಜನರಿಗೆ ಉಜ್ವಲ ಭವಿಷ್ಯಕ್ಕೆ ಅಗತ್ಯವಾದ ಕೌಶಲ್ಯ ನೀಡಲಿದ್ದು, ಶನಿವಾರ ಎಂಇಐಎಲ್ ಈ ಸಂಬಂಧ ಯಂಗ್ ಇಂಡಿಯಾ ಕೌಶಲ್ಯ ಯೂನಿವರ್ಸಿಟಿ ಜೊತೆ ಒಡಂಬಡಿಕೆಗೆ ಸಹಿ ಹಾಕಿದೆ.

ಮುಖ್ಯಮಂತ್ರಿ ಎ.ರೇವಂತ್ ರೆಡ್ಡಿ ಅವರ ಸಮ್ಮುಖದಲ್ಲಿ ತೆಲಂಗಾಣ ರಾಜ್ಯದ ಮುಖ್ಯ ಕಾರ್ಯದರ್ಶಿ ಶಾಂತಿ ಕುಮಾರಿ, ವಿಶೇಷ ಮುಖ್ಯ ಕಾರ್ಯದರ್ಶಿ ಜಯೇಶ್ ರಂಜನ್ ಮತ್ತು ವಿಶ್ವವಿದ್ಯಾಲಯದ ಉಪಕುಲಪತಿ ವಿಎಲ್-ವಿಎಸ್‌ಎಸ್ ಸುಬ್ಬರಾವ್ ಅವರ ಸಮ್ಮುಖದಲ್ಲಿ ಈ ತಿಳುವಳಿಕೆ ಒಪ್ಪಂದಕ್ಕೆ ಸಹಿ ಹಾಕಲಾಯಿತು. ಉಪ ಮುಖ್ಯಮಂತ್ರಿ ಭಟ್ಟಿ ವಿಕ್ರಮಾರ್ಕ, ಸಚಿವರಾದ ಶ್ರೀಧರ್ ಬಾಬು, ಉತ್ತಮ್ ಕುಮಾರ್ ರೆಡ್ಡಿ, ಕೋಮಟಿರೆಡ್ಡಿ ವೆಂಕಟ್ ರೆಡ್ಡಿ, ಪೊಂಗುಲೇಟಿ ಶ್ರೀನಿವಾಸ್ ರೆಡ್ಡಿ, ಸಂಸದ ಅನಿಲ್ ಕುಮಾರ್ ಯಾದವ್ ಸೇರಿದಂತೆ ಇತರ ಪ್ರಮುಖರು ಉಪಸ್ಥಿತರಿದ್ದರು.

ಎಂಇಐಎಲ್ ನಿಯೋಗದ ನೇತೃತ್ವ ವಹಿಸಿದ್ದ ಸಂಸ್ಥೆಯ ವ್ಯವಸ್ಥಾಪಕ ನಿರ್ದೇಶಕ ಕೃಷ್ಣ ರೆಡ್ಡಿ ಅವರು, ಈ ಮಹತ್ವಾಕಾಂಕ್ಷೆಯ ಯೋಜನೆಯ ಮೂಲಕ ಯುವಕರನ್ನು ಬೆಂಬಲಿಸುವ ಸಂಸ್ಥೆಯ ದೃಷ್ಟಿಕೋನವನ್ನು ಹಂಚಿಕೊಂಡರು. ಆಗಸ್ಟ್‌ನಲ್ಲಿ, ಮುಖ್ಯಮಂತ್ರಿ ರೇವಂತ್ ರೆಡ್ಡಿ ಹೈದರಾಬಾದ್‌ನ ಹೊರವಲಯದ ಕಂದುಕುರು ಮಂಡಲದ ಮೀರ್ ಖಾನ್ ಪೇಟಾದಲ್ಲಿ 57 ಎಕರೆಯ ವಿಶಾಲವಾದ ಸ್ಥಳದಲ್ಲಿ ವಿಶ್ವವಿದ್ಯಾಲಯಕ್ಕೆ ಅಡಿಪಾಯ ಹಾಕಿದ್ದರು.

ಕೌಶಲ್ಯವೃದ್ಧಿಗೆ ನಿಟ್ಟಿನ ಈ ಉದಾರ ಬೆಂಬಲಕ್ಕಾಗಿ ಮುಖ್ಯಮಂತ್ರಿಗಳು ಎಂಇಐಎಲ್ ತಂಡವನ್ನು ಶ್ಲಾಘಿಸಿದರು ಮತ್ತು ವಿಶ್ವವಿದ್ಯಾಲಯವನ್ನು ಸುಧಾರಿತ ತರಗತಿ ಕೊಠಡಿಗಳು, ವಸತಿ ಸೌಲಭ್ಯಗಳು ಮತ್ತು ವಿದ್ಯಾರ್ಥಿಗಳಿಗೆ ಇತರ ಸೌಲಭ್ಯಗಳೊಂದಿಗೆ ಸಜ್ಜುಗೊಳಿಸುವ ಸರ್ಕಾರದ ಯೋಜನೆಯನ್ನು ವಿವರಿಸಿದರು.

ತನ್ನ ಸಾಮಾಜಿಕ ಬದ್ಧತೆಯ ಮೂಲಕ, ಎಂಇಐಎಲ್ ಫೌಂಡೇಶನ್ ಯುವಕರನ್ನು ಉನ್ನತೀಕರಿಸುವ, ಕೌಶಲ್ಯಗಳನ್ನು ಪೋಷಿಸುವ ಮುನ್ನಡೆಸಲು ಮತ್ತು ಹೊಸತನಕ್ಕೆ ಸಿದ್ಧವಾಗಿರುವ ಪೀಳಿಗೆಯನ್ನು ನಿರ್ಮಿಸುವ ಮಹತ್ವಾಕಾಂಕ್ಷೆಗೆ ಬೆಂಬಲವಾಗಿ ನಿಂತಿದೆ. ಈ ಯೋಜನೆಯು ಭಾರತದ ಯುವ ಪ್ರತಿಭೆಗಳಿಗೆ ಉಜ್ವಲ, ಸ್ವಾವಲಂಬಿ ಭವಿಷ್ಯವನ್ನು ನಿರ್ಮಿಸುವ ನಿಟ್ಟಿನಲ್ಲಿ ಅರ್ಥಪೂರ್ಣ ಹೆಜ್ಜೆಯಾಗಿದೆ.

ಈ ಕೌಶಲ್ಯ ಯೂನಿವರ್ಸಿಟಿ ಕ್ಯಾಂಪಸ್ ಅಕಾಡೆಮಿಕ್ ಬ್ಲಾಕ್, ಆಡಳಿತಾತ್ಮಕ ಬ್ಲಾಕ್, ಗ್ರಂಥಾಲಯ, ಕಂಪ್ಯೂಟರ್ ಹಬ್, ಕಾರ್ಯಾಗಾರಗಳು ಮತ್ತು ಪ್ರಯೋಗಾಲಯ ಬ್ಲಾಕ್, ವಿದ್ಯಾರ್ಥಿ ವಸತಿ ಮತ್ತು ಬೋಧಕ ವಸತಿ, ಅತಿಥಿ ಬೋಧಕ ವಸತಿ ಮತ್ತು ವಿಸಿ, ರಿಜಿಸ್ಟ್ರಾರ್ ನಿವಾಸಗಳು, ಉಪಯುಕ್ತತೆಗಳು, 700 ಆಸನಗಳ ಸಭಾಂಗಣ ಮತ್ತು ಕಾನ್ಫರೆನ್ಸ್ ಕೊಠಡಿಗಳು ಇತ್ಯಾದಿಗಳನ್ನು ಹೊಂದುವ ಮೂಲಕ ದೇಶದ ಬೃಹತ್ ಕೌಶಲ್ಯ ತರಬೇತಿ ಕೇಂದ್ರವಾಗಿ ರೂಪುಗೊಳ್ಳಲಿದೆ.

> **ಉಜ್ವಲ ಭವಿಷ್ಯಕ್ಕೆ ಅಗತ್ಯ**

# ಅದಿರು ನಾಪತ್ತೆ ಕೇಸ್ ಇನ್ನೂ ಹಲವರಿದ್ದಾರೆ, ಅವರಿಗೂ ಶಿಕ್ಷೆ ಆಗಬೇಕು

• ಉದಯವಾಹಿನಿ, ಬೆಂಗಳೂರು

ಬೆಲೆಕೇರಿ ಅದಿರು ನಾಪತ್ತೆ ಪ್ರಕರಣಕ್ಕೆ ಸಂಬಂಧಪಟ್ಟಂತೆ ಕಾಂಗ್ರೆಸ್ ಶಾಸಕ ಸತೀಶ್ ಸೈಲ್ ಗೆ ಬೆಂಗಳೂರಿನ ಜನಪ್ರತಿನಿಧಿಗಳ ನ್ಯಾಯಾಲಯವು ಏಳು ವರ್ಷಗಳ ಕಾಲ ಕಠಿಣ ಶಿಕ್ಷೆ ವಿಧಿಸಿದೆ ಈ ವಿಚಾರವಾಗಿ ಲೋಕಾಯುಕ್ತ ನಿವೃತ್ತ ನ್ಯಾ. ಸಂತೋಷ್ ಹೆಗಡೆ ಅವರು ಈ ಒಂದು ಪ್ರಕರಣದಲ್ಲಿ ಇನ್ನೂ ಹಲವರಿದ್ದಾರೆ ಅವರಿಗೂ ಶಿಕ್ಷೆ ಆಗಬೇಕು ಎಂದು ತಿಳಿಸಿದ್ದಾರೆ.



ಮಾಧ್ಯಮಗಳೊಂದಿಗೆ ಮಾತನಾಡಿದ ಅವರು, ಒಂದು ತೀರ್ಪಿನ ಮುಖಾಂತರ ತಪ್ಪು ಮಾಡಿದವರಿಗೆ ಶಿಕ್ಷೆ ಹಾಗೆ ಆಗುತ್ತದೆ ಎಂದು ತೋರಿಸುತ್ತದೆ. ಅಕ್ರಮ ಅದಿರು ಸಾಗಣೆ ಕೇಸ್ನಲ್ಲಿ ಶಿಕ್ಷೆಯಾಗಿದ್ದು ಉತ್ತಮ ಬೆಳವಣಿಗೆ ಶಿಕ್ಷೆ ಆಗಿರುವುದರಿಂದ ನ್ಯಾಯಾಂಗದ ಶಕ್ತಿ ತೋರಿಸಿ ದಂತಾಗುತ್ತದೆ. ನ್ಯಾಯಾಂಗದ ಮೇಲೆ ಜನರಿಗೆ ವಿಶ್ವಾಸ ಬಂದಿದೆ ಎಂದು ನಿವೃತ್ತ ಲೋಕಾಯುಕ್ತ ನ್ಯಾ.ಸಂತೋಷ ಹೆಗಡೆ ಪ್ರತಿಕ್ರಿಯೆ ನೀಡಿದರು. ಈ ಪ್ರಕರಣಕ್ಕೆ ಸಂಬಂಧಪಟ್ಟಂತೆ ತನಿಖೆ ನಡೆಸುವ ದೊಡ್ಡ ರಾಜಕಾರಣಿಗಳ ವಿರುದ್ಧ ತನಿಖೆಯ ವೇಳೆ ಅಡೆ-ತಡೆ ಎದುರಾಗಿತ್ತು.ನನ್ನ ಜೊತೆಗೆ ಕೆಲಸ ಮಾಡಿದಾಗ ಅಧಿಕಾರಿಗಳಿಗೆ ಇದೀಗ ಸಂತೃಪ್ತಿ ಸಿಕ್ಕಂತಾಗುತ್ತದೆ ಅಕ್ರಮದಲ್ಲಿ ಇನ್ನೂ ಹಲವರಿದ್ದಾರೆ ಅವರಿಗೂ ಶಿಕ್ಷೆ ಆಗಬೇಕು ಎಂದು ನಿವೃತ್ತ ಲೋಕಾಯುಕ್ತ ನ್ಯಾ. ಸಂತೋಷ ಹೆಗ್ಡೆ ಪ್ರತಿಕ್ರಿಯೆ ನೀಡಿದರು.

# ಇರಾನ್ ಮೇಲಿನ ದಾಳಿ ಬಳಿಕ 3 ದೇಶಗಳ ವಿಮಾನ ಸಂಚಾರ ಸ್ಥಗಿತ

## ಟೆಹರಾನ್ ಮೇಲೆ ಇಸ್ರೇಲ್ ಸೇನಾ ಪಡೆಗಳಿಂದ ಪ್ರತೀಕಾರದ ದಾಳಿ, ಇರಾನ್, ಇರಾಕ್, ಸಿರಿಯಾ ದೇಶಗಳ ವಾಯು ಪ್ರದೇಶ ಲಾಕ್‌ಡೌನ್



**ಇಸ್ರೇಲ್ ಕಾರ್ಯಾಚರಣೆ ಹೇಗಿತ್ತು?**

**ಟೆಹರಾನ್:** ಈ ತಿಂಗಳ ಆರಂಭದಲ್ಲಿ ತನ್ನ ಮೇಲೆ ಇರಾನ್ ನಡೆಸಿದ ಸುಮಾರು 200 ಖಂಡಾಂತರ ಕ್ಷಿಪಣಿಗಳ ದಾಳಿಗೆ ಇಸ್ರೇಲ್ ಸೇಡು ತೀರಿಸಿಕೊಂಡಿದೆ. ರಾಜಧಾನಿ ಟೆಹರಾನ್ ಮತ್ತು ಇತರೆ ನಗರಗಳಲ್ಲಿನ ಇರಾನ್ ಸೇನಾ ನೆಲೆಗಳಿಗೆ ತೀವ್ರ ಹಾನಿ ಮಾಡಿದೆ. ಯುದ್ಧ ವಿಮಾನಗಳು ಹಾಗೂ ಕ್ಷಿಪಣಿಗಳ ಮೂಲಕ ಇಸ್ರೇಲ್ ಈ ಕಾರ್ಯಾಚರಣೆ ನಡೆಸಿದೆ. ತನ್ನ ಬೆಂಬಲವಿರುವ ಹೆಜ್ಬೊಲ್ಲಾ ಸಂಘಟನೆಯ ಮುಖ್ಯಸ್ಥ ಹಸನ್ ನಸ್ರಲ್ಲಾ ಮತ್ತು ಇತರೆ ನಾಯಕರ ಹತ್ಯೆಗಳಿಗೆ ಪ್ರತೀಕಾರವಾಗಿ ಇಸ್ರೇಲ್ ಮೇಲೆ ಅಕ್ಟೋಬರ್ 1ರಂದು 200ಕ್ಕೂ ಅಧಿಕ ರಾಕೆಟ್ ಹಾಗೂ ಖಂಡಾಂತರ ಕ್ಷಿಪಣಿಗಳ ಸುರಿಮಳೆಗರೆಯಲಾಗಿತ್ತು. ಇಸ್ರೇಲ್ ನಡೆಸಿರುವ ಸೇಡಿನ ದಾಳಿಯಲ್ಲಿ ಉಂಟಾಗಿರುವ ಹಾನಿ ಸೀಮಿತವಾಗಿದೆ ಎಂದು ಇರಾನ್ ಹೇಳಿಕೊಂಡಿದೆ. ಆದರೆ ಇರಾನ್ ವಾಯು ಪ್ರದೇಶದಲ್ಲಿ ತನಗೆ ಈಗ ವ್ಯಾಪಕ ಸ್ವಾತಂತ್ರ್ಯ ದೊರಕಿದೆ ಎಂದು ಇಸ್ರಲ್ ಪ್ರತಿಪಾದಿಸಿದೆ. ಈ ದಾಳಿಯ ಪರಿಣಾಮವಾಗಿ ಇರಾನ್, ಇರಾಕ್ ಮತ್ತು ಸಿರಿಯಾದ ವಾಯು ಪ್ರದೇಶ ಸಂಪೂರ್ಣ ಲಾಕ್‌ಡೌನ್ ಆಗಿದೆ. ವಿಮಾನ ಸಂಚಾರ ಟ್ರ್ಯಾಕಿಂಗ್ ವೆಬ್ ಸೈಟ್ ಫ್ಲೈಟ್ ರೇಡಾರ್ 24 ಪ್ರಕಾರ, ಈ ಮೂರು ದೇಶಗಳ ವಾಯು ಪ್ರದೇಶದಲ್ಲಿ ಯಾವುದೇ ವಿಮಾನಗಳು ಹಾರಾಡುತ್ತಿಲ್ಲ. ಆದರೆ, ತಾನು ಈಗ ಮತ್ತೆ ವಿಮಾನ ಸಂಚಾರ ಆರಂಭಿಸುವುದಾಗಿ ಇರಾನ್ ಹೇಳಿಕೆ ನೀಡಿದೆ.

ಇಸ್ರೇಲ್ ತಾನು ಆಕ್ರಮಿಸಿರುವ ಗೋಲ್ಡನ್ ಹೈಟ್ಸ್ ಹಾಗೂ ಲೆಬನಾನ್ ಮೂಲಕ ರಾಜಧಾನಿ ಡಮಾಸ್ಕಸ್ ಮೇಲೆ ದಾಳಿ ನಡೆಸಿದ್ದರಿಂದ ವಾಯು ರಕ್ಷಣಾ ವ್ಯವಸ್ಥೆಯನ್ನು ಸಕ್ರಿಯಗೊಳಿಸುವಂತಾಯಿತು ಎಂದು ಸಿರಿಯಾ ತಿಳಿಸಿದೆ. ಇಸ್ರೇಲ್ ಮತ್ತು ಅಮೆರಿಕ ವಿರುದ್ಧ ಇರಾನ್ ನೇತೃತ್ವದ 'ಆಕ್ಸಿಸ್ ಆಫ್ ರೆಸಿಸ್ಟೆನ್ಸ್' ಎಂಬ ಶಿಯಾ ಸೇನೆಗಳು ಹಾಗೂ ರಾಜಕೀಯ ಸಮೂಹಗಳ ಗುಂಪಿನಲ್ಲಿ ಸಿರಿಯಾ ಕೂಡ ಭಾಗವಾಗಿದೆ. ತನ್ನ ವಾಯು ಪ್ರದೇಶದಲ್ಲಿನ ನಾಗರಿಕ ವಿಮಾನಯಾನದ ಸುರಕ್ಷತೆ ಕಾಪಾಡಲು, ದಾಳಿ ನಂತರ ವೈಮಾನಿಕ ಹಾರಾಟಗಳನ್ನು ರದ್ದುಗೊಳಿಸಲು ನಿರ್ಧರಿಸಿದ್ದಾಗಿ ಇರಾಕ್ ತಿಳಿಸಿದೆ.

**ಅಕ್ಟೋಬರ್ 1ರಂದು ತನ್ನ ಮೇಲೆ ಸುಮಾರು 200 ರಾಕೆಟ್, ಖಂಡಾಂತರ ಕ್ಷಿಪಣಿಗಳನ್ನು ಸಿಡಿಸಿದ್ದ ಇರಾನ್ ಮೇಲೆ ಪ್ರತೀಕಾರದ ದಾಳಿ ನಡೆಸಿರುವ ಇಸ್ರೇಲ್, ಅದರ ಅನೇಕ ಸೇನಾ ನೆಲೆಗಳಿಗೆ ಹಾನಿ ಮಾಡಿದೆ. ಈ ಹಾನಿ ಪ್ರಮಾಣ ಅಲ್ಪ ಎಂದು ಇರಾನ್ ಹೇಳಿದ್ದರೂ, ಮೂರು ದೇಶಗಳು ತಮ್ಮ ವಾಯು ಪ್ರದೇಶದಲ್ಲಿ ವಿಮಾನ ಸಂಚಾರವನ್ನು ಸ್ಥಗಿತಗೊಳಿಸಿವೆ.**

'ಅತಿಕ್ರಮಣದ ಕೃತ್ಯಕ್ಕೆ' ಪ್ರತಿಕ್ರಿಯೆ ನೀಡಲು ತಾನು ಸಿದ್ಧ ಇರುವುದಾಗಿ ಇರಾನ್ ಹೇಳಿದೆ. ಹೀಗಾಗಿ ಈ ಪ್ರದೇಶದಲ್ಲಿ ಉದ್ವಿಗ್ನತೆ ಇನ್ನೂ ಕಡಿಮೆಯಾಗಿಲ್ಲ. ಇಸ್ರೇಲ್ ತಾನು ನಡೆಸುವ ಯಾವುದೇ ಕ್ರಿಯೆಗೆ ತಕ್ಕ ಪ್ರತಿಕ್ರಿಯೆ ಎದುರಿಸುವುದರಲ್ಲಿ ಯಾವ ಅನುಮಾನವೂ ಇಲ್ಲ ಎಂದು ಇರಾನ್‌ನ ತಸ್ನಿಮ್ ಸುದ್ದಿ ಸಂಸ್ಥೆ ವರದಿ ಮಾಡಿದೆ. ಮತ್ತೆ ಪ್ರಚೋದನೆ ನಡೆಸಿದರೆ ಅದಕ್ಕೆ ಭಾರಿ ಬೆಲೆ ತೆರಬೇಕಾಗುತ್ತದೆ ಎಂದು ಇರಾನ್‌ಗೆ ಇಸ್ರೇಲ್ ಸೇನೆ ಎಚ್ಚರಿಕೆ ನೀಡಿದೆ.

ಇಸ್ರೇಲ್ ಸೇನೆಯು ಕಟ್ಟುನಿಟ್ಟಾಗ ಇರಾನ್‌ನ ಸೇನಾ ನೆಲೆಗಳನ್ನು ಮಾತ್ರವೇ ಗುರಿ ಮಾಡಿ ದಾಳಿ ನಡೆಸಿದ್ದು, ಸಂಘರ್ಷ ಮತ್ತಷ್ಟು ಭುಗಿಲೇಳುವುದನ್ನು ತಪ್ಪಿಸಲು ಪರಮಾಣು ಘಟಕ ಹಾಗೂ ತೈಲ ಘಟಕಗಳಿಂದ ದೂರವೇ ಉಳಿದಿತ್ತು.

ಮೂರು ಹಂತಗಳಲ್ಲಿ ಒಟ್ಟು ನೂರು ಫೈಟರ್ ಜೆಟ್‌ಗಳು ಇರಾನ್‌ನ 20 ಕ್ಷಿಪಣಿ ಮತ್ತು ಡ್ರೋನ್ ತಯಾರಿಕಾ ಘಟಕಗಳ ಮೇಲೆ ದಾಳಿ ನಡೆಸಿವೆ. ಮೊದಲ ಅಲೆಯ ದಾಳಿಯು ಇರಾನ್ ರೇಡಾರ್, ವಾಯು ರಕ್ಷಣಾ ವ್ಯವಸ್ಥೆ ಮೇಲೆ ನಡೆದಿದ್ದು, ಸೇನಾ ನೆಲೆಗಳ ಮೇಲಿನ ದಾಳಿಗೆ ಹಾದಿ ಸುಗಮಗೊಳಿಸಿತ್ತು. ಎರಡು ಹಾಗೂ ಮೂರನೆ ಹಂತದಲ್ಲಿ ಇರಾನ್‌ನ ಕ್ಷಿಪಣಿ ಮತ್ತು ಡ್ರೋನ್ ಸಂಗ್ರಹಗಳನ್ನು ಗುರಿಯಾಗಿಸಲಾಗಿತ್ತು. 25 – 30 ಫೈಟರ್ ಜೆಟ್‌ಗಳು ಗುಂಪು ಗುಂಪಾಗಿ ದಾಳಿ ನಡೆಸಿದರೆ, ಹತ್ತು ಜೆಟ್‌ಗಳು ಸಮನ್ವಯದೊಂದಿಗೆ ಕ್ಷಿಪಣಿ ದಾಳಿಗಳನ್ನು ಎಸಗಿದವು. ಉಳಿದ ಜೆಟ್‌ಗಳು ರಕ್ಷಣೆ ಒದಗಿಸಿದವು. 'ವಿಷಾದದ ಕಾರ್ಯಾಚರಣೆ ದಿನಗಳು' ಎಂಬ ಆಪರೇಷನ್‌ನಲ್ಲಿ ಇಸ್ರೇಲ್ ಹಾಗೂ ಅಮೆರಿಕ ವಾಯು ಪಡೆಗಳು, ಪ್ರತೀಕಾರದ ಕ್ಷಿಪಣಿ ದಾಳಿಗಳನ್ನು ಎದುರಿಸಲು ಹೈ ಅಲರ್ಟ್‌ನಿಂದ ಸನ್ನದ್ಧವಾಗಿದ್ದವು.

**ಇಸ್ರೇಲ್ ದಾಳಿ ಹೇಗಿತ್ತು?**

**ಇರಾನ್ ಮೇಲಿನ ದಾಳಿಗಾಗಿ ಇಸ್ರೇಲ್ ತನ್ನ ಐದನೇ ಪೀಳಿಗೆಯ ಎಫ್- 35 ಆಡಿರ್ ಫೈಟರ್ ಜೆಟ್‌ಗಳು, ಎಫ್- 151 ರಾಮ್ ಗ್ರೌಂಡ್ ಅಟ್ಯಾಕ್ ಜೆಟ್ ಮತ್ತು ಎಫ್- 161 ಸುಫಾ ಏರ್ ಡಿಫೆನ್ಸ್ ಜೆಟ್‌ಗಳನ್ನು ಸುಮಾರು 2000 ಕಿಮೀವರೆಗೂ ನಿಯೋಜಿಸಿತ್ತು. ಹಾಗೆಯೇ ಈ ದಾಳಿಗೆ ಸುದೀರ್ಘ ದೂರ ಹಾರುವ ಸೂಪರ್ ಸಾನಿಕ್ ಕ್ಷಿಪಣಿ ಮತ್ತು ವಾಯುವಿನಿಂದ ಭೂಮಿಗೆ ಹಾರುವ ಹೊಸ ತಲೆಮಾರಿನ ಆಧುನಿಕ ರಾಕೆಟ್‌ಗಳನ್ನು ಬಳಸಲಾಗಿತ್ತು.**

# ಅಮೆರಿಕದಲ್ಲಿ ಆತಂಕ ಸೃಷ್ಟಿಸಿದ ಮೆಕ್‌ಡೊನಾಲ್ಡ್ ಬರ್ಗರ್



**ವಾಷಿಂಗ್ಟನ್:** ಅಮೆರಿಕದಲ್ಲಿ ಮೆಕ್‌ಡೊನಾಲ್ಡ್ ಬರ್ಗರ್ ಸೇವಿದ ಹಲವಾರು ಜನರಿಗೆ ಆರೋಗ್ಯ ಸಮಸ್ಯೆ ಉಂಟಾಗಿದೆ. ತನ್ನ ಕ್ವಾರ್ಟರ್ ಪೌಂಡರ್ ಬರ್ಗರ್‌ಗಳು ಅಮೆರಿಕದ ಸುಮಾರು 10 ರಾಜ್ಯಗಳಲ್ಲಿ ಆತಂಕ ಸೃಷ್ಟಿಸಿದೆ. ಈಗಾಗಲೆ ಒಬ್ಬರು ಸಾವನ್ನಪ್ಪಿದ್ದು, ಹಲವಾರು ಮಂದಿ ಅನೇಕ ಕಾಯಿಲೆಗಳಿಗೆ ಒಳಗಾಗಿದ್ದು, ಅಧಿಕಾರಿಗಳು ಈಗ ಆಹಾರ ಸುರಕ್ಷತೆ ಎಚ್ಚರಿಕೆಯನ್ನು ನೀಡಿದ್ದಾರೆ. ಇದರ ನಡುವೆ ಸಿಡಿಸಿ ತನಿಖೆಗೆ ಸರ್ಕಾರ ಆದೇಶ ನೀಡಿದೆ. ಈರುಳ್ಳಿ, ದನದ ಕೊಬ್ಬು ಸೇರಿ ಕೆಲವು ಹಾನಿಕಾರಕ ಪದಾರ್ಥಗಳು ಮೆಕ್‌ಡೊನಾಲ್ಡ್ ಬರ್ಗರ್‌ನಲ್ಲಿ ಕಂಡುಬಂದಿದ್ದು, ಈಗ ಎಲ್ಲಾ ಮಳಿಗೆಗಳನ್ನು ಮಚ್ಚಲಾಗಿದೆ. ಸುಮಾರು 50 ಪ್ರಕರಣಗಳು ವರದಿಯಾಗಿವೆ.

ಕೊಲೊರಾಡೋ ಮತ್ತು ನೆಬ್ರಸ್ಕಾದಲ್ಲಿ ಹೆಚ್ಚಿನ ಕಾಯಿಲೆಗಳು ವರದಿಯಾಗಿವೆ. ಅನೇಕ ಬಾರಿ ವ್ಯಕ್ತಿಗಳು ಮೆಕ್ ಡೊನಾಲ್ಡ್ ಬರ್ಗರ್ ಸೇವಿಸುತ್ತಿದ್ದಾರೆಂದು ವರದಿಯಾಗಿದ್ದು, ತನಿಖೆ ಮಾಡುತ್ತಿದೆ. ಆದರೆ ಇನ್ನೂ ನಿರ್ದಿಷ್ಟ ಕಾರಣ ಗುರುತಿಸಿಲ್ಲ. ಈ ನಡುವೆ ಕೆಲವು ರಾಜ್ಯಗಳಲ್ಲಿ ಮೆಕ್‌ಡೊನಾಲ್ಡ್ ತಾಜಾ ಈರುಳ್ಳಿ ಮತ್ತು ಕ್ವಾರ್ಟರ್ ಪೌಂಡರ್ ಬೀಫ್ ಪ್ಯಾಟಿಗಳನ್ನು ಬಳಸುವುದನ್ನು ನಿಲ್ಲಿಸಿದೆ. ಕೊಲೊರಾಡೋ, ಅಯೋವಾ, ಕಾನ್ಸಾಸ್, ಮಿಸೌರಿ, ಮೊಂಟಾನಾ, ನೆಬ್ರಸ್ಕಾ, ಒರೆಗಾನ್, ಉತಾಹ್, ವಿಸ್ಕಾನ್ಸಿನ್ ಮತ್ತು ವ್ಯೋಮಿಂಗ್‌ನಲ್ಲಿನ ಅಂಗಡಿಗಳಿಂದ ದೋಷಪೂರಿತ ಪೀಡಿತ ಪದಾರ್ಥಗಳನ್ನು ತೆಗೆದುಹಾಕಲಾಗಿದೆ. ಕ್ವಾರ್ಟರ್ ಪೌಂಡರ್ ಬರ್ಗರ್‌ಗಳು ಇತರ ರಾಜ್ಯಗಳಲ್ಲಿ ಲಭ್ಯವಿಲ್ಲದಿರಬಹುದು. ಆದನ್ನು ಬಳಸಬೇಡ ಆರೋಗ್ಯ ಸಮಸ್ಯೆ ಮೀರಿ ಹೋಗಬಹುದು ಎಂದು ಸಿಡಿಸಿ ಎಚ್ಚರಿಸಿದೆ.

ಕ್ವಾರ್ಟರ್ ಪೌಂಡರ್ ಬೀಫ್ ಪ್ಯಾಟೀಸ್ ಮತ್ತು ಈರುಳ್ಳಿಗಳ ರಾಸಾಯನಿಕ ಕ್ರಿಯೆ ಅಪಾಯ ಉಂಟುಮಾಡಬಹುದು ಎಂದು ಸಿಡಿಸಿ ಹೇಳಿಕೆಯಲ್ಲಿ ಉಲ್ಲೇಖಿಸಲಾಗಿದೆ. ಆರಂಭಿಕ ಸಂಶೋಧನೆಗಳು ಮೂರು ವಿತರಣಾ ಕೇಂದ್ರಗಳಿಗೆ ಒಂದೇ ಕಡೆಯಿಂದ ಬರ್ಗರ್ ಪೂರೈಕೆ ಮಾಡಲಾಗಿದೆ. ಇ. ಕೋಲಿ ಸೋಂಕಿಗೆ ಒಳಗಾದ ಜನರು ತೀವ್ರವಾದ ಹೊಟ್ಟೆ ಸೆಳೆತ, ಅತಿಸಾರ, ಜ್ವರ ಮತ್ತು ವಾಂತಿಯನ್ನು ಅನುಭವಿಸಬಹುದು. ಬ್ಯಾಕ್ಟೀರಿಯಾಕ್ಕೆ ಒಡ್ಡಿಕೊಂಡ ಮೂರು ಅಥವಾ ನಾಲ್ಕು ದಿನಗಳ ನಂತರ ರೋಗಲಕ್ಷಣಗಳು ಸಾಮಾನ್ಯವಾಗಿ ಪ್ರಾರಂಭವಾಗುತ್ತವೆ. ಹೆಚ್ಚಿನವರು ಒಂದು ವಾರ ದೊಳಗೆ ಚೇತರಿಸಿಕೊಂಡರೂ, ಕೆಲವರು ಗಂಭೀರ ಮೂತ್ರ ಪಿಂಡದ ಸಮಸ್ಯೆಗಳನ್ನು ಬೆಳೆಸಿಕೊಳ್ಳಬಹುದು ಮತ್ತು ಆಸ್ಪತ್ರೆಗೆ ಸೇರಿಸಬೇಕಾಗುತ್ತದೆ ಎಂದು ಆರೋಗ್ಯ ಇಲಾಖೆ ಎಚ್ಚರಿಸಿದೆ.

ಅಮೆರಿಕದಲ್ಲಿ ಈಗ ಜನರು ಮೆಕ್‌ಡೊನಾಲ್ಡ್‌ನಲ್ಲಿ ತಿನ್ನಲು ಹಿಂಜರಿಯುತ್ತಾರೆ, ಇದು ಕಂಪನಿಯ ಆದಾಯದಲ್ಲಿ ಭಾರಿ ಕುಸಿತಕ್ಕೆ ಕಾರಣವಾಗಿದೆ. ಆದಾಗ್ಯೂ, ಆಹಾರ ದೈತ್ಯ ಸಂಸ್ಥೆಯಲ್ಲಿ ಇಂತಹ ಘಟನೆ ಇದೇ ಮೊದಲಲ್ಲ. ಕಳೆದ ಡಿಸೆಂಬರ್ 2006ರಲ್ಲಿ ಅಮೆರಿದ ಐದು ರಾಜ್ಯಗಳಲ್ಲಿ 71 ಜನರು ಕೋಲಿ ಘಟನೆಯಿಂದ ಪ್ರಭಾವಿತರಾದರು. 53 ಮಂದಿಯನ್ನು ಆಸ್ಪತ್ರೆಗೆ ದಾಖಲಿಸಲಾಗಿದ್ದು, 8 ಮಂದಿ ಮೂತ್ರಪಿಂಡ ವೈಫಲ್ಯದಿಂದ ಬಳಲಿದರು. ಇನ್ನು ಬ್ಲೂ ಬೆಲ್ ಐಸ್‌ಕ್ರೀಮ್‌ನಿಂದ ಉಂಟಾಗುವ ಲಿಸ್ಟೀರಿಯೊಸಿಸ್ ಸಾಂಕ್ರಾಮಿಕ ರೋಗದಿಂದಾಗಿ, ಬ್ಲೂ ಬೆಲ್ ತನ್ನ ಎಲ್ಲಾ ಸರಕುಗಳನ್ನು 2015ರಲ್ಲಿ ಸ್ವಯಂಪ್ರೇರಣೆಯಿಂದ ಹಿಂಪಡೆಯಿತು. ಕನ್ಸಾಸ್ ಆಸ್ಪತ್ರೆಯಲ್ಲಿ ಐವರು ರೋಗಿಗಳು ಲಿಸ್ಟೇರಿಯಾದ ಸ್ಟ್ರೇನ್‌ನಿಂದ ಅಸ್ವಸ್ಥರಾಗಿದ್ದರು. ಇದು ಬ್ಲೂ ಬೆಲ್ ಐಸ್‌ಕ್ರೀಮ್ ಅಡ್ಡ ಪರಿಣಾಮ ಎಂದು ತಿಳಿದುಬಂದಿತ್ತು.

**ಮೆಕ್‌ಡೊನಾಲ್ಡ್ ಕ್ವಾರ್ಟರ್ ಪೌಂಡರ್, ಬರ್ಗರ್‌ಗಳು ಅಮೆರಿಕದಲ್ಲಿ ಜನಪ್ರಿಯವಾಗಿದ್ದು, ಈಗ ವಿಶ್ವದಾದ್ಯಂತ ಇರುವ ಮೆಕ್‌ಡೊನಾಲ್ಡ್ ಸಮಸ್ಯೆ ಎದುರಿಸುತ್ತಿದೆ. ರೋಗ ನಿಯಂತ್ರಣ ಮತ್ತು ತಡೆಗಟ್ಟುವಿಕೆ ಕೇಂದ್ರಗಳು (ಸಿಡಿಸಿ) ಆಹಾರ ಸುರಕ್ಷತೆ ಎಚ್ಚರಿಕೆಯನ್ನು ನೀಡಿವೆ.**

# ಲಡಾಖ್‌ನಿಂದ ಸೈನಿಕರ ವಾಪಸಾತಿ ಸುಗಮವಾಗಿ ನಡೆಯುತ್ತಿದೆ; ಚೀನಾ



**ಒಂದೆರಡು ದಿನದೊಳಗೆ ಪೂರ್ಣಗೊಳ್ಳುವ ಸಾಧ್ಯತೆ**

**ಬೀಜಿಂಗ್:** ಉಭಯ ರಾಷ್ಟ್ರಗಳ ನಡುವಿನ ಇತ್ತೀಚಿನ ಒಪ್ಪಂದದ ನಂತರ ಚೀನಾ ಮತ್ತು ಭಾರತೀಯ ಸೇನೆಗಳಿಂದ ಪೂರ್ವ ಲಡಾಖ್‌ನಲ್ಲಿ ಸೈನಿಕರನ್ನು ವಿಸರ್ಜಿಸುವುದು ಸುಗಮವಾಗಿ ನಡೆಯುತ್ತಿದೆ ಎಂದು ಚೀನಾ ಹೇಳಿದೆ.

23 ರಂದು, ಪ್ರಧಾನಿ ನರೇಂದ್ರ ಮೋದಿ ಮತ್ತು ಚೀನಾದ ಅಧ್ಯಕ್ಷ ಕ್ಸಿ ಜಿನ್‌ಪಿಂಗ್ ಅವರು ರಷ್ಯಾದ ಕಜಾನ್‌ನಲ್ಲಿ ನಡೆದ ಬ್ರಿಕ್ಸ್ ಶೃಂಗಸಭೆಯ ಬದಿಯಲ್ಲಿ ತಮ್ಮ ದ್ವಿಪಕ್ಷೀಯ ಸಭೆಯಲ್ಲಿ ಪೂರ್ವ ಲಡಾಖ್‌ನಲ್ಲಿ ಎಲ್‌ಒಸಿ ಉದ್ದಕ್ಕೂ ಗಸ್ತು ತಿರುಗುವಿಕೆ ಮತ್ತು ನಿರ್ಗಮನದ ಒಪ್ಪಂದವನ್ನು ಅನುಮೋದಿಸಿದ್ದರು.


ಗಡಿ ಪ್ರದೇಶದ ಸಮಸ್ಯೆಗಳ ಕುರಿತು ಚೀನಾ ಮತ್ತು ಭಾರತ ಇತ್ತೀಚೆಗೆ ತಲುಪಿದ ನಿರ್ಣಯಗಳಿಗೆ ಅನುಗುಣವಾಗಿ, ಚೀನಾ, ಭಾರತದ ಗಡಿ ಪಡೆಗಳು ಸಂಬಂಧಿತ ಕೆಲಸದಲ್ಲಿ ತೊಡಗಿವೆ, ಅದು ಈ ಕ್ಷಣದಲ್ಲಿ ಸುಗಮವಾಗಿ ನಡೆಯುತ್ತಿದೆ ಎಂದು ಚೀನಾದ ವಿದೇಶಾಂಗ ಸಚಿವಾಲಯದ ವಕ್ತಾರ ಲಿನ್ ಜಿಯಾನ್ ಮಾಧ್ಯಮಗೋಷ್ಠಿಯಲ್ಲಿ ತಿಳಿಸಿದರು. ಅಕ್ಟೋಬರ್ 21 ರಂದು ಭಾರತವು ಘರ್ಷಣೆಯ ಸ್ಥಳಗಳಿಂದ ಸೈನ್ಯವನ್ನು ಹಿಂತೆಗೆದುಕೊಳ್ಳುವ ಒಪ್ಪಂದವನ್ನು ಘೋಷಿಸಿತು ಮತ್ತು ಚೀನಾ ಒಂದು ದಿನದ ನಂತರ ಎರಡು ಕಡೆ ಸಂಬಂಧಿತ ವಿಷಯಗಳ ಕುರಿತು ನಿರ್ಣಯಗಳನ್ನು ತಲುಪಿದೆ ಎಂದು ದೃಢಪಡಿಸಿತು ಮತ್ತು ಬೀಜಿಂಗ್ ಈ ನಿರ್ಣಯಗಳನ್ನು ಜಾರಿಗೆ ತರಲು ನವದೆಹಲಿಯೊಂದಿಗೆ ಕೆಲಸ ಮಾಡುತ್ತದೆ.

ಒಪ್ಪಂದದ ನಂತರ, ಪೂರ್ವ ಲಡಾಖ್‌ನ ಡೆಮ್‌ಚೋಕ್, ಡೆಪ್ಸಾಂಗ್ ಬಯಲು ಪ್ರದೇಶದ ಎರಡು ಘರ್ಷಣೆ ಬಿಂದುಗಳಲ್ಲಿ ಉಭಯ ದೇಶಗಳು ಪಡೆಗಳ ವಿಯೋಜನೆಯನ್ನು ಪ್ರಾರಂಭಿಸಿವೆ, ಈ ಪ್ರಕ್ರಿಯೆಯು ಒಂದೆರಡು ದಿನದೊಳಗೆ ಪೂರ್ಣಗೊಳ್ಳುವ ಸಾಧ್ಯತೆಯಿದೆ ಎಂದು ಭಾರತೀಯ ಸೇನಾ ಮೂಲಗಳು ತಿಳಿಸಿವೆ.

ಈ ಎರಡು ಘರ್ಷಣೆ ಅಂಶಗಳಿಗೆ ಮಾತ್ರ ಒಪ್ಪಂದಕ್ಕೆ ಬರಲಾಗಿದೆ ಮತ್ತು ಇತರ ಪ್ರದೇಶಗಳಿಗೆ ಮಾತುಕತೆಗಳು ಇನ್ನೂ ನಡೆಯುತ್ತಿವೆ ಎಂದು ಅವರು ಹೇಳಿದರು.

ಎರಡು ದಿನಗಳ ಹಿಂದೆ ಪ್ರಾರಂಭವಾದ ಕಾರ್ಯಾಚರಣೆ ಪೂರ್ಣಗೊಂಡ ನಂತರ ಈ ಸ್ಥಳಗಳಲ್ಲಿ ಗಸ್ತು ತಿರುಗಲಿದೆ ಎಂದು ಮೂಲಗಳು ತಿಳಿಸಿವೆ ಮತ್ತು ಎರಡೂ ಕಡೆಯವರು ತಮ್ಮ ಸೈನಿಕರನ್ನು ಸ್ಥಳಾಂತರಿಸುತ್ತಾರೆ ಮತ್ತು ತಾತ್ಕಾಲಿಕ ರಚನೆಗಳನ್ನು ಕೆಡವುತ್ತಾರೆ. ಅಂತಿಮವಾಗಿ, ಪ್ರದೇಶಗಳು, ಗಸ್ತು ಸ್ಥಿತಿಯನ್ನು ಏಪ್ರಿಲ್ 2020 ರ ಪೂರ್ವದ ಮಟ್ಟಕ್ಕೆ ಹಿಂತಿರುಗಿಸುವ ನಿರೀಕ್ಷೆಯಿದೆ ಎಂದರು.

# ದಾನಾ ಅಬ್ಬರಕ್ಕೆ ಮತ್ತಿಬ್ಬರು ಬಲಿ, ಲಕ್ಷಾಂತರ ಎಕರೆ ಬೆಳೆ ನಾಶ



**ಜಂಟಿ ಮೌಲ್ಯ ಮಾಪನಕ್ಕೆ ಸೂಚನೆ**

**ಕೋಲ್ಕತ್ತಾ:** ಪಶ್ಚಿಮ ಬಂಗಾಳದಲ್ಲಿ ದಾನಾ ಚಂಡಮಾರುತಕ್ಕೆ ಮತ್ತಿಬ್ಬರು ಸಾವನ್ನಪ್ಪಿದ್ದು, ಸಾವಿನ ಸಂಖ್ಯೆ ನಾಲ್ಕಕ್ಕೆ ತಲುಪಿದೆ ಎಂದು ಅಧಿಕಾರಿಗಳು ತಿಳಿಸಿದ್ದಾರೆ.

ಚಂದನ್ ದಾಸ್ (31) ಎಂದು ಗುರುತಿಸಲಾದ ನಾಗರಿಕ ಸ್ವಯಂಸೇವಕ, ಪುರ್ಬಾ ಬರ್ಧಮಾನ್ ಜಿಲ್ಲೆಯ ಬಡ್ ಬಡ್‌ನಲ್ಲಿ ಲೈವ್ ತಂತಿಯನ್ನು ಸ್ಪರ್ಶಿಸಿದಾಗ ಸ್ಥಳದಲ್ಲೇ ಸಾವನ್ನಪ್ಪಿದ್ದಾರೆ. ಅವರು ಪೊಲೀಸ್ ತಂಡದೊಂದಿಗೆ ಹೊರಬಂದಾಗ ಈ ಘಟನೆ ಸಂಭವಿಸಿದೆ ಎಂದು ಅವರು ಹೇಳಿದರು.

ಹೌರಾ ಮುನ್ಸಿಪಲ್ ಕಾರ್ಪೊರೇಶನ್‌ನ ಉದ್ಯೋಗಿಯೊಬ್ಬರು ತಂತಿಪಾರಾದಲ್ಲಿ ಜಲಾವೃತವಾದ ರಸ್ತೆಯಲ್ಲಿ ಶವವಾಗಿ ಪತ್ತೆಯಾಗಿದ್ದಾರೆ. ನೀರಿನಲ್ಲಿ ಮುಳುಗಿ ಸಾವನ್ನಪ್ಪಿರುವ ಶಂಕೆ ವ್ಯಕ್ತವಾಗಿದೆ. ನಿನ್ನೆ ವಿದ್ಯುತ್ ಸ್ಪರ್ಶದಿಂದ ಇಬ್ಬರು ಸಾವನ್ನಪ್ಪಿದ್ದಾರೆ. ದಕ್ಷಿಣ 24 ಪರಗಣ ಜಿಲ್ಲೆಯ ಪಥರ್‌ಪ್ರತಿಮಾದಲ್ಲಿ ಒಬ್ಬರು ಸಾವನ್ನಪ್ಪಿದ್ದಾರೆ ಮತ್ತು ಇನ್ನೊಬ್ಬರು ದಕ್ಷಿಣ ಕೋಲ್ಕತ್ತಾದ ಭಬಾನಿಪುರ ಪ್ರದೇಶದಲ್ಲಿ ಸಾವನ್ನಪ್ಪಿದ್ದಾರೆ ಎಂದು ಅವರು ಹೇಳಿದರು.

ತೀವ್ರ ಚಂಡಮಾರುತದ ಡಾನಾ ಪೂರ್ವ ಕರಾವಳಿಗೆ ಅಪ್ಪಳಿಸಿತು, ಧಾರಾಕಾರ ಮಳೆ, ಹೆಚ್ಚಿನ ವೇಗದ ಗಾಳಿಯು ಮರ ಗಳು, ವಿದ್ಯುತ್ ಕಂಬಗಳನ್ನು ಕಿತ್ತುಹಾಕಿತು, ಒಡಿಶಾ, ಪಶ್ಚಿಮ ಬಂಗಾಳದಲ್ಲಿ ಮೂಲಸೌಕರ್ಯ ಮತ್ತು ಬೆಳೆ ಗಳಿಗೆ ಗಮನಾರ್ಹ ಹಾನಿಯನ್ನುಂಟುಮಾಡಿತು. ಮಧ್ಯರಾತ್ರಿ 12.05 ರ ಸುಮಾರಿಗೆ ಕೇಂದ್ರಪಾರಾದ ಭಿತರ್ಕಾನಿಕಾ ಮತ್ತು ಒಡಿಶಾದ ಭದ್ರಕ್ ಜಿಲ್ಲೆಯ ಧಮ್ರಾ ನಡುವೆ ಸುಮಾರು 110 ಕಿಮೀ ವೇಗದಲ್ಲಿ ಗಾಳಿ ಬೀಸಿತು ಮತ್ತು ಬೆಳಿಗ್ಗೆ 8.30 ರ ಸುಮಾರಿಗೆ ಕೊನೆಗೊಂಡಿತು. ಬಂಗಾಳದಲ್ಲಿ ಚಂಡಮಾರುತ ದನಾ ಮತ್ತು ಅದರೊಂದಿಗೆ ಸುರಿದ ಮಳೆಯಿಂದಾಗಿ 1.75 ಲಕ್ಷ ಎಕರೆ ಪ್ರದೇಶದಲ್ಲಿ ಬೆಳೆದು ನಿಂತಿರುವ ಬೆಳೆಗಳು ಹಾನಿಗೊಳಗಾಗುವ ಸಾಧ್ಯತೆಯಿದೆ ಮತ್ತು ಒಡಿಶಾದಲ್ಲಿ 2.80 ಲಕ್ಷ ಎಕರೆ ಪ್ರದೇಶದಲ್ಲಿ ಮುಳುಗಿರುವ ಸಾಧ್ಯತೆಯಿದೆ ಎಂದು ಪ್ರಾಥಮಿಕ ಅಂದಾಜನ್ನು ಉಲ್ಲೇಖಿಸಿ ಹಿರಿಯ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಚಂಡಮಾರುತದಿಂದ ಉಂಟಾಗಿರುವ ಬೆಳೆ ನಷ್ಟದ ಕುರಿತು ಕೃಷಿ ಮತ್ತು ಕಂದಾಯ ಇಲಾಖೆಗಳ ಅಧಿಕಾರಿಗಳು ಜಂಟಿ ಮೌಲ್ಯಮಾಪನಕ್ಕೆ ರಾಜ್ಯ ಸರ್ಕಾರ ಸೂಚಿಸಿದೆ ಎಂದು ಅವರು ಹೇಳಿದರು.

ನಾವು ಜಿಲ್ಲಾಧಿಕಾರಿಗಳ ಮೇಲ್ವಿಚಾರಣೆಯಲ್ಲಿ ಸ್ಕ್ವಾರ್ಡ್ ವಿಧಾನದಲ್ಲಿ ಕಂದಾಯ ಇಲಾಖೆ ಸಹೋದ್ಯೋಗಿಗಳೊಂದಿಗೆ ಜಂಟಿಯಾಗಿ ಬೆಳೆ ನಷ್ಟವನ್ನು ನಿರ್ಣಯಿಸಲು ಮತ್ತು ಲೆಕ್ಕ ಹಾಕಲು ಕೃಷಿಬಿಭಾಗದ ಕ್ಷೇತ್ರ ಅಧಿಕಾರಿಗಳಿಗೆ ನಿರ್ದೇಶನ ನೀಡಿದ್ದೇವೆ ಎಂದರು.

**ಕೃಷಿ ವಲಯದ ನಷ್ಟದ ಅಂತಿಮ ಅಂದಾಜು ವಿವರವಾದ ವರದಿಯಿಂದ ತಿಳಿದುಬರುತ್ತದೆ, ಅದರ ಆಧಾರದ ಮೇಲೆ ಸರ್ಕಾರವು ರೈತರಿಗೆ ಪರಿಹಾರವನ್ನು ನಿರ್ಧರಿಸುತ್ತದೆ ಎಂದು ಹೇಳಿದರು. ಸುಮಾರು 8 ಲಕ್ಷ ಜನರನ್ನು ಸೈಕ್ಲೋನ್ ಶೆಲ್ಟರ್‌ಗಳಿಗೆ ಸ್ಥಳಾಂತರಿಸಲಾಗಿದೆ, ಹವಾಮಾನ ಸುಧಾರಿಸಿದ ಕಾರಣ ಅವರಲ್ಲಿ ಹಲವರಿಗೆ ಮನೆಗೆ ಮರಳಲು ಅವಕಾಶ ನೀಡಲಾಗಿದೆ**

**– ಮೋಹನ್ ಚರಣ್ ಮಾಝಿ, ಸಿಎಂ**

# ಜಗನ್ನಾಥನಿಗೆ ಪ್ರಾರ್ಥನೆ ಸಲ್ಲಿಸಿದ ರಾಷ್ಟ್ರಪತಿ ದ್ರೌಪದಿ ಮುರ್ಮು



**ರಾಯ್‌ಪುರ:** ರಾಷ್ಟ್ರಪತಿ ದ್ರೌಪದಿ ಮುರ್ಮು ಅವರು ಶನಿವಾರ ಬೆಳಗ್ಗೆ ಛತ್ತೀಸ್‌ಗಢದ ರಾಜಧಾನಿ ರಾಯ್‌ಪುರದ ಜಗನ್ನಾಥ ದೇವಸ್ಥಾನಕ್ಕೆ ಭೇಟಿ ನೀಡಿ ಪ್ರಾರ್ಥನೆ ಸಲ್ಲಿಸಿದರು. ಎರಡು ದಿನಗಳ ಪ್ರವಾಸಕ್ಕೆಂದು ಛತ್ತೀಸ್‌ಗಢಕ್ಕೆ ಆಗಮಿಸಿರುವ ಅವರು ಜಗನ್ನಾಥ, ಬಲಭದ್ರ ಮತ್ತು ಸುಭದ್ರ ದೇವಿಗೆ ಸಮರ್ಪಿತವಾದ ದೇವಾಲಯದಲ್ಲಿ ಧಾರ್ಮಿಕ ವಿಧಿಗಳನ್ನು ನೆರವೇರಿಸಿದರು ಮತ್ತು ದೇಶದ ಜನರ ಯೋಗಕ್ಷೇಮ, ಸಮೃದ್ಧಿ, ಪ್ರಗತಿಗಾಗಿ ಪ್ರಾರ್ಥಿಸಿದರು ಎಂದು ಇಲ್ಲಿನ ಸರ್ಕಾರಿ ಅಧಿಕಾರಿಯೊಬ್ಬರು ತಿಳಿಸಿದ್ದಾರೆ. ಛತ್ತೀಸ್‌ಗಢ ರಾಜ್ಯಪಾಲ ರಮೆನ್ ದೇಕಾ, ಮುಖ್ಯಮಂತ್ರಿ ವಿಷ್ಣು ದೇವ್ ಸಾಯಿ, ಸಾರ್ವಜನಿಕ ಅವರೊಂದಿಗೆ ಇದ್ದರು ಎಂದು ಅವರು ಹೇಳಿದರು.

ಛತ್ತೀಸ್‌ಗಢ ರಾಜ್ಯ ರಚನೆಯಾದ ಮೂರು ವರ್ಷಗಳ ನಂತರ 2003 ರಲ್ಲಿ ಪುರಿಯ ಭಗವಾನ್ ಜಗನ್ನಾಥ ದೇವಾಲಯದ ಮಾದರಿಯಲ್ಲಿ ಜಗನ್ನಾಥ ದೇವಾಲಯವನ್ನು ಇಲ್ಲಿ ನಿರ್ಮಿಸಲಾಗಿದೆ. ದೇವಾಲಯದ ಮುಖ್ಯ ರಚನೆಯನ್ನು ಎತ್ತರದ ವೇದಿಕೆಯ ಮೇಲೆ ನಿರ್ಮಿಸಲಾಗಿದೆ. ದೇವಾಲಯದಲ್ಲಿ ಒಡಿಶಾದಿಂದ ಬೇವಿನ ಮರದಿಂದ ತಯಾರಿಸಿದ ವಿಗ್ರಹಗಳನ್ನು ಪ್ರತಿಷ್ಠಾಪಿಸಲಾಗಿದೆ ಎಂದರು. ದೇವಸ್ಥಾನದ ಮುರ್ಮು ಅವರು ಭಿಲಾಯ್‌ಗೆ ತೆರಳಿದರು, ಅಲ್ಲಿ ಅವರು ಇಂಡಿಯನ್ ಇನ್‌ಸ್ಟಿಟ್ಯೂಟ್ ಆಫ್ ಟೆಕ್ನಾಲಜಿ ಭಿಲಾಯ್‌ನ ನಾಲ್ಕನೇ ಘಟಿಕೋತ್ಸವ ಸಮಾರಂಭದಲ್ಲಿ ಮುಖ್ಯ ಅತಿಥಿಯಾಗಿ ಭಾಗವಹಿಸಲಿದ್ದಾರೆ ಎಂದು ಅಧಿಕಾರಿ ತಿಳಿಸಿದ್ದಾರೆ. ಮುರ್ಮು ಅವರು ನಂತರ ರಾಜ್ಯ ರಾಜಧಾನಿಗೆ ಹಿಂತಿರುಗುತ್ತಾರೆ, ದೆಹಲಿಗೆ ಹೊರಡುವ ಮೊದಲು ಮುಖ್ಯ ಅತಿಥಿಯಾಗಿ ನವ ರಾಯ್ ಪುರದ ಪಿಟಿ ದೀನದಯಾಳ್ ಸ್ಮಾರಕ ಆರೋಗ್ಯ, ವಿಜ್ಞಾನ, ಆಯುಷ್ ವಿಶ್ವವಿದ್ಯಾಲಯದ ಮೂರನೇ ಘಟಿ ಕೋತ್ಸವದಲ್ಲಿ ಭಾಗವಹಿಸಲಿದ್ದಾರೆ ಎಂದರು.

# ಭಾರತದ ಡಿಜಿಟಲ್ ಮೂಲಸೌಕರ್ಯ ವೃದ್ಧಿಗೆ ಅಮೆರಿಕ, ಜಪಾನ್ ಬೆಂಬಲ



**ವಾಷಿಂಗ್ಟನ್:** ಭಾರತದಲ್ಲಿ ಡಿಜಿಟಲ್‌ಮೂಲಸೌಕರ್ಯವನ್ನು ಬೆಂಬಲಿಸಲು ಭಾರತೀಯ ಖಾಸಗಿ ವಲಯದೊಂದಿಗೆ ತಮ್ಮ ಸಹಯೋಗವನ್ನು ಹೆಚ್ಚಿಸುವ ಹೊಸ ಚೌಕಟ್ಟನ್ನು ಪ್ರಾರಂಭಿಸುವುದಾಗಿ ಯುನೈಟೆಡ್ ಸ್ಟೇಟ್ಸ್, ಜಪಾನ್, ದಕ್ಷಿಣ ಕೊರಿಯಾ ಘೋಷಿಸಿವೆ.

ಯುಎಸ್ ಇಂಟರ್ನ್ಯಾಷನಲ್ ಡೆವಲಪ್ಮೆಂಟ್ ಫೈನಾನ್ಸ್ ಕಾರ್ಪೊರೇಷನ್ಸ್, ಜಪಾನ್ ಬ್ಯಾಂಕ್ ಫಾರ್ ಇಂಟರ್ನ್ಯಾಷನಲ್ ಕೋಆಪರೇಷನ್ (ಜೆಬಿ ಐಸಿ), ರಫ್ತ್ –ಆಮದು ಬ್ಯಾಂಕ್ ಆಫ್ ಕೊರಿಯಾ (ಕೊರಿಯಾ ಎಕ್ಸಿಂಬ್ಯಾಂಕ್ ) ಈ ನಿಟ್ಟಿನಲ್ಲಿ ಪ್ರಕಟಣೆಯನ್ನು ಮಾಡಿವೆ.

ಡಿಎಫ್‌ಸಿ ಸಿಇಒ ಸ್ಕಾಟ್ ನಾಥನ್ಸ್, ಜೆಬಿಐಸಿ ಗವರ್ನರ್ ನೊಬುಮಿಟ್ಸು ಹಯಾಶಿ ಮತ್ತು ಕೊರಿಯಾ ಎಕ್ಸಿಂ ಬ್ಯಾಂಕ್ ಅಧ್ಯಕ್ಷ ಮತ್ತು ಸಿಇಒ ಹೀ–ಸುಂಗ್ ಯೂನ್ ಅವರು 5ಜಿ ಓಪನ್ ರಯಾನ್‌ನಂತಹ ಮಾಹಿತಿ ಮತ್ತು ಸಂವಹನ ತಂತ್ರಜ್ಞಾನ ವಲಯದಲ್ಲಿ ಯೋಜನೆಗಳನ್ನು ಬೆಂಬಲಿಸಲು ಡಿಜಿಟಲ್ ಮೂಲಸೌಕರ್ಯ ಬೆಳವಣಿಗೆಯ ಉಪಕ್ರಮಕ್ಕೆ ಇಂಡಿಯಾ ಫ್ರೆಮ್‌ವರ್ಕ್ (ಡಿಜಿ –ಫ್ರೈಮ್ ವರ್ಕ್)ಗೆ ಸಹಿ ಹಾಕಿದರು.

ಜಲಾಂತರ್ಗಾಮಿ ಕೇಬಲ್‌ಗಳು, ಆಪ್ಟಿಕಲ್ –ಫೈಬರ್ ನೆಟ್‌ವರ್ಕ್‌ಗಳು, ಟೆಲಿಕಾಂ ಟವರ್‌ಗಳು, ಡೇಟಾ ಸೆಂಟರ್‌ಗಳು, ಸ್ಮಾರ್ಟ್ ಸಿಟಿ, ಇ–ಕಾಮರ್ಸ್, ಎಐ, ಕ್ವಾಂಟಮ್ ತಂತ್ರಜ್ಞಾನ ಎಂದು ಮಾಧ್ಯಮ ಪ್ರಕಟಣೆ ತಿಳಿಸಿದೆ.

ಡಿಜಿಐ –ಫ್ರೈಮ್‌ವರ್ಕ್ ಸುವ್ಯವಸ್ಥಿತ ಪ್ರಕ್ರಿಯೆಯನ್ನು ರಚಿಸುತ್ತದೆ, ಅಲ್ಲಿ ಡಿಎಫ್‌ಸಿ, ಜೆಬಿಐಸಿ ಮತ್ತು ಕೊರಿಯಾ ಎಕ್ಸಿಂ ಬ್ಯಾಂಕ್, ಭಾರತೀಯ ಖಾಸಗಿ ವಲಯದ ಸಹಭಾಗಿತ್ವದಲ್ಲಿ ಭಾರತದಲ್ಲಿನ ಕಾರ್ಯತಂತ್ರದ ಡಿಜಿಟಲ್ ಮೂಲಸೌಕರ್ಯ ಒಪ್ಪಂದಗಳ ಅಗತ್ಯಗಳನ್ನು ಪೂರೈಸಲು ಬೆಂಬಲವನ್ನು ನೀಡಬಹುದು ಎಂದು ಪತ್ರಿಕಾ ಹೇಳಿಕೆ ತಿಳಿಸಿದೆ.

**ಭಾರತದಲ್ಲಿ ಡಿಜಿಟಲ್ ಮೂಲಸೌಕರ್ಯ ಯೋಜನೆಗಳಿಗೆ ಖಾಸಗಿ ವಲಯದ ಹಣವನ್ನು ಉತ್ತೇಜಿಸಲು ಸುವ್ಯವಸ್ಥಿತ ಪ್ರಕ್ರಿಯೆಯು ಭಾರತ ಸರ್ಕಾರ ಮತ್ತು ಖಾಸಗಿ ವಲಯದೊಂದಿಗಿನ ನೀತಿ ಸಂವಾದಗಳನ್ನು ಬೆಂಬಲಿಸುತ್ತದೆ ಎಂದು ಅದು ಹೇಳಿದೆ.**

# ವಕ್ಫ್ ಮಸೂದೆಗೆ ಮುಸ್ಲಿಂ ಕಾನೂನು ಮಂಡಳಿ ಮುಖ್ಯಸ್ಥ ಖಾಲಿದ್ ಸೈಫುಲ್ಲಾ ವಿರೋಧ

## ವಕ್ಫ್ ಮಸೂದೆ ಸಾವು–ಬದುಕಿನ ಪ್ರಶ್ನೆ, ನಾವು ಬಲಿದಾನಕ್ಕೂ ಸಿದ್ಧ: ಮುಸ್ಲಿಂ ಕಾನೂನು ಮಂಡಳಿ ಅಧ್ಯಕ್ಷನ ಹೇಳಿಕೆ



**ಕಾನ್ಪುರ:** ವಕ್ಫ್ ಆಸ್ತಿಗಳ ಮೇಲೆ ನಿಯಂತ್ರಣ ಹೇರುವ ಪ್ರಸ್ತಾವಿತ ವಕ್ಫ್ ಮಸೂದೆಗೆ ವಿರೋಧ ತೀವ್ರಗೊಳಿಸಿರುವ ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿ (ಎಐಎಂಪಿಎಲ್‌ಬಿ), ಏನೇ ಎದು ರಾದರೂ ಮಸೂದೆ ಜಾರಿಯನ್ನು ತಡೆಯುವುದಾಗಿ ಹೇಳಿದೆ. ಈ ಸಲುವಾಗಿ ತಮ್ಮ ಪ್ರಾಣ ಅರ್ಪಿಸಲೂ ತನ್ನ ಸದಸ್ಯರು ಹಿಂದೇಟು ಹಾಕಬಾರದು ಎಂದು ಮಂಡಳಿ ಅಧ್ಯಕ್ಷ ಕರೆ ನೀಡಿದ್ದಾರೆ. ಉತ್ತರ ಪ್ರದೇಶದ ಕಾನ್ಪುರದಲ್ಲಿ ಮಾತನಾಡಿದ ಮೌಲಾನಾ ಖಾಲಿದ್ ಸೈಫುಲ್ಲಾ, ಸರ್ಕಾರವು ಅಪಾರ ಸಂಖ್ಯೆಯಲ್ಲಿ ವಕ್ಫ್ ಆಸ್ತಿಗಳನ್ನು ಅಕ್ರಮವಾಗಿ ಆಕ್ರಮಿಸಿದೆ ಎಂದು ಆರೋಪಿಸಿದರು.

ಇದು ನಮ್ಮ ಪಾಲಿಗೆ ಸಾವು ಬದುಕಿನ ಪ್ರಶ್ನೆಯಾಗಿದೆ. ಹೀಗಾಗಿ ನಾವು ಎಷ್ಟೇ ಕಷ್ಟವಾದರೂ ಅದನ್ನು ತಡೆಯಲೇ ಬೇಕು. ಅಗತ್ಯ ಬಿದ್ದರೆ, ಅಪರಾಧಿಗಳನ್ನು ಬಂಧಿಸಿ ಇರಿಸಲು ಸರ್ಕಾರಕ್ಕೆ ಯಾವ ಜಾಗವೂ ಉಳಿಯದ ರೀತಿಯಲ್ಲಿ ಈ ದೇಶದ ಮುಸ್ಲಿಮರು ಜೈಲುಗಳಲ್ಲಿ ತುಂಬಿಕೊಳ್ಳಲಿದ್ದಾರೆ ಎಂದು ಅವರು ವಕ್ಫ್ ಮಸೂದೆ ಜಾರಿಯಾದರೆ ಹಿಂಸಾಚಾರ ಕೃತ್ಯಗಳು ನಡೆಯಲಿವೆ ಎಂಬುದಾಗಿ ಪರೋಕ್ಷವಾಗಿ ಬೆದರಿಕೆ ಹಾಕಿದ್ದಾರೆ.ಬಲಿದಾನ ಮಾಡಲೂ ಹಿಂಜರಿಯುವುದಿಲ್ಲ

ಅಗತ್ಯ ಉಂಟಾದರೆ ನಾವು ನಮ್ಮ ಜೀವವನ್ನು ಬಲಿ ಕೊಡಲು ಸಹ ಹಿಂಜರಿಯುವುದಿಲ್ಲ ಎಂದು ಎಚ್ಚರಿಕೆ ನೀಡಿದ್ದಾರೆ. ಕೇಂದ್ರ ವಕ್ಫ್ ಸಮಿತಿ ಹಾಗೂ ರಾಜ್ಯ ವಕ್ಫ್ ಮಂಡಳಿಗಳಲ್ಲಿ ಮುಸ್ಲಿಂ ಮಹಿಳೆಯರು ಹಾಗೂ ಮುಸ್ಲಿಮೇತರ ಸದಸ್ಯರಿಗೆ ಪ್ರಾತಿನಿಧ್ಯ ನೀಡುವ ಉದ್ದೇಶ ಹೊಂದಿರುವ ಪ್ರಸ್ತಾವಿತ ಮಸೂದೆ ವಿರುದ್ಧ ಹರಿಹಾಯ್ದ ಅವರು, ಮುಸ್ಲಿಮೇತರರನ್ನು ಇದರಲ್ಲಿ ಸೇರಿಸುವುದು, ಮುಸ್ಲಿಮರಿಂದ ವಕ್ಫ್ ಭೂಮಿಗಳನ್ನು ಕಸಿದುಕೊಳ್ಳುವ ಸರ್ಕಾರದ ಹುನ್ನಾರದ ಭಾಗ ಎಂದು ಆರೋಪಿಸಿದ್ದಾರೆ. ವಕ್ಫ್ ಮಂಡಳಿ ಆಡಳಿತವು ಮುಸ್ಲಿಮೇತರರಿಂದ ನಡೆದರೆ, ಅವರು ನಿಮ್ಮ ಮಸೀದಿಗಳು ಮತ್ತು ಸ್ಮಶಾನಗಳ ಬಗ್ಗೆ ಅನುಕಂಪ ತೋರಿಸುತ್ತಾರೆಯೇ? ಇದರಿಂದಾಗಿ ನಿಮ್ಮ ಭೂಮಿಯನ್ನು ನಿಮ್ಮಿಂದ ಕಿತ್ತುಕೊಳ್ಳುತ್ತಾರೆ. ಇದು ಬಹಳ ಅಪಾಯಕಾರಿ ಕಾನೂನು ಎಂದು ಹೇಳಿದ್ದಾರೆ.

**ಆರು ಲಕ್ಷ ಎಕರೆಯಷ್ಟೇ ಇರುವುದು:** ತಮಿಳುನಾಡು ಒಂದರಲ್ಲಿಯೇ 4,78,000 ಎಕರೆ ದೇವಸ್ಥಾನ ಭೂಮಿ ಇದೆ. ಆಂಧ್ರ ಪ್ರದೇಶದಲ್ಲಿ 4,68,000ಎ ಎಕರೆ ದೇವಾಲಯ ಜಮೀನಿದೆ. ಈ ಎರಡೂ ರಾಜ್ಯಗಳಲ್ಲಿಯೇ 10 ಲಕ್ಷ ಎಕರೆಯಷ್ಟು ದೇವಸ್ಥಾನ ಭೂಮಿ ಇದೆ. ಆದರೆ ಇಡೀ ದೇಶದಲ್ಲಿ ಮುಸ್ಲಿಮರು ಆರು ಲಕ್ಷ ಎಕರೆ ವಕ್ಫ್ ಆಸ್ತಿ ಹೊಂದಿದ್ದರೆ ಯಾವ ಸಮಸ್ಯೆ ಇದೆ ಎಂದು ಪ್ರಶ್ನಿಸಿದ್ದಾರೆ. ಕೋರ್ಟ್‌ನಲ್ಲಿನ ಪ್ರಕರಣದಲ್ಲಿ ಸೋಲುವಂತೆ ಹಾಗೂ ದಾಖಲೆಗಳನ್ನು ಸಲ್ಲಿಕೆ ಮಾಡದಂತೆ ವಕ್ಫ್ ಮಂಡಳಿಯ ಕೆಲವು ಸದಸ್ಯರ ಮೇಲೆ ಸರ್ಕಾರ ಒತ್ತಡ ಹೇರುತ್ತಿದೆ ಎಂದು ಸೈಫುಲ್ಲಾ ಆರೋಪಿಸಿದ್ದಾರೆ.

ಇದರ ಬಗ್ಗೆ ಆಲೋಚಿಸಿ. ವಕ್ಫ್ ಬೋರ್ಡ್ ಮತ್ತು ಸರ್ಕಾರದ ನಡುವೆ ವಿವಾದ ಉಂಟಾದರೆ ಕಲೆಕ್ಟರ್ ಸರ್ಕಾರದ ವಿರುದ್ಧ ನಿರ್ಧಾರ ಪ್ರಕಟಿಸುತ್ತಾರೆಯೇ ಕಲೆಕ್ಟರ್ ಸ್ವತಃ ಸರ್ಕಾರದಿಂದ ಬಂದವರೇ ಆಗಿರುತ್ತಾರೆ ಎಂದು ಅವರು ಹೇಳಿದ್ದಾರೆ. ವಕ್ಫ್ ಮಂಡಳಿಯು ಯಾವುದೇ ಆಸ್ತಿ ಅಥವಾ ಪ್ರದೇಶವನ್ನು 'ವಕ್ಫ್ ಆಸ್ತಿ' ಎಂದು ಹೇಳಿಕೊಳ್ಳುವ ಅಧಿಕಾರಕ್ಕೆ ಈ ಮಸೂದೆ ನಿರ್ಬಂಧ ವಿಧಿಸಲಿದೆ.

**ಪ್ರಸ್ತಾವಿತ ವಕ್ಫ್ ಮಸೂದೆ ವಿರುದ್ಧ ಕಿಡಿಕಾರಿರುವ ಅಖಿಲ ಭಾರತ ಮುಸ್ಲಿಂ ವೈಯಕ್ತಿಕ ಕಾನೂನು ಮಂಡಳಿ ಅಧ್ಯಕ್ಷ ಮೌಲಾನಾ ಖಾಲಿದ್ ಸೈಫುಲ್ಲಾ, ಈ ಮಸೂದೆ ಜಾರಿಯಾಗದಂತೆ ತಡೆಯಲು ಮುಸ್ಲಿಮರು ತಮ್ಮ ಪ್ರಾಣ ಅರ್ಪಿಸಲು ಸಿದ್ಧ, ಎಷ್ಟೇ ಕಷ್ಟವಾದರೂ ಮಸೂದೆಯನ್ನು ತಡೆಯುತ್ತೇವೆ ಎಂದು ಅವರು ತಿಳಿಸಿದ್ದಾರೆ.**

- **ಅಗತ್ಯ ಉಂಟಾದರೆ ನಾವು ನಮ್ಮ ಜೀವವನ್ನು ಬಲಿ ಕೊಡಲು ಸಹ ಹಿಂಜರಿಯುವುದಿಲ್ಲ**
- **ಇಡೀ ದೇಶದಲ್ಲಿ ಮುಸ್ಲಿಮರು ಆರು ಲಕ್ಷ ಎಕರೆ ವಕ್ಫ್ ಆಸ್ತಿ ಹೊಂದಿದ್ದರೆ ಯಾವ ಸಮಸ್ಯೆ ಇದೆ**

# ಮಿನಿ ನ್ಯೂಸ್

## ಮಣಿಪುರದಲ್ಲಿ ಮದ್ದು ಗುಂಡುಗಳನ್ನ ವಶ ಪಡೆದ ಪೊಲೀಸರು

**ಇಂಫಾಲ:** ಮಣಿಪುರದ ಬಿಷ್ಣುಪುರ್ ಮತ್ತು ಇಂಫಾಲ ಪಶ್ಚಿಮ ಜಿಲ್ಲೆಗಳಲ್ಲಿ ಭದ್ರತಾ ಪಡೆಗಳು ಶಸ್ತ್ರಾಸ್ತ್ರಗಳು ಮತ್ತು ಮದ್ದುಗುಂಡುಗಳನ್ನು ವಶಪಡಿಸಿಕೊಂಡಿದ್ದಾರೆ ಎಂದು ಪೊಲೀಸರು ತಿಳಿಸಿದ್ದಾರೆ. ಬಿಷ್ಣುಪುರ್ ಜಿಲ್ಲೆಯ ಉಯುಂಗ್ ಮುಖೋಗ್ ನಲ್ಲಿ ನಡೆದ ಶೋಧ ಕಾರ್ಯಾಚರಣೆಯಲ್ಲಿ 7.62 ಎಂಎಂ ಸ್ವಯಂ ಲೋಡಿಂಗ್ ರೈಲ್, ಆರು ಗ್ರೆನೇಡ್‌ಗಳು, ನಾಲ್ಕು ಗ್ರೆನೇಡ್ ಆರ್ಮ್ ರಿಂಗ್‌ಗಳು, ಎರಡು ಅಶ್ರುವಾಯು ಗ್ರೆನೇಡ್‌ಗಳು, ಮೂರು ಸ್ಟಿಂಗರ್ ಗ್ರೆನೇಡ್‌ಗಳು ಮತ್ತು 2.3 ಕೆಜಿ ತೂಕದ ಐಇಡಿ ಪತ್ತೆಯಾಗಿದೆ ಎಂದು ಅವರು ಹೇಳಿದರು. ಇಂಫಾಲ್ ಪಶ್ಚಿಮ ಜಿಲ್ಲೆಯ ಶಾಂತಿಪುರ ಮಖಾ ಲೈಕೈಯಲ್ಲಿ ಇದೇ ರೀತಿಯ ಕಾರ್ಯಾಚರಣೆಯಲ್ಲಿ, ಸಿಂಗಲ್ ಬ್ಯಾರೆಲ್ ಗನ್, ಎರಡು 9 ಎಂಎಂ ಪಿಸ್ತೂಲ್‌ಗಳು, ಎರಡು ಮ್ಯಾಗಜೀನ್‌ಗಳು, 7.62 ಎಲ್‌ಎಂಜಿ ಮ್ಯಾಗಜೀನ್, ಮೂರು ಎಂ –67 ಹ್ಯಾಂಡ್ ಗ್ರೆನೇಡ್‌ಗಳು, ಡಿಟೋನೇಟರ್‌ಗಳನ್ನು ವಶಪಡಿಸಿಕೊಳ್ಳಲಾಗಿದೆ ಎಂದರು

## ಅಕ್ರಮವಾಗಿ ಸಂಗ್ರಹಿಸಿದ ಪಟಾಕಿ ವಶ

**ಬಂದಾ:** ಮನೆಯೊಂದರಲ್ಲಿ ಅಕ್ರಮವಾಗಿ ಸಂಗ್ರಹಿಸಿದ್ದ ಭಾರೀ ಪ್ರಮಾಣದ ಪಟಾಕಿಗಳನ್ನು ಪೊಲೀಸರು ಇಲ್ಲಿ ವಶಪಡಿಸಿಕೊಂಡಿದ್ದಾರೆ. ಸುಳಿವಿನ ಮೇರೆಗೆ ನಾವು ಕಳೆದ ರಾತ್ರಿ ಜಗದೀಶ್‌ಗಂಜ್ ಪ್ರದೇಶದ ಮನೆಯೊಂದರ ಮೇಲೆ ದಾಳಿ ಮಾಡಿ ಪಟಾಕಿಗಳನ್ನು ವಶಪಡಿಸಿಕೊಂಡಿದ್ದೇವೆ ಘಟನೆಗೆ ಸಂಬಂಧಿಸಿದಂತೆ ಕುಲದೀಪ್ ಗುಪ್ತಾ ಎಂಬ ಆರೋಪಿಯನ್ನು ಬಂಧಿಸಲಾಗಿದೆ ಎಂದು ಚಿತ್ರಕೂಟ ನಗರದ ಸದರ್ ಕೊತ್ವಾಲಿ ಪೊಲೀಸ್ ಠಾಣೆಯ ಠಾಣಾಧಿಕಾರಿ ಉಪೇಂದ್ರ ಸಿಂಗ್ ತಿಳಿಸಿದ್ದಾರೆ. ದೀಪಾವಳಿಗೂ ಮುನ್ನ ಪಟಾಕಿಗಳನ್ನು ಸಂಗ್ರಹಿಸಲು ಪರವಾನಗಿ ಪಡೆದಿರಲಿಲ್ಲ ಮತ್ತು ಮನೆಯ ತುಂಬಾ ಪಟಾಕಿ ರಾಶಿ ತುಂಬಿತ್ತು ಎಂದು ಹೇಳಿದರು. ಸುರಕ್ಷತಾ ದೃಷ್ಟಿಯಿಂದ, ಯಾವುದೇ ಅನಾಹುತ ನಡೆಯದಂತೆ ಬಿಗಿ ಕ್ರಮ ಕೈಗೊಳ್ಳಲಾಗಿದೆ ಎಂದರು.

## ಭಾವಿ ಪತಿ ಎದುರಲ್ಲೇ ಮಹಿಳೆ ಮೇಲೆ ಸಾಮೂಹಿಕ ಅತ್ಯಾಚಾರ

**ಭುವನೇಶ್ವರ:** ಭಾವಿ ಪತಿ ಎದುರಿನಲ್ಲೇ ಮಹಿಳೆಯೊಬ್ಬರ ಮೇಲೆ ಮೂವರು ಕಾಮುಕರು ಸಾಮೂಹಿಕ ಅತ್ಯಾಚಾರ ನಡೆಸಿರುವ ಘಟನೆ ಒಡಿಶಾದ ನಯಾಗಢ್ ಜಿಲ್ಲೆಯ ಕಾಡಿನಲ್ಲಿ ನಡೆದಿದೆ. 21 ವರ್ಷದ ಮಹಿಳೆಯೊಬ್ಬಳ ಮೇಲೆ ಮೂವರು ಅಪರಿಚಿತ ವ್ಯಕ್ತಿಗಳು ಆಕೆಯ ಭಾವಿ ಪತಿ ಎದುರಿನಲ್ಲೇ ಇಂತಹ ಕೃತ್ಯ ನಡೆಸಲಾಗಿದೆ ಎಂದು –ಫತೇಗಢ ಪೊಲೀಸರು ತಿಳಿಸಿದ್ದಾರೆ. ಮಹಿಳೆ, ತನ್ನ ನಿಶ್ಚಿತ ವರನ ಜೊತೆಗೆ ಸಂಜೆ –ಫತೇಗಢ್ ರಾಮ ಮಂದಿರಕ್ಕೆ ಭೇಟಿ ನೀಡಿ ಮನೆಗೆ ಹಿಂದಿರುಗುತ್ತಿದ್ದಾಗ ಈ ಘಟನೆ ನಡೆದಿದೆ. ಮೂವರು ಅಪರಿಚಿತ ವ್ಯಕ್ತಿಗಳು ಪಿತಾಖೈ ಅರಣ್ಯದ ಬಳಿ ಇಬ್ಬರನ್ನು ಅಡ್ಡಗಟ್ಟಿ ಬಲವಂತವಾಗಿ ಕಾಡಿಗೆ ಕರೆದೊಯ್ದು ಮಹಿಳೆಯ ಮೇಲೆ ಸಾಮೂಹಿಕ ಅತ್ಯಾಚಾರ ಎಸಗಿದ್ದಾರೆ ಮತ್ತು ಆಕೆಯು ತನ್ನ ನಿಶ್ಚಿತ ವರನಿಗೆ ಚಾಕುವಿನಿಂದ ಬೆದರಿಸಿದ್ದಾರೆ ಎಂದು ಖಂಡಪದ ಉಪವಿಭಾಗದ ಪೊಲೀಸ್ ಅಧಿಕಾರಿ ಬಿಮಲ್ ಕುಮಾರ್ ಬಾರಿಕ್ ಪಿಟಿಐಗೆ ತಿಳಿಸಿದ್ದಾರೆ.

ಆರೋಪಿ ವ್ಯಕ್ತಿಗಳು ಘಟನೆಯನ್ನು ಮೊಬೈಲ್ –ಫೋನ್‌ನಲ್ಲಿ ರೆಕಾರ್ಡ್ ಮಾಡಿದ್ದಾರೆ, ಸಾಮಾಜಿಕ ಮಾಧ್ಯಮದಲ್ಲಿ ವಿಡಿಯೋವನ್ನು ಅಪ್‌ಲೋಡ್ ಮಾಡಿದ್ದಾರೆ. ಇದು ಸಾಮಾಜಿಕ ಮಾಧ್ಯಮದಲ್ಲಿ ವೈರಲ್ ಆಗಿದೆ ಎಂದು ಬಾರಿಕ್ ಹೇಳಿದ್ದಾರೆ. ಪ್ರಕರಣ ದಾಖಲಿಸಿಕೊಂಡಿರುವ ಪೊಲೀಸರು ಈ ಸಂಬಂಧ ಮೂವರನ್ನು ವಶಕ್ಕೆ ಪಡೆದು ವಿಚಾರಣೆ ನಡೆಸುತ್ತಿದ್ದಾರೆ ಎಂದು ತಿಳಿಸಿದರು. ಸಂತ್ರಸ್ತೆಯ ಹೇಳಿಕೆಯನ್ನು ದಾಖಲಿಸುವ ಪ್ರಕ್ರಿಯೆ ನಡೆಯುತ್ತಿದೆ. ಆಕೆಯ ವೈದ್ಯಕೀಯ ಪರೀಕ್ಷೆಯನ್ನು ಸಹ ಮಾಡಲಾಗುವುದು ಎಂದು ಅವರು ಹೇಳಿದರು

## ಕಸ್ಟಡಿಯಲ್ಲಿ ಬಿಷ್ಣೋಯ್ ಸಂದರ್ಶನ, 7 ಪೊಲೀಸರ ಅಮಾನತು

**ಚಂಡೀಗಢ:** ಪೊಲೀಸ್ ಕಸ್ಟಡಿಯಲ್ಲಿದ್ದಾಗ ದರೋಡೆಕೋರ ಲಾರೆನ್ಸ್ ಬಿಷ್ಣೋಯ್ ಸಂದರ್ಶನಕ್ಕೆ ಸಂಬಂಧಿಸಿದಂತೆ ಪಂಜಾಬ್ ಪೊಲೀಸರು ಇಬ್ಬರು ಉಪ ಶೈಕ್ಷಣಿಕ ಶ್ರೇಣಿಯ ಅಧಿಕಾರಿಗಳು ಸೇರಿದಂತೆ ಏಳು ಸಿಬ್ಬಂದಿಯನ್ನು ಅಮಾನತುಗೊಳಿಸಿದ್ದಾರೆ.

ವಿಶೇಷ ಪೊಲೀಸ್ ಮಹಾನಿರ್ದೇಶಕ ನೇತೃತ್ವದ ರಾಜ್ಯ ಪೊಲೀಸ್‌ನ ವಿಶೇಷ ತನಿಖಾ ತಂಡ ಬಿಷ್ಣೋಯ್ ಅವರ ಒಂದು ಸಂದರ್ಶನವನ್ನು ಮೊಹಾಲಿಯ ಖರಾರ್‌ನಲ್ಲಿ ಪಂಜಾಬ್ ಪೊಲೀಸರ ವಶದಲ್ಲಿದ್ದಾಗ ನಡೆಸಲಾಯಿತು, ಎರಡನೆಯದು ರಾಜಸ್ಥಾನದಲ್ಲಿ ನಡೆಸಲಾಯಿತು ಎಂಬುದನ್ನು ಕಂಡು ಹಿಡಿದಿತ್ತು. ಸಂದರ್ಶನಕ್ಕೆ ಸಂಬಂಧಿಸಿದಂತೆ ಏಳು ಮಂದಿ ಸಿಬ್ಬಂದಿ ಕರ್ತವ್ಯ ಲೋಪ ಎಸಗಿರುವುದನ್ನು ಎಸ್‌ಐಟಿ ಪತ್ತೆ ಹಚ್ಚಿದ ಬಳಿಕ ಅಮಾನತು ಮಾಡಲಾಗಿದೆ. ಪಂಜಾಬ್ ಗೃಹ ಕಾರ್ಯದರ್ಶಿಯ ಆದೇಶದ ಪ್ರಕಾರ, ಎಸ್ಪಿ ಗುರ್ಶರ್ ಸಿಂಗ್ ಸಂಧು, ಡಿಎಸ್ಪಿ ಸಮ್ಮರ್ ವನೀತ್, ಸಬ್ ಇನ್ಸ್‌ಪೆಕ್ಟರ್ ರೀನಾ, ಸಬ್ ಇನ್ಸ್‌ಪೆಕ್ಟರ್ ಜಗತ್ಪಾಲ್ ಜಂಗು, ಸಬ್ ಇನ್ಸ್‌ಪೆಕ್ಟರ್ ಶಗನ್‌ಜಿತ್ ಸಿಂಗ್, ಸಹಾಯಕ ಸಬ್ ಇನ್ಸ್‌ಪೆಕ್ಟರ್ ಮುಖ್ತಿಯಾರ್ ಸಿಂಗ್ ಮತ್ತು ಹೆಡ್ ಕಾನ್ಸ್‌ಟೇಬಲ್ ಓಂ ಪ್ರಕಾಶ್ ಅವರನ್ನು ಅಮಾನತು ಮಾಡಲಾಗಿದೆ. ಪ್ರಕರಣದ ಸೂಕ್ಷ್ಮತೆಯನ್ನು ಗಮನದಲ್ಲಿಟ್ಟುಕೊಂಡು ಮೇಲಿನ ಎಲ್ಲಾ ಅಧಿಕಾರಿಗಳನ್ನು ಅಮಾನತುಗೊಳಿಸಲಾಗಿದೆ ಎಂದು ಆದೇಶದಲ್ಲಿ ತಿಳಿಸಲಾಗಿದೆ.

## ಮತ್ತೆರಡು ಪೋಲಿಯೊ ಪ್ರಕರಣ ಪತ್ತೆ: ಒಟ್ಟು ಸಂಖ್ಯೆ 41ಕ್ಕೆ ಏರಿಕೆ

**ಇಸ್ಲಾಮಾಬಾದ್:** ಪಾಕಿಸ್ತಾನದಲ್ಲಿ ಎರಡು ಹೊಸ ಪೋಲಿಯೊ ಪ್ರಕರಣಗಳು ದೃಢಪಟ್ಟಿವೆ. ಸೋಂಕು ನಿರ್ಮೂಲನೆಗೆ ಪಾಕಿಸ್ತಾನ ಸರ್ಕಾರ ನಡೆಸುತ್ತಿರುವ ಪ್ರಯತ್ನಕ್ಕೆ ಇದರಿಂದ ಹಿನ್ನಡೆ ಉಂಟಾದಂತಾಗಿದೆ. ಬಲೂಚಿಸ್ತಾನ ಮತ್ತು ಖೈಬರ್ ಪುಂಖ್ವಾ ಪ್ರಾಂತ್ಯಗಳಲ್ಲಿ ಈ ಪ್ರಕರಣಗಳು ವರದಿಯಾಗಿದ್ದು, ಈ ವರ್ಷ ಒಟ್ಟು ಪ್ರಕರಣಗಳ ಸಂಖ್ಯೆ 41ಕ್ಕೆ ಏರಿಕೆಯಾಗಿದೆ. ಬಲೂಚಿಸ್ತಾನದ ಲೋರಲೈ ಜಿಲ್ಲೆಯಲ್ಲಿ ಮೂರೂವರೆ ವರ್ಷದ ಬಾಲಕಿಗೆ ಪೋಲಿಯೊ ದೃಢಪಟ್ಟಿದೆ. ಜಿಲ್ಲೆಯಲ್ಲಿ ಈ ವರ್ಷ ವರದಿಯಾದ ಮೊದಲ ಪ್ರಕರಣ ಇದಾಗಿದೆ. ಪೋಲಿಯೊ ಲಸಿಕೆ ಅಭಿಯಾನದ ಅವಧಿಯಲ್ಲಿ ಈ ಮಗು ಲಸಿಕೆ ಪಡೆದುಕೊಂಡಿರಲಿಲ್ಲ ಎಂದು ಅಧಿಕಾರಿಯೊಬ್ಬರು ಹೇಳಿದ್ದಾರೆ. ಸಿನಿಮಾ ಖೈಬರ್ ಪುಂಖ್ವಾ ಪ್ರಾಂತ್ಯದಲ್ಲಿ ಎರಡೂವರೆ ವರ್ಷದ ಮಗು ವಿನಲ್ಲಿ ಮತ್ತೊಂದು ಪ್ರಕರಣ ದೃಢಪಟ್ಟಿದೆ. ಈ ವರ್ಷ ಇಲ್ಲಿಯವರೆಗೆ, ಬಲೂಚಿಸ್ತಾನದಲ್ಲಿ 21, ಸಿಂದ್‌ನಲ್ಲಿ – 12, ಖೈಬರ್ ಪುಂಖ್ವಾದಲ್ಲಿ – 6, ಪಂಜಾಬ್ ಮತ್ತು ಇಸ್ಲಾಮಾಬಾದ್‌ನಲ್ಲಿ ತಲಾ ಒಂದು ಪ್ರಕರಣಗಳು ವರದಿಯಾಗಿವೆ. ದೇಶದಲ್ಲಿ ಪೋಲಿಯೊ ಪ್ರಕರಣಗಳು ಹೆಚ್ಚಾಗುತ್ತಿದ್ದು, ಇದರ ನಿಯಂತ್ರಣಕ್ಕಾಗಿ ಮುಂದಿನ ವಾರ ರಾಷ್ಟ್ರವ್ಯಾಪಿ ಪೋಲಿಯೊ ಲಸಿಕಾ ಅಭಿಯಾನ ಹಮ್ಮಿಕೊಳ್ಳಲು ಪಾಕಿಸ್ತಾನ ಸರ್ಕಾರ ಯೋಜಿಸಿದೆ. ಈ ಕಾರ್ಯಕ್ರಮದಲ್ಲಿ 45 ದಶಲಕ್ಷಕ್ಕೂ ಹೆಚ್ಚು ಮಕ್ಕಳಿಗೆ ಲಸಿಕೆ ಹಾಕುವ ಗುರಿ ಹೊಂದಿದೆ.



# ಥಿಯೇಟರ್‌ನಲ್ಲೇ ಮಹಿಳೆಯಿಂದ ಕಪಾಳಮೋಕ್ಷ

ಹೈದರಾಬಾದ್‌ನ ಥಿಯೇಟರ್‌ಗೆ ತೆರಳಿದ ಸಂದರ್ಭದಲ್ಲಿ 'ಲವ್ ರೆಡ್ಡಿ' ಚಿತ್ರತಂಡವು ಕಹಿ ಘಟನೆಯೊಂದನ್ನು ಎದುರಿಸಿದ್ದಾರೆ. ಥಿಯೇಟರ್‌ನಲ್ಲೇ ಕನ್ನಡದ ನಟನಿಗೆ ಮಹಿಳೆಯಿಂದ ಕಪಾಳಮೋಕ್ಷ ಆಗಿರುವ ಘಟನೆಯೊಂದು ನಡೆದಿದೆ. ತೆಲುಗಿನ 'ಲವ್ ರೆಡ್ಡಿ' ಎಂಬ ಸಿನಿಮಾದಲ್ಲಿ ನಟಿಸಿದ್ದ ಕನ್ನಡದ ನಟ ಎನ್‌ಟಿ ರಾಮಸ್ವಾಮಿ ಹಲ್ಲೆ ನಡೆಸಿದ ಘಟನೆ ಹೈದರಾಬಾದ್‌ನ ನಿಜಾಂಪೇಟ್‌ನಲ್ಲಿರುವ ಜಿಪಿಆರ್ ಮಾಲ್‌ನಲ್ಲಿ ನಡೆದಿದೆ. ಥಿಯೇಟರ್‌ನಲ್ಲಿ ಸಿನಿಮಾ ನೋಡುವಾಗ ಕ್ಲೈಮ್ಯಾಕ್ಸ್ ಸೀನ್ ನೋಡಿ ನಂತರ ಮಹಿಳೆ ಭಾವುಕರಾಗಿದ್ದರು. ಇದೇ ವೇಳೆ, ಚಿತ್ರತಂಡ ವೇದಿಕೆ ಹತ್ತಿದೆ. ಮಹಿಳೆಯೊಬ್ಬರು ಕೋಪದಿಂದ ಅಲ್ಲಿಗೆ ಹೋಗಿ ನಾಯಕಿಯ ತಂದೆ ಪಾತ್ರಧಾರಿ ರಾಮಸ್ವಾಮಿ ಕೆನ್ನೆಗೆ ಬಾರಿಸಿದ್ದಾರೆ. ಚಿತ್ರದಲ್ಲಿ ನಾಯಕ-ನಾಯಕಿಯನ್ನು ರಾಮಸ್ವಾಮಿ ದೂರ ಮಾಡಿದ್ದಕ್ಕೆ ಮಹಿಳೆ ಅವರ ಮೇಲೆ ಹಲ್ಲೆ ನಡೆಸಿದ್ದಾರೆ. ತಕ್ಷಣ ಅಲ್ಲಿದ್ದ ಸಹ ಕಲಾವಿದರು ಮಹಿಳೆಯಿಂದ ರಾಮಿಸ್ವಾಮಿ ಅವರನ್ನು ರಕ್ಷಿಸಿದರು. ಸದ್ಯ ಈ ವಿಡಿಯೋ ಸಾಮಾಜಿಕ ಜಾಲತಾಣದಲ್ಲಿ ವೈರಲ್ ಆಗುತ್ತಿದೆ.



# ನೆಗೆಟಿವ್ ಜನರ ಬಗ್ಗೆ ನಮ್ರತಾ ಸುದೀರ್ಘ ಪೋಸ್ಟ್!

## ನನ್ನ ಹೆಸರು ತೆಗೆದು ಕೊಳ್ಳೋದ್ಯಾಕೆ

ಬಿಗ್ ಬಾಸ್ ಖ್ಯಾತಿಯ ನಟಿ ನಮ್ರತಾ ಗೌಡ ಬೇಸರದಲ್ಲಿದ್ದಾರೆ. ಅದ್ಯಾಕೋ ಮನಸ್ಸಿನ ಅಷ್ಟು ನೋವನ್ನ ಬರೆದುಕೊಂಡಿದ್ದಾರೆ.

ಬಿಗ್ ಬಾಸ್ ಖ್ಯಾತಿಯ ನಟಿ ನಮ್ರತಾ ಗೌಡ ಹರ್ಟ್ ಆಗಿದ್ದಾರೆ. ಅದೆಷ್ಟು ಅಂದ್ರೆ, ಇಡೀ ಒಂದು ಪೇಜ್ ಲೆಟರ್ ಬರೆಯೋಷ್ಟು ಬೇಸರಗೊಂಡಿದ್ದಾರೆ. ಸೋಷಿಯಲ್ ಮೀಡಿಯಾದ ತಮ್ಮ ಪೇಜ್‌ನಲ್ಲಿಯೇ ತಮಗೆ ಆದ ನೋವನ್ನ ಬರೆದುಕೊಂಡಿದ್ದಾರೆ. ನಮ್ರತಾ ಬರೆದ ಪತ್ರದಲ್ಲಿ ನೋವು ಬಿಟ್ಟು ಬೇರೆ ಏನೂ ಇಲ್ಲ ಅನಿಸುತ್ತದೆ. ಜೀವನದಲ್ಲಿ ಸಾಧನೆ ಮಾಡಿರುತ್ತೇವೆ. ಕಷ್ಟಪಟ್ಟು ಮೇಲೆ ಬಂದಿರುತ್ತೇವೆ. ಅದನ್ನ ಹಾಳು ಮಾಡೋದು ಯಾಕೆ ಸುಮ್ನೆ ಹೆಸರು ತೆಗೆದುಕೊಂಡು ಹಾಳು ಮಾಡೋದು ಸರಿ ಅಲ್ವೇ ಅಲ್ಲ ನಿಮ್ಮ ಕಂಟೆಂಟ್‌ಗಾಗಿಯೆ ಹೆಸರು ತೆಗೆದುಕೊಂಡು ಹಾಳು ಮಾಡೋದು ಯಾಕೆ ಹೀಗೆ ಇಂಗ್ಲೀಷ್‌ನಲ್ಲಿಯೇ ಬರೆಯುತ್ತಲೇ ಹೋಗಿದ್ದಾರೆ. ನೆಗೆಟಿವ್ ಜನರಿಂದ ದೂರ..ದೂರ ನನ್ನ ಲೈಫ್ ಅಲ್ಲಿ ಒಂದು ಸತ್ಯ ಅರ್ಥ ಆಗಿದೆ. ನೆಗೆಟಿವ್ ಜನರಿಂದ ದೂರ ಇದಷ್ಟು ಒಳ್ಳೆಯದೆ. ಎಷ್ಟು ದೂರ ಇರ್ತಿರೋ ಅಷ್ಟು ಲೈಫ್ ಅಲ್ಲಿ ಶಾಂತಿ ಇರುತ್ತದೆ. ನೆಮ್ಮದಿ ಮನೆ ಮಾಡುತ್ತದೆ. ಇದನ್ನ ಲೈಫ್ ಅಲ್ಲಿ ನಾನು ಚೆನ್ನಾಗಿಯೇ ಅರ್ಥ ಮಾಡಿಕೊಂಡಿದ್ದೇನೆ.

ಟ್ರೋಲ್‌ಗಳು.ಆಧಾರ ರಹಿತ ಅಭಿಪ್ರಾಯಗಳಿಂದ ನಾನು ದೂರವೇ ಉಳಿಯುತ್ತೇನೆ. ಮೌನ ತಾಳುತ್ತೇನೆ. ಹಾಗಂತ ನಾನು ಎಲ್ಲಾವನ್ನೂ ಒಪ್ಪಿಕೊಂಡಿದ್ದೇನೆ ಅಂತ ಅಲ್ವೇ ಅಲ್ಲ.

ಸುಮ್ನೆ ನನ್ನ ಹೆಸರು ಯಾವುದ್ಯಾವುದಕ್ಕೋ ತಳಕು ಹಾಕೋದು ಇಷ್ಟ ಆಗೋದೇ ಇಲ್ಲ. ನನ್ನ ಲೈಫ್ ಬಗ್ಗೆ ತಿಳಿಯದೇ ಏನೇನೋ ಹೇಳೋದು ಎಷ್ಟು ಸರಿ ಹೇಳಿ.

ಅದ್ಯಾರದ್ದೋ ಗಮನ ಸೆಳೆಯೋಕೆ ನನ್ನ ಹೆಸರು ಬಳಕೆ ಆಗ್ತಿರೋದು ಯಾಕೆ ಒಂದು ಬೇಸರದ ಸಂಗತಿ ಅಂದ್ರೆ, ನಾವು ಏನ್ ಕೊಡ್ತಿವೋ. ಏನ್ ಹೇಳ್ತಿವೋ.. ಅದನ್ನ ಜನ ನಂಬಲಿಕ್ಕೆ ರೆಡಿ ಆಗಿರ್ತಾರೆ. ಇದರಿಂದ ಒಬ್ಬರ ಲೈಫ್ ಹಾಳಾಗುತ್ತದೆ ಅನ್ನುವ ಪರಿಕಲ್ಪನೆ ಕೂಡ ಇರೋದಿಲ್ಲ.


ಕಷ್ಟಪಟ್ಟು ಬೆಳೆಸಿದ ಕರಿಯರ್ ಮತ್ತು ಇರೋ ಫ್ಯಾಮಿಲಿ ಮೇಲೆ ಈ ರೀತಿಯ ಇಲ್ಲಸಲ್ಲದ್ದು ಬಂದಾಗ ಎಫೆಕ್ಟ್ ಆಗುತ್ತದೆ. ಹಾಗೇನೆ ನನ್ನ ಹೆಸರನ್ನ ಮತ್ತೊಬ್ಬರ ಜೊತೆಗೆ ಜೋಡಿಸಿ ಹೇಳಿದಾಗ ಬೇಸರ ಆಗುತ್ತದೆ. ಸುಮ್ನೆ ಆಧಾರರಹಿತವಾಗಿಯೇ ಹೇಳೋದು ಯಾಕೆ.. ಹೀಗೆ ನಮ್ರತಾ ಗೌಡ ಪ್ರಶ್ನೆ ಮಾಡ್ತಾನೇ ಹೋಗಿದ್ದಾರೆ.

# ಕೇದಾರನಾಥನ ಸನ್ನಿಧಾನದಲ್ಲಿ ಕಣ್ಣಪ್ಪ ಟೀಮ್

ದೊಡ್ಡ ಬಜೆಟ್‌ನಲ್ಲಿ ನಿರ್ಮಾಣವಾಗುತ್ತಿರುವ ಕಣ್ಣಪ್ಪ ಸಿನಿಮಾ ಇದೀಗ ವಿಶೇಷ ಕೈಂಕರ್ಯದಲ್ಲಿ ತೊಡಗಿಸಿಕೊಂಡಿದೆ. ಹಿರಿಯ ನಟ ಮೋಹನ್ ಬಾಬು, ವಿಷ್ಣು ಮಂಚು ಮತ್ತು ಕಣ್ಣಪ್ಪ ಸಿನಿಮಾ ತಂಡ, ಕೇದಾರನಾಥ, ಬದರಿನಾಥ್ ಮತ್ತು ಋಷಿಕೇಶಕ್ಕೆ ಭೇಟಿ ನೀಡಿದ್ದಾರೆ. ಈ ಮೂಲಕ 12 ಜ್ಯೋತಿರ್ಲಿಂಗಗಳ ದರ್ಶನಕ್ಕೆ ಮುಂದಾಗಿದ್ದಾರೆ.



ನಟ ಮೋಹನ್ ಬಾಬು, ಅವರ ಪುತ್ರ ವಿಷ್ಣು ಮಂಚು, ನಿರ್ಮಾಪಕ ಮುಖೇಶ್ ಕುಮಾರ್ ಮತ್ತು ನಟ ಅರ್ಪಿತ್ ರಂಕಾ ಅವರ ಜತೆಗೆ ಕೇದಾರನಾಥ, ಬದರಿನಾಥ್ ಮತ್ತು ಋಷಿಕೇಶದ ಶಿವನ ದೇವಾಲಯಗಳಿಗೆ ಭೇಟಿ ನೀಡಿ, ಆಧ್ಯಾತ್ಮಿಕ ಯಾತ್ರೆಯನ್ನು ಕೈಗೊಂಡರು. ಭವ್ಯವಾದ ಹಿಮಾಲಯದ ನಡುವೆ ನೆಲೆಸಿರುವ ಶಿವನಿಗೆ ಸಮರ್ಪಿತವಾದ ಹನ್ನೆರಡು ಜ್ಯೋತಿರ್ಲಿಂಗಗಳಲ್ಲಿ ಒಂದಾದ ಕೇದಾರನಾಥಕ್ಕೆ ತಂಡವು ಭೇಟಿ ನೀಡಿತು. ಬಳಿಕ ಬದರಿನಾಥದಲ್ಲಿ ಪ್ರಾರ್ಥನೆ ಸಲ್ಲಿಸಿ, ಋಷಿಕೇಶಕ್ಕೆ ಭೇಟಿ ನೀಡಿದರು. ಈ ಯಾತ್ರೆಯ ಬಗ್ಗೆ ಮಾತನಾಡಿರುವ ವಿಷ್ಣು ಮಂಚು, ''ಕಣ್ಣಪ್ಪ ಸಿನಿಮಾ ಬಿಡುಗಡೆಗೂ ಮುನ್ನ ಎಲ್ಲಾ 12 ಜ್ಯೋತಿರ್ಲಿಂಗ ಪುಣ್ಯ ಕ್ಷೇತ್ರಗಳಿಗೆ ತೆರಳುವುದು ನಮ್ಮ ಗುರಿ. ಅದರಂತೆ ಮೊದಲಿಗೆ ಕೇದಾರನಾಥನ ದರ್ಶನ ಪಡೆದಿದ್ದೇವೆ. ಮುಂಬರುವ ದಿನಗಳಲ್ಲಿ ಇನ್ನುಳಿದ 10 ಜ್ಯೋತಿರ್ಲಿಂಗಗಳನ್ನು ದರ್ಶನ ಮಾಡಲಿದ್ದೇವೆ. ಅದೇ ರೀತಿ ಶೀಘ್ರದಲ್ಲಿಯೇ ಈ ನಮ್ಮ ಸಿನಿಮಾ ರಿಲೀಸ್ ಆಗಲಿದೆ. ಫಿದಿ ಲಾರ್ಡ್ ಆಫ್ ದಿ ರಿಂಗ್ಸ್‌ನಂತಹ ಮಹಾಕಾವ್ಯ ಕಥೆಗಳಿಂದ ಸ್ಫೂರ್ತಿ ಪಡೆದ ಈ ಸಿನಿಮಾ, ದೃಶ್ಯವೈಭವದ ಮೂಲಕವೇ ಎಲ್ಲಾರನ್ನು ಬೆರಗುಗೊಳಿಸುತ್ತದೆ. ಹೆಸರಾಂತ ಹಾಲಿವುಡ್ ಛಾಯಾಗ್ರಾಹಕ ಶೆಲ್ಡನ್ ಚೌ ಅವರು ನ್ಯೂಜಿಲೆಂಡ್‌ನ ರಮಣೀಯ ಪ್ರದೇಶಗಳಲ್ಲಿ ದೃಶ್ಯಗಳನ್ನು ಸೆರೆಹಿಡಿದಿದ್ದಾರೆ. ಮುಖೇಶ್ ಕುಮಾರ್ ಸಿಂಗ್ ನಿರ್ದೇಶನದ ಈ ಚಿತ್ರದಲ್ಲಿ ಮೋಹನ್‌ಲಾಲ್, ಪ್ರಭಾಸ್, ಅಕ್ಷಯ್ ಕುಮಾರ್ ನಟಿಸಿದ್ದಾರೆ.



# ಶೇಕ್ ಮಾಡೋ ಸುದ್ದಿ!

ಬಣ್ಣದ ಲೋಕದಲ್ಲಿ ನಟ-ನಟಿಯರ ನಡುವೆ ಲವ್, ಡೇಟಿಂಗ್ ಸುದ್ದಿಗಳು ಕಾಮನ್ ಆಗಿದೆ. ಅಫೇರ್ ಸುದ್ದಿಗಳಂತು ಹರಿದಾಡುತ್ತಲೇ ಇರುತ್ತೆ. ಸೌತ್ ಸಿನಿಮಾ ಇಂಡಸ್ಟ್ರಿಯನ್ನೇ ಶೇಕ್ ಮಾಡೋ ಸುದ್ದಿಯೊಂದು ವೈರಲ್ ಆಗಿದೆ. ಕಾಲಿವುಡ್ ಸ್ಟಾರ್, ಬಾಲಿವುಡ್ ಸ್ಟಾರ್ ನಟಿ ಜೊತೆ ಹೋಟೆಲ್ ರೂಮ್‌ನಲ್ಲಿ ಸಿಕ್ಕಿಬಿದ್ದಿದ್ರಂತೆ ಯಾರು ಆ ನಟಿ ಗೊತ್ತಾ

ಚಿತ್ರರಂಗದಲ್ಲಿ ಲವ್ ಅಫೇರ್, ಬ್ರೇಕಪ್ ಸಾಮಾನ್ಯವಾಗಿದೆ. ಕೆಲವು ಬಿಗ್ ಹೀರೋಗಳು ಮತ್ತು ಸ್ಟಾರ್ ಹೀರೋಯಿನ್ ಗಳ ಜೊತೆ ಅಫೇರ್ ಹೊಂದಿದ್ದ ಅನೇಕ ಉದಾಹರಣೆ ಇದೆ. ಕೆಲ ನಟ-ನಟಿಯರು 2-3 ಮದುವೆ ಕೂಡ ಆಗಿದ್ದಾರೆ.

ಚಿತ್ರರಂಗದಲ್ಲಿ ಲವ್ ಅಫೇರ್, ಬ್ರೇಕಪ್ ಸಾಮಾನ್ಯವಾಗಿದೆ. ಕೆಲವು ಬಿಗ್ ಹೀರೋಗಳು ಮತ್ತು ಸ್ಟಾರ್ ಹೀರೋಯಿನ್ ಗಳ ಜೊತೆ ಅಫೇರ್ ಹೊಂದಿದ್ದ ಅನೇಕ ಉದಾಹರಣೆ ಇದೆ. ಕೆಲ ನಟ-ನಟಿಯರು 2-3 ಮದುವೆ ಕೂಡ ಆಗಿದ್ದಾರೆ. ಚಿತ್ರರಂಗದಲ್ಲಿ ದೊಡ್ಡ ಹೀರೋಗಳು ಮತ್ತು ಸ್ಟಾರ್ ಹೀರೋಯಿನ್ಗಳ ನಡುವೆ ಅಫೇರ್ ಇದೆ ಎಂಬ ಹಲವು ವರದಿಗಳು ಹರಿದಾಡ್ತಾಲೆ ಇರುತ್ತೆ. ಆದ್ರೆ ಹಿರಿಯ ನಾಯಕ ಕಮಲ್ ಹಾಸನ್ ನಾಯಕಿಯ ಜೊತೆ ರೂಮಿನಲ್ಲಿ ಸಿಕ್ಕಿ ಬಿದ್ದಿದ್ರು ಎಂಬ ಶಾಕಿಂಗ್ ವರದಿ ಕಾಲಿವುಡ್ ಅಂಗಳದಲ್ಲೂ ಹರಿದಾಡಿತ್ತು. ಆಗ ಈ ವಿಷಯ ಸಖತ್ ವೈರಲ್ ಆಗ್ತಿದೆ. ಸಿಕ್ಕಿಬಿದ್ದ ಜೋಡಿಗಳು ಬೇರೆ ಯಾರೂ ಅಲ್ಲ, ಲೆಜೆಂಡರಿ ನಟ ಕಮಲ್ ಹಾಸನ್ ಮತ್ತು ಹಿಂದಿನ ನಾಯಕಿ ರೇಖಾ ಎನ್ನಲಾಗ್ತಿದೆ.



# ಅಪ್ಸರೆಯಂತೆ ಮಿಂಚಿದ ರಾಧಿಕಾ

ಸ್ಯಾಂಡಲ್‌ವುಡ್ ನಟಿ ರಾಧಿಕಾ ಪಂಡಿತ್ ಅವರು ವೈಯಕ್ತಿಕ ಬದುಕಿನಲ್ಲಿ ತೊಡಗಿಸಿಕೊಂಡಿದ್ದಾರೆ. ಅದೆಷ್ಟೇ ಬ್ಯುಸಿಯಾಗಿದ್ರೂ ಒಂದಲ್ಲಾ ಒಂದು ಫೋಟೋಶೂಟ್ ಮೂಲಕ ನಟಿ ಸದ್ದು ಮಾಡುತ್ತಲೇ ಇರುತ್ತಾರೆ. ಇದೀಗ ರಾಧಿಕಾ ಚೆಂದದ ಫೋಟೋವೊಂದನ್ನು ಸಾಮಾಜಿಕ ಜಾಲತಾಣದಲ್ಲಿ ಹಂಚಿಕೊಂಡಿದ್ದಾರೆ.

ವೈಟ್ ಕಲರ್ ಲೆಹೆಂಗಾದಲ್ಲಿ ಅವರು ರಾಧಿಕಾ ಪಂಡಿತ್ ಅಪ್ಸರೆಯಂತೆ ಕಂಗೊಳಿಸಿದ್ದಾರೆ. ವಿವಿಧ ಭಂಗಿಯಲ್ಲಿ ನಟಿ ಪೋಸ್ ನೀಡಿದ್ದಾರೆ.

ನೆಚ್ಚಿನ ನಟಿಯ ಚೆಂದದ ಲುಕ್ ನೋಡಿ 'ರಾಜಕುಮಾರಿ' ಎಂದು ರಾಧಿಕಾರನ್ನು ಫ್ಯಾನ್ಸ್ ಬಣ್ಣಿಸಿದ್ದಾರೆ. ಒಟ್ನಲ್ಲಿ ರಾಧಿಕಾ ನಯಾ ಲುಕ್ ಫ್ಯಾನ್ಸ್‌ಗೆ ಖುಷಿ ಕೊಟ್ಟಿದೆ. ಅಂದಹಾಗೆ, ಪತಿ ಯಶ್ ಇಂದು ನ್ಯಾಷನಲ್ ಸ್ಟಾರ್ ಆಗಿ ಹೆಸರು ಮಾಡಿರೋದ್ದಕ್ಕೆ ನಟನ ಪರಿಶ್ರಮದ ಜೊತೆ ರಾಧಿಕಾ ಬೆಂಬಲ ಕೂಡ ಸಾಕಷ್ಟಿದೆ. ಯಶ್ ಪ್ರತಿ ಹೆಜ್ಜೆಯಲ್ಲೂ ರಾಧಿಕಾ ಜೊತೆಯಾಗಿ ಸಾಥ್ ನೀಡುತ್ತಲೇ ಬಂದಿದ್ದಾರೆ. ಯಶ್ ಕೂಡ ಸಾಕಷ್ಟು ಬಾರಿ ಸಂದರ್ಶನಗಳಲ್ಲಿ ನನ್ನ ಯಶಸ್ಸಿಗೆ ಪತ್ನಿಯೇ ಶಕ್ತಿ ಎಂದು ರಾಧಿಕಾ ಅವರ ಬೆಂಬಲದ ಬಗ್ಗೆ ಹೆಮ್ಮೆಯಿಂದ ಮಾತನಾಡಿದ್ದಾರೆ.

# ಭಾರತದಲ್ಲಿ ಚೊಚ್ಚಲ ಟೆಸ್ಟ್ ಸರಣಿ ಗೆದ್ದು ಇತಿಹಾಸ ಸೃಷ್ಟಿಸಿದ ನ್ಯೂಜಿಲೆಂಡ್

## ಇದೀಗ ಎರಡನೇ ಟೆಸ್ಟ್ ಪಂದ್ಯವನ್ನು ಸುಲಭವಾಗಿ ಗೆದ್ದು ಭಾರತದ ನೆಲದಲ್ಲಿ ಇತಿಹಾಸ ನಿರ್ಮಿಸಿದ ಕಿವೀಸ್ ತಂಡ

### ಸ್ಯಾಂಟ್ನರ್ ತಂಡದ ಗೆಲುವಿನ ರೂವಾರಿ



ಪುಣೆಯಲ್ಲಿ ನಡೆದ ಎರಡನೇ ಟೆಸ್ಟ್ ಪಂದ್ಯವನ್ನು 113 ರನ್‌ಗಳಿಂದ ಗೆದ್ದುಕೊಂಡಿರುವ ನ್ಯೂಜಿಲೆಂಡ್ ತಂಡ ಇದೇ ಮೊದಲ ಬಾರಿಗೆ ಭಾರತದಲ್ಲಿ ಟೆಸ್ಟ್ ಸರಣಿ ಗೆದ್ದ ದಾಖಲೆ ನಿರ್ಮಿಸಿದೆ. ವಾಸ್ತವವಾಗಿ 1955 ರಿಂದ ಟೆಸ್ಟ್ ಸರಣಿಗಾಗಿ ಭಾರತ ಪ್ರವಾಸ ಮಾಡುತ್ತಿರುವ ನ್ಯೂಜಿಲೆಂಡ್ ತಂಡ, ಇದುವರೆಗೆ ಭಾರತದ ನೆಲದಲ್ಲಿ ಈ ಸರಣಿಯನ್ನು ಹೊರತುಪಡಿಸಿ 12 ಟೆಸ್ಟ್ ಸರಣಿಗಳನ್ನುನ ಆಡಿತ್ತು. ಆದರೆ ಈ ಯಾವ ಸರಣಿಯಲ್ಲೂ ಕಿವೀಸ್ ತಂಡ ಗೆಲ್ಲುವುದಕ್ಕೆ ಟೀಂ ಇಂಡಿಯಾ ಅವಕಾಶ ಮಾಡಿಕೊಟ್ಟಿರಲಿಲ್ಲ. ಆದರೀಗ ರೋಹಿತ್ ಪಡೆ ತವರಿನಲ್ಲಿ ಮೊದಲ ಬಾರಿಗೆ ಕಿವೀಸ್ ವಿರುದ್ಧ ಸೋತ ಬೇಡದ ದಾಖಲೆಯನ್ನು ತನ್ನ ಖಾತೆಗೆ ಹಾಕಿಕೊಂಡಿದೆ. ಈ ಮೊದಲು ಬೆಂಗಳೂರಿನಲ್ಲಿ ನಡೆದ ಟೆಸ್ಟ್ ಪಂದ್ಯವನ್ನು 8 ವಿಕೆಟ್‌ಗಳಿಂದ ಗೆದ್ದುಕೊಂಡಿದ್ದ ಕಿವೀಸ್ ತಂಡ, ಇದೀಗ ಎರಡನೇ ಟೆಸ್ಟ್ ಪಂದ್ಯವನ್ನು ಸುಲಭವಾಗಿ ಗೆದ್ದು ಭಾರತದ ನೆಲದಲ್ಲಿ ಇತಿಹಾಸ ನಿರ್ಮಿಸಿದೆ. ಇತ್ತ ಈ ಸೋಲಿನೊಂದಿಗೆ ತವರಿನಲ್ಲಿ ಟೀಂ ಇಂಡಿಯಾದ ಅಜೇಯ ಟೆಸ್ಟ್ ಸರಣಿಯ ಗೆಲುವಿನ ಓಟಕ್ಕೆ ಬ್ರೇಕ್ ಬಿದ್ದಿದೆ.

**ಭಾರತಕ್ಕೆ 359 ರನ್ ಗುರಿ**

ಪುಣೆ ಟೆಸ್ಟ್‌ನ ಸೋಲಿಗೆ ಟೀಂ ಇಂಡಿಯಾದ ಕಳಪೆ ಬ್ಯಾಟಿಂಗ್ ಪ್ರಮುಖ ಕಾರಣ ಎಂದರೆ ತಪ್ಪಾಗಲಾರದು. ಏಕೆಂದರೆ ಟಾಸ್ ಗೆದ್ದು ಮೊದಲು ಬ್ಯಾಟಿಂಗ್ ಮಾಡಿದ ನ್ಯೂಜಿಲೆಂಡ್ ತಂಡ ಮೊದಲ ಇನ್ನಿಂಗ್ಸ್‌ನಲ್ಲಿ 259 ರನ್ ಕಲೆಹಾಕಿತು. ನಂತರ ಬ್ಯಾಟಿಂಗ್ ಆರಂಭಿಸಿದ ಟೀಂ ಇಂಡಿಯಾ ಕೇವಲ 156 ರನ್‌ಗಳಿಗೆ ಆಲೌಟ್ ಆಯಿತು. ಹೀಗಾಗಿ 103 ರನ್‌ಗಳ ಮುನ್ನಡೆಯೊಂದಿಗೆ 2ನೇ ಇನ್ನಿಂಗ್ಸ್ ಆರಂಭಿಸಿದ ನ್ಯೂಜಿಲೆಂಡ್ ತಂಡ 255 ರನ್‌ಗಳಿಗೆ ಆಲೌಟ್ ಆಗುವ ಮೂಲಕ ಭಾರತಕ್ಕೆ 359 ರನ್‌ಗಳ ಗುರಿ ನೀಡಿತು.

**ಬ್ಯಾಟಿಂಗ್ ವೈಫಲ್ಯ ಸೋಲಿಗೆ ಕಾರಣ**

**ಆದರೆ ಗುರಿ ಬೆನ್ನಟ್ಟಿದ ಟೀಂ ಇಂಡಿಯಾದ ಬ್ಯಾಟಿಂಗ್ ಮೊದಲ ಇನ್ನಿಂಗ್ಸ್‌ನಂತೆ ಎರಡನೇ ಇನ್ನಿಂಗ್ಸ್‌ನಲ್ಲೂ ಕೈಕೊಟ್ಟಿತು. ಹೀಗಾಗಿ ಇಡೀ ತಂಡ ಎರಡನೇ ಇನ್ನಿಂಗ್ಸ್‌ನಲ್ಲಿ ಕೇವಲ 245 ರನ್ ಗಳಿಸಲಷ್ಟೇ ಶಕ್ತವಾಯಿತು. ತಂಡದ ನಾಯಕ ರೋಹಿತ್ ಶರ್ಮಾ ಕೇವಲ 8 ರನ್ ಗಳಿಸಿ ಔಟಾದರೆ, ವಿರಾಟ್ ಕೊಹ್ಲಿ ಕೇವಲ 17 ರನ್‌ಗೆ ಸುಸ್ತಾದರು. ವಾಷಿಂಗ್ಟನ್ ಸುಂದರ್ 21 ರನ್ ಕೊಡುಗೆ ನೀಡಿದರೆ, ಇಲ್ಲದ ರನ್ ಕದಿಯಲು ಹೋದ ರಿಷಬ್ ಪಂತ್‌ಗೆ ಖಾತೆ ತೆರೆಯಲು ಸಾಧ್ಯವಾಗಲಿಲ್ಲ. ತಂಡದ ಪರ ಗರಿಷ್ಠ ಇನ್ನಿಂಗ್ಸ್ ಆಡಿದ ರವೀಂದ್ರ ಜಡೇಜಾ 42 ರನ್ ಗಳಿಸಿದರೂ ತಂಡದ ಸೋಲನ್ನು ತಡೆಯಲು ಸಾಧ್ಯವಾಗಲಿಲ್ಲ.**



# ನಾಯಕನ ಜವಬ್ದಾರಿ ಮರೆತ ರೋಹಿತ್ ಶರ್ಮಾ

### ಕಿವೀಸ್ ವಿರುದ್ಧವೂ ಸಪ್ಪೆ ಪ್ರದರ್ಶನ

ನ್ಯೂಜಿಲೆಂಡ್ ವಿರುದ್ಧದ ಎರಡನೇ ಟೆಸ್ಟ್ ಪಂದ್ಯವನ್ನು ಸೋಲುವ ಆತಂಕ ಟೀಂ ಇಂಡಿಯಾಕ್ಕೆ ಎದುರಾಗಿದೆ. ಇದಕ್ಕೆ ಪ್ರಮುಖ ಕಾರಣ ತಂಡದ ಬ್ಯಾಟಿಂಗ್ ವೈಫಲ್ಯ. ನಾಯಕ ರೋಹಿತ್ ಶರ್ಮಾ ಹಾಗೂ ಮಾಜಿ ನಾಯಕ ವಿರಾಟ್ ಕೊಹ್ಲಿಯ ಕಳಪೆ ಬ್ಯಾಟಿಂಗ್ ತಂಡದ ಸೋಲಿಗೆ ಪ್ರಮುಖ ಕಾರಣವಾಗಿದೆ. ಅದರಲ್ಲೂ ಬಹಳ ದಿನಗಳಿಂದ ಟೆಸ್ಟ್ ಕ್ರಿಕೆಟ್‌ನಲ್ಲಿ ರನ್ ಬರ ಎದುರಿಸುತ್ತಿರುವ ನಾಯಕ ರೋಹಿತ್ ಶರ್ಮಾ, ಕಿವೀಸ್ ವಿರುದ್ಧದ ಎರಡನೇ ಟೆಸ್ಟ್‌ನ ಎರಡನೇ ಇನಿಂಗ್ಸ್‌ನಲ್ಲೂ ಬಹುಬೇಗನೇ ಪೆವಿಲಿಯನ್ ಸೇರಿಕೊಂಡಿದ್ದಾರೆ. ಮೊದಲ ಇನ್ನಿಂಗ್‌ನಲ್ಲಿ ಶೂನ್ಯಕ್ಕೆ ಔಟಾಗಿದ್ದ ರೋಹಿತ್ ಎರಡನೇ ಇನ್ನಿಂಗ್‌ನಲ್ಲಿ 16 ಎಸೆತಗಳನ್ನು ಎದುರಿಸಿ ಕೇವಲ 8 ರನ್ ಗಳಿಸಿ ವಿಕೆಟ್ ಒಪ್ಪಿಸಿದರು. ಈ ಮೂಲಕ ಮತ್ತೊಮ್ಮೆ ರೋಹಿತ್ ಶರ್ಮಾ ಅವರ ಬ್ಯಾಟ್ ಮೌನಕ್ಕೆ ಶರಣಾಯಿತು. ಇದು ಮಾತ್ರವಲ್ಲ ರೋಹಿತ್ ಶರ್ಮಾ ಇಡೀ ಸರಣಿಯಲ್ಲಿ ರನ್ ಗಳಿಸಲು ಹೆಣಗಾಡುತ್ತಿರುವುದನ್ನು ಕಾಣಬಹುದಾಗಿದೆ.

ಕೊನೆಯ 8 ಇನ್ನಿಂಗ್ಸ್‌ಗಳಲ್ಲಿ 14 ರ ಸರಾಸರಿ ರೋಹಿತ್ ಶರ್ಮಾ ಅವರ ಕೊನೆಯ 8 ಟೆಸ್ಟ್ ಇನ್ನಿಂಗ್ಸ್‌ಗಳನ್ನು ನೋಡಿದರೆ, ಅವರು ರನ್ ಬರ ಎದುರಿಸುತ್ತಿರುವುದು ಸ್ಪಷ್ಟವಾಗಿದೆ. ಕಳೆದ 8 ಟೆಸ್ಟ್ ಇನ್ನಿಂಗ್ಸ್‌ಗಳಲ್ಲಿ ರೋಹಿತ್ 14ರ ಸರಾಸರಿಯಲ್ಲಿ ಕೇವಲ 104 ರನ್ ಗಳಿಸಿದ್ದಾರೆ. ನ್ಯೂಜಿಲೆಂಡ್ ವಿರುದ್ಧ ಬೆಂಗಳೂರಿನಲ್ಲಿ ನಡೆದ ಮೊದಲ ಟೆಸ್ಟ್ ಪಂದ್ಯದಲ್ಲೂ ರೋಹಿತ್ ಶರ್ಮಾ ಅವರ ಕಳಪೆ ಬ್ಯಾಟಿಂಗ್‌ನ ಪರಿಣಾಮವನ್ನು ಟೀಂ ಇಂಡಿಯಾ ಅನುಭವಿಸಬೇಕಾಯಿತು. ಇದೀಗ ಎರಡನೇ ಟೆಸ್ಟ್‌ನಲ್ಲಿ 359 ರನ್‌ಗಳ ಗುರಿಯನ್ನು ಬೆನ್ನಟ್ಟಿದ ಟೀಂ ಇಂಡಿಯಾ ಸೋಲಿನ ಸುಳಿಗೆ ಸಿಲುಕಿರುವುದು ಕೂಡ ರೋಹಿತ್ ಅವರ ಕಳಪೆ ಬ್ಯಾಟಿಂಗ್‌ನಿಂದ.

# ರನೌಟ್ ಆದ ರಿಷಭ್ ಪಂತ್

### ಓಡ್ಲಿಕ್ಕೆ ಆಗದಿದ್ದರೂ, ಓಡಿ ಹೋದ

ಭಾರತ ಮತ್ತು ನ್ಯೂಝಿಲೆಂಡ್ ನಡುವಣ ಮೂರು ಪಂದ್ಯಗಳ ಸರಣಿಯ ಮೊದಲ ಮ್ಯಾಚ್‌ನಲ್ಲಿ ಕಿವೀಸ್ ಪಡೆ ಭರ್ಜರಿ ಜಯ ಸಾಧಿಸಿದೆ. ಇದೀಗ ದ್ವಿತೀಯ ಟೆಸ್ಟ್ ಪಂದ್ಯವನ್ನು ಗೆದ್ದುಕೊಂಡರೆ ಮೊದಲ ಬಾರಿಗೆ ಭಾರತದಲ್ಲಿ ಟೆಸ್ಟ್ ಸರಣಿ ಗೆದ್ದ ಸಾಧನೆ ಮಾಡಲಿದೆ.

ಪುಣೆಯಲ್ಲಿ ನಡೆಯುತ್ತಿರುವ ನ್ಯೂಝಿಲೆಂಡ್ ವಿರುದ್ಧದ 2ನೇ ಟೆಸ್ಟ್ ಪಂದ್ಯದಲ್ಲಿ ಟೀಮ್ ಇಂಡಿಯಾ ವಿಕೆಟ್ ಕೀಪರ್ ಬ್ಯಾಟರ್ ರಿಷಭ್ ಪಂತ್ ರನೌಟ್ ಆಗುವ ಮೂಲಕ ವಿಕೆಟ್ ಕೈ ಚೆಲ್ಲಿದ್ದಾರೆ. ಅದು ಕೂಡ ಓಡಬಾರದ ರನ್ ಅನ್ನು ಕದಿಯುವ ಯತ್ನದಲ್ಲಿ ಎಂಬುದೇ ಅಚ್ಚರಿ. ಈ ಪಂದ್ಯದ ದ್ವಿತೀಯ ಇನಿಂಗ್ಸ್‌ನಲ್ಲಿ ನ್ಯೂಝಿಲೆಂಡ್ ಭಾರತ ತಂಡಕ್ಕೆ 359 ರನ್‌ಗಳ ಗುರಿ ನೀಡಿದೆ. ಈ ಗುರಿಯನ್ನು ಬೆನ್ನತ್ತಿದ ಟೀಮ್ ಇಂಡಿಯಾಗೆ ಯಶಸ್ವಿ ಜೈಸ್ವಾಲ್ (77) ಉತ್ತಮ ಆರಂಭ ಒದಗಿಸಿದ್ದರು. ಆದರೆ ಭಾರತ ತಂಡವು ಮತ್ತೊಂದು ತುದಿಯಲ್ಲಿ ವಿಕೆಟ್ ಕೈ ಚೆಲ್ಲುತ್ತಾ ಸಾಗಿತು. ಈ ವೇಳೆ 5ನೇ ಕ್ರಮಾಂಕದಲ್ಲಿ ಕಣಕ್ಕಿಳಿದ ರಿಷಭ್ ಪಂತ್ ಶೂನ್ಯಕ್ಕೆ ರನೌಟ್ ಆದರು. 23ನೇ ಓವರ್‌ನ 2ನೇ ಎಸೆತದಲ್ಲಿ ವಿರಾಟ್ ಕೊಹ್ಲಿ ಸಿಂಗಲ್ ತೆಗೆಯಲು ಯತ್ನಿಸಿದ್ದರು. ಆದರೆ ಅತ್ತ ಫೀಲ್ಡರ್ ಬಳಿ ಚೆಂಡು ಸಾಗಿದ್ದರಿಂದ ಪಂತ್‌ಗೆ ರನ್ ಕರೆಯನ್ನು ನಿರಾಕರಿಸಬಹುದಿತ್ತು. ಆದರೆ ರಿಸ್ಕ್ ತೆಗೆದು ಕೊಂಡ ರಿಷಭ್ ಪಂತ್ ರನ್‌ಗಾಗಿ ಓಡಿದರು. ಅಷ್ಟರಲ್ಲಾಗಲೇ ಚೆಂಡು ವಿಕೆಟ್ ಕೀಪರ್ ಕೈ ಸೇರಿತು. ಈ ಮೂಲಕ ರಿಷಭ್ ಪಂತ್ ಸುಲಭವಾಗಿ ತಮ್ಮ ವಿಕೆಟ್ ಅನ್ನು ಕೈಚೆಲ್ಲಿದ್ದಾರೆ.



# ಟೆಸ್ಟ್ ಸರಣಿ ಸೋಲು; ಭಾರತದ ಡಬ್ಲ್ಯುಟಿಸಿ ಫೈನಲ್ ಹಾದಿ ಮತ್ತಷ್ಟು ಕಠಿಣ



ಬಾಂಗ್ಲಾದೇಶ ವಿರುದ್ಧದ ಟೆಸ್ಟ್ ಸರಣಿಯನ್ನು ಏಕಪಕ್ಷೀಯವಾಗಿ ಗೆದ್ದುಕೊಂಡಿದ್ದ ಟೀಂ ಇಂಡಿಯಾ, ಕಿವೀಸ್ ತಂಡವನ್ನು ಹಾಗೆಯೇ ಸೋಲಿಸುತ್ತದೆ ಎಂದು ಎಲ್ಲಾರೂ ಭಾವಿಸಿದ್ದರು. ಆದರೆ ಅದೆಲ್ಲ ಲೆಕ್ಕಾಚಾರವನ್ನು ಕಿವೀಸ್ ಪಡೆ ಬುಡಮೇಲು ಮಾಡಿದ್ದು, ಭಾರತದಲ್ಲಿ ಚೊಚ್ಚಲ ಟೆಸ್ಟ್ ಸರಣಿಯನ್ನು ಗೆದ್ದುಕೊಂಡಿದೆ. ಇತ್ತ 12 ವರ್ಷಗಳ ಬಳಿಕ ತವರಿನಲ್ಲಿ ಟೆಸ್ಟ್ ಸರಣಿ ಸೋತ ನೋವಿನಲ್ಲಿರುವ ರೋಹಿತ್ ಪಡೆಗೆ ಇದೀಗ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್ ಫೈನಲ್ ರೇಸ್‌ನಿಂದ ಹೊರಗುಳಿಯುವ ಆತಂಕ ಎದುರಾಗಿದೆ. ವಾಸ್ತವವಾಗಿ ಕಿವೀಸ್ ವಿರುದ್ಧದ ಸರಣಿಗೂ ಮುನ್ನ ಡಬ್ಲ್ಯುಟಿಸಿ ಫೈನಲ್‌ಗೆ ಪ್ರಮುಖ ಸ್ಪರ್ಧಿಯಾಗಿದ್ದ ಟೀಂ ಇಂಡಿಯಾ ಇದೀಗ ರೇಸ್‌ನಿಂದ ಹೊರಗುಳಿಯುವ ಆತಂಕದಲ್ಲಿದೆ. ಇದಲ್ಲದೆ ಪುಣೆ ಟೆಸ್ಟ್ ಸೋಲಿನೊಂದಿಗೆ ಡಬ್ಲ್ಯುಟಿಸಿ ಪಾಯಿಂಟ್ ಪಟ್ಟಿಯಲ್ಲೂ ತಂಡದ ಗೆಲುವಿನ ಶೇಕಡಾವಾರುವಿನಲಿ ಭಾರಿ ಕುಸಿತ ಕಂಡುಬಂದಿದೆ.

ಪುಣೆ ಟೆಸ್ಟ್ ಸೋಲಿನ ಪರಿಣಾಮವೇನು

ರೋಹಿತ್ ಶರ್ಮಾ ನಾಯಕತ್ವದ ಟೀಂ ಇಂಡಿಯಾ, ಪುಣೆ ಟೆಸ್ಟ್‌ಗೂ ಮುನ್ನ ಡಬ್ಲ್ಯುಟಿಸಿ ಪಾಯಿಂಟ್ಸ್ ಪಟ್ಟಿಯಲ್ಲಿ 68.06 ಶೇಕಡಾ ಅಂಕಗಳೊಂದಿಗೆ ಅಗ್ರಸ್ಥಾನದಲ್ಲಿತ್ತು. ಉಳಿದಂತೆ ಆಸ್ಟ್ರೇಲಿಯಾ ತಂಡವು 62.50 ಶೇಕಡಾ ಅಂಕಗಳೊಂದಿಗೆ ಎರಡನೇ ಸ್ಥಾನದಲ್ಲಿತ್ತು. ಇದಲ್ಲದೇ ಶೇ.55.56 ಅಂಕಗಳೊಂದಿಗೆ ಶ್ರೀಲಂಕಾ ಮೂರನೇ ಸ್ಥಾನದಲ್ಲಿದ್ದರೆ, ಶೇ.47.62 ಅಂಕಗಳೊಂದಿಗೆ ದಕ್ಷಿಣ ಆಫ್ರಿಕಾ ನಾಲ್ಕನೇ ಸ್ಥಾನದಲ್ಲಿದ್ದು, ಶೇ.44.44 ಅಂಕಗಳೊಂದಿಗೆ ನ್ಯೂಜಿಲೆಂಡ್ ಐದನೇ ಸ್ಥಾನದಲ್ಲಿತ್ತು.

ಆದರೆ ಪುಣೆಯಲ್ಲಿನ ಸೋಲಿನ ನಂತರ ಟೀಂ ಇಂಡಿಯಾದ ಗೆಲುವಿನ ಶೇಕಡಾವಾರು 62.82ಕ್ಕೆ ಇಳಿದಿದೆ. ಆದಾಗ್ಯೂ, ಡಬ್ಲ್ಯುಟಿಸಿ ಪಾಯಿಂಟ್ ಪಟ್ಟಿಯಲ್ಲಿ ಟೀಂ ಇಂಡಿಯಾದ ಸ್ಥಾನದ ಮೇಲೆ ಯಾವುದೇ ಪರಿಣಾಮ ಬೀರಲಿಲ್ಲ. ಏಕೆಂದರೆ ಈ ಸೋಲಿನ ಹೊರತಾಗಿಯೂ, ರೋಹಿತ್ ಶರ್ಮಾ ತಂಡವು ಶೇಕಡಾ 0.32 ಅಂಕಗಳ ಅಂತರದಿಂದ ಪಾಯಿಂಟ್ ಪಟ್ಟಿಯಲ್ಲಿ ಅಗ್ರಸ್ಥಾನದಲ್ಲಿ ಮುಂದುವರೆದಿದೆ. ಆದರೆ ಈ ಗೆಲುವಿನಿಂದ ನ್ಯೂಜಿಲೆಂಡ್ ತಂಡಕ್ಕೆ ಖಂಡಿತವಾಗಿಯೂ ಲಾಭವಾಗಿದ್ದು, ಶೇಕಡಾ 50ರಷ್ಟು ಗೆಲುವಿನ ಶೇಕಡಾವಾರುವಿನೊಂದಿಗೆ ಕಿವೀಸ್ ಪಡೆ ಇದೀಗ ದಕ್ಷಿಣ ಆಫ್ರಿಕಾವನ್ನು ಹಿಂದಿಕ್ಕಿ ನಾಲ್ಕನೇ ಸ್ಥಾನಕ್ಕೆ ಬಂದಿದೆ.

**ಡಬ್ಲ್ಯುಟಿಸಿ ಫೈನಲ್‌ನಿಂದ ಟೀಂ ಇಂಡಿಯಾ ಔಟ್**

**ಪುಣೆ ಟೆಸ್ಟ್‌ನಲ್ಲಿ ಸೋಲಿನ ನಂತರ, ಭಾರತ ತಂಡವು ಡಬ್ಲ್ಯುಟಿಸಿ ಫೈನಲ್‌ನ ರೇಸ್‌ನಿಂದ ಹೊರಗುಳಿಯುತ್ತದೆಯೇ ಎಂಬುದು ದೊಡ್ಡ ಪ್ರಶ್ನೆಯಾಗಿದೆ. ಪ್ರಸ್ತುತ ಟೀಂ ಇಂಡಿಯಾ ಮೂರನೇ ಆವೃತ್ತಿಯ ವಿಶ್ವ ಟೆಸ್ಟ್ ಚಾಂಪಿಯನ್‌ಶಿಪ್‌ನಲ್ಲಿ ಇನ್ನು 6 ಟೆಸ್ಟ್ ಪಂದ್ಯಗಳು ಆಡಬೇಕಿದೆ. ಹೀಗಾಗಿ ರೋಹಿತ್ ಪಡೆ ಯಾವುದೇ ತಂಡವನ್ನು ಅವಲಂಬಿಸದೆ ಡಬ್ಲ್ಯುಟಿಸಿ ಫೈನಲ್‌ಗೆ ಅರ್ಹತೆ ಪಡೆಯಬೇಕಾದರೆ, ಉಳಿದಿರುವ 6 ಪಂದ್ಯಗಳಲ್ಲಿ ಕನಿಷ್ಠ 4 ಪಂದ್ಯಗಳನ್ನು ಗೆಲ್ಲಬೇಕು. ಆದರೆ ಈ 4 ಪಂದ್ಯಗಳನ್ನು ಗೆಲ್ಲುವುದು ಟೀಂ ಇಂಡಿಯಾಕ್ಕೆ ಅಷ್ಟು ಸುಲಭವಲ್ಲ. ಏಕೆಂದರೆ ಟೀಂ ಇಂಡಿಯಾ ಇನ್ನೊಂದು ಪಂದ್ಯವನ್ನು ಇನ್-ಫಾರ್ಮ್ ನ್ಯೂಜಿಲೆಂಡ್ ವಿರುದ್ಧ ಆಡಬೇಕಿದ್ದರೆ, ಉಳಿದ 5 ಪಂದ್ಯಗಳು ಆಸ್ಟ್ರೇಲಿಯಾ ವಿರುದ್ಧ ಆಡಬೇಕಿದೆ.**

**ಉಳಿದ ತಂಡಗಳ ಲೆಕ್ಕಾಚಾರ ಹೀಗಿದೆ**

ಇನ್ನು ಡಬ್ಲ್ಯುಟಿಸಿ ಫೈನಲ್ ರೇಸ್‌ನಲ್ಲಿ ಟೀಂ ಇಂಡಿಯಾದೊಂದಿಗೆ ಸ್ಪರ್ಧೆಗೆ ಬಿದ್ದಿರುವ ತಂಡಗಳನ್ನು ನೋಡುವುದಾದರೆ.. ಪಾಯಿಂಟ್ ಪಟ್ಟಿಯಲ್ಲಿ ಪ್ರಸ್ತುತ ಮೂರನೇ ಸ್ಥಾನದಲ್ಲಿರುವ ಶ್ರೀಲಂಕಾ ತಂಡಕ್ಕೆ ಈ ಸೀಸನ್‌ನಲ್ಲಿ 4 ಪಂದ್ಯಗಳು ಬಾಕಿ ಉಳಿದಿದ್ದು, ಅದರಲ್ಲಿ 3ಪಂದ್ಯಗಳನ್ನು ಗೆದ್ದರೆ ಡಬ್ಲ್ಯುಟಿಸಿ ಫೈನಲ್‌ಗೆ ಅರ್ಹತೆ ಪಡೆಯಲ್ಲಿದೆ. ಇದರಲ್ಲಿ 2 ಪಂದ್ಯಗಳನ್ನು ಆಸ್ಟ್ರೇಲಿಯಾ ವಿರುದ್ಧ, ಉಳಿದ 2 ಪಂದ್ಯಗಳನ್ನು ದಕ್ಷಿಣ ಆಫ್ರಿಕಾ ವಿರುದ್ಧ ತವರಿನಲ್ಲಿ ಆಡಬೇಕಿದೆ. ಇದಲ್ಲದೆ, ನಾಲ್ಕನೇ ಸ್ಥಾನದಲ್ಲಿರುವ ನ್ಯೂಜಿಲೆಂಡ್ ತಂಡ ಈ ಸೀಸನ್‌ನಲ್ಲಿ ಇನ್ನು 4 ಪಂದ್ಯಗಳನ್ನು ಆಡಬೇಕಿದ್ದು, ಅದರಲ್ಲಿ ಒಂದು ಪಂದ್ಯವನ್ನು ಮುಂಬೈನಲ್ಲಿ ಭಾರತದ ವಿರುದ್ಧ ಆಡಬೇಕಾಗಿದೆ. ಉಳಿದ 3 ಪಂದ್ಯಗಳನ್ನು ತವರಿನಲ್ಲಿ ಇಂಗ್ಲೆಂಡ್ ವಿರುದ್ಧ ಆಡಬೇಕಿದೆ. ನೇರವಾಗಿ ಫೈನಲ್‌ಗೆ ಹೋಗಲು ನ್ಯೂಜಿಲೆಂಡ್ ಈ ಎಲ್ಲಾ ಪಂದ್ಯಗಳನ್ನು ಗೆಲ್ಲಲೇಬೇಕು. ಹಾಗೆಯೇ ಈ ಎರಡು ತಂಡಗಳೊಂದಿಗೆ ದಕ್ಷಿಣ ಆಫ್ರಿಕಾ ಕೂಡ ಡಬ್ಲ್ಯುಟಿಸಿ ಫೈನಲ್‌ಗೆ ಹೋಗುವ ಅವಕಾಶ ಹೊಂದಿದ್ದು, ಇದಕ್ಕಾಗಿ ತಂಡ ಇನ್ನುಳಿದ 5 ಪಂದ್ಯಗಳಲ್ಲಿ 4ರಲ್ಲಿ ಗೆಲ್ಲಬೇಕಿದೆ. ಈ ಪೈಕಿ ಬಾಂಗ್ಲಾದೇಶದ ವಿರುದ್ಧ 1 ಪಂದ್ಯ ಹಾಗೂ ಶ್ರೀಲಂಕಾ ಮತ್ತು ಪಾಕಿಸ್ತಾನ ವಿರುದ್ಧ ತಲಾ 2 ಪಂದ್ಯಗಳನ್ನು ಆಡಬೇಕಿದೆ.

**Printed by : A. BALACHANDRA, Printed at : RAJHANS ENTERPRISES** No. 134, 4th Main Road, Industrial Town, Rajajinagar, Bengaluru 560044, Karnataka. **Owned By, Published By, Editor :T. HOMBE GOWDA,** No. 1230, Jayamahal, Ground Floor, 13th Cross, 2nd Phase, Girinagar, Bengaluru 560 085, Karnataka. Email Id: udayavahininews@yahoo.com , epaper.udayavahini.in www.udayavahini.in Udaya vahini news Udaya vahini news
**ಉದಯವಾಹಿನಿ ಪತ್ರಿಕೆ ಹೆಸರಿನಲ್ಲಿ ಯಾರಾದರೂ ಬ್ಲ್ಯಾಕ್‌ಮೇಲ್ ಮಾಡಿದರೆ ಅಥವಾ ಹೆಸರು ದುರ್ಬಳಕೆ ಮಾಡಿಕೊಳ್ಳುತ್ತಿದ್ದರೆ ಕೂಡಲೇ ಈ ನಂಬರ್‌ಗೆ ಕರೆ ಮಾಡಿ: 9448225966**